ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 8 ಶನಿವಾರ 2023

ಸಂಪುಟ: 44 | ಸಂಚಿಕೆ: 83

ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಬೆಂಗಳೂರಿಗೆ ಬಜೆಟ್‌ನಲ್ಲಿ ಬಂಪರ್ ಕೊಡುಗೆ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಸಕ್ತ ಸಾಲಿನ ರಾಜ್ಯ ಬಜೆಟ್‌ನಲ್ಲಿ ಬೆಂಗಳೂರಿಗೆ ಒಟ್ಟು 45,000 ಕೋಟಿ ರೂ. ಅನುದಾನ ಘೋಷಿಸಿದ್ದಾರೆ.

ಬ್ರ್ಯಾಂಡ್ ಬೆಂಗಳೂರಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಬೆಂಗಳೂರಿಗೆ ಬಂಪರ್ ಕೊಡುಗೆಗಳನ್ನು ಘೋಷಿಸಿದ್ದಾರೆ. ಬೆಂಗಳೂರು ವೈಟ್ ಟಾಪಿಂಗ್, ರಸ್ತೆ ಅಭಿವೃದ್ಧಿ, ನಗರೋತ್ಥಾನ, ತ್ಯಾಜ್ಯ ನಿರ್ವಹಣೆ, ರಾಜಕಾಲುವೆ ತೆರವು ಮತ್ತು ದುರಸ್ತಿಗೆ ಅನುದಾನ ಘೋಷಿಸಿದ್ದಾರೆ. ಅಲ್ಲದೇ ಮೆಟ್ರೋ, ಬೆಂಗಳೂರು ಉಪನಗರ ರೈಲ್ವೆ ಯೋಜನೆಗೆ ಹಣ ಮೀಸಲಿಟ್ಟಿದ್ದಾರೆ.

ಬೆಂಗಳೂರಿಗೆ 45 ಸಾವಿರ ಕೋಟಿ ಅನುದಾನ ಘೋಷಿಸಿದ ಸಿಎಂ, ನಮ್ಮ ಮೆಟ್ರೋಗೆ 30, 000 ಕೋಟಿ ರೂ. ಒದಗಿಸಲಾಗುವುದು ಎಂದು ಹೇಳಿದರು.

ನಗರದ ಮೂಲ ಸೌಕರ್ಯ ಅಭಿವೃದ್ಧಿಗಾಗಿ ಅಮೃತ ನಗರೋತ್ಥಾನ, ಹೈಡೆನ್ಸಿಟಿ ಕಾರಿಡಾರ್, ವೈಟ್ ಟಾಪಿಂಗ್ ರಸ್ತೆ, ತ್ಯಾಜ್ಯ ನಿರ್ವಹಣೆ, ರಾಜಕಾಲುವೆಗಳ ತೆರವು ಮತ್ತು ದುರಸ್ತಿ, ರಸ್ತೆಗುಂಡಿ ಮುಚ್ಚುವುದು ಮತ್ತಿತರ ಹಲವಾರು ಪ್ರಗತಿಯಲ್ಲಿರುವ ಯೋಜನೆಗಳಿಗೆ ಪ್ರಸ್ತುತ 12 ಸಾವಿರ ಕೋಟಿ ರೂ.ಗಳಿಗೂ ಹೆಚ್ಚು ಹಣ ಖರ್ಚು ಮಾಡಲಾಗುತ್ತಿದೆ. ಇದಲ್ಲದೆ, ಸಂಚಾರ ದಟ್ಟಣೆ ನಿರ್ವಹಣೆಯಿಂದಾಗಿ 30 ಸಾವಿರ ಕೋಟಿ ರೂ.ಗೂ ಹೆಚ್ಚಿನ ಅಂದಾಜು ವೆಚ್ಚದಲ್ಲಿ ನಮ್ಮ ಮೆಟ್ರೋ ಹಾಗೂ ಬೆಂಗಳೂರು ಉಪನಗರ ರೈಲು ಯೋಜನೆ ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಗಳು ಪೂರ್ಣಗೊಳ್ಳಲು ಐದು ವರ್ಷಗಳ ಕಾಲಾವಕಾಶದ ಅಗತ್ಯವಿದೆ ಎಂದು ತಿಳಿಸಿದರು. ಬ್ರಾಂಡ್ ಬೆಂಗಳೂರು ಪರಿಕಲ್ಪನೆಯಡಿ ನಗರದ ಸಂಚಾರ ವ್ಯವಸ್ಥೆ, ಪರಿಸರ, ಘನತ್ಯಾಜ್ಯ ನಿರ್ವಹಣೆ,ಸಾರ್ವಜನಿಕ ಸ್ಥಳಗಳ ಸದ್ಬಳಕೆ, ಆರೋಗ್ಯ, ಜನಸ್ನೇಹಿ ಇ–ಆಡಳಿತ, ನೀರಿನ ಭದ್ರತೆ ಹಾಗೂ ಪ್ರವಾಹ ನಿರ್ವಹಣೆ ಈ 9 ಸವಾಲುಗಳನ್ನು ಯಶಸ್ವಿಯಾಗಿ ಎದುರಿಸುವ ಮೂಲಕ ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಲಾಗುವುದು ಎಂದು ಹೇಳಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ 20 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು ಮೇಲ್ದರ್ಜೆಗೇರಿಸಲು 1411 ಕೋಟಿ ರೂ. ಮೊತ್ತದ ಯೋಜನೆಗಳಿಗೆ ಜಲಮಂಡಳಿಯ ಸ್ವಂತ ಸಂಪನ್ಮೂಲದಿಂದ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಬರುವ 2026ರ ವೇಳೆಗೆ ಎಲ್ಲ ಯೋಜನೆಗಳನ್ನು ಪೂರ್ಣಗೊಳಿಸಿ ನಗರದಲ್ಲಿ ಸುಸ್ಥಿರ ಜಲ ಮತ್ತು ಪರಿಸರ ಸಂರಕ್ಷಣೆ ಮಾಡಲಾಗುವುದು ಎಂದು ತಿಳಿಸಿದರು.

ಮೈಸೂರು ಪಾಲಿಕೆ ವ್ಯಾಪ್ತಿಯ ಎಲ್ಲಾ ಆಸ್ತಿ ತೆರಿಗೆ ನೆಟ್‌ಗೆ ಜೋಡಿಸಿ

ಕಂದಾಯ ವಿಭಾಗದ ಸಿಬ್ಬಂದಿ ಕಾರ್ಯಾಗಾರದಲ್ಲಿ ಮೇಯರ್ ಶಿವಕುಮಾರ್ ಸಲಹೆ

ಮೈಸೂರು, ಜು.7(ಆರ್‌ಕೆ)– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನೂ ತೆರಿಗೆ ನೆಟ್‌ಗೆ ತಂದು, ತೆರಿಗೆ ಸಂಗ್ರಹಿಸಬೇಕೆಂದು ಮೇಯರ್ ಶಿವಕುಮಾರ್ ಇಂದಿಲ್ಲಿ ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ.

ಮೈಸೂರಿನ ಹುಣಸೂರು ರಸ್ತೆಯಲ್ಲಿರುವ ರುಚಿ ದಿ ಪ್ರಿನ್ಸ್ ಹೋಟೆಲ್‌ನಲ್ಲಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕಂದಾಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತೆರಿಗೆ ಸಂಗ್ರಹಣೆ ಕುರಿತು ಏರ್ಪಡಿಸಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಮೈಸೂರು ನಗರದಲ್ಲಿರುವ ಆಸ್ತಿಗಳ ಪೈಕಿ ಶೇ. 30 ರಷ್ಟು ಆಸ್ತಿಗಳು ಇನ್ನು ತೆರಿಗೆ ವ್ಯಾಪ್ತಿಗೆ ಬಂದಿಲ್ಲ ಎಂದರು.

ಆದರೆ ಶೇ.100 ರಷ್ಟು ಎಲ್ಲಾ ವಸತಿ ಬಡಾವಣೆಗಳಿಗೆ ಕುಡಿಯುವ ನೀರು, ಬೀದಿ ದೀಪ, ಒಳಚರಂಡಿ, ರಸ್ತೆ, ಸ್ವಚ್ಛತೆ, ಉದ್ಯಾನವನ, ಸ್ಮಶಾನಗಳಂತಹ ಮೂಲ ಸೌಕರ್ಯಗಳನ್ನು ಪಾಲಿಕೆಯು ಒದಗಿಸುತ್ತಾ ಬಂದಿದೆ. ಅದಕ್ಕಾಗಿ ಕೋಟ್ಯಾಂತರ ರೂ. ಹಣ ಖರ್ಚು ಮಾಡುತ್ತಿದೆ. ನಾವು ಎಲ್ಲಾ ಬಗೆಯ ಸೌಲಭ್ಯಗಳನ್ನು ಪೂರೈಸುತ್ತಿರುವಾಗ ಎಲ್ಲಾ ಆಸ್ತಿಗಳೂ ತೆರಿಗೆ ತೆಕ್ಕೆಗೆ ಬರುವಂತಾಗಬೇಕು. ಯಾವೊಬ್ಬ ಆಸ್ತಿ ಮಾಲೀಕನೂ ತೆರಿಗೆಯಿಂದ ನುಣುಚಿಕೊಳ್ಳದಂತೆ ಮಾಡುವ ಬಗ್ಗೆ ಗಮನ ಹರಿಸಿ ಎಂದು ಮೇಯರ್ ಸೂಚಿಸಿದರು.

ಎಲ್ಲಾ ಆಸ್ತಿಗಳಿಂದ ತೆರಿಗೆ, ನೀರಿನ ಶುಲ್ಕ ಹಾಗೂ ಉದ್ದಿಮೆ ರಹದಾರಿ ಶುಲ್ಕ ವಸೂಲಿ ಮಾಡಿದಲ್ಲಿ ಪಾಲಿಕೆಗೆ ಹೆಚ್ಚು ಆದಾಯ ಬರಲಿದ್ದು, ನಾಗರಿಕರಿಗೆ ಮೂಲ ಸೌಲಭ್ಯ ನಿರ್ವಹಣೆಗೆ ಸಂಪನ್ಮೂಲ ಕ್ರೋಢೀಕರಣ ವಾದಂತಾಗಲಿದೆ ಎಂದ ಅವರು, ಪಾಲಿಕೆಯಿಂದ ಸೌಕರ್ಯ ಪಡೆಯುತ್ತಿರುವ ಯಾರೊಬ್ಬರೂ ತೆರಿಗೆ ಯಿಂದ ತಪ್ಪಿಸಿಕೊಳ್ಳದಂತೆ ಅಧಿಕಾರಿಗಳು, ಸಿಬ್ಬಂದಿ ಕ್ರಮ ವಹಿಸಬೇಕೆಂದು ಸೂಚನೆ ನೀಡಿದರು.



ಇಂಟಿಗ್ರೇಟೆಡ್ ತೆರಿಗೆ ಪದ್ಧತಿ: ನೀರು, ಆಸ್ತಿ ತೆರಿಗೆ ಮತ್ತು ಉದ್ದಿಮೆ ರಹದಾರಿ ಶುಲ್ಕವನ್ನು ಒಂದೇ ಆಪ್ ಅಡಿ ತಂದು ಇಂಟಿಗ್ರೇಟೆಡ್ ತೆರಿಗೆ ಪದ್ಧತಿಯನ್ನು ಜಾರಿಗೆ ತಂದು ಕ್ರೋಢೀಕೃತ ತೆರಿಗೆ ಸಂಗ್ರಹಿಸಬೇಕೆಂದು ಮೇಯರ್ ಶಿವಕುಮಾರ್ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದ ಪಾಲಿಕೆ, ಕಂದಾಯ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸಲಹೆ ನೀಡಿದರು.

ಸಮಗ್ರ ತೆರಿಗೆ ಪದ್ಧತಿ ಜಾರಿಗೊಳಿಸಿದಲ್ಲಿ ಸಾರ್ವಜನಿಕರು ಮನೆಯಲ್ಲೇ ಕುಳಿತು ಮೂರೂ ತೆರಿಗೆಗಳನ್ನು ಒಂದೇ ಬಾರಿ ಆನ್‌ಲೈನ್‌ನಲ್ಲಿ ಪಾವತಿಸಬಹುದಾಗಿದ್ದು, ಪಾಲಿಕೆ ಕಚೇರಿ ಕೌಂಟರ್‌ಗೆ ಹಲವು ಬಾರಿ ಅಲೆಯುವುದು ತಪ್ಪುತ್ತದೆ. ಎಲ್ಲಾ ಬಗೆಯ ತೆರಿಗೆ ಹಣವನ್ನು ಭಾರತ ಬಿಲ್ ಪೇ (ಬಿಬಿಪಿ) ಆಪ್‌ಗೆ ಲಿಂಕ್ ಮಾಡಿದಲ್ಲಿ ನಾಗರಿಕರಿಗೆ ಅನುಕೂಲವಾಗುತ್ತದೆ ಎಂದು ಅವರು ತಿಳಿಸಿದರು.

ಸಾರ್ವಜನಿಕರು ಟ್ಯಾಕ್ಸ್ ಕಟ್ಟುವುದೂ ಸೇರಿದಂತೆ ಯಾವುದೇ ಉದ್ದೇಶಕ್ಕೆಂದು ಬಂದರೂ ಅವರೊಂದಿಗೆ ಸೌಜನ್ಯದಿಂದ ವರ್ತಿಸಿ ಕೆಲಸ ಮಾಡಿಕೊಡಬೇಕು. ಅನಗತ್ಯವಾಗಿ ಹಲವು ಭಾರಿ ಕಚೇರಿಗೆ ಅಲೆಯುವಂತೆ ಮಾಡದಿರಿ ಎಂದು ಶಿವಕುಮಾರ್ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಉಪಮೇಯರ್ ಡಾ.ಜಿ.ರೂಪಾ, ಹಣಕಾಸು ತೆರಿಗೆ ಅಪೀಲು ಸ್ಥಾಯಿ ಸಮಿತಿ ಅಧ್ಯಕ್ಷ ಆರ್.ನಾಗರಾಜ, ಪಾಲಿಕೆ ಆಯುಕ್ತ ಜಿ. ಲಕ್ಷ್ಮಿಕಾಂತ ರೆಡ್ಡಿ, ಉಪ ಆಯುಕ್ತ (ಕಂದಾಯ) ಡಾ. ಎಂ. ದಾಸೇಗೌಡ, ವಲಯಾಧಿಕಾರಿಗಳಾದ ಚಂದ್ರಮ್ಮ, ಸತ್ಯಮೂರ್ತಿ, ಬೆಂಗಳೂರಿನ ಕೆಎಂಡಿಎಸ್ ಅಧಿಕಾರಿ ನೀಲೋಚನ ಪ್ರಭು, ಪಾಲಿಕೆ ವಲಯಾಧಿಕಾರಿಗಳು, ಕಂದಾಯಾಧಿಕಾರಿಗಳು, ಸಹಾಯಕ ಕಂದಾಯಾಧಿಕಾರಿಗಳು, ರೆವಿನ್ಯೂ ಇನ್ಸ್‌ಪೆಕ್ಟರ್‌ಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

ಸ್ವಿಗ್ಗಿ, ಅಮೆಜಾನ್ ನಂತಹ ಇ–ಕಾಮರ್ಸ್ ಡೆಲಿವರಿ ಉದ್ಯೋಗಿಗಳಿಗೆ 4 ಲಕ್ಷ ರೂ. ಜೀವ, ಅಪಘಾತ ವಿಮೆ

ಬೆಂಗಳೂರು, ಜು.7– ನಗರವಾಸಿಗಳು ಸ್ವಿಗ್ಗಿ, ಝೊಮ್ಯಾಟೊ ಮತ್ತು ಅಮೆಜಾನ್‌ನಂತಹ ಇ–ಕಾಮರ್ಸ್ ವೇದಿಕೆಗಳ ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಇಷ್ಟದ ತಿಂಡಿ ತಿನಿಸುಗಳನ್ನು ಆರ್ಡರ್ ಮಾಡುವುದು ಹೆಚ್ಚಾಗುತ್ತಿದೆ.

ಶರವೇಗದಲ್ಲಿ ನಾಗರಿಕರಿಗೆ ಆನ್‌ಲೈನ್ ಸೇವೆ ತಲುಪಿಸಲು ಇ–ಕಾಮರ್ಸ್ ವೇದಿಕೆಗಳು ಮಾರುಕಟ್ಟೆಯಲ್ಲಿ ಪೈಪೋಟಿ ನಡೆಸುತ್ತವೆ. ಫುಡ್ ಡೆಲಿವರಿ ಬಾಯ್‌ಗಳು ನಗರದ ಸಂಚಾರ ದಟ್ಟಣೆ ಮಧ್ಯೆ ಒತ್ತಡದಲ್ಲಿ ಕೆಲಸ ಮಾಡಬೇಕಾಗುತ್ತದೆ.

ಹೀಗೆ ಆನ್ ಲೈನ್ ಮೂಲಕ ಫುಡ್ ಡೆಲಿವರಿ ಮಾಡುವ ವೇಳೆ ಅಪಘಾತಕ್ಕೀಡಾದರೆ ಅಂತಹವರ ರಕ್ಷಣೆಗೆ ಸರ್ಕಾರ ಮುಂದಾಗಿದೆ. ಸಿಎಂ ಸಿದ್ದರಾಮಯ್ಯನವರು ಇಂದು ಮಂಡಿಸಿದ ಬಜೆಟ್‌ನಲ್ಲಿ ಇ–ಕಾಮರ್ಸ್ ವೇದಿಕೆಗಳಾದ ಸ್ವಿಗ್ಗಿ, ಝೊಮ್ಯಾಟೊ, ಅಮೆಜಾನ್ ನಂತಹ ಕಂಪೆನಿಗಳಲ್ಲಿ ಕೆಲಸ ಮಾಡುವ ಉದ್ಯೋಗಿಗಳಿಗೆ 4 ಲಕ್ಷ ರೂಪಾಯಿಗಳ ಜೀವ ಮತ್ತು ಅಪಘಾತ ವಿಮೆಯನ್ನು ಘೋಷಿಸಿದೆ.



ಒಡಿಶಾ ರೈಲು ದುರಂತ: ಸಿಬಿಐನಿಂದ ಮೂವರು ರೈಲ್ವೆ ಉದ್ಯೋಗಿಗಳ ಬಂಧನ

ಭುವನೇಶ್ವರ್: ಒಡಿಶಾ ತ್ರಿವಳಿ ರೈಲು ದುರಂತಕ್ಕೆ ಸಂಬಂಧಿಸಿದಂತೆ ಮೂವರು ರೈಲ್ವೆ ಉದ್ಯೋಗಿಗಳನ್ನು ಸಿಬಿಐ ಶುಕ್ರವಾರ ಬಂಧಿಸಿದೆ. ಈ ಕುರಿತು ಸುದ್ದಿಸಂಸ್ಥೆ ಎಎನ್‌ಐ ಟ್ವೀಟ್ ಮಾಡಿದೆ. ಹಿರಿಯ ವಲಯ ಎಂಜಿನಿಯರ್ ಅರುಣ್ ಕುಮಾರ್ ಮೋಹಾಂತ್, ವಲಯ ಎಂಜಿನಿಯರ್ ಮೊಹಮದ್ ಅಮಿರ್ ಖಾನ್, ಟೆಕ್ನಿಷಿಯನ್ ಪಪ್ಪು ಕುಮಾರ್ ಎಂಬುವವರು ಬಂಧಿತರು. ಒಡಿಶಾ ರೈಲ್ವೆ ದುರಂತಕ್ಕೆ ಸಂಬಂಧಿಸಿ ದಂತೆ ಮೊದಲ ಬಾರಿಗೆ ಆರೋಪಿಗಳ ಬಂಧನವಾಗಿದೆ. ಇವರ ವಿರುದ್ಧ ಸಿಆರ್‌ಪಿಸಿ ಸೆಕ್ಷನ್ 304 ಹಾಗೂ 201 ಅಡಿ ಪ್ರಕರಣ ದಾಖಲಿಸಲಾಗಿದೆ. ಜೂನ್ 2 ರಂದು ಒಡಿಶಾದ ಬಾಲೇಶ್ವರ್ ಜಿಲ್ಲೆಯ ಬಹನಾಗ್ ರೈಲು ನಿಲ್ದಾಣದ ಬಳಿ ಕೋಲ್ಕತ್ತದಿಂದ ಚೆನ್ನೈಗೆ ಹೊರಟಿದ್ದ ಕೋರಮಂಡಲ್ ಎಕ್ಸ್‌ಪ್ರೆಸ್ ರೈಲು ಸರಕು ಸಾಗಣೆ ರೈಲಿಗೆ ಡಿಕ್ಕಿ ಹೊಡೆದಿತ್ತು. ಈ ವೇಳೆ ಇದೇ ಮಾರ್ಗದ ಪಕ್ಕದ ಟ್ರ್ಯಾಕ್‌ನಲ್ಲಿ ಸಂಚರಿಸುತ್ತಿದ್ದ ಬೆಂಗಳೂರು–ಹೌರಾ ಎಕ್ಸ್‌ಪ್ರೆಸ್ ರೈಲಿಗೂ ಡಿಕ್ಕಿಯಾಗಿತ್ತು. ಘಟನೆಯಲ್ಲಿ 291 ಪ್ರಯಾಣಿಕರು ಮೃತಪಟ್ಟು, ಸಾವಿರಕ್ಕೂ ಹೆಚ್ಚು ಜನ ಗಾಯಗೊಂಡಿದ್ದರು. ಘಟನೆಯಾದ ಮೂರು ದಿನಗಳ ನಂತರ ಈ ಪ್ರಕರಣದ ತನಿಖೆಯನ್ನು ರೈಲ್ವೆ ಮಂಡಳಿ ಸಿಬಿಐಗೆ ವಹಿಸಿತ್ತು. ಮಾನವ ಲೋಪವೇ ಈ ಭೀಕರ ದುರಂತಕ್ಕೆ ಕಾರಣ ಎಂದು ಸಿಬಿಐನ ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ.

ಆಸಿಡ್ ದಾಳಿ ಸಂತ್ರಸ್ತರಿಗೆ 5 ಲಕ್ಷ ಬಡ್ಡಿ ರಹಿತ ಸಾಲ



ಬೆಂಗಳೂರು, ಜು.7– ಮುಖ್ಯಮಂತ್ರಿ ಸಿದ್ದರಾಮಯ್ಯ, ಆಸಿಡ್ ದಾಳಿಗೆ ಒಳಗಾದ ಸಂತ್ರಸ್ತರಿಗೆ 5 ಲಕ್ಷ ರೂ.ವರೆಗೆ ಬಡ್ಡಿ ರಹಿತ ಸಾಲ ನೀಡುವುದಾಗಿ ಘೋಷಿಸಿದ್ದಾರೆ. ಆಸಿಡ್ ದಾಳಿಗೆ ಒಳಗಾದ ಸಂತ್ರಸ್ತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಅವರಿಗೆ ಸ್ವಯಂ ಉದ್ಯೋಗಕ್ಕಾಗಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ 5 ಲಕ್ಷ ರೂ.ವರೆಗೆ ಬಡ್ಡಿ ರಹಿತ ಸಾಲ ಒದಗಿಸಲು 2 ಕೋಟಿ ರೂ. ಅನುದಾನ ಮತ್ತು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯ ಒದಗಿಸಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಮಹಿಳಾ ಉದ್ದೇಶಿತ ಯೋಜನೆಗಳಿಗೆ 70,427 ಕೋಟಿ ರೂ., ಮಕ್ಕಳ ಉದ್ದೇಶಿತ ಯೋಜನೆಗಳಿಗೆ 2023–24ನೇ ಸಾಲಿನಲ್ಲಿ 51,229 ಕೋಟಿ ರೂ. ಅನುದಾನ ಒದಗಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಪ್ರಮುಖ ಗ್ಯಾರಂಟಿಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ನಮ್ಮ ರಾಜ್ಯದ ಮಹಿಳೆಯರಿಗೆ ಬದುಕಿನ ನಿರ್ವಹಣೆಯನ್ನು ಇನ್ನಷ್ಟು ಸುಗಮಗೊಳಿಸಲು ಮತ್ತು ಆರ್ಥಿಕ ಭದ್ರತೆ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಸಿಎಂ ಹೇಳಿದ್ದಾರೆ.

ಮೀನುಗಾರ ಮಹಿಳೆಯರಿಗೆ ನೆರವು

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮೀನುಗಾರ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಹಾಗೂ ವಹಿವಾಟು ವಿಸ್ತರಣೆಗೆ ನೆರವಾಗಲು ಬ್ಯಾಂಕುಗಳಲ್ಲಿ ಬಡ್ಡಿರಹಿತವಾಗಿ ನೀಡುವ ಸಾಲದ ಮಿತಿಯನ್ನು 50,000 ರೂ.ಗಳಿಂದ 3 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು ಎಂದು ತಿಳಿಸಿದ್ದಾರೆ. ಮೀನುಗಾರರ ದೋಣಿಗಳಿಗೆ ರಿಯಾಯಿತಿ ದರದಲ್ಲಿ ನೀಡುತ್ತಿರುವ ಡೀಸೆಲ್ ಮಿತಿಯನ್ನು ಒಂದೂವರೆ ಲಕ್ಷ ಕಿಲೋ ಲೀಟರ್‌ನಿಂದ ಎರಡು ಲಕ್ಷ ಕಿಲೋ ಲೀಟರ್‌ಗಳವರೆಗೆ ಹೆಚ್ಚಿಸಲಾಗುವುದು. ಇದರಿಂದ ಮೀನುಗಾರರಿಗೆ ಸರ್ಕಾರದಿಂದ 250 ಕೋಟಿ ರೂ.ಗಳಷ್ಟು ನೆರವಾಗಲಿದೆ ಎಂದರು.

ರಾಜ್ಯ ಬಜೆಟ್: ಇಲಾಖಾವಾರು ಅನುದಾನ

ಬೆಂಗಳೂರು: ರಾಜ್ಯ ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 2023–2024ನೇ ಸಾಲಿನ ರಾಜ್ಯ ಬಜೆಟ್ ಮಂಡನೆ ಮಾಡಿದ್ದು, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಇಂಧನ, ನೀರಾವರಿಗೆ ಬಂಪರ್ ಅನುದಾನವನ್ನು ಘೋಷಣೆ ಮಾಡಿದ್ದಾರೆ.

- **ಶಿಕ್ಷಣ – 37,587 ಕೋಟಿ**
- **ಮಹಿಳಾ ಮತ್ತು ಮಕ್ಕಳ ಕಲ್ಯಾಣ – 24,166 ಕೋಟಿ**
- **ಇಂಧನ – 22,773 ಕೋಟಿ**
- **ನೀರಾವರಿ – 19,044 ಕೋಟಿ**
- **ಗ್ರಾಮೀಣಾಭಿವೃದ್ಧಿ–18,038 ಕೋಟಿ**
- **ಒಳಾಡಳಿತ ಮತ್ತು ಸಾರಿಗೆ – 16,638 ಕೋಟಿ**
- **ಕಂದಾಯ – 16,167 ಕೋಟಿ**
- **ಆರೋಗ್ಯ – 14,950 ಕೋಟಿ**
- **ಸಮಾಜ ಕಲ್ಯಾಣ – 11,173 ಕೋಟಿ**
- **ಆಹಾರ ಮತ್ತು ನಾಗರೀಕ ಪೂರೈಕೆ – 10,460 ಕೋಟಿ**
- **ಲೋಕೋಪಯೋಗಿ–10,143 ಕೋಟಿ**
- **ಕೃಷಿ – 5,860 ಕೋಟಿ**
- **ಪಶುಸಂಗೋಪನೆ ಮತ್ತು ಮೀನುಗಾರಿಕೆ – 3,024 ಕೋಟಿ**
- **ಇತರೆ – 1,09,639 ಕೋಟಿ**

ಬೆಂಗಳೂರಿಗೆ ನೀಡಿರುವ ಅನುದಾನದಲ್ಲಿ ಸ್ವಲ್ಪವಾದರೂ ಮೈಸೂರಿಗೆ ನೀಡಬೇಕಿತ್ತು



ಮೈಸೂರು, ಜು.7–ರಾಜ್ಯದ ಇತಿಹಾಸದಲ್ಲಿ 14 ಬಾರಿ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಅಭಿನಂದಿಸಿರುವ ಚಾಮುಂಡೇಶ್ವರಿ ಶಾಸಕ ಜಿ.ಟಿ.ದೇವೇಗೌಡರು, ಬಜೆಟ್ ಸಂಬಂಧ ಅಭಿಪ್ರಾಯ ಹಂಚಿಕೊಂಡಿದ್ದಾರೆ. ಸಿದ್ದರಾಮಯ್ಯನವರು 14 ಬಾರಿ ಬಜೆಟ್ ಮಂಡಿಸಿ ದಾಖಲೆ ನಿರ್ಮಿಸಿದ್ದಾರೆ. ಅನುಭವದ ಆಧಾರದಲ್ಲಿ 5 ಗ್ಯಾರಂಟಿಗಳ ಅನುಷ್ಠಾನಕ್ಕೆ ಹಣ ಹೊಂದಿಸುವ ಪ್ರಯತ್ನದೊಂದಿಗೆ ಬಡವರ ಪರ ಒಲವು ನೀಡಿದ್ದಾರೆ. ದೆಹಲಿ ಮಾದರಿಯಲ್ಲಿ ಮೈಸೂರು ದಸರಾ ವಸ್ತುಪ್ರದರ್ಶನ ಆವರಣ ಅಭಿವೃದ್ಧಿ, ಚಾಮುಂಡೇಶ್ವರಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆ ಸೇರಿದಂತೆ ಹಲವು ಮಹತ್ವದ ಕಾರ್ಯಕ್ರಮ ನೀಡಿದ್ದಾರೆ. ಆದರೆ ಮೈಸೂರಿಗೆ ಯಾವುದೇ ವಿಶೇಷ ಅನುದಾನ ಘೋಷಣೆ ಮಾಡಿಲ್ಲ ಎಂದು ತಿಳಿಸಿದ್ದಾರೆ. ಅನ್ನಭಾಗ್ಯ ಯೋಜನೆಗೆ ಅಕ್ಕಿ ಹೊಂದಿಸಲು ಹರಸಾಹಸ ಪಡುತ್ತಿದ್ದಾರೆ. ಆದರೆ ಯಾವುದೇ ನೀರಾವರಿ ಯೋಜನೆಗಳಿಗೆ ಹಣ ಇಲ್ಲ ಎಂದಿರುವುದು ಸರಿಯಲ್ಲ. ನೀರಾವರಿ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡಿ, ಭತ್ತ ಹಾಗೂ ಇತರೆ ಆಹಾರ ಉತ್ಪನ್ನ ಉತ್ಪಾದನೆಗೆ ರೈತರನ್ನು ಪ್ರೋತ್ಸಾಹಿಸಬೇಕು. ಬೇರೆ ರಾಜ್ಯಗಳಿಂದ ಆಮದು ಮಾಡಿಕೊಳ್ಳುವ ಬದಲು ಇಲ್ಲೇ ಭತ್ತ ಬೆಳೆದರೆ ರೈತರಿಗೆ ಮಾತ್ರವಲ್ಲ ಸರ್ಕಾರಕ್ಕೂ ಅನುಕೂಲ ಎಂದು ಅಭಿಪ್ರಾಯಿಸಿದ್ದಾರೆ.

ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 5 ಲಕ್ಷದವರೆಗೆ ಸಾಲ, 15 ಲಕ್ಷದವರೆಗೆ ಶೇ.3ರ ಬಡ್ಡಿಯಲ್ಲಿ ಸಾಲ ಸೌಲಭ್ಯ ನೀಡುವುದಾಗಿ ಘೋಷಿಸಿರುವುದು ಸ್ವಾಗತಾರ್ಹ. ಹಾಗೆಯೇ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡಲು ಆದ್ಯತೆ ನೀಡಬೇಕಿತ್ತು. ಬೆಂಗಳೂರು ನಂತರದಲ್ಲಿ ಮೈಸೂರು ನಗರ ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಆದರೆ ಇನ್ನೂ ಯುಜಿಡಿ, ರಸ್ತೆ, ಬಡಾವಣೆಗಳಿಗೆ ಮೂಲ ಸೌಕರ್ಯ ಸೇರಿದಂತೆ ಸಾಕಷ್ಟು ಅಭಿವೃದ್ಧಿಯಾಗಬೇಕಿದೆ. ಈ ನಿಟ್ಟಿನಲ್ಲಿ ಬೆಂಗಳೂರಿಗೆ ನೀಡಿರುವ ಪ್ರಾಧಾನ್ಯತೆಯಲ್ಲಿ ಶೇ.10ರಷ್ಟಾದರೂ ಮೈಸೂರಿಗೂ ನೀಡಬೇಕಿತ್ತು. ಮುಖ್ಯಮಂತ್ರಿಗಳಿಗೆ ಮೈಸೂರಿನ ಬಗ್ಗೆ ಚೆನ್ನಾಗಿ ತಿಳಿದಿದೆ. ಹಾಗಾಗಿ ಮುಂದಿನ ಬಾರಿ ಇನ್ನೂ ಹೆಚ್ಚಿನ ಕೊಡುಗೆ ನೀಡಬಹುದು ಎಂದು ಜಿಟಿಡಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಏಕ ಬಳಕೆಯ ಡಯಾಲೈಸರ್‌ಗಳು ಎಲ್ಲಾ ಆಸ್ಪತ್ರೆಗಳಿಗೂ ವಿತರಣೆ

● ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ 219ಕ್ಕೆ ಏರಿಕೆ ● ಪುನೀತ್ ಸ್ಮರಣಾರ್ಥ ಹೃದಯ ಸಂಬಂಧಿ ಅತ್ಯಾಧುನಿಕ ಸಾಧನ ಅಳವಡಿಕೆ

ಬೆಂಗಳೂರು, ಜು.7 (ಕೆಎಂಶಿ)– ಏಕ ಬಳಕೆಯ ಡಯಾಲೈಸರ್‌ಗಳನ್ನು ಎಲ್ಲಾ ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳಲ್ಲಿ ಅಳವಡಿಸುವ ಮೂಲಕ ಸೇವೆಯ ಗುಣಮಟ್ಟವನ್ನು ಸುಧಾರಿಸಲಾಗುವುದು. ಇದರೊಂದಿಗೆ ರಾಜ್ಯದಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ 173 ಡಯಾಲಿಸಿಸ್ ಕೇಂದ್ರಗಳನ್ನು 219ಕ್ಕೆ ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು ಈಗಾಗಲೇ 23 PHCಗಳನ್ನು CHC ಗಳಾಗಿ ಮೇಲ್ದರ್ಜೆಗೇರಿಸಲಾಗಿದೆ. ಈ CHC ಗಳನ್ನು ಕಾರ್ಯಗತಗೊಳಿಸಲು ಬೇಕಿರುವ ಅಗತ್ಯ ಉಪಕರಣಗಳು ಮತ್ತು ಮಾನವ ಸಂಪನ್ಮೂಲಗಳನ್ನು ಒದಗಿಸಲು 70 ಕೋಟಿ ರೂ.ಗಳನ್ನು ಒದಗಿಸಲಾಗುವುದು. ರಾಜ್ಯವು ಕಳೆದ ವರ್ಷ ನಿಮ್ಹಾನ್ಸ್ ಸಹಯೋಗದೊಂದಿಗೆ ಮೆದುಳಿನ ಆರೋಗ್ಯ ಆರೈಕೆ ಸೇವೆಗಳನ್ನು ಉತ್ತೇಜಿಸಲು ಮೂರು ಜಿಲ್ಲೆಗಳಲ್ಲಿ ಬ್ರೈನ್ ಹೆಲ್ತ್ ಇನಿಷಿಯೇಟಿವ್ ಎಂಬ ವಿಶಿಷ್ಟ ಯೋಜನೆಯನ್ನು ಕೈಗೆತ್ತಿಕೊಂಡಿತ್ತು. ಯಶಸ್ವಿ ಪ್ರಾಯೋಗಿಕ ಅನುಷ್ಠಾನದ ನಂತರ ಈ ಯೋಜನೆಯನ್ನು ಇಡೀ ರಾಜ್ಯಕ್ಕೆ ಹಬ್ ಮತ್ತು ಸ್ಪೋಕ್ ಮಾದರಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.


ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಹೊಂದಿರುವ ರೋಗಿಗಳನ್ನು ಪತ್ತೆಹಚ್ಚಲು ಮತ್ತು ಅಗತ್ಯ ಔಷಧಗಳನ್ನು ಅವರ ಮನೆ ಬಾಗಿಲಿಗೆ ತಲುಪಿಸಲು ಪ್ರಾಯೋಗಿಕವಾಗಿ ರಾಜ್ಯದ ನಾಲ್ಕು ವಿಭಾಗಗಳ ಎಂಟು ಜಿಲ್ಲೆಗಳಲ್ಲಿ ಸಮಗ್ರ ತಪಾಸಣೆ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುವುದು.



ಕರ್ನಾಟಕ ರತ್ನ ಡಾ॥ ಪುನೀತ್ ರಾಜ್‌ಕುಮಾರ್‌ರವರ ಸ್ಮರಣಾರ್ಥವಾಗಿ ಹಠಾತ್ ಹೃದಯ ಸಂಬಂಧಿ ಸಾವುಗಳನ್ನು ತಡೆಗಟ್ಟಲು ಅತ್ಯಾಧುನಿಕ ಸಾಧನಗಳನ್ನು ಜಿಲ್ಲಾ ಆಸ್ಪತ್ರೆ ಮತ್ತು ತಾಲೂಕು ಆಸ್ಪತ್ರೆಗಳಲ್ಲಿ ಅಳವಡಿಸಲಾಗುವುದು. ಇದಕ್ಕಾಗಿ ಆರು ಕೋಟಿ ರೂ. ಅನುದಾನ ಒದಗಿಸಲಾಗುವುದು.

ರಾಜ್ಯದಲ್ಲಿ ಸಿ.ಟಿ ಸ್ಕ್ಯಾನಿಂಗ್ ಮತ್ತು ಎಂ.ಆರ್.ಐ ಸ್ಕ್ಯಾನಿಂಗ್ ಸೇವೆಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಿಗೂ ವಿಸ್ತರಿಸಲಾಗುವುದು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ ಬೆಳಗಾವಿ, ಕಲಬುರಗಿ, ಹುಬ್ಬಳ್ಳಿ, ದಾವಣಗೆರೆ, ದಕ್ಷಿಣ ಕನ್ನಡ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯಗಳು, ಸಂಶೋಧನಾ ಕೇಂದ್ರ ಮತ್ತು ಒಳಾಂಗಣ ಕ್ರೀಡಾ ಸೌಲಭ್ಯಗಳನ್ನು ಹಾಗೂ ಕಲಬುರಗಿ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳನ್ನು ಸ್ಥಾಪಿಸಲಾಗುವುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

08.7.2023 ಶನಿವಾರ, ಮಳೆ ನಕ್ಷತ್ರ: ಪುನರ್ವಸು 06.07.2023 ರಿಂದ 19.07.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ಷಷ್ಠಿ, ನಕ್ಷತ್ರ: ಪೂಭಾ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕತ್ತು ನೋವು, ಸೊಂಟ ನೋವು ತಪಾಸಣಾ ಶಿಬಿರ, ಮಧುಮೇಹದ ಗಾಯಗಳ ಬಗ್ಗೆ ಚಿಕಿತ್ಸಾ ಶಿಬಿರ, ಸಂಧಿವಾತ, ಮಂಡಿನೋವು, ಕೀಲು ನೋವು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30 ರಿಂದ.

■ **ವಿಮಾ ನಿಗಮ ನೌಕರರ ಸಂಘ, ಮೈಸೂರು ವಿಭಾಗ :** ಸಂಘದ ಕಚೇರಿ ಕಟ್ಟಡ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಅಖಿಲ ಭಾರತ ವಿಮಾ ನೌಕರರ ಸಂಘದ ಅಧ್ಯಕ್ಷ ವಿ. ರಮೇಶ್, ಮುಖ್ಯ ಅತಿಥಿಗಳು : ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ್, ಜಂಟಿ ಕಾರ್ಯದರ್ಶಿ ಜೆ. ಸುರೇಶ್, ಸ್ಥಳ: ಭಾರತಿ ಕನ್ವೆನ್ಷನ್ ಸೆಂಟರ್, ವಿಶ್ವೇಶ್ವರನಗರ, ಬೆಳಗ್ಗೆ 10ಕ್ಕೆ.

■ **ಡಾ. ಬಿ.ಆರ್. ಅಂಬೇಡ್ಕರ್ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಟ್ರಸ್ಟ್, ಸಮಾನತೆ, ಸ್ವಾಭಿಮಾನ, ಸ್ವಾವಲಂಬನೆ ಪ್ರತಿಷ್ಠಾನ, ಸಮಾನತೆ ಪ್ರಕಾಶನ :** ಬುದ್ಧ, ಬಸವ, ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ, ಉದ್ಘಾಟನೆ : ಸಂಸದ ವಿ. ಶ್ರೀನಿವಾಸ ಪ್ರಸಾದ್, ಮುಖ್ಯ ಅತಿಥಿಗಳು : ಡಾ. ಕಲ್ಯಾಣಸಿರಿ ಭಂತೇಜಿ, ನಿವೃತ್ತ ಪ್ರಾಧ್ಯಾಪಕ ಪ್ರೊ. ಎಸ್. ಶಿವರಾಜಪ್ಪ, ಬಿಮ್ಸ್ ಅಧ್ಯಕ್ಷ ಪ್ರೊ. ಡಿ. ಆನಂದ್, ಅಧ್ಯಕ್ಷತೆ : ಹುಬ್ಬಳ್ಳಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಸಿ. ಬಸವರಾಜು, ಸ್ಥಳ: ವಿಶ್ವಜ್ಞಾನಿ ಸಭಾಂಗಣ, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ಬೆಳಗ್ಗೆ 10.30ಕ್ಕೆ.

■ **ರೈಲ್ವೆ ಪೆನ್ಷನರ್ಸ್ ವೆಲ್‌ಫೇರ್ ಅಸೋಸಿಯೇಷನ್ :** ಮಾಸಿಕ ಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಪಾರ್ಥಸಾರಥಿ, ಸ್ಥಳ: ಸಂಘದ ಆವರಣ, ಬೆಳಗ್ಗೆ 11.30ಕ್ಕೆ.

■ **ಶ್ರೀ ಚೌಡೇಶ್ವರಿ ಕಲ್ಯಾಣ ಮಹೋತ್ಸವ ಕಾರ್ಯಕಾರಿ ಸಮಿತಿ :** 55ನೇ ವರ್ಷದ ಶ್ರೀ ಗಿರಿಜಾ ಕಲ್ಯಾಣೋತ್ಸವ ಮತ್ತು ಚಂಡಿಕಾ ಹೋಮ, ರಾತ್ರಿ 8ಕ್ಕೆ ವರಪೂಜೆ, ಬಳೆಶಾಸ್ತ್ರ ಕಾರ್ಯಕ್ರಮ, ಸ್ಥಳ: ಸಮಿತಿ ಆವರಣ, ಕಾಳಮ್ಮನ ಗುಡಿ ಬೀದಿ, ಮಂಡಿ ಮೊಹಲ್ಲಾ.

■ **ಮೈಸೂರು ಆರ್ಟ್ ಗ್ಯಾಲರಿ:** ಸಾಧಕರೊಂದಿಗೆ ಸಂವಾದ –82, ತಿಂಗಳ ಸಾಧಕರು ಆಂಗ್ಲ ಭಾಷಾತಜ್ಞ ಡಿ.ಎನ್. ಪುರುಷೋತ್ತಮರಾವ್, ಮುಖ್ಯ ಅತಿಥಿಗಳು: ವಿಶ್ರಾಂತ ಶಿಕ್ಷಕ ಎಂ.ಮುತ್ತುಸ್ವಾಮಿ, ಅಧ್ಯಕ್ಷತೆ: ಮೈಸೂರು ಆರ್ಟ್ ಗ್ಯಾಲರಿ ಸ್ಥಾಪಕ ಅಧ್ಯಕ್ಷ ಎಲ್. ಶಿವಲಿಂಗಪ್ಪ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11ಕ್ಕೆ.

■ **ವ್ಯವಸ್ಥಾಪಕರು:** ಕವನ ಸಂಕಲನ ವಿಶ್ಲೇಷಣೆ ಕಾರ್ಯಕ್ರಮ, ಕವನ ಸಂಕಲನ: ಕಂಚುವಾಳ ದಾಸವಾಳ, ಕವಯತ್ರಿ: ಸಿ.ತ್ರಿವೇಣಿ, ಅಧ್ಯಕ್ಷತೆ: ಶಿಕ್ಷಣ ತಜ್ಞ ಡಾ. ಕೆ.ಎಸ್. ಮಲ್ಲೇಶ್, ವಿಶ್ಲೇಷಣೆ : ಸಾಹಿತಿ ಡಾ. ಷಹಸೀನ ಬೇಗಂ, ಸ್ಥಳ: ಪತ್ರಕರ್ತರ ಭವನ, ಅಗ್ರಹಾರ, ಮಧ್ಯಾಹ್ನ 12ಕ್ಕೆ.

■ **ಪ್ರಯೋಗ ಮೈಸೂರು :** ಚಂದಮಾಮ ಹಳೆ ಬೇರು ಹೊಸ ಚಿಗುರು, ಮಕ್ಕಳ ವಾರಾಂತ್ಯ ಅಭಿಯನ ಮತ್ತು ರಂಗ ತರಬೇತಿ, ನಿರ್ದೇಶನ: ಪ್ರವೀಣ್ ಬೆಳ್ಳಿ, ಸ್ಥಳ: ಪ್ರಯೋಗ ಮೈಸೂರು, ವಿ.ವಿ.ಮೊಹಲ್ಲಾ, ಮಧ್ಯಾಹ್ನ 2 ರಿಂದ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು ಜಿಲ್ಲಾ ಮತ್ತು ನಗರ ಘಟಕ, ಕದಳಿ ಮಹಿಳಾ ವೇದಿಕೆ :** ಡಾ. ಸಿ.ಎನ್. ಮೃತ್ಯುಂಜಯಪ್ಪ ಆದರ್ಶ ವೈದ್ಯ ಸೇವಾ ಪ್ರಶಸ್ತಿ ಪ್ರದಾನ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಅಧ್ಯಕ್ಷತೆ : ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯ ಪ್ರಾಂಶುಪಾಲ ಡಾ. ಹೆಚ್. ಬಸವನಗೌಡಪ್ಪ, ಪ್ರಶಸ್ತಿ ಪ್ರದಾನ : ಸಂಸದೆ ಶ್ರೀಮತಿ ಸುಮಲತಾ ಅಂಬರೀಷ್, ಮುಖ್ಯ ಅತಿಥಿಗಳು : ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಡಾ. ಶಾಲಿನಿ ನಲ್ವಾಡ್, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಸಂಜೆ 4.30ಕ್ಕೆ.

■ **ನಟನ ರಂಗಶಾಲೆ :** ವಾರಾಂತ್ಯ ರಂಗ ಪ್ರದರ್ಶನ, ಬೆಂಗಳೂರಿನ ಶಾಂಭವಿ ಸ್ಕೂಲ್ ಆಫ್ ಡ್ಯಾನ್ಸ್ ಕಲಾವಿದರಿಂದ ಮೂಲಂ –2023 (ದಿ ರೂಟ್ಸ್) ರಾಷ್ಟ್ರೀಯ ವಿಚಾರ ಸಂಕಿರಣ ಮತ್ತು ನೃತ್ಯೋತ್ಸವ, ಸ್ಥಳ: ನಟನ ರಂಗಶಾಲೆ, ರಾಮಕೃಷ್ಣನಗರ, ಸಂಜೆ 5ಕ್ಕೆ.

■ **ಚಂಪಕ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್ :** ಚಂಪಕ ರಾಷ್ಟ್ರೀಯ ಕಲಾ ಉತ್ಸವ, ಕರ್ನಾಟಕ ಕಲಾಶ್ರೀ ಡಾ. ಕೆ. ಕುಮಾರ್ ಮತ್ತು ಅವರ ಶಿಷ್ಯರಿಂದ ಭರತನಾಟ್ಯ ಪ್ರದರ್ಶನ, ಬೆಂಗಳೂರಿನ ಶ್ರೀ ಮಾತೃಕ ಕಲ್ಚರಲ್ ಟ್ರಸ್ಟ್ ಸಂಸ್ಥಾಪಕಿ ಕಲಾಶ್ರೀ ವಿದ್ಯಾ ರವಿಶಂಕರ್ ಅವರ ಶಿಷ್ಯಂದಿರಿಂದ ಭರತನಾಟ್ಯ ಕಾರ್ಯಕ್ರಮ, ವಿದುಷಿ ಶೃತಿ ಪ್ರಸಾದ್–ಗಾಯನ, ವಿದ್ವಾನ್ ಕಿರಣ್ –ಮೃದಂಗ, ವಿದ್ವಾನ್ ಶ್ರೀನಿಧಿ–ಕೊಳಲು, ಸ್ಥಳ: ಚಂಪಕ ಅಕಾಡೆಮಿ ಸಭಾಂಗಣ, ರಾಮಕೃಷ್ಣನಗರ, ಸಂಜೆ 5ಕ್ಕೆ.

■ **ಪರಮಹಂಸ ಯೋಗ ಮಹಾವಿದ್ಯಾಲಯ:** ಅಂತರರಾಷ್ಟ್ರೀಯ ಯೋಗ ಟೀಚರ್ಸ್ ಟ್ರೈನಿಂಗ್ ಕೋರ್ಸ್‌ನ ಉದ್ಘಾಟನಾ ಸಮಾರಂಭ, ಅಧ್ಯಕ್ಷತೆ: ಮೈಸೂರು ಯೋಗ ಒಕ್ಕೂಟದ ಉಪಾಧ್ಯಕ್ಷ ಶಿವಪ್ರಕಾಶ್ ಗುರೂಜಿ, ಉದ್ಘಾಟನೆ: ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಎಂ.ಬಿ.ಶ್ರೀಕಂಠಸ್ವಾಮಿ, ಮುಖ್ಯ ಅತಿಥಿಗಳು: ಮೈಸೂರು ಯೋಗ ಒಕ್ಕೂಟದ ಅಧ್ಯಕ್ಷ ಜಲೇಂದ್ರಕುಮಾರ್, ಉಪಾಧ್ಯಕ್ಷ ಎಂ.ಎಸ್. ರಮೇಶ್ ಕುಮಾರ್, ಸುಂದರ್‌ರಾಜ್, ಡಾ.ರಾಮಚಂದ್ರನಾಯಕ್, ಡಾ.ಭುವನ ಮಧುಸೂಧನ್, ಸ್ಥಳ: ಪರಮಹಂಸ ಯೋಗ ಮಹಾವಿದ್ಯಾಲಯ, ರಾಮಕೃಷ್ಣನಗರ, ಸಂಜೆ 5.30ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ:** ಸ್ವಾಮಿ ವಿಪ್ರಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟೆಬಲ್ ಟ್ರಸ್ಟ್:** ವೇಣು ವಿದ್ವಾನ್ ಕೆ.ಪಿ.ಪ್ರಣವ್ ಅವರಿಂದ ವೇಣುವಾದನ, ವಿದ್ವಾನ್ ತುಮಕೂರು ಯಶಸ್ವಿ–ಪಿಟೀಲು, ವಿದ್ವಾನ್ ವಿಕ್ರಮ್ ಭಾರದ್ವಾಜ್–ಮೃದಂಗ, ಸ್ಥಳ: ಶ್ರೀರಾಮಮಂದಿರದ ಆವರಣ, ಶಿವರಾಂಪೇಟೆ, ಸಂಜೆ 6ಕ್ಕೆ.

■ **ಗಾನಭಾರತೀ :** ವಿದುಷಿ ಚಿನ್ಮಯಿ ಮನೀಷ್ ಅವರಿಂದ ಗಾಯನ, ವಿದುಷಿ ಡಾ. ವೀಣಾ ಸುರೇಶ್–ಪಿಟೀಲು, ವಿದ್ವಾನ್ ಪವನ್ ಮಾಧವ–ಮೃದಂಗ, ವಿದ್ವಾನ್ ಶ್ರೀನಿಧಿ ಆರ್. ಕೌಂಡಿನ್ಯ–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟೆಬಲ್ ಟ್ರಸ್ಟ್ :** ದಿವಂಗತ ಶ್ರೀಮತಿ ಎಸ್.ನಿರ್ಮಲಾ ಸಂಸ್ಮರಣಾ ಕರ್ನಾಟಕ ಸಂಗೀತ ಕಾರ್ಯಕ್ರಮ, ವಿದ್ವಾನ್ ಮೈಸೂರು ಎ.ಚಂದನ್‌ಕುಮಾರ್ ಅವರಿಂದ ವೇಣುವಾದನ, ವಿದುಷಿ ಶ್ರೀಮತಿ ಹೆಚ್.ಎಂ. ಸ್ಮಿತಾ–ವಯೋಲಿನ್, ವಿದ್ವಾನ್ ಜಿ.ಎಸ್. ರಾಮಾನುಜಂ–ಮೃದಂಗ, ವಿದ್ವಾನ್ ಶಮಿತ್ ಎಸ್.ಗೌಡ–ಘಟಂ, ಸ್ಥಳ: ಶ್ರೀ ಲಕ್ಷ್ಮೀನರಸಿಂಹ –ಗಾಯತ್ರೀ ದೇವಸ್ಥಾನ, ಎಸ್‌ಬಿಎಂ ಕಾಲೋನಿ, ಶ್ರೀರಾಂಪುರ 2ನೇ ಹಂತ, ಸಂಜೆ 6.15ಕ್ಕೆ.

ಶ್ರೀ ಸಿದ್ಧನಂಜ ದೇಶಿಕೇಂದ್ರ ಮಂಗಳ ಮಂಟಪ, ಶ್ರೀ ಕ್ಷೇತ್ರ, ಸುತ್ತೂರು, ನಂಜನಗೂಡು ತಾ.

■ **ಕರ್ನಾಟಕ ರಾಜ್ಯ ಸಂಸ್ಕೃತ ಪಾಠಶಾಲಾ ಶಿಕ್ಷಕರ ಸಂಘ:** ಬೆಳಗ್ಗೆ 11ಕ್ಕೆ ರಾಜ್ಯ ಮಟ್ಟದ ಸಂಸ್ಕೃತ ಪಾಠ ಶಾಲಾ ಶಿಕ್ಷಕರ ಶೈಕ್ಷಣಿಕ ಸಮ್ಮೇಳನ ಹಾಗೂ ವಾರ್ಷಿಕ ಮಹಾಧಿವೇಶನ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ, ಗೌರವ ಉಪಸ್ಥಿತರು: ಶ್ರೀ ಶಿವರುದ್ರ ಶಿವಾಚಾರ್ಯ ಸ್ವಾಮೀಜಿ, ಉದ್ಘಾಟನೆ: ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಅಧ್ಯಕ್ಷತೆ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ಕುಲಪತಿ ಡಾ.ಎಸ್.ಅಹಲ್ಯಾ, ನಿವೃತ್ತ ಶಿಕ್ಷಕರಿಗೆ ಸನ್ಮಾನ: ಸಂಸ್ಕೃತ ಶಿಕ್ಷಣ ನಿರ್ದೇಶನಾಲಯ ನಿರ್ದೇಶಕ ಪ್ರೊ.ಸಿ. ಪಾಲಯ್ಯ, ಕರ್ನಾಟಕ ಸಂಸ್ಕೃತ ಸಂರಕ್ಷಣಾ ಸಮಿತಿ ಅಧ್ಯಕ್ಷ ವಿದ್ವಾನ್ ಚಂದ್ರಶೇಖರಯ್ಯ ಅವರಿಂದ ಉಪನ್ಯಾಸ, ಪ್ರಾಸ್ತಾವಿಕ ನುಡಿ : ಸಂಘದ ಅಧ್ಯಕ್ಷ ವಿದ್ವಾನ್ ಹೆಚ್.ಬಿ. ಗಂಗಾಧರಯ್ಯ, ಮಧ್ಯಾಹ್ನ 2.30ಕ್ಕೆ ಸಂಘದ ವಾರ್ಷಿಕ ಮಹಾಧಿವೇಶನ, ಅಧ್ಯಕ್ಷತೆ: ಸಂಘದ ಅಧ್ಯಕ್ಷ ಹೆಚ್.ಬಿ.ಗಂಗಾಧರಯ್ಯ, ಪ್ರಾಸ್ತಾವಿಕ ನುಡಿ: ಪ್ರಧಾನ ಕಾರ್ಯದರ್ಶಿ ಜಿ. ಪರಶಿವಮೂರ್ತಿ, ಆಯವ್ಯಯ ಮಂಡನೆ: ಖಜಾಂಚಿ ಬಿ.ಬಿ. ಅರೇರ, ಸ್ಥಳ: ಶ್ರೀ ಸಿದ್ಧನಂಜ ದೇಶಿಕೇಂದ್ರ ಮಂಗಳ ಮಂಟಪ, ಶ್ರೀ ಕ್ಷೇತ್ರ, ಸುತ್ತೂರು, ನಂಜನಗೂಡು ತಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಿಎಫ್‌ಟಿಆರ್‌ಐ ಸಿರಿಧಾನ್ಯದ ಸಿರಿ– ಪ್ರಾಯೋಜಿತ ಕಾರ್ಯಕ್ರಮ, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ– ಡಾ. ಮೈಸೂರ್ ಉಮೇಶ್, 7.15 ಭಾವಗೀತೆಗಳು, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ, ಬಾನುಲಿ ಸರಣಿ. ಭಾಗವಹಿಸುವವರು ಕೋಟಿವೃಕ್ಷ ಅಭಿಯಾನದ ಮೈಸೂರಿನ ಶ್ರೀಕಾಂತ್ ಭಟ್, ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 9.05 ವಸುಧೈವ ಕುಟುಂಬಕ್ಕಂ – ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 10.00 ಡಾ. ಎನ್. ರಮಣಿ – ವೇಣುವಾದನ, 11.00 "ಸ್ವರಾಜ್"– ಭಾರತ ಸ್ವಾತಂತ್ರ್ಯ ಸಂಗ್ರಾಮದ ಸಮಗ್ರ ಗಾಥೆ

ಮಧ್ಯಾಹ್ನ: 12.30 ದೇವರನಾಮ, 1.00 ಪ್ರಗತಿ ಪಥ, ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 1.20 ಭಾವಗೀತೆ– ಎನ್.ಹೇಮಾ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.30 ಮಕ್ಕಳ ಮಂಟಪ, 4.00 ನಾಟಕ, 4.30 ನೆನಪಿನಂಗಳ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಡಾ. ಮೈಸೂರು ಉಮೇಶ್, ಆರ್. ಲೋಕೇಶ್ವರಿ, 8.00 ಯುವವಾಣಿ, 9.30 ಹೊಸ ಉದ್ಯೋಗಗಳಿಗಾಗಿ ಸ್ಟಾರ್ಟ್ ಅಪ್‌ಗಳು–ಮೈಸೂರಿನ ಶಿವಶಂಕರ ಬಿ.ಅವರೊಡನೆ ಸಂದರ್ಶನ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಎನ್. ರಾಮಮೂರ್ತಿ –ಹಾಡುಗಾರಿಕೆ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 8 ಶನಿವಾರ 2023

ಸಂಪುಟ: 44 | ಸಂಚಿಕೆ: 83 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4











₹'ಶಕ್ತಿ'ಗೆ 4,000 ಕೋಟಿ | ₹ಗೃಹ ಜ್ಯೋತಿಗೆ 13,910 ಕೋಟಿ | ₹ಅನ್ನಭಾಗ್ಯಕ್ಕೆ 10,275 ಕೋಟಿ | ₹ಯುವನಿಧಿ / ಗೃಹಲಕ್ಷ್ಮಿ ಇವೆರಡಕ್ಕೆ 23,815 ಕೋಟಿ ನಿಗದಿ

ಸಿದ್ದರಾಮಯ್ಯರ ಗ್ಯಾರಂಟಿ ಬಜೆಟ್



- ಗ್ಯಾರಂಟಿಗಳಿಗೆ ವಾರಂಟಿಗಾಗಿ ಬಜೆಟ್‌ನಲ್ಲಿ ಹಳೆ ಯೋಜನೆಗಳಿಗೆ ಮರುಜನ್ಮ!
- ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಮಧ್ಯಮ ವರ್ಗದವರ ಜೇಬಿಗೆ ಕತ್ತರಿ
- ಗೃಹಲಕ್ಷ್ಮಿ, ಯುವ ನಿಧಿ, ಅನ್ನಭಾಗ್ಯ, ಶಕ್ತಿ, ಗೃಹ ಜ್ಯೋತಿಗಳಿಗೆ ಹಣ ಕ್ರೋಢೀಕರಿಸುವ ಸಲುವಾಗಿ ಹೊಸ ಕಾರ್ಯಕ್ರಮಗಳಿಲ್ಲ; ತಮ್ಮ ಹಿಂದಿನ ಆಡಳಿತಾವಧಿಯ ಹಲವು ಕಾರ್ಯಕ್ರಮಗಳಿಗೆ ಮರುಜನ್ಮ ನೀಡಿದ ಮುಖ್ಯಮಂತ್ರಿ
- ಅಬಕಾರಿ, ಮುದ್ರಾಂಕ, ಸಾರಿಗೆ, ವಾಣಿಜ್ಯ ಇಲಾಖೆಗಳಲ್ಲಿ ಗರಿಷ್ಠ ವಸೂಲಿ

ಬೆಂಗಳೂರು, ಜು.7 (ಕೆಎಂಶಿ)– ಜನತೆಗೆ ನೀಡಿದ ಐದು ಗ್ಯಾರಂಟಿ ಯೋಜನೆಗಳ ಈಡೇರಿಕೆಗೆ ಹಣ ಹೊಂದಿಸಲು ಮಧ್ಯಮ ವರ್ಗದವರ ಜೇಬಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೈಹಾಕಿದ್ದಾರೆ.

ವಿಧಾನಸಭೆಯಲ್ಲಿಂದು ಮುಖ್ಯಮಂತ್ರಿ ಅವರು 2023–24ನೇ ಸಾಲಿನ ಮುಂಗಡ ಪತ್ರ ಮಂಡಿಸಿ ಬಜೆಟ್‌ನ ಯೋಜನಾ ಗಾತ್ರವನ್ನು 3.27 ಲಕ್ಷ ಕೋಟಿ ರೂ.ಗೆ ಹೆಚ್ಚಿಸಿದ್ದಾರೆ.

ಇದಕ್ಕೆ ಪೂರಕವಾಗಿ ರಾಜ್ಯ ವ್ಯಾಪ್ತಿಗೆ ಬರುವ ತೆರಿಗೆಗಳನ್ನು ಗಣನೀಯವಾಗಿ ಏರಿಕೆ ಮಾಡಿ ಅಧಿಕಾರಕ್ಕೆ ಬರುವ ಮುನ್ನ ಜನರಿಗೆ ನೀಡಿದ್ದ ಗೃಹಲಕ್ಷ್ಮಿ, ಯುವನಿಧಿ, ಅನ್ನಭಾಗ್ಯ, ಶಕ್ತಿ ಹಾಗೂ ಗೃಹಜ್ಯೋತಿ ಯೋಜನೆಗಳ ಗ್ಯಾರಂಟಿಗೆ ಅಗತ್ಯವಿರುವ ಹಣವನ್ನು ಕ್ರೋಢೀಕರಿಸಲು ತಮ್ಮ ಬಜೆಟ್‌ನಲ್ಲಿ ಒತ್ತು ಕೊಟ್ಟಿದ್ದಾರೆ.

ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುತ್ತಿರುವುದರಿಂದ ತಮ್ಮ ಮುಂಗಡ ಪತ್ರದಲ್ಲಿ ಯಾವುದೇ ಹೊಸ ಕಾರ್ಯಕ್ರಮಗಳನ್ನು ನೀಡಲಾಗದೆ, ತಮ್ಮ ಈ ಹಿಂದಿನ ಆಡಳಿತಾವಧಿಯ ಕಾರ್ಯಕ್ರಮಗಳಿಗೆ ಮರುಜನ್ಮ ನೀಡಿದ್ದಾರೆ.

ಮನೆಯೊಡತಿಯರಿಗೆ ಪ್ರತಿ ತಿಂಗಳೂ 2000 ರೂ. ನೀಡುವ ಗೃಹಲಕ್ಷ್ಮಿ ಯೋಜನೆಗೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ 30 ಸಾವಿರ ಕೋಟಿ ರೂ. ನಿಗದಿಪಡಿಸಿದ್ದರೆ, ಶಕ್ತಿ ಯೋಜನೆಗೆ 4 ಸಾವಿರ ಕೋಟಿ ರೂ., ಗೃಹಜ್ಯೋತಿಗೆ 13,910 ಕೋಟಿ ರೂ., ಅನ್ನಭಾಗ್ಯ ಯೋಜನೆಗೆ 10,275 ಕೋಟಿ ರೂ. ಸೇರಿದಂತೆ ಎಲ್ಲಾ ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ. ನಿಗದಿಪಡಿಸಿದ್ದಾರೆ.

ಇವುಗಳ ಅನುಷ್ಠಾನದಿಂದ 1.30 ಕೋಟಿ ಕುಟುಂಬಗಳಿಗೆ ಅನುಕೂಲವಾಗಲಿದೆ, ಪ್ರತಿ ಕುಟುಂಬಕ್ಕೆ ಮಾಸಿಕ 4 ರಿಂದ 5 ಸಾವಿರ ರೂ. ಆರ್ಥಿಕ ನೆರವು ದೊರೆಯಲಿದೆ ಎಂದಿದ್ದಾರೆ.

ತೆರಿಗೆಗಳ ಹೆಚ್ಚಳದಿಂದ ಮದ್ಯದ ಮೇಲೆ ಶೇಕಡಾ 20ರಷ್ಟು, ನೋಂದಣಿ ಮತ್ತು ಮುದ್ರಾಂಕದಲ್ಲಿ ಶೇಕಡಾ 15 ರಿಂದ 20ರಷ್ಟು ಸಾರಿಗೆ ಇಲಾಖೆ ಹಾಗೂ ವಾಣಿಜ್ಯ ಇಲಾಖೆ ವ್ಯಾಪ್ತಿಗೆ ಬರುವ ಎಲ್ಲಾ ತೆರನಾದ ಸಾಮಗ್ರಿಗಳ ಮೇಲೆ ಗಣನೀಯ ಹೆಚ್ಚಳ ಮಾಡಿದ್ದಾರೆ. ● 9ನೇ ಪುಟಕ್ಕೆ

ಹಿಂದಿನ ಬಿಜೆಪಿ ಸರ್ಕಾರದ ಅಶಿಸ್ತು!

ರಾಜ್ಯದ ಆರ್ಥಿಕ ವ್ಯವಸ್ಥೆ ಹಿಂದಿನ ಸರ್ಕಾರದ ಅವಧಿಯಲ್ಲಿ ಹದಗೆಟ್ಟಿದೆ ಎಂದು ಡಬಲ್ ಇಂಜಿನ್ ಸರ್ಕಾರದ ವಿರುದ್ಧ ಕಿಡಿಕಾರಿರುವ ಮುಖ್ಯಮಂತ್ರಿ ಅವರು, ಬಿಜೆಪಿ ಆಡಳಿತದ ಸಮಯದಲ್ಲಿ ವಿತ್ತೀಯ ಶಿಸ್ತಿನ ನೀತಿಗಳನ್ನು ಗಾಳಿಗೆ ತೂರಿ ಪ್ರಮುಖ ಇಲಾಖೆಗಳಲ್ಲಿ ಭಾರೀ ಸಂಖ್ಯೆಯ ಕಾಮಗಾರಿಗಳಿಗೆ ಮಂಜೂರಾತಿ ನೀಡಿದೆ. ಸಂಪನ್ಮೂಲಕ್ಕಿಂತ ಹೆಚ್ಚಿಗೆ ದುಂದುವೆಚ್ಚ ಮಾಡಿದ್ದು, ತನ್ನ ಅಧಿಕಾರಾವಧಿಯಲ್ಲಿ 94,933 ಕೋಟಿ ರೂ. ಮೊತ್ತದ ಕಾಮಗಾರಿಗಳನ್ನು ವಿವಿಧ ಇಲಾಖೆ ಅಡಿಯಲ್ಲಿ ನೀಡಲಾಗಿದೆ. ಒಟ್ಟಾರೆ ಹಿಂದಿನ ಸರ್ಕಾರ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ನಿರ್ವಹಿಸುವಲ್ಲಿ ಸೋತಿದೆ ಎಂದು ತಮ್ಮ ಮುಂಗಡಪತ್ರದಲ್ಲಿ ಮುಖ್ಯಮಂತ್ರಿ ಅವರು, ಪದೇ ಪದೆ ಪ್ರಸ್ತಾಪ ಮಾಡಿದ್ದಾರೆ.

ಬಡವರು, ದುರ್ಬಲ ವರ್ಗದವರು, ಪರಿಶಿಷ್ಟ ಜಾತಿ ಮತ್ತು ವರ್ಗ, ಹಿಂದುಳಿದ ಹಾಗೂ ಅಲ್ಪಸಂಖ್ಯಾತರು, ಭೂರಹಿತ ಕೃಷಿ ಕಾರ್ಮಿಕರು, ಮಹಿಳೆಯರೂ ಸೇರಿದಂತೆ ಎಲ್ಲರಿಗೂ ಸಮಾನ ಅವಕಾಶ ಒದಗಿಸುವ ಮೂಲಕ ಎಲ್ಲರ ಕ್ಷೇಮಾಭಿವೃದ್ಧಿಯನ್ನು ನನ್ನ ಸರ್ಕಾರ ಖಾತರಿಪಡಿಸುತ್ತದೆ ಎಂದಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಕೇವಲ ಬಿಟ್ಟಿ ಯೋಜನೆಗಳೆಂದು ಆಡಿಕೊಳ್ಳದಿರುವಂತೆ ಪ್ರತಿಪಕ್ಷಗಳಿಗೆ ಕಿವಿಮಾತು ಹೇಳಿರುವ ಮುಖ್ಯಮಂತ್ರಿ ಅವರು, ಬಡವರ ಮತ್ತು ಶ್ರಮಿಕರ ಬದುಕನ್ನು ಹಸನು ಮಾಡಲು ಇವುಗಳನ್ನು ತಂದಿರುವುದಾಗಿ ತಿಳಿಸಿದ್ದಾರೆ.

ಜನಸಾಮಾನ್ಯರಿಗೆ ಹೊರೆಯಾಗದ ರೀತಿ ಗ್ಯಾರಂಟಿಗಳಿಗೆ ಹಣ ಹೊಂದಿಸಿಕೊಳ್ಳೇವೆ: ಸಿಎಂ

ಬೆಂಗಳೂರು, ಜು.7– ಗ್ಯಾರಂಟಿ ಯೋಜನೆಗಳಿಗೆ ಪ್ರಸಕ್ತ ಸಾಲಿಗೆ 57 ಸಾವಿರ ಕೋಟಿಗೂ ಹೆಚ್ಚು ಹಣ ಅಗತ್ಯವಿದ್ದು, ಜನಸಾಮಾನ್ಯರಿಗೆ ಹೊರೆಯಾಗದಂತೆ ಸಂಪನ್ಮೂಲ ಕ್ರೋಢೀಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ತಮ್ಮ 14 ನೇ ಆಯವ್ಯಯ ಮಂಡಿಸಿದ ನಂತರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಗ್ಯಾರಂಟಿ ಯೋಜನೆಗಳಿಗೆ 13,500 ಕೋಟಿ ರೂ. ರಾಜಸ್ವ ಸಂಗ್ರಹ ಗುರಿ ಹೆಚ್ಚಳ ಹಾಗೂ 8000 ಕೋಟಿ ರೂ. ಹೆಚ್ಚುವರಿ ಸಾಲದ ಮೂಲಕ ಮತ್ತು ಉಳಿದ ಸಂಪನ್ಮೂಲವನ್ನು ಯೋಜನೆಗಳ ಆದ್ಯತೆಯನ್ನು ನಿಗದಿಪಡಿಸುವ ಮೂಲಕ ಹೊಂದಾಣಿಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಗಳ ಅನುಷ್ಠಾನಕ್ಕಾಗಿ ಬಡವರ–ಮಧ್ಯಮ ವರ್ಗದವರ ಮೇಲೆ ಯಾವುದೇ ತೆರಿಗೆ ಹಾಕಿಲ್ಲ, ಜನರಿಗೆ ಹೊರೆ ಆಗಬಾರದು ಎನ್ನುವ ಕಾರಣಕ್ಕೇ ಪೆಟ್ರೋಲ್, ಡೀಸೆಲ್ ಮೇಲೆ ತೆರಿಗೆ ಹಾಕಲಿಲ್ಲ, ಬೆಲೆ ಏರಿಕೆ ಮಾಡಿಲ್ಲ ಎಂದರು. ವಿತ್ತೀಯ ಹೊಣೆಗಾರಿಕೆ ಕಾಯ್ದೆಯಡಿ 3 ಮಾನದಂಡಗಳನ್ನು ಪಾಲಿಸಬೇಕಿದ್ದು, ಈ ಪೈಕಿ 2023–24 ರ ಬಜೆಟ್‌ನಲ್ಲಿ 2 ಮಾನದಂಡಗಳನ್ನು ಕಾಯ್ದುಕೊಳ್ಳುವ ಮೂಲಕ ಆರ್ಥಿಕ ● 9ನೇ ಪುಟಕ್ಕೆ

ಮೇಕೆದಾಟು ಅಣೆಕಟ್ಟೆಗೆ ಭೂಸ್ವಾಧೀನ ಪ್ರಕ್ರಿಯೆಗೆ ಆದ್ಯತೆ ಮೇರೆಗೆ ಕ್ರಮ

ನನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳ ಜಾರಿಗೆ ಕ್ರಮದ ಭರವಸೆ



ಬೆಂಗಳೂರು, ಜು.7 (ಕೆಎಂಶಿ)– ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಅಗತ್ಯವಿರುವ ಭೂಮಿಯನ್ನು ಗುರುತಿಸಿ ಭೂಸ್ವಾಧೀನ ಪ್ರಕ್ರಿಯೆಗಳನ್ನು ಕೈಗೊಳ್ಳಲು ಆದ್ಯತೆ ಮೇರೆಗೆ ಕ್ರಮಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ. ಈ ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ವಿವರವಾದ ವರದಿ ಹಾಗೂ ಪರಿಸರ ತೀರುವಳಿ ಪ್ರಸ್ತಾವನೆಗೆ ಕೇಂದ್ರ ಸರ್ಕಾರದ ಅನುಮತಿ ಪಡೆಯಲು ● 9ನೇ ಪುಟಕ್ಕೆ



ತವರು ಜಿಲ್ಲೆ ಮೈಸೂರಿಗೆ ಮುಖ್ಯಮಂತ್ರಿ ಮಹಾ ಕೊಡುಗೆ

ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ರಚನೆ

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಸೆಂಟರ್ ಕಾರ್ಯಾರಂಭ, ಫಿಲಂ ಸಿಟಿ ಸ್ಥಾಪನೆ

- 10 ಕೋಟಿ ರೂ. ವೆಚ್ಚದಲ್ಲಿ ಸೈಕ್ಲಿಂಗ್ ವೆಲೋಡ್ರೋಮ್
- ರೇಷ್ಮೆ ಬೆಳೆಗಾರರಿಗೆ ಮೂಲ ಸೌಕರ್ಯ ಒದಗಿಸಲು ಕ್ರಮ

ಬೆಂಗಳೂರು, ಜು.7–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ 14ನೇ ಬಜೆಟ್ ಮಂಡಿಸಿದ್ದಾರೆ. 3 ಲಕ್ಷದ 27 ಸಾವಿರ ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯ ಅವರು ತವರು ಜಿಲ್ಲೆಗೆ ಭರಪೂರ ಕೊಡುಗೆಯನ್ನೇ ನೀಡಿದ್ದಾರೆ. ಬಹು ದಿನಗಳ ಬೇಡಿಕೆಯಾಗಿದ್ದ ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ರಚನೆ ಘೋಷಿಸುವುದರೊಂದಿಗೆ ಆರೋಗ್ಯಯುತ ಮೈಸೂರಿನ ನಿರ್ಮಾಣಕ್ಕೆ ಪ್ರಮುಖವಾಗಿ ಮೈಸೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್‌ಗಳ ಕಾರ್ಯಾರಂಭಕ್ಕೆ ಅನುದಾನ ಒದಗಿಸಿದ್ದಾರೆ. ಚಾಮುಂಡಿಬೆಟ್ಟದ ಅಭಿವೃದ್ಧಿಗಾಗಿ ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ರಚನೆ, ಮೈಸೂರಿನಲ್ಲಿ ಜಾಗತಿಕ ಮಟ್ಟದ ಚಿತ್ರನಗರಿ ನಿರ್ಮಾಣಕ್ಕೆ ಸಿದ್ದರಾಮಯ್ಯ ಬಜೆಟ್‌ನಲ್ಲಿ ● 6ನೇ ಪುಟಕ್ಕೆ



ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ, ವೀಳ್ಯದೆಲೆ ಬ್ರ್ಯಾಂಡಿಂಗ್‌ಗೆ ಒತ್ತು

ಮದ್ಯದ ಮೇಲೆ ಶೇ.20 ತೆರಿಗೆ

ಬಿಯರ್ ಮೇಲೆ ಹೆಚ್ಚುವರಿ ಅಬಕಾರಿ ಸುಂಕ

ಬೆಂಗಳೂರು: ಮದ್ಯದ ಘೋಷಿತ 18 ಸ್ಲ್ಯಾಬ್‌ಗಳ ಮೇಲೆ ಶೇಕಡಾ 20ರಷ್ಟು ದರ ಹೆಚ್ಚಳ ಮಾಡಿರುವ ಸಿಎಂ ಸಿದ್ದರಾಮಯ್ಯ ಪಾನ ಪ್ರಿಯರ ಜೇಬಿಗೆ ದೊಡ್ಡ ಪ್ರಮಾಣದಲ್ಲೇ ಕೈಹಾಕಿದ್ದಾರೆ.

ಬಿಯರ್ ಮೇಲಿನ ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.17.5 ರಿಂದ 18.5ಕ್ಕೆ ಹೆಚ್ಚಿಸಲು ತೀರ್ಮಾನಿಸಿದ್ದು, ಒಟ್ಟಾರೆ 36,000 ಕೋಟಿ ರೂ. ಸಂಗ್ರಹಿಸುವ ಗುರಿ ಹೊಂದಿದ್ದಾರೆ. ಅಬಕಾರಿ ಸುಂಕದ ದರಗಳ ಹೆಚ್ಚಳದ ನಂತರವೂ ನಮ್ಮ ರಾಜ್ಯದಲ್ಲಿನ ಮದ್ಯದ ದರವು ನೆರೆ ರಾಜ್ಯಗಳಿಗಿಂತ ಕಡಿಮೆ ಇದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಶಾಲಾ ಮಕ್ಕಳಿಗೆ ವಾರದಲ್ಲಿ ಎರಡು ದಿನ ಮೊಟ್ಟೆ, ಬಾಳೆಹಣ್ಣು ಇಲ್ಲವೇ ಚಿಕ್ಕಿ

ಪ್ರಸಕ್ತ ವರ್ಷದ 9, 10ನೇ ತರಗತಿ ಮಕ್ಕಳಿಗೂ ವಿತರಣೆ



ಬೆಂಗಳೂರು, ಜು.7(ಕೆಎಂಶಿ)–ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರದಲ್ಲಿ ಒಂದು ಬಾರಿ ವಿತರಿಸಲಾಗುತ್ತಿರುವ ಮೊಟ್ಟೆ ಅಥವಾ ಶೇಂಗಾ ಚಿಕ್ಕಿ ಇಲ್ಲವೇ ಬಾಳೆಹಣ್ಣನ್ನು ಇನ್ನು ಮುಂದೆ ವಾರದಲ್ಲಿ ಎರಡು ದಿವಸ ವಿತರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದರು.

ಪ್ರಸಕ್ತ ಸಾಲಿನ ಬಜೆಟ್ ಪ್ರಕಟಿಸಿದ ಅವರು, ಈ ಯೋಜನೆಯನ್ನು 9 ಮತ್ತು 10ನೇ ತರಗತಿಗಳ ವಿದ್ಯಾರ್ಥಿಗಳಿಗೂ ಈ ವರ್ಷದಿಂದಲೇ 280 ಕೋಟಿ ರೂ.ಗಳ ವೆಚ್ಚದಲ್ಲಿ 60 ಲಕ್ಷ ಮಕ್ಕಳಿಗೆ ಒದಗಿಸಲಾಗುವುದು ಎಂದರು. ರಾಜ್ಯದ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಉತ್ತಮ ಸೌಲಭ್ಯಗಳನ್ನು ನೀಡಲು ಶಾಲಾ ಕೊಠಡಿಗಳಿಗೆ 310 ಕೋಟಿ ರೂ.ಗಳು ಹಾಗೂ ಪದವಿ ಪೂರ್ವ ಕಾಲೇಜು ಕೊಠಡಿಗಳಿಗೆ 240 ಕೋಟಿ ರೂ. ಸೇರಿದಂತೆ ಒಟ್ಟು 550 ಕೋಟಿ ರೂ.ಗಳ ವೆಚ್ಚದಲ್ಲಿ 8,311 ಕೊಠಡಿಗಳ ನಿರ್ಮಾಣ ಕಾಮಗಾರಿಗಳನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಮುಂಗಡಪತ್ರದಲ್ಲಿ ● 6ನೇ ಪುಟಕ್ಕೆ

ಈ ನವೆಂಬರ್ 1ಕ್ಕೆ ಮೈಸೂರು ಕರ್ನಾಟಕವಾಗಿ 50 ವರ್ಷ

ಹೆಸರಾಯಿತು ಕರ್ನಾಟಕ; ಉಸಿರಾಗಲಿ ಕನ್ನಡ: ವರ್ಷವಿಡೀ ವಿಶೇಷ ಕಾರ್ಯಕ್ರಮ



ಬೆಂಗಳೂರು, ಜು.7(ಕೆಎಂಶಿ)–ಮೈಸೂರು ರಾಜ್ಯವು ಕರ್ನಾಟಕ ಎಂದು ಮರುನಾಮಕರಣವಾಗಿ 1ನೇ ನವೆಂಬರ್, 2023ಕ್ಕೆ 50 ವರ್ಷ ಪೂರ್ಣಗೊಳ್ಳಲಿದೆ. ಈ ಸಂದರ್ಭದಲ್ಲಿ 'ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ' ಎಂಬ ಹೆಸರಿನಲ್ಲಿ ಇಡೀ ವರ್ಷ ಕರ್ನಾಟಕದ ಇತಿಹಾಸ, ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ನಾಡು–ನುಡಿಗೆ ಸಂಬಂಧಿಸಿದಂತೆ ಮತ್ತು ಯುವಜನತೆಯಲ್ಲಿ ಕನ್ನಡ–ಕನ್ನಡಿಗ–ಕರ್ನಾಟಕದ ಅರಿವು ಮೂಡಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕನ್ನಡ ಸಾಹಿತ್ಯ ಲೋಕಕ್ಕೆ ● 9ನೇ ಪುಟಕ್ಕೆ

ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆ ಕಾಪಾಡಲು ಹೆಚ್ಚಿನ ಆದ್ಯತೆ



ಬೆಂಗಳೂರು: ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಹೆಚ್ಚಿನ ಮಹತ್ವ ನೀಡಲಿದೆ. ನೈತಿಕ ಪೊಲೀಸ್‌ಗಿರಿಯ ಹೆಸರಿನಲ್ಲಿ ನಡೆಯುವ ದಬ್ಬಾಳಿಕೆ, ಸಾಮಾಜಿಕ ಜಾಲತಾಣಗಳ ಮೂಲಕ ಸುಳ್ಳು ವದಂತಿ ಹರಡುವ, ಸೌಹಾರ್ದ ಕೆಡಿಸುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ● 6ನೇ ಪುಟಕ್ಕೆ

ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯೊಂದಿಗೆ ಕೃಷಿ ಭಾಗ್ಯ ಸಂಯೋಜನೆ



100 ಕೋಟಿ ಅನುದಾನದೊಂದಿಗೆ ಮರು ಜಾರಿ

ಬೆಂಗಳೂರು, ಜು.7(ಕೆಎಂಶಿ)–ಕೃಷಿ ಭಾಗ್ಯ ಯೋಜನೆಯು ಅತ್ಯಂತ ಜನಪ್ರಿಯ ಹಾಗೂ ಉಪಯುಕ್ತವಾಗಿತ್ತು ಈ ಯೋಜನೆಯನ್ನು ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯೊಂದಿಗೆ ಸಂಯೋಜಿಸಿ 100 ಕೋಟಿ ರೂ. ವೆಚ್ಚದಲ್ಲಿ ಮರು ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ವಲಯಗಳಲ್ಲಿ ನಾವೀನ್ಯತೆಯನ್ನು ಪ್ರೋತ್ಸಾಹಿಸುವಲ್ಲಿ ಕೃಷಿ ಉದ್ಯಮಗಳಿಗೆ ಉತ್ತೇಜನ ನೀಡಲು ನವೋದ್ಯಮ ಎಂಬ ಹೊಸ ಯೋಜನೆಯಡಿ 10 ಕೋಟಿ ರೂ. ಒದಗಿಸಲಾಗುವುದು. ರೈತರು ಬೆಳೆದ ಉತ್ಪನ್ನಗಳನ್ನು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ನಂದಿನಿ ಮಾದರಿಯಲ್ಲಿ ರೈತ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಂಡಿಂಗ್ ವ್ಯವಸ್ಥೆ ರೂಪಿಸಲು 10 ಕೋಟಿ ರೂ. ಒದಗಿಸಲಾಗುವುದು. ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲೂಕುಗಳ 100 ರೈತ ಉತ್ಪಾದಕ ಸಂಸ್ಥೆಗಳಿಗೆ ● 6ನೇ ಪುಟಕ್ಕೆ

ರೈತರಿಗೆ ಬಡ್ಡಿ ರಹಿತ ಸಾಲದ ಮಿತಿ 5 ಲಕ್ಷಕ್ಕೆ ಏರಿಕೆ

- ಶೇ.3ರ ಬಡ್ಡಿ ಸಾಲದ ಮಿತಿ 10 ರಿಂದ 15 ಲಕ್ಷಕ್ಕೆ ಹೆಚ್ಚಳ
- ಪ್ರಸಕ್ತ ವರ್ಷ 25 ಸಾವಿರ ಕೋಟಿ ಸಾಲ ವಿತರಣೆ

ಬೆಂಗಳೂರು, ಜು.7(ಕೆಎಂಶಿ)– ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡುತ್ತಿರುವ ಅಲ್ಪಾವಧಿ ಸಾಲದ ಮಿತಿಯನ್ನು ಮೂರು ಲಕ್ಷ ರೂ.ಗಳಿಂದ ಐದು ಲಕ್ಷ ರೂ.ಗಳಿಗೆ ಹೆಚ್ಚಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಘೋಷಣೆ ಮಾಡಿದ್ದಾರೆ.

ಪ್ರಸಕ್ತ ಸಾಲಿನ ಮುಂಗಡಪತ್ರ ಮಂಡಿಸಿದ ಅವರು, ಶೇ.3ರ ಬಡ್ಡಿದರದಲ್ಲಿ ನೀಡುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಮಿತಿಯನ್ನು 10 ಲಕ್ಷ ರೂ.ಗಳಿಂದ 15 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು ಎಂದಿದ್ದಾರೆ. ಪ್ರಸಕ್ತ ಸಾಲಿನಲ್ಲಿ 35 ಲಕ್ಷಕ್ಕಿಂತ ಹೆಚ್ಚಿನ ರೈತರಿಗೆ 25,000 ಕೋಟಿ ರೂ.ಗಳಷ್ಟು ಸಾಲ ವಿತರಣೆ ಮಾಡುವ ಗುರಿ ಹೊಂದಲಾಗಿದೆ. ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಅನುವಾಗುವಂತೆ ಗೋದಾಮು ನಿರ್ಮಿಸಲು ಬ್ಯಾಂಕುಗಳು ನೀಡುವ 20 ಲಕ್ಷ ರೂ. ವರೆಗಿನ ಸಾಲಕ್ಕೆ ರಾಜ್ಯ ಸರ್ಕಾರವು ಶೇ.7ರಷ್ಟು ಬಡ್ಡಿ ಸಹಾಯಧನ ನೀಡಲಿದೆ. ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಬಸ್ಯಾ : ಯಾಕೆ ಹೆಣ್ಣು ನೋಡೋಕೆ ಗಂಡಿನ ಕಡೆಯವರೇ ಹೋಗ್ತಾರೆ?
ಸಂತು : ಗಂಡು ನೋಡೋಕೆ ಹೆಣ್ಣು ಹೋಗೋಲ್ಲ ಯಾಕೆಂದ್ರೆ ಹೋಗೋ ದಾರೀಲಿ ಮಾಡ್ಕೊಂಡಿರುವ ಮೇಕಪ್ ಹಾಳಾಗುತ್ತೆ ಅಂತ.

ಮೈಸೂರು ಮಿತ್ರ

ಶನಿವಾರ, 8 ಜುಲೈ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ದುರ್ಜನರ ದುಷ್ಕೃತ್ಯದಿಂದ ಸಂಭವಿಸಬಹುದಾದ ಹಾನಿಗಿಂತ ಸಜ್ಜನರ ನಿಷ್ಕ್ರಿಯತೆಯಿಂದ ಸಂಭವಿಸುವ ಹಾನಿಯೇ ಹೆಚ್ಚು –ಚಾಣಕ್ಯ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅಜೀರ್ಣಕ್ಕೆ ಔಷಧಿ ತಗೊಂಡ್ರೆ ಔಷಧೀನೇ ಜೀರ್ಣವಾಗಲಿಲ್ಲ

ನಿಮ್ಮ ಪತ್ರಗಳು

ಮಕ್ಕಳ ಹಕ್ಕುಗಳನ್ನು ರಕ್ಷಿಸಿ!

ಮಾನ್ಯರೆ,

ಶ್ರೀಮಂತರ ಮಕ್ಕಳನ್ನು ಶಾಲಾ–ಕಾಲೇಜಿಗೆ ತಮ್ಮ ಪೋಷಕರೇ ಕಾರುಗಳಲ್ಲಿ ಕರೆತರುತ್ತಾರೆ. ಶಾಲೆಯಿಂದ ಮನೆಗೂ ಕಾರಿನಲ್ಲಿಯೇ ಕರೆದುಕೊಂಡು ಹೋಗುತ್ತಾರೆ. ಸರಕಾರಿ ಅಧಿಕಾರಿಗಳ ಮಕ್ಕಳು ಸರಕಾರಿ ಜೀಪು ಅಥವಾ ವಾಹನದಲ್ಲಿ ಸರಕಾರಿ ಚಾಲಕರ ಸಾರಥ್ಯದಲ್ಲಿ ಶಾಲೆಗೆ ಬಂದು ಹೋಗುತ್ತಾರೆ.

ಮತ್ತೆ ಕೆಲವರು ಸ್ಕೂಲ್ ಬಸ್ಸುಗಳಲ್ಲಿ ಬಂದುಹೋಗುತ್ತಾರೆ. ಬಡವರ ಮಕ್ಕಳು ಶಾಲಾ–ಕಾಲೇಜಿಗೆ ಬರಲು ಕೆಎಸ್‌ಆರ್‌ಟಿಸಿ ಬಸ್ಸುಗಳನ್ನೇ ಅವಲಂಬಿಸಿದ್ದಾರೆ!

ಮಹಿಳೆಯರಿಗೆ ಉಚಿತ ಪ್ರಯಾಣದ ಅವಕಾಶ ನೀಡಿರುವ 'ಶಕ್ತಿ' ಯೋಜನೆಯಿಂದಾಗಿ ಶಾಲಾ–ಕಾಲೇಜಿನ ಮಕ್ಕಳು ಬಸ್ಸನ್ನೇರಲು ಸಾಧ್ಯವಾಗುತ್ತಿಲ್ಲ.

ಕಾರಣ, ಬಸ್ಸಿನ ತುಂಬಾ ಮಹಿಳೆಯರೇ ತುಂಬಿ ತುಳುಕಿರುವುದರಿಂದ ವಿದ್ಯಾರ್ಥಿಗಳು ಬಸ್ಸನ್ನೇರಲು ಸಾಧ್ಯವಾಗುತ್ತಿಲ್ಲ. ಹಲವೆಡೆ ಬಸ್ಸನ್ನೇ ನಿಲ್ಲಿಸುತ್ತಿಲ್ಲ!

ಹಾಸ್ಟೆಲ್ ಮಕ್ಕಳಂತೂ ಬಸ್ಸಿಲ್ಲದೆ ಶಾಲೆಗೆ ಹೋಗಲಾಗದೆ ಹಾಸ್ಟೆಲ್ಲಿಗೆ ವಾಪಸು ಹೋಗುತ್ತಿದ್ದಾರೆ. ಇದು ಮಕ್ಕಳ ಹಕ್ಕಿನ ಉಲ್ಲಂಘನೆ! ನಮ್ಮ ವಿದ್ಯಾರ್ಥಿಗಳಿಗೆ ಸ್ಕೂಲ್ ಬಸ್ ಏರಲು 'ಶಕ್ತಿ' ಇಲ್ಲ. ಕಾರಿನಲ್ಲಿ ಬರುವುದು ಕನಸಿನ ಮಾತು. ಹಾಗಾದರೆ ನಮ್ಮ ವಿದ್ಯಾರ್ಥಿಗಳು ಶಾಲೆಗೆ ಹೋಗುವುದು ಹೇಗೆ? ಈ ವಿದ್ಯಾರ್ಥಿಗಳು ಮತದಾನ ಮಾಡುವಷ್ಟು ವಯಸ್ಕರಾಗಿಲ್ಲ ಎಂಬ ಕಾರಣದಿಂದ ಸರಕಾರಕ್ಕೆ ವಿದ್ಯಾರ್ಥಿಗಳನ್ನು ಕಂಡರೆ ಅಸಡ್ಡೆ! ಆದರೆ "ಇಂದಿನ ಮಕ್ಕಳೇ ನಾಳಿನ ಪ್ರಜೆಗಳು" ಎಂಬುದು ಪ್ರಭುಗಳಿಗೆ ನೆನಪಿರಲಿ!

ಮಹಿಳೆಯರಿಗೆ ನೀಡುವ ಭಾಗ್ಯ ವಿದ್ಯಾರ್ಥಿಗಳ ಪಾಲಿನ ದೌರ್ಭಾಗ್ಯವಾಗಿ ಮಾರ್ಪಡದಿರಲಿ! ಈ ಕೂಡಲೇ ಸರಕಾರವು ವಿದ್ಯಾರ್ಥಿಗಳ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸುವ ಯೋಜನೆಯನ್ನು ರೂಪಿಸಿ ಮಕ್ಕಳ ಹಕ್ಕುಗಳನ್ನು ರಕ್ಷಿಸಲಿ.

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

ವಿಧಾನಸಭೆ ಕಲಾಪ ಸಾರ್ವಜನಿಕರು ವೀಕ್ಷಿಸುವಂತಾಗಲಿ

ಮಾನ್ಯರೆ,

ನೂತನ ಸರ್ಕಾರ ರಚನೆಯಾದ ಮೇಲೆ ವಿಧಾನ ಮಂಡಲದ ಅಧಿವೇಶನವನ್ನು ನೇರಪ್ರಸಾರ ಮಾಡುವುದನ್ನು ನಿಲ್ಲಿಸಲಾಗಿದೆ. ದೂರದರ್ಶನ ಚಂದನವಾಹಿನಿಯಲ್ಲಿ ವಿಧಾನಸಭೆಯ ಕಾರ್ಯ ಕಲಾಪಗಳು ಹಿಂದಿನ ಸರ್ಕಾರದಲ್ಲಿ ನೇರಪ್ರಸಾರವಾಗುತ್ತಿತ್ತು. ನಮಗೂ ನಮ್ಮ ಜನಪ್ರತಿನಿಧಿಗಳ ಜವಾಬ್ದಾರಿಯುತ (ಕೆಲವೊಮ್ಮೆ ಅದು ಅತಿರೇಕಕ್ಕೆ ಹೋಗುತ್ತಿತ್ತು) ಕರ್ತವ್ಯ ನಿರ್ವಹಣೆಯ ಪರಿಚಯವಾಗುತ್ತಿತ್ತು.

ಆದರೆ ಈಗ ಏಕಾಏಕಿ ಈ ನೇರ ಪ್ರಸಾರ ನಿಲುಗಡೆಯಾಗಿದ್ದರ ಬಗ್ಗೆ ಪರಿಚಿತರೊಬ್ಬರನ್ನು ವಿಚಾರಿಸಿದಾಗ ಅದು ಕಾಂಗ್ರೆಸ್ ಸರ್ಕಾರ ಪ್ರಸಾರದ ಹಕ್ಕನ್ನು ಖಾಸಗಿ ಚಾನೆಲ್‌ನವರಿಗೆ ನೀಡಿದ್ದಾರೆ ಎನ್ನಲಾಗಿದೆ. ಇದು ನಿಜವೇ ಆಗಿದ್ದರೆ ಆಡಳಿತ ಪಕ್ಷಕ್ಕೆ ಬೇಕಾದ ಕಡೆ ಕ್ಯಾಮರಾ ತಿರುಗಿಸಿ ಕಲಾಪವನ್ನು ಆಡಳಿತ ಅಣತಿಯಂತೆ ಪ್ರಸಾರ ಮಾಡಬಹುದಾದ ಸಂಭವ, ಅಪಾಯ ಇರಬಹುದೇನೋ. ಈ ಬಗ್ಗೆ ರಾಜ್ಯ ಸರ್ಕಾರ ಸ್ಪಷ್ಟನೆ ನೀಡಬಹುದೇ? ವಿಧಾನಸಭೆ ಕಲಾಪ ಹಿಂದಿನಂತೆ ಸಾರ್ವಜನಿಕರು ವೀಕ್ಷಿಸುವಂತಾಗಲಿ ಎಂಬುದೇ ನಾಗರಿಕರ ಅಹವಾಲು.

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು

ನ್ಯಾಯ ಎಲ್ಲರಿಗೂ ಒಂದೇ ಇರಬೇಕು

ಮಾನ್ಯರೆ,

ಬ್ಯಾಂಕಿನವರು ಸಾಲ ಕೊಡಬೇಕಾದರೆ ನಮ್ಮ ಇನ್‌ಕಂ ಟ್ಯಾಕ್ಸ್ ರಿಟರ್ನ್ಸ್, ಸಿಬಿಲ್ ಸ್ಕೋರ್ ನೋಡುತ್ತಾರೆ. ಸರ್ಕಾರದ ಯಾವುದೇ ಪ್ರಯೋಜನ ಸಿಗಬೇಕಾದರೂ ಅದಕ್ಕೆ ಅರ್ಹತೆ ಇರುವ ಬಗ್ಗೆ ಪೂರಕ ದಾಖಲೆ ಕೇಳುತ್ತಾರೆ. ಆದರೆ ನಮ್ಮದೇ ತೆರಿಗೆ ಹಣದಲ್ಲಿ ಸಂಬಳ–ಸವಲತ್ತು ಪಡೆದು ನಮ್ಮ ಕೆಲಸ ಮಾಡಿಕೊಡಲೆಂದೇ ನೇಮಕವಾದವರ ಇನ್‌ಕ್ರಿಮೆಂಟ್, ಪ್ರಮೋಷನ್ ಬಗ್ಗೆ, ಅದಕ್ಕೆ ಅವರು ಅರ್ಹರು ಅನ್ನೋ ಬಗ್ಗೆ ಯಾಕೆ ನಮ್ಮಿಂದ ಅವರಿಗೆ ಶಿಫಾರಸು ಇರಬೇಕಾದ ವ್ಯವಸ್ಥೆ ಇಲ್ಲ?

ಅಂದರೆ ಪ್ರತಿ ಕಚೇರಿಯಲ್ಲೂ ಪ್ರತಿ ಅಧಿಕಾರಿ, ಸಿಬ್ಬಂದಿಗೆ ಸಂಬಂಧಿಸಿದಂತೆ ಮತ್ತು ಆ ಕಚೇರಿಯ ಒಟ್ಟಾರೆ ಕಾರ್ಯವೈಖರಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ರೇಟಿಂಗ್ ಸಿಗೋ ಥರ ಮಾಡಬೇಕು. ಅದನ್ನು ಆದರಿಸಿಯೇ ಸಂಬಂಧಿತ ಅಧಿಕಾರಿ, ಸಿಬ್ಬಂದಿಯ ವರ್ಗಾವಣೆ, ಬಡ್ತಿ, ಭತ್ಯೆ ಇತ್ಯಾದಿ ನಿರ್ಧಾರವಾಗಬೇಕು ಮತ್ತು ಆ ನಿಗದಿತ ಕಚೇರಿಗೆ ಸಿಗಬೇಕಾದ ಹೆಚ್ಚುವರಿ ಸವಲತ್ತುಗಳು ಕೂಡ ಅದೇ ರೀತಿ ನಿರ್ಧಾರ ಆಗಬೇಕು.

ಆಗ ಪ್ರತಿ ಅಧಿಕಾರಿ, ಸಿಬ್ಬಂದಿ ಸಾರ್ವಜನಿಕರ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ನಿಯತ್ತಾಗಿ ಮಾಡಿಕೊಡುತ್ತಾರೆ. ಅಂಥದ್ದೊಂದು ವ್ಯವಸ್ಥೆ ಈಗಿನ ಯಾವುದಾದರೂ ರಾಜಕೀಯ ಪಕ್ಷಗಳು ತರಲು ಸಾಮರ್ಥ್ಯ ಹೊಂದಿವೆಯೇ, ಅದಕ್ಕೆ ಸಿದ್ಧ ಇವೆಯೇ?

ಈ ವ್ಯವಸ್ಥೆ ಬಂದಾಗ ಮಾತ್ರ ಅಧಿಕಾರಿ, ಸಿಬ್ಬಂದಿ ಜನರೊಂದಿಗೆ ಸೌಜನ್ಯ ರೀತಿ ಸ್ಪಂದಿಸಿ ಸರಿಯಾಗಿ ಜನರ ಕೆಲಸ ಮಾಡಿಕೊಡುತ್ತಾರೆ. ನಾವು ಇಳಿದ ಮೇಲೆ ಓಲಾ, ಊಬರ್ ಚಾಲಕರು 'ಸರ್ ರೇಟಿಂಗ್ ಕೊಡಿ' ಅಂತ ಹೇಳುತ್ತಿದ್ದರಲ್ವಾ? ಹಾಗೇ ಸರ್ಕಾರಿ ಅಧಿಕಾರಿ, ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ ಜನರಲ್ಲಿ ಕೇಳುವಂತಾಗಬೇಕು. ಏನಂತೀರಿ?

–ರಾಘವೇಂದ್ರ, ಸಾಮಾಜಿಕ ಕಾರ್ಯಕರ್ತ, ಕುವೆಂಪುನಗರ

ಮಾಸಾಶನಕ್ಕಾಗಿ ವಯೋವೃದ್ಧರ ಅಲೆದಾಟ ತಪ್ಪಿಸುವಂತೆ ಮನವಿ

ಮಾನ್ಯರೆ,

ಪ್ರತಿ ತಿಂಗಳು ಮಾಸಾಶನ ಪಡೆಯುವುದಕ್ಕೆ ಅರ್ಹರಾದ ವೃದ್ಧರು, ವಿಧವೆಯರು, ಅಂಗವಿಕಲರು ಹಣ ಪಡೆಯಲು ಅಂಚೆ ಕಚೇರಿಗೆ ಹೋಗುತ್ತಾರೆ. ಆದರೆ ಕಚೇರಿಗೆ ಬಂದಾಗ ಅವರ ಖಾತೆಯಲ್ಲಿ ಹಣ ಜಮೆ ಆಗಿರುವುದಿಲ್ಲ. ಇದರಿಂದಾಗಿ ಅವರಲ್ಲಿ ತೀವ್ರ ನಿರಾಶೆಯಾಗುತ್ತಿದೆ.

ವೃದ್ಧರು, ಅಂಗವಿಕಲರು ಬೇಸಿಗೆ ಮತ್ತು ಮಳೆಗಾಲದಲ್ಲಿ ಕಚೇರಿಗೆ ಬರಲು ಸಾಕಷ್ಟು ತೊಂದರೆ ಅನುಭವಿಸುತ್ತಾರೆ. ಕೊನೆಗೂ ಹೇಗೋ ಕಷ್ಟಪಟ್ಟು ಬಂದರೂ ಹಣ ಕೈಗೆ ಸಿಗುವುದಿಲ್ಲ. ಹೀಗಾಗಿ ಅವರಿಗೆ ತೊಂದರೆ ಆಗುತ್ತಿದೆ. ಅಂಚೆ ಇಲಾಖೆಯವರು ವೃದ್ಧರನ್ನು ಸತಾಯಿಸದೆ ಅವರ ಖಾತೆಗೆ ಮಾಸಾಶನ ಜಮೆ ಆಗಿದ್ದರ ಬಗ್ಗೆ ಮಾಹಿತಿ ನೀಡಬೇಕು. ಅವರು ಕಚೇರಿಗೆ ಬಂದಾಗ ಸುಲಭವಾಗಿ ಹಣ ಸಿಗುವಂತೆ ವ್ಯವಸ್ಥೆ ಮಾಡಬೇಕು. ಈ ವ್ಯವಸ್ಥೆಯನ್ನು ಜಾರಿ ಮಾಡಿ ವಯೋವೃದ್ಧರಿಗೆ ಮತ್ತು ಅಂಗವಿಕಲರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ.

–ವಿಕ್ರಮ ಅಯ್ಯಂಗಾರ್, ಸಾಮಾಜಿಕ ಹೋರಾಟಗಾರ, ಮೈಸೂರು.



ಕಾರ್ಕಳ ಆನಂದ ಭಟ್
ಮೊ : 7676554198
ಫ್ಲಾಟ್ ನಂ.204, ಕಾರ್ಕಳ, – 574 104 ಉಡುಪಿ ಜಿಲ್ಲೆ

ದಿಕ್ಕುದೆಸೆ

ಅಮೆರಿಕಕ್ಕೆ ಭಾರತ ಅನಿವಾರ್ಯ ಅಪದ್ಬಾಂಧವ

ಕಳೆದ ತಿಂಗಳು ಪ್ರಧಾನಿ ಮೋದಿಯವರು ಅಮೆರಿಕಕ್ಕೆ ಸ್ಟೇಟ್ ವಿಸಿಟ್ ನೀಡಿದರು. ಈ ಸಂದರ್ಭದಲ್ಲಿ ಜೋ ಬೈಡನ್ ದಂಪತಿ ಮೋದಿಯವರಿಗೆ ಕೆಂಪು ಹಾಸಿನ ಭವ್ಯ ಸ್ವಾಗತ ನೀಡಿ ಅಮೆರಿಕ–ಭಾರತದ ಮಧ್ಯೆ ಬಾಂಧವ್ಯದ ಹೊಸ ಅಧ್ಯಾಯ ಆರಂಭವಾಗಿದೆ ಎಂದು ಜಗತ್ತಿಗೆ ಸಾರಿದರು. ವಾಸ್ತವವಾಗಿ ಕಳೆದ ಕೆಲವು ದಶಕಗಳಿಂದ ಸಂಬಂಧ ಅಷ್ಟೇನೂ ಉತ್ತಮವಾಗಿರಲಿಲ್ಲ. ಆದರೆ ಈ ಬಾರಿ ಅಮೆರಿಕದ ಅಧ್ಯಕ್ಷರು ಕೈ ಮುಗಿದು ಬರಮಾಡಿಕೊಂಡ ರೀತಿ ಅವಿಸ್ಮರಣೀಯವಾಗಿತ್ತು. ಸಂಪೂರ್ಣ ಅಮೆರಿಕದ ಜನತೆ ಮೋದಿಯವರನ್ನು ತೆರೆದ ತೋಳುಗಳಿಂದ ಸ್ವಾಗತಿಸಿತು. ಇದಕ್ಕೆ ಕಾರಣ ಪ್ರಸ್ತುತ ಅಮೆರಿಕಕ್ಕೆ ತನ್ನ ಉಳಿವಿಗಾಗಿ ಭಾರತ ಬೇಕಾಗಿದೆ. ಭಾರತದೊಂದಿಗೆ ಉತ್ತಮ ಸಂಬಂಧ ಬಯಸುವುದರ ಹಿಂದೆ ಅಮೆರಿಕ ತನ್ನದೇ ಆದ ಉದ್ದೇಶಗಳನ್ನು ಹೊಂದಿದೆ. ಅಮೆರಿಕ ತನ್ನ ಲಾಭದ ಲೆಕ್ಕಾಚಾರ ಹಾಕಿಯೇ ವಿಶ್ವದ ಪ್ರತಿಯೊಂದು ದೇಶದೊಂದಿಗೆ ವ್ಯವಹರಿಸುತ್ತಿದೆ. ಯುಕ್ರೇನ್–ರಷ್ಯಾ ಯುದ್ಧ ಇದೇ ಕಾರಣದಿಂದ ಇದುವರೆಗೆ ನಿಂತಿಲ್ಲ. ಈ ಯುದ್ಧದಿಂದ ಅಮೆರಿಕದ ತೈಲ ಕಂಪನಿಗಳು ಈವರೆಗೆ 200 ಬಿಲಿಯನ್ ಡಾಲರ್ ನಿವ್ವಳ ಲಾಭ ಗಳಿಸಿದರೆ, ಶಸ್ತ್ರಾಸ್ತ್ರ ತಯಾರಿಸುವ ಕಂಪನಿಗಳ ಷೇರುಗಳ ಬೆಲೆ ದಾಖಲೆ ಪ್ರಮಾಣದಲ್ಲಿ ಏರಿಕೆಯಾಗಿದೆ. ಇದೇ ರೀತಿ ಅಮೆರಿಕ ಮತ್ತು ಐರೋಪ್ಯ ದೇಶಗಳು ಭಾರತವು ರಷ್ಯಾದಿಂದ ಕಚ್ಚಾ ತೈಲ ಖರೀದಿಸಬಾರದೆಂದು ಒತ್ತಡ ಹೇರಿದವು. ನಿರ್ಬಂಧದ ಬೆದರಿಕೆ ಹಾಕಿದವು. ಆದರೆ ಮೋದಿ ಸರಕಾರ ಈ ತಂತ್ರಗಳನ್ನು ಧಿಕ್ಕರಿಸಿ ರಷ್ಯಾದಿಂದ ರಿಯಾಯ್ತಿ ದರದಲ್ಲಿ ತೈಲ ಪಡೆದು ಲಾಭ ಗಳಿಸುತ್ತಿದೆ. ಸ್ವತಂತ್ರ ದಿಟ್ಟ ವಿದೇಶಾಂಗ ನೀತಿ ಅನುಸರಿಸುತ್ತಿರುವ ಭಾರತವನ್ನು ಇಂದು ಅಮೆರಿಕ ಸಹಿತ ಜಗತ್ತು ಗೌರವಿಸುತ್ತಿದೆ.

ಕಳೆದ ಶತಮಾನದಲ್ಲಿ ಭಾರತವನ್ನು ದುರ್ಬಲಗೊಳಿಸುವ ಎಲ್ಲಾ ಅವಕಾಶಗಳನ್ನು ಅಮೆರಿಕ ಬಳಸಿಕೊಳ್ಳುತ್ತಿತ್ತು. ಪಾಕಿಸ್ತಾನವು ಅಮೆರಿಕದ ಪರಮಾಪ್ತ ದೇಶವಾಗಿತ್ತು. 1971ರ ಭಾರತ–ಪಾಕ್ ಯುದ್ಧದಲ್ಲಿ ಪಾಕ್ ಸೋಲು ಖಚಿತವಾಗುತ್ತಿದ್ದಂತೆ ಅಮೆರಿಕದ ಅಂದಿನ ಅಧ್ಯಕ್ಷ ರಿಚರ್ಡ್ ನಿಕ್ಸನ್‌ರು ಪಾಕ್ ಬೆಂಬಲಿಸಿ ಯು.ಎಸ್.ಎಸ್. ಸೆವೆಂತ್ ಫ್ಲೀಟ್ ನೌಕಾಪಡೆಯನ್ನು ಬಂಗಾಳ ಕೊಲ್ಲಿಯತ್ತ ಮುನ್ನುಗ್ಗಿಸಿ ಭಾರತದ ಮೇಲೆ ಒತ್ತಡ ಹೇರಲು ಯತ್ನಿಸಿದ್ದರು. ಆದರೆ ರಷ್ಯಾದ ಸಕಾಲಿಕ ನೆರವಿನಿಂದ ಅಮೆರಿಕ ತನ್ನ ಯುದ್ಧ ನೌಕೆಗಳನ್ನು ಹಿಂದಕ್ಕೆ ಕರೆಸಿತ್ತು. 1987 ರಲ್ಲಿ ಭಾರತಕ್ಕೆ ಅತ್ಯಾವಶ್ಯಕವೆನಿಸಿದ್ದ ಸೂಪರ್ ಕಂಪ್ಯೂಟರ್ ನೀಡಲು ಅಮೆರಿಕ ನಿರಾಕರಿಸಿತು. 1999ರ ಕಾರ್ಗಿಲ್ ಕದನದ ಸಂದರ್ಭದಲ್ಲೂ ಸಂಘರ್ಷ ವಲಯದ ಜಿಪಿಎಸ್ ದತ್ತಾಂಶಗಳನ್ನು ನೀಡಬೇಕೆಂಬ ಭಾರತದ ಮನವಿಯನ್ನು ಅಮೆರಿಕ ತಿರಸ್ಕರಿಸಿತು.

ಆದರೆ ಕಾಲ ಬದಲಾಗಿದೆ. ಅಮೆರಿಕ ಆಂತರಿಕವಾಗಿ, ಆರ್ಥಿಕವಾಗಿ ದುರ್ಬಲವಾಗಿದೆ. ತನ್ನ ಆರ್ಥಿಕತೆ ಚೇತರಿಸಲು, ಹಿಂದು ಮಹಾಸಾಗರ, ಏಷ್ಯಾ ಉಪಖಂಡ, ಆಫ್ರಿಕಾ, ಯೂರೋಪ್‌ಗಳಲ್ಲಿ ಚೀನಾ ಪ್ರಭಾವ ವಿಸ್ತರಿಸದಂತೆ ತಡೆಯಲು ರಷ್ಯಾವನ್ನು ನಿಯಂತ್ರಿಸಲು ಭಾರತದೊಂದಿಗೆ ಸ್ನೇಹ ಅನಿವಾರ್ಯವೆಂದು ಅಮೆರಿಕಗೆ ಮನವರಿಕೆಯಾಗಿದೆ. ಅದೇ ರೀತಿ ರಷ್ಯಾ–ಚೀನಾ ಕೆಲವೊಂದು ವಿಷಯಗಳಲ್ಲಿ ಹತ್ತಿರವಾಗುತ್ತಿರುವುದು ತನ್ನ ಹಿತಾಸಕ್ತಿಗೆ ಒಳ್ಳೆಯದಲ್ಲ ಎಂದು ಭಾರತಕ್ಕೆ ಅರಿವಾಗಿದೆ ಮತ್ತು ಅಮೆರಿಕದಿಂದ ದೂರವಿದ್ದರೆ ಚೀನಾವನ್ನು ಎದುರಿಸುವುದು ಕಷ್ಟ ಎಂದೂ ಭಾರತ ತಿಳಿದಿದೆ. ಈ ಎಲ್ಲಾ ವಿಚಾರಗಳ ಹಿನ್ನೆಲೆಯಲ್ಲಿ ಅಮೆರಿಕ–ಭಾರತಕ್ಕೆ ಪರಸ್ಪರ ಸ್ನೇಹ, ಸಹಕಾರ ಹಾಗೂ ಪಾಲುದಾರಿಕೆ ಅನಿವಾರ್ಯವೆನಿಸಿದೆ. ಈ ಕಾರಣಗಳಿಂದ ಎರಡೂ ದೇಶಗಳು ಪರಸ್ಪರ ಹತ್ತಿರ ಬಂದು ರಕ್ಷಣೆ, ತಂತ್ರಜ್ಞಾನ, ಬಾಹ್ಯಾಕಾಶ ಕೃತಕಬುದ್ಧಿ ಮತ್ತೆ ಮೊದಲಾದ ಅನೇಕ ಕ್ಷೇತ್ರಗಳಲ್ಲಿ ಒಪ್ಪಂದಗಳನ್ನು ಮಾಡಿಕೊಂಡಿವೆ.

ರಕ್ಷಣಾ ಒಪ್ಪಂದಗಳು

ಭಾರತೀಯ ವಾಯು ಪಡೆಗಾಗಿ ಅತ್ಯಾಧುನಿಕ ತಂತ್ರಜ್ಞಾನದಿಂದ ಕೂಡಿದ ಫೈಟರ್ ಜೆಟ್ ಇಂಜಿನ್‌ಗಳನ್ನು ಅಮೆರಿಕದ ಜನರಲ್ ಎಲೆಕ್ಟ್ರಿಕಲ್ಸ್ (ಜಿಇ) ಮತ್ತು ಭಾರತದ ಎಚ್‌ಎಎಲ್ ಜಂಟಿಯಾಗಿ ನಿರ್ಮಿಸಲಿವೆ. ಯುದ್ಧ ವಿಮಾನಗಳ ಇಂಜಿನ್ ಎಫ್.414 ಭವಿಷ್ಯದಲ್ಲಿ ಭಾರತದ ಎಚ್‌ಎಎಲ್ ಕಂಪನಿಯಲ್ಲಿ



ತಯಾರಿಸುವ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಎಚ್‌ಎಎಲ್‌ಗೆ ಈ ಜೆಟ್ ಇಂಜಿನ್‌ನ ಶೇ.80ರಷ್ಟು ತಂತ್ರಜ್ಞಾನ ವರ್ಗಾವಣೆಯ ಖಾತ್ರಿ ನೀಡಿದೆ. ಭಾರತದ ಐದನೇ ತಲೆಮಾರಿನ ಅತ್ಯಾಧುನಿಕ ಹಗುರ ಯುದ್ಧ ವಿಮಾನ(ಎಲ್‌ಸಿಎ) ತೇಜಸ್ ಎಂ.ಕೆ–2ಗೆ ಈ ಇಂಜಿನ್ ಲಭ್ಯವಾಗಲಿದೆ. ಅಮೆರಿಕದ ನೌಕಾಪಡೆ ಕಳೆದ ಮೂವತ್ತು ವರ್ಷಗಳಿಂದ ಈ ಇಂಜಿನ್ ಬಳಸುತ್ತಿದೆ. 1600ಕ್ಕಿಂತ ಹೆಚ್ಚು ಎಫ್ 414 ಇಂಜಿನ್‌ಗಳನ್ನು ನೀಡಲಾಗಿದ್ದು, ವಿವಿಧ ಕಾರ್ಯಾಚರಣೆಗಳಲ್ಲಿ ಐದು ದಶಲಕ್ಷಕ್ಕಿಂತಲೂ ಹೆಚ್ಚು ಇಂಜಿನ್ ಹಾರಾಟದ ಸಮಯ ಸಾಧಿಸಿದೆ. ಅತ್ಯಾಧುನಿಕ ಯುದ್ಧ ವಿಮಾನಗಳ ತಯಾರಿಕೆಯಲ್ಲಿ ಭಾರತಕ್ಕೆ ಇದು ಗೇಮ್ ಚೇಂಜರ್ ಆಗಲಿದೆ.

ಎಂ.ಕ್ಯೂ 9 ಬಿ.ಸಿ. ಗಾರ್ಡಿಯನ್ ಡ್ರೋನ್ ಒಪ್ಪಂದ

ಭಾರತವು ಅಮೆರಿಕದ ಜನರಲ್ ಅಟೋಮಿಕ್ಸ್ ಕಂಪನಿಯಿಂದ 3 ಬಿಲಿಯನ್ ಡಾಲರ್ (ರೂ. 22000 ಕೋಟಿ) ಮೊತ್ತದ ಮೂವತ್ತೊಂದು ಎಂಕ್ಯೂ 9 ಬಿಸಿ ಗಾರ್ಡಿಯನ್ ಡ್ರೋನ್ ಖರೀದಿ ಒಪ್ಪಂದಕ್ಕೆ ಸಹಿ ಹಾಕಿತು. ಕಂಪನಿಯು ಈ ಯುದ್ಧ ಡ್ರೋನ್‌ಗಳ ಜೋಡಣಾ ಘಟಕವನ್ನು ಭಾರತದಲ್ಲಿ ಸ್ಥಾಪಿಸಲಿದೆ. ಕರಾವಳಿ ರಕ್ಷಣೆ ಬಲಪಡಿಸಲು ಮೂವತ್ತೊಂದರಲ್ಲಿ ಹದಿನೈದು ಸೀಗಾರ್ಡಿಯನ್ (ಎಸ್‌ಇಎ) ನೌಕಾಪಡೆಗೆ ಹಾಗೂ ಸೇನೆ ಮತ್ತು ವಾಯುಪಡೆಗೆ ತಲಾ ಎಂಟು ಸ್ಕೈಗಾರ್ಡಿಯನ್ ಡ್ರೋನ್ ಲಭಿಸಲಿದೆ. ಈ ಡ್ರೋನ್‌ಗಳು 50 ಸಾವಿರ ಅಡಿ ಎತ್ತರದಲ್ಲಿ 27 ಗಂಟೆಗಳಿಗಿಂತಲೂ ಹೆಚ್ಚು ಕಾಲ ನಿರಂತರವಾಗಿ ಹಾರಾಡುವ ಸಾಮರ್ಥ್ಯ ಹೊಂದಿವೆ.

ಬಾಹ್ಯಾಕಾಶದಲ್ಲಿ ಭಾರತದ ಪಯಣ

2025ರ ಹೊತ್ತಿಗೆ ಚಂದ್ರನ ಮೇಲೆ ಮಾನವರನ್ನು ಕಳಿಸುವ ಅಮೆರಿಕ ನೇತೃತ್ವದ ಆರ್ಟೆಮಿಸ್ ಒಪ್ಪಂದದಲ್ಲಿ ಭಾರತವು 27ನೇ ಸದಸ್ಯ ದೇಶವಾಗಿ ಬಾಗಿಯಾಗಲಿದೆ. ಮಂಗಳದಲ್ಲಿ ಮಾನವ ಕಾರ್ಯಾಚರಣೆಗಳ ಸಾಧ್ಯತೆಯನ್ನು ಸರಳಗೊಳಿಸುವ, ಚಂದ್ರನ ಮೇಲೆ ಶಾಶ್ವತ ನೆಲೆಯ ಸ್ಥಾಪನೆ ಈ ಒಪ್ಪಂದದ ದೀರ್ಘಾವಧಿಯ ಗುರಿಯಾಗಿದೆ. ಆರ್ಟೆಮಿಸ್ ಒಪ್ಪಂದಗಳು ಬಾಹ್ಯಾಕಾಶ ಶೋಧನೆಯ ಮೂಲಕ ಸಾಧಿಸಬಹುದಾದ ಜಾಗತಿಕ ಲಾಭಗಳಿಗೆ ಆದ್ಯತೆ ನೀಡುತ್ತದೆ. ಭಾರತದ 2023ರ ಬಾಹ್ಯಾಕಾಶ ನೀತಿ ಸ್ವಾಗತಿಸಿರುವ ಅಮೆರಿಕ ವಾಣಿಜ್ಯ ಉದ್ದೇಶಗಳ ಕೃತಕ ಉಪಗ್ರಹ ಉಡಾವಣೆ ಬಗ್ಗೆ ಒಪ್ಪಂದ ಮಾಡಿಕೊಂಡಿದೆ. ಇದರಿಂದ ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಆರ್ಥಿಕವಾಗಿ ಇನ್ನಷ್ಟು ಬಲಿಷ್ಠವಾಗಲಿದೆ. ಇನ್ನೂ ಹೆಚ್ಚಿನ ವಿದೇಶಿ ಉಪಗ್ರಹಗಳು ಭಾರತದ ಉಪಗ್ರಹ ಉಡಾವಣಾ ಕೇಂದ್ರದಿಂದ ಆಕಾಶಕ್ಕೆ ಹಾರಲಿವೆ.

ಮೈಕ್ರಾನ್ ಟೆಕ್ನಾಲಜಿ ಘಟಕ

ಪ್ರಮುಖ ಚಿಪ್ ತಯಾರಕ ಮೈಕ್ರಾನ್ ಟೆಕ್ನಾಲಜಿ ಸಂಸ್ಥೆ ಪ್ರಧಾನಿ ಮೋದಿ ಆಹ್ವಾನದ ಮೇರೆಗೆ ಭಾರತದಲ್ಲಿ ಒಂದು ಚಿಪ್ ಜೋಡಣಾ ಘಟಕ ಸ್ಥಾಪಿಸಲಿದೆ. ಗುಜರಾತ್‌ನಲ್ಲಿ 825 ಮಿಲಿಯನ್ ಡಾಲರ್ ಕಾರ್ಖಾನೆ ನಿರ್ಮಾಣವಾಗಲಿದೆ. ಇದರಲ್ಲಿ ಕೇಂದ್ರ ಸರಕಾರ ಶೇ.50 ಮತ್ತು ರಾಜ್ಯ ಶೇ.20ರಷ್ಟು ಹೂಡಿಕೆ ಮಾಡಲಿವೆ. ಮೈಕ್ರಾನ್ ಕಂಪನಿಗಳು ಒಟ್ಟಾರೆಯಾಗಿ 2.75 ಬಿಲಿಯನ್ ಡಾಲರ್ ಹೂಡಿಕೆ ಮಾಡಲಿದೆ. ಆರಂಭಿಕ ನಾಲ್ಕು ವರ್ಷಗಳಲ್ಲಿ 400 ಮಿಲಿಯನ್ ಡಾಲರ್ ಹೂಡಿಕೆ ಮಾಡಲಿದೆ. ಈ ಘಟಕ ನೇರವಾಗಿ ಐದು ಸಾವಿರ ಉದ್ಯೋಗ ಸೃಷ್ಟಿಸಲಿದೆ. ಮತ್ತೊಂದು ಮಹತ್ವದ ಒಪ್ಪಂದದಲ್ಲಿ ಎಪ್ಸಿಲಾನ್ ಕಾರ್ಬನ್ ಲಿ. ಭಾರತದಲ್ಲಿ 650 ಮಿಲಿಯನ್ ಡಾಲರ್ ವೆಚ್ಚದಲ್ಲಿ ವಾಹನಗಳ ಬ್ಯಾಟರಿ ಉತ್ಪಾದನಾ ಘಟಕ ಸ್ಥಾಪಿಸಲಿದೆ.

ಸೆಮಿಕಂಡಕ್ಟರ್ ವಲಯ

ಭಾರತದಲ್ಲಿ ಸೆಮಿಕಂಡಕ್ಟರ್ ಕ್ಷೇತ್ರ ಪ್ರಾಥಮಿಕ ಹಂತದಲ್ಲಿದ್ದು, ಈ ಕ್ಷೇತ್ರಕ್ಕೆ ಉತ್ತೇಜನ ನೀಡಲು ಲಾಮ್ ರಿಸರ್ಚ್ ಸಂಸ್ಥೆಯು ಭಾರತದ ಅರವತ್ತು ಸಾವಿರದಷ್ಟು ಇಂಜಿನಿಯರ್‌ಗಳಿಗೆ ತರಬೇತಿ ನೀಡಲಿದೆ. ಅಪ್ಲೈಡ್ ಮೆಟೀರಿಯಲ್ ಸಂಸ್ಥೆ ತನ್ನ ಹೊಸ ಇಂಜಿನಿಯರಿಂಗ್ ಕೇಂದ್ರ ಪ್ರಾರಂಭಿಸಲು 400 ಮಿಲಿಯನ್ ಡಾಲರ್ ಬಂಡವಾಳ ಹೂಡಲು ಒಪ್ಪಂದ ಮಾಡಿಕೊಂಡಿದೆ. ಈ ಎಲ್ಲಾ ಕಂಪನಿಗಳಿಂದ ದೇಶದಲ್ಲಿ ಒಟ್ಟು ಸುಮಾರು 80000 ಉದ್ಯೋಗ ಸೃಷ್ಟಿಯಾಗಲಿದೆ ಎಂದು ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್ ತಿಳಿಸಿದ್ದಾರೆ. ಪರಮಾಣು ಸಂಶೋಧನಾ ಕಾರ್ಯಕ್ರಮಗಳನ್ನು ಜಂಟಿಯಾಗಿ ನಡೆಸಲು ಭಾರತ–ಅಮೆರಿಕ ಪರಮಾಣು ಶಕ್ತಿ ಸಂಸ್ಥೆಗಳ ನಡುವೆ ಆದ ಒಪ್ಪಂದದಂತೆ 140 ಮಿಲಿಯನ್ ಡಾಲರ್ ಆರಂಭಿಕ ಬಂಡವಾಳವನ್ನು ಭಾರತವು ನೀಡಲಿದೆ. ನಾಗರಿಕ ವಾಯುಯಾನ ಕ್ಷೇತ್ರದಲ್ಲಿ ಭಾರತದ ಏರ್ ಇಂಡಿಯಾ ಸಂಸ್ಥೆಯು 34 ಬಿಲಿಯನ್ ಡಾಲರ್ ಮೊತ್ತದಲ್ಲಿ 220 ಬೋಯಿಂಗ್ ವಿಮಾನಗಳನ್ನು ಖರೀದಿಸಲಿದೆ.

ಗೂಗಲ್ ಕೃತಕ ಬುದ್ಧಿಮತ್ತೆ (ಎಐ) ಸಂಶೋಧನಾ ಕೇಂದ್ರ

ಗೂಗಲ್ ಸಿಇಓ ಸುಂದರ ಪಿಚೈಯವರು, ಪ್ರಧಾನಿ ಮೋದಿಯವರೊಂದಿಗೆ ವಿಶೇಷ ಮಾತುಕತೆ ನಡೆಸಿದ ನಂತರ ಭಾರತದಲ್ಲಿ ಕೃತಕ ಬುದ್ಧಿಮತ್ತೆ ಸಂಶೋಧನಾ ಕೇಂದ್ರ ಸ್ಥಾಪನೆಗೆ ಮತ್ತು ಸ್ಟಾರ್ಟ್ ಅಪ್‌ಗಳಿಗೆ ಬೆಂಬಲಿಸಲು ಭಾರತದ ಡಿಜಿಟಲೀಕರಣ ನಿಧಿಗೆ ಗೂಗಲ್ 10 ಬಿಲಿಯನ್ ಡಾಲರ್ ಹೂಡಿಕೆ ಮಾಡುವುದಾಗಿ ಘೋಷಿಸಿದರು. ಇದಲ್ಲದೇ ಗೂಗಲ್ ತನ್ನ ಜಾಗತಿಕ ಫಿನ್‌ಟೆಕ್ ಕಾರ್ಯಾಚರಣೆ ಕೇಂದ್ರವನ್ನು ಗುಜರಾತ್‌ನಲ್ಲಿ ತೆರೆಯುವುದಾಗಿ ತಿಳಿಸಿದರು. ಕ್ವಾಂಟಮ್ ಕಂಪ್ಯೂಟಿಂಗ್ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಬಗ್ಗೆ ಸಂಶೋಧನೆಗೆ 2 ಮಿಲಿಯನ್ ಡಾಲರ್ ಅನುದಾನಿತ ಕಾರ್ಯಕ್ರಮಕ್ಕೆ ಅಮೆರಿಕ ಸಮ್ಮತಿಸಿತು. ಅದೇ ರೀತಿ ಅಮೆರಿಕದ ವಿಜ್ಞಾನ ಸಂಸ್ಥೆ ಮತ್ತು ಭಾರತ ವಿಜ್ಞಾನ ತಂತ್ರಜ್ಞಾನ ಸಚಿವಾಲಯಗಳ ಜಂಟಿ ಸಹಯೋಗದಲ್ಲಿ ಸೈಬರ್ ಸೆಕ್ಯೂರಿಟಿ ಕುರಿತು ಸಂಶೋಧನೆಗೆ ಒಪ್ಪಂದವೇರ್ಪಟ್ಟಿತು.

ಎಚ್–1ಬಿ ವೀಸಾ ನಿಯಮಾವಳಿಗಳ ಸರಳಿಕೆ

ಅಮೆರಿಕದಲ್ಲಿ ವಾಸಿಸುತ್ತಿರುವ, ಉದ್ಯೋಗದಲ್ಲಿರುವ ಭಾರತೀಯರ ಬಹು ದಿನಗಳ ಬೇಡಿಕೆಗನುಗುಣವಾಗಿ ಬೈಡನ್ ಸರಕಾರ ವೀಸಾ ನಿಯಮಾವಳಿಗಳನ್ನು ಸಡಿಲಿಸಿದ್ದು, ಇನ್ನು ಮುಂದೆ ಭಾರತೀಯರು ಅಮೆರಿಕದಲ್ಲಿದ್ದೇ ತಮ್ಮ ಎಚ್–1ಬಿ ವೀಸಾ ನವೀಕರಿಸಬಹುದು. ಇದರಿಂದ ಭಾರತದ ಐಟಿ, ಬಿಟಿ ಕಂಪನಿಗಳಿಗೆ ಭಾರೀ ಅನುಕೂಲವಾಗಲಿದೆ. ಇನ್ನು ಭಾರತೀಯರ ವಿಶೇಷ ಬೇಡಿಕೆಯಂತೆ ಅಹ್ಮದಾಬಾದ್ ಮತ್ತು ಬೆಂಗಳೂರಲ್ಲಿ ಅಮೆರಿಕದ ಕಾನ್ಸುಲೇಟ್ ಕಚೇರಿಗಳು ಸ್ಥಾಪನೆಯಾಗಲಿವೆ. ಇದರಿಂದ ಕನ್ನಡಿಗರಿಗೆ ಇನ್ನೂ ವೀಸಾಕ್ಕಾಗಿ ಚೆನ್ನೈ, ಮುಂಬೈ, ಹೈದರಾಬಾದ್‌ಗೆ ಹೋಗಬೇಕಾಗಿಲ್ಲ.

ಹ್ಯೂಸ್ಟನ್ ವಿವಿಯಲ್ಲಿ ತಮಿಳು ಭಾಷಾ ಪೀಠ ಸ್ಥಾಪನೆ

ವಾಷಿಂಗ್ಟನ್ ಡಿಸಿಯಲ್ಲಿ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ ಹ್ಯೂಸ್ಟನ್ ವಿವಿಯಲ್ಲಿ ತಮಿಳು ಅಧ್ಯಯನ ಪೀಠ ಸ್ಥಾಪಿಸಲಾಗುವುದೆಂದು ತಿಳಿಸಿದರು. ಅದೇ ರೀತಿ ಭಾರತೀಯ ಇತಿಹಾಸ ಮತ್ತು ಸಂಸ್ಕೃತಿಯ ಮೇಲೆ ಹೆಚ್ಚಿನ ಸಂಶೋಧನೆ, ಬೋಧನೆಗಾಗಿ ಚಿಕಾಗೋ ವಿವಿಯಲ್ಲಿ ಸ್ವಾಮಿ ವಿವೇಕಾನಂದ ಪೀಠ ಪುನರ್ ಸ್ಥಾಪಿಸಲಾಗುವುದು ಎಂದು ತಿಳಿಸಿದರು. ಅತ್ಯಂತ ಅಭಿಮಾನದ ಸಂಗತಿಯೆಂದರೆ ಭಾರತದಿಂದ ಕದ್ದು ವಿದೇಶಕ್ಕೆ ಸಾಗಿಸಲ್ಪಟ್ಟ ಒಂದು ನೂರಕ್ಕೂ ಹೆಚ್ಚು ಪುರಾತನ ವಸ್ತುಗಳನ್ನು ಭಾರತಕ್ಕೆ ಹಿಂದಿರುಗಿಸಲು ಅಮೆರಿಕ ಸರಕಾರ ನಿರ್ಧರಿಸಿರುವುದು ನನಗೆ ಸಂತಸ ತಂದಿದೆ. ಈ ಪುರಾತನ ವಸ್ತುಗಳು ಅಂತರರಾಷ್ಟ್ರೀಯ ಮಾರುಕಟ್ಟೆ ತಲುಪಿದ್ದವು. ಇದಕ್ಕಾಗಿ ನಾನು ಅಮೆರಿಕ ಸರಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ಪ್ರಧಾನಿ ಮೋದಿಯವರು ತಿಳಿಸಿದರು. ಭಾರತದ ಹಿತದೃಷ್ಟಿಯಿಂದ ಪ್ರಧಾನಿ ಮೋದಿಯವರ ಈ ಬಾರಿಯ ಅಮೆರಿಕ ಭೇಟಿ ಅತ್ಯಂತ ಯಶಸ್ವಿಯಾಗಿದೆ.

ಬಜೆಟ್ ಮಂಡನೆ ವೇಳೆ ಸದನದಲ್ಲಿ ಶಾಸಕರ ಸ್ಥಾನದಲ್ಲಿ ಕೂತಿದ್ದ ವ್ಯಕ್ತಿ ಬಂಧನ

ಪೊಲೀಸರಿಂದ ವಿಚಾರಣೆ



ಬೆಂಗಳೂರು: ಸಿದ್ದರಾಮಯ್ಯ ಬಜೆಟ್ ಮಂಡನೆ ಮಾಡುವ ವೇಳೆ ಭದ್ರತಾ ಲೋಪವಾಗಿದ್ದು, ಸದನದಲ್ಲಿ ಶಾಸಕರ ಜಾಗದಲ್ಲಿ 15 ನಿಮಿಷ ಕೂತಿದ್ದ ವ್ಯಕ್ತಿಯನ್ನು ವಿಧಾನಸೌಧ ಪೊಲೀಸರು ಬಂಧಿಸಿ ತೀವ್ರ ವಿಚಾರಣೆಗೊಳಪಡಿಸಿದ್ದಾರೆ.

ಬಿಗಿ ಭದ್ರತೆಯಿದ್ದರೂ ಅನಾಮಧೇಯ ವ್ಯಕ್ತಿಯೊಬ್ಬ ಆರಾಮಾಗಿ ವಿಧಾನಸಭೆಗೆ ಪ್ರವೇಶಿಸಿ ಶಾಸಕರ ಸ್ಥಾನದಲ್ಲಿ ಕುಳಿತಿದ್ದು ವ್ಯಾಪಕ ಸುದ್ದಿಗೆ ಗ್ರಾಸವಾಗಿತ್ತು. ಇದೀಗ ಆ ಅಪರಿಚಿತ ವ್ಯಕ್ತಿಯನ್ನು ಪೊಲೀಸರು ಬಂಧಿಸಿ ವಿಚಾರಣೆಗೊಳಪಡಿಸಿದ್ದಾರೆ. ಬಂಧಿತ ವ್ಯಕ್ತಿಯನ್ನು ಕರಿಯಪ್ಪ ಅಲಿಯಾಸ್ ತಿಪ್ಪೆರುದ್ರ ಎಂದು ಗುರುತಿಸಲಾಗಿದೆ.

ಸುಮಾರು 15 ನಿಮಿಷಗಳ ಕಾಲ ಶಾಸಕರ ಜಾಗದಲ್ಲಿ ಕುಳಿತಿದ್ದ ಕರಿಯಪ್ಪ ನಂತರ ಎದ್ದು ಹೋಗಿದ್ದಾನೆ. ದೇವದುರ್ಗ ಶಾಸಕಿ ಕರೆಮ್ಮ ಅವರ ಸೀಟಿನಲ್ಲಿ ಕುಳಿತಿದ್ದ. ಗುರುಮಿಠಕಲ್ ಶಾಸಕ ಶರಣಗೌಡ ಕುಂದಕೂರ್ ಇದನ್ನು ಗಮನಿಸಿದ್ದು, ಈ ಬಗ್ಗೆ ಮಾರ್ಷಲ್‌ಗಳಿಗೆ ಮಾಹಿತಿ ನೀಡಿದ್ದಾರೆ. ಈ ಬಗ್ಗೆ ಮಾತನಾಡಿದ ಶಾಸಕ ಶರಣಗೌಡ ಕುಂದಕೂರ್, ಜಿ.ಟಿ. ದೇವೇಗೌಡರ ಬಳಿ ಆತ ಗೊತ್ತಾ ಎಂದು ಕೇಳಿದೆ, ಅವರು ಯಾರೋ ಗೊತ್ತಿಲ್ಲ ಎಂದರು. ನಾನೇ ಹೋಗಿ ಆತನ ಬಳಿ ಪ್ರಶ್ನೆ ಮಾಡಿದ್ದಕ್ಕೆ ನಾನು ಮೊಳಕಾಲ್ಮೂರು ಶಾಸಕ ಎಂದು ಹೇಳಿದ, ಇದನ್ನು ಸ್ಪೀಕರ್ ಯು.ಟಿ. ಖಾದರ್ ಗಮನಕ್ಕೆ ತಂದಿದ್ದೇನೆ. ಬಳಿಕ ಮಾರ್ಷಲ್‌ಗಳು ಆತನನ್ನು ಹೊರಗೆ ಕರೆದೊಯ್ದರು ಎಂದು ಹೇಳಿದ್ದಾರೆ.

ಐತಿಹಾಸಿಕ ಘಟನೆಯೇ: ಸಿದ್ದರಾಮಯ್ಯ ತಮ್ಮ ಐತಿಹಾಸಿಕ 14ನೇ ಬಾರಿಗೆ ಬಜೆಟ್ ಮಂಡಿಸಿದ ದಿನವೇ ಕರ್ನಾಟಕ ವಿಧಾನಸಭೆಯ ಇತಿಹಾಸದಲ್ಲೇ ಮೊಟ್ಟಮೊದಲ ಬಾರಿಗೆ ಕರ್ನಾಟಕ ವಿಧಾನಸಭೆಗೆ ವ್ಯಕ್ತಿಯೊಬ್ಬರು ನುಸುಳಿರುವ ಐತಿಹಾಸಿಕ ಘಟನೆ ನಡೆದಿದೆ ಎಂದು ಕಂದಕೂರು ವ್ಯಂಗ್ಯವಾಡಿದರು.

ಮಾರ್ಷಲ್ಸ್‌ಗೆ ಆವಾಜ್ ಹಾಕಿದ್ದ ಕರಿಯಪ್ಪ: ಬಜೆಟ್ ಮಂಡನೆ ವೇಳೆ ಕರಿಯಪ್ಪ ನೇರವಾಗಿ ವಿಧಾನಸೌಧಕ್ಕೆ ಪ್ರವೇಶಿಸಿದ್ದಾರೆ. ಪ್ರವೇಶ ಜಾಗದಲ್ಲಿ ಮಾರ್ಷಲ್ಸ್ ಕರಿಯಪ್ಪನವರನ್ನು ಪ್ರಶ್ನೆ ಮಾಡಿದಾಗ, ನಾನು ಶಾಸಕ ಗೊತ್ತಾಗಲ್ವಾ ಎಂದು ಆವಾಜ್ ಕೂಡ ಹಾಕಿದ್ದಾರೆ. ಗುರುತಿನ ಚೀಟಿ ಕೇಳಿದಾಗ, ನಾನು ಮೊಳಕಾಲ್ಮೂರು ಶಾಸಕ ಯಾಕ್ರೀ ನಿಮಗೆ ಐಡಿ, ಐಡಿ ಕಾರಿನ ಬಳಿ ಇದೆ ಎಂದು ಜೋರಾಗಿಯೇ ಹೇಳಿದ್ದಾರೆ.

ಇದನ್ನು ನಂಬಿದ ಮಾರ್ಷಲ್‌ಗಳು ಕರಿಯಪ್ಪನಿಗೆ ಒಳಗೆ ಪ್ರವೇಶಿಸಲು ಅವಕಾಶ ಕೊಟ್ಟಿದ್ದಾರೆ. ಒಳಗೆ ಹೋದ ಬಳಿಕ ನೇರವಾಗಿ ಶಾಸಕರ ಜಾಗದಲ್ಲಿ ಕುಳಿತಿದ್ದಾರೆ. ಈ ವೇಳೆ ಶಾಸಕ ಶರಣಗೌಡ ಅನುಮಾನಗೊಂಡು ವಿಚಾರಿಸಿದಾಗಲೂ ನಾನು ಮೊಳಕಾಲ್ಮೂರು ಶಾಸಕ ಎಂದೇ ಹೇಳಿದ್ದಾರೆ.

ಸಿದ್ದರಾಮಯ್ಯ ಬಜೆಟ್ ಮಂಡಿಸುವ ವೇಳೆ ಸದನದ ಒಳಗಡೆ ಕೂತಿದ್ದ ವ್ಯಕ್ತಿಯನ್ನು ವಶಕ್ಕೆ ಪಡೆದು ಸಿಸಿಬಿ ಜಂಟಿ ಪೊಲೀಸ್ ಆಯುಕ್ತ ಶರಣಪ್ಪ ವಿಚಾರಣೆ ನಡೆಸುತ್ತಿದ್ದಾರೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಭಾರೀ ಹಿನ್ನಡೆ

ಮಾನಹಾನಿ ಪ್ರಕರಣದಲ್ಲಿನ ಶಿಕ್ಷೆಗೆ ತಡೆ ನೀಡಲು ಗುಜರಾತ್ ಹೈಕೋರ್ಟ್ ನಕಾರ



ನವದೆಹಲಿ: ಮೋದಿ ಉಪನಾಮದ ಹೇಳಿಕೆಗೆ ಸಂಬಂಧಿಸಿದಂತೆ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಶಿಕ್ಷೆಗೆ ತಡೆ ನೀಡಲು ಗುಜರಾತ್ ಹೈಕೋರ್ಟ್ ಶುಕ್ರವಾರ ನಿರಾಕರಿಸಿದೆ. ನ್ಯಾಯಮೂರ್ತಿ ಹೇಮಂತ್ ಪ್ರಚ್ಚಕ್ ಅವರಿದ್ದ ನ್ಯಾಯಾಲಯ ಈ ತೀರ್ಪು ನೀಡಿದೆ.

ಮಾನಹಾನಿ ಪ್ರಕರಣದಲ್ಲಿ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ರಾಹುಲ್ ಗಾಂಧಿ ಸಲ್ಲಿಸಿದ್ದ ಮರುಪರಿಶೀಲನಾ ಅರ್ಜಿ ವಜಾಗೊಳಿಸಿದ ಗುಜರಾತ್ ಹೈಕೋರ್ಟ್ ಮಧ್ಯ ಪ್ರವೇಶಿಸುವ ಅಗತ್ಯವಿಲ್ಲ ಎಂದು ಹೇಳಿದೆ, ಈ ಮೂಲಕ ರಾಹುಲ್ ಗಾಂಧಿಗೆ ಹಿನ್ನಡೆಯಾಗಿದೆ.

ಮಾನಹಾನಿ ಪ್ರಕರಣದಲ್ಲಿ ರಾಹುಲ್ ಗಾಂಧಿಗೆ ಎರಡು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ. ನ್ಯಾಯಮೂರ್ತಿ ಹೇಮಂತ್ ಪ್ರಚ್ಚಕ್ ಅವರು ಏಪ್ರಿಲ್ ಮತ್ತು ಮೇನಲ್ಲಿ ಅರ್ಜಿಯನ್ನು ಆಲಿಸಿದ್ದರು ಹಾಗೂ ಮೇ 2 ರಂದು ವಾದವನ್ನು ಮುಕ್ತಾಯಗೊಳಿಸಲಾಯಿತು. ರಾಹುಲ್ ಗಾಂಧಿ ಪರ ವಾದಿಸಿದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, ಕ್ರಿಮಿನಲ್ ಮಾನನಷ್ಟದ ಆರೋಪದ ಪ್ರಕರಣದಲ್ಲಿ ಶಿಕ್ಷೆಗೆ ತಡೆಯಾಜ್ಞೆ ನೀಡುವಂತೆ ಮನವಿ ಮಾಡಿದರು.

ಮೋದಿ ಉಪನಾಮ ಹೊಂದಿರುವವರೆಲ್ಲರೂ ಕಳ್ಳರು ಎಂದಿದ್ದ ಕ್ರಿಮಿನಲ್ ಮಾನಹಾನಿ ಪ್ರಕರಣದಲ್ಲಿನ ಶಿಕ್ಷೆಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಡೆ ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಗುಜರಾತ್ ಹೈಕೋರ್ಟ್ ಈ ತೀರ್ಪು ನೀಡಿದೆ.

ಮಾರ್ಚ್‌ನಲ್ಲಿ ಸೂರತ್‌ನ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಈ ಪ್ರಕರಣದಲ್ಲಿ ರಾಹುಲ್ ಗಾಂಧಿ ದೋಷಿ ಎಂದು ಆದೇಶ ನೀಡಿತ್ತು. ಐಪಿಸಿ 499, 500ರಡಿ ಎರಡು ವರ್ಷ ಜೈಲು ಶಿಕ್ಷೆಯನ್ನು ವಿಧಿಸಿತ್ತು. ಶಿಕ್ಷೆ ಪ್ರಕಟಗೊಂಡ ಮರುದಿನವೇ, ಲೋಕಸಭೆಯ ಸ್ಪೀಕರ್ ಕಾರ್ಯಾಲಯ ಸಂಸದ ಸ್ಥಾನದಿಂದ ಅನರ್ಹಗೊಳಿಸಿತ್ತು. ನ್ಯಾಯಮೂರ್ತಿ ಹೇಮಂತ್ ಪ್ರಚ್ಚಕ್, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೇ 2ರಂದೇ ವಿಚಾರಣೆ ಪೂರ್ಣಗೊಳಿಸಿದ್ದು ಆದೇಶವನ್ನು ಕಾಯ್ದಿರಿಸಿದ್ದರು. ಮಧ್ಯಂತರ ಪರಿಹಾರದ ಆದೇಶ ನೀಡಲು ನಿರಾಕರಿಸಿದ್ದರು. ಬೇಸಿಗೆ ರಜೆ ಮುಗಿದ ಬಳಿಕವೇ ಆದೇಶ ಪ್ರಕಟಿಸುವುದಾಗಿ ತಿಳಿಸಿದ್ದರು. ಶುಕ್ರವಾರ ಕೋರ್ಟ್ ತೀರ್ಪು ಪ್ರಕಟಿಸಿದ್ದು, ಕೆಳ ನ್ಯಾಯಾಲಯ ನೀಡಿದ ತೀರ್ಪು ಸರಿಯಾಗಿದೆ. ತೀರ್ಪಿನಲ್ಲಿ ನಾವು ಮಧ್ಯಪ್ರವೇಶಿಸುವುದಿಲ್ಲ ಎಂದು ಹೈಕೋರ್ಟ್ ಹೇಳಿದೆ. ಈ ತೀರ್ಪಿನ ವಿರುದ್ಧ ರಾಹುಲ್ ಗಾಂಧಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಸಾಧ್ಯತೆಯಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಸಿದ್ದರಾಮಯ್ಯ ಬಜೆಟ್‌ಗೆ ಸಾಹಿತ್ಯದ ಟಚ್; ಭಾಷಣದುದ್ದಕ್ಕೂ ಕವಿಗಳು, ವಚನಕಾರರು...



ಬೆಂಗಳೂರು : ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ದಾಖಲೆಯ 14ನೇ ಬಜೆಟ್, ಅದೂ 3 ಲಕ್ಷದ 27 ಸಾವಿರ ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ್ದಾರೆ. ಅವರು ತಮ್ಮ ಭಾಷಣದುದ್ದಕ್ಕೂ ವಚನಗಳು, ಗಾದೆ ಮಾತುಗಳು, ನಾಣ್ಣುಡಿಗಳ ಮೂಲಕ ಗಮನ ಸೆಳೆದರು. ಕುವೆಂಪು, ಬಸವಣ್ಣ, ಸಿದ್ದಯ್ಯ ಪುರಾಣಿಕ್ ಸೇರಿ ಅನೇಕರ ವಿಚಾರಗಳನ್ನು ಪ್ರಸ್ತಾಪಿಸುವ ಮೂಲಕ ಆಯವ್ಯಯಕ್ಕೆ ಸಾಹಿತ್ಯದ ಟಚ್ ನೀಡಿದರು.

ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯವನ್ನು ಒಟ್ಟೊಟ್ಟಿಗೆ ಕೊಂಡೊಯ್ಯುವಲ್ಲಿ ಈ ದೇಶದಲ್ಲಿ ಶತಶತಮಾನಗಳಿಂದ ಯಾವುದಾದರೊಂದು ನಾಡು ಶ್ರಮಿಸಿದ್ದರೆ ಅದು ಕರ್ನಾಟಕ ಎಂದು ಹೇಳಲು ಹೆಮ್ಮೆಯಿದೆ. ಬಸವಣ್ಣನವರಿಂದ ಹಿಡಿದು ನಾಲ್ವಡಿ ಕೃಷ್ಣರಾಜ ಒಡೆಯರ್‌ರವರೆಗೆ ಈ ನಮ್ಮ ನಾಡಿನಲ್ಲಿ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ತೇರನ್ನು ಜೊತೆಜೊತೆಗೇ ಎಳೆಯಲಾಗಿದೆ. ಈ ಘನ ಪರಂಪರೆಯನ್ನು ನಾನು ಎಂದಿನಂತೆ ಈ ಬಾರಿಯೂ ಮುಂದುವರೆಸಲು ಶ್ರಮಿಸಿದ್ದೇನೆ ಎಂದು ಹೇಳಿದರು. ನನ್ನ ಹಿಂದಿನ ಎಲ್ಲ ಆಯವ್ಯಯಗಳಲ್ಲಿ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ಮೂಲಮಂತ್ರವು ಕರ್ನಾಟಕ ಮಾದರಿಯ ಅಭಿವೃದ್ಧಿಯನ್ನು ನೀಡುವ ಪ್ರಯತ್ನ ಮಾಡುತ್ತಾ ಬಂದಿದ್ದೇ, ಪ್ರಸ್ತುತ ಮಂಡಿಸುತ್ತಿರುವ ಆಯವ್ಯಯ ಪತ್ರದಲ್ಲಿ ಈ ಮಾದರಿಯನ್ನು ಇನ್ನಷ್ಟು ಆಳವಾಗಿಸುವ, ವಿಸ್ತಾರವಾಗಿಸುವ ಪ್ರಯತ್ನವಿದೆ ಎಂದು ಬಜೆಟ್ ಭಾಷಣದಲ್ಲಿ ತಿಳಿಸಿದರು.

ಸಿದ್ದರಾಮಯ್ಯ ತಮ್ಮ ಬಜೆಟ್ ಭಾಷಣದಲ್ಲಿ ಹಲವಾರು ಸಾಹಿತಿಗಳ ಸಾಲುಗಳನ್ನು ಪ್ರಸ್ತಾಪಿಸಿದ್ದಾರೆ. ಅವುಗಳ ಝಲಕ್ ಇಲ್ಲಿದೆ:

ಯಾವ ಕಾಲದ ಶಾಸ್ತ್ರವೇನು ಹೇಳಿದರೇನು, ಎದೆಯ ದನಿಯೂ ಮೀರಿ ಶಾಸ್ತ್ರವೇನು

– ರಾಷ್ಟ್ರಕವಿ ಕುವೆಂಪು

ಬೆಳಕಿಲ್ಲದ ಹಾದಿಯಲ್ಲಿ ನಡೆಯ ಬಹುದು ನಾನು, ಆದರೆ ಕನಸುಗಳಿಲ್ಲದ ಹಾದಿಯಲ್ಲಿ ನಡೆಯಲಿ ಹೇಗೆ

– ಗಿರೀಶ್ ಕಾರ್ನಾಡರ ಯಯಾತಿ ನಾಟಕದ ಸಾಲುಗಳು.

ಡಾ.ಬಾಬಾಸಾಹೇಬ್ ಅಂಬೇಡ್ಕರ್‌ರವರು ಪ್ರತಿಪಾದಿಸಿರುವ ಸಾಮಾಜಿಕ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದಲ್ಲಿ ನಂಬಿಕೆಯನ್ನು ಮರುಸ್ಥಾಪಿಸಲು ನಾವು ಬದ್ಧರಾಗಿದ್ದೇವೆ. ಆಯವ್ಯಯವೆನ್ನುವುದು ಹಣಕಾಸಿನ ನಿರ್ವಹಣೆಯ ಕಸರತ್ತು ಮಾತ್ರವೇ ಅಲ್ಲ. ನಮ್ಮ ಆದ್ಯತೆಗಳನ್ನು, ಗುರಿಗಳನ್ನು ನಿಚ್ಚಳವಾಗಿಸಿಕೊಳ್ಳುವ, ಸಾಕಾರಗೊಳಿಸಿಕೊಳ್ಳುವ ಸಾಧನ ಎಂದು ವಿವರಿಸಿದರು.

ಭದ್ರತೆಯ ಖಾತರಿ ಕೊಡದ ಆರ್ಥಿಕ ಯೋಜನೆಯಿಂದ ಯಾವ ಉಪಯೋಗವೂ ಇಲ್ಲ. ಯೋಜನೆ ಒಪ್ಪಿತವಾಗಬೇಕಾದರೆ, ಅದು ಮಿತವ್ಯಯದ್ದು ಮತ್ತು ಸುಭದ್ರವು ಆಗಿರಬೇಕು. ಅದು ಮಿತವ್ಯಯದ್ದು ಆಗಿದ್ದರೆ ಬಹುಕಾಲ ನಡೆದೀತು. ಆದರೆ, ಸುಭದ್ರವಾಗಿಲ್ಲದಿದ್ದರೆ, ಖಂಡಿತ ನಡೆಯುವುದಿಲ್ಲ.

– ಡಾ ಬಿಆರ್ ಅಂಬೇಡ್ಕರ್

ನಡೆವುದ ಹಾದಿಯಲ್ಲಿ ಎಡವಿದೆನೆಂದರೆ ಒಪ್ಪುವುದೇ ಅಯ್ಯಾ?
ಕಾಣದ ಮುಖದ ಕುಂದನೆಣಿಸಿದರೆ ಒಪ್ಪುವುದೇ ಅಯ್ಯಾ?
ಉಣ್ಣದ ಅಡಿಗೆಯು ರುಚಿಯು ಟೀಕಿಸಿದರೆ ಒಪ್ಪುವುದೆ ಅಯ್ಯಾ?
ನೋಡದುದನ್ನು ನೋಡಿದಂತೆ ವರ್ಣಿಸಿದರೆ ಒಪ್ಪುವುದೆ ಅಯ್ಯಾ??

–ಸಿದ್ದಯ್ಯ ಪುರಾಣಿಕರ ಸಾಲುಗಳ ಸ್ಮರಣೆ

ನಡೆಯ ಚೆನ್ನ ನುಡಿದು ತೋರಿ, ನುಡಿಯ ಚೆನ್ನ ನಡೆದು ತೋರಿ?

– ಬಸವಣ್ಣನವರ ವಚನ

ಭೇದ ಭಾವ ನೀಗಬೇಕು, ದುಡಿದು ಹಿರಿಮೆ ಗಳಿಸಬೇಕು
ಭಾರತೀಯರೆನಿಸುವಲ್ಲ ಜಾತಿ ಮತದ ಮಕ್ಕಳು

– ಕೆ.ಎಸ್. ನಿಸಾರ್ ಅಹ್ಮದ್

ನನ್ನವ್ವ ಬದುಕಿದ್ದು ಕಾಳುಕಡ್ಡಿಗೆ, ದುಡಿತಕ್ಕೆ, ಮಕ್ಕಳಿಗೆ;
ಮೇಲೊಂದು ಸೂರು, ಅನ್ನ, ರೊಟ್ಟಿ, ಹಚ್ಚಡಕ್ಕೆ;
ಸರೀಕರ ಎದುರು ತಲೆಯೆತ್ತಿ ನಡೆಯಲಿಕ್ಕೆ?

– ಪಿ. ಲಂಕೇಶ್

ಎತ್ತೆಮ್ಮೆ ಹೂಡುವುದು। ಉತ್ತೊಮ್ಮೆ ಹರಗುವುದು।
ಬತ್ತೊಮ್ಮೆ ಹರಗಿ, ಕಳೆತೆಗೆದರಾ ಬೆಳೆಯು।
ಎತ್ತಿಗ್ಯೆಯುದ್ದ ಸರ್ವಜ್ಞ।

ಹೀಗೆ ಹಲವಾರು ವಚನ, ಉಕ್ತಿಗಳ ಸಾಲುಗಳನ್ನು ಬಜೆಟ್ ಭಾಷಣದಲ್ಲಿ ಪ್ರಸ್ತಾಪಿಸಿದರು. ಕೊನೆಗೆ ಗ್ಯಾರಂಟಿ ಯೋಜನೆಗಳನ್ನು ಕೇವಲ ಬಿಟ್ಟಿ ಕೊಡುಗೆಗಳೆಂದು ಆಡಿಕೊಳ್ಳುವವರು ಒಮ್ಮೆ ನಮ್ಮ ಬಡವರ, ಶ್ರಮಿಕರ ಬದುಕನ್ನು ಗಮನಿಸಬೇಕಾಗಿದೆ. ತಾವು ವಿರೋಧ ಪಕ್ಷದ ಜವಾಬ್ದಾರಿಯನ್ನು ನಿರ್ವಹಿಸಿ; ಆದರೆ ಶ್ರೀಸಾಮಾನ್ಯರ ವಿವೇಚನೆಗೆ ಅಪಮಾನ ಮಾಡಬೇಡಿ ಎಂದು ವಿನಂತಿ ಮಾಡಿಕೊಳ್ಳುತ್ತೇನೆ ಎಂದು ಸಿದ್ದರಾಮಯ್ಯ ತಮ್ಮದೇ ಧಾಟಿಯಲ್ಲಿ ಚಾಟಿ ಬೀಸಿದರು.

ಬಜೆಟ್‌ನಲ್ಲಿ ಮದ್ಯದ ದರ ಏರಿಕೆ: ಕಾರು, ಮನೆ ನೋಂದಣಿ ದುಬಾರಿ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್‌ನಲ್ಲಿ ವಾಣಿಜ್ಯ ತೆರಿಗೆ, ಅಬಕಾರಿ ಇಲಾಖೆ, ನೋಂದಣಿ ಮತ್ತು ಮುದ್ರಾಂಕ ಹಾಗೂ ಸಾರಿಗೆ ಇಲಾಖೆಗಳಿಗೆ ಟಾರ್ಗೆಟ್ ಹೆಚ್ಚಳ ಮಾಡಲಾಗಿದೆ. ಅಬಕಾರಿ ತೆರಿಗೆ ಹೆಚ್ಚಳವಾಗಿದೆ. ಸ್ಥಿರಾಸ್ತಿಗಳ ಮಾರ್ಗಸೂಚಿ ದರ ಏರಿಕೆ ಆಗುವ ಸಾಧ್ಯತೆ ಇದೆ. ಜೊತೆಯಲ್ಲೇ ವಾಹನಗಳ ನೋಂದಣಿ ಶುಲ್ಕ ಕೂಡಾ ಏರಿಕೆ ಆಗಲಿದೆ.

ಸಿದ್ದರಾಮಯ್ಯ ಆಯವ್ಯಯದ ಲೆಕ್ಕಾಚಾರ





- ಅಬಕಾರಿ ತೆರಿಗೆ ಶೇ. 20ರಷ್ಟು ಹೆಚ್ಚಳ – ವಿಸ್ಕಿ, ಬ್ರಾಂದಿ, ರಮ್, ವೈನ್, ವೋಡ್ಕಾ, ವೈನ್ ಸೇರಿದಂತೆ ಎಲ್ಲಾ ರೀತಿಯ ಮದ್ಯದ ಬೆಲೆ ಏರಿಕೆ
- ಬಿಯರ್ ಮೇಲಿನ ಅಬಕಾರಿ ಸುಂಕ ಶೇ. 10ರಷ್ಟು ಹೆಚ್ಚಳ – ಏರಿಕೆ ಆಗಲಿದೆ ಬಿಯರ್ ದರ
- ಅಬಕಾರಿ ಇಲಾಖೆಗೆ 36 ಸಾವಿರ ಕೋಟಿ ರೂ. ತೆರಿಗೆ ಸಂಗ್ರಹ ಗುರಿ
- ಸ್ಥಿರಾಸ್ತಿಗಳ ಮಾರ್ಗಸೂಚಿ ದರ ಪರಿಷ್ಕರಣೆಗೆ ಸರ್ಕಾರ ನಿರ್ಧಾರ
- ಮಾರ್ಗಸೂಚಿ ದರ ಏರಿಕೆ ಆದರೆ ಮುದ್ರಾಂಕ & ನೋಂದಣಿ ಶುಲ್ಕ ಏರಿಕೆ
- ನೋಂದಣಿ ಹಾಗೂ ಮುದ್ರಾಂಕ ಇಲಾಖೆಗೆ 2023–24ನೇ ಸಾಲಿನಲ್ಲಿ 25 ಸಾವಿರ ಕೋಟಿ ರೂ. ತೆರಿಗೆ ಸಂಗ್ರಹ ಗುರಿ
- ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆಗೆ ತಿದ್ದುಪಡಿ ತರಲು ತೀರ್ಮಾನ
- ವಾಹನಗಳ ನೋಂದಣಿ ತೆರಿಗೆ ಪರಿಷ್ಕರಣೆ ಮಾಡಲು ನಿರ್ಧಾರ
- ಹೊಸ ವಾಹನಗಳ ನೋಂದಣಿ ಶುಲ್ಕ ಮತ್ತಷ್ಟು ಏರಿಕೆ ಆಗುವ ಸಾಧ್ಯತೆ
- ಇವಿ ವಾಹನಗಳ ನೋಂದಣಿ ವೇಳೆ ಶುಲ್ಕ ರಿಯಾಯಿತಿ ರದ್ದಾಗುವ ಸಂಭವ
- ಸಾರಿಗೆ ಇಲಾಖೆಗೆ 11,500 ಕೋಟಿ ರೂ. ರಾಜಸ್ವ ಸಂಗ್ರಹ ಗುರಿ ನೀಡಲಾಗಿದೆ.
- ವಾಣಿಜ್ಯ ತೆರಿಗೆ ಇಲಾಖೆಗೆ ಬರೋಬ್ಬರಿ 1,01,000 ಕೋಟಿ ರೂ. ತೆರಿಗೆ ಸಂಗ್ರಹ ಗುರಿ

ಮೌಢ್ಯಕ್ಕೆ ಸಡ್ಡು ಹೊಡೆದ ಮುಖ್ಯಮಂತ್ರಿ

ದೇವಸ್ಥಾನಕ್ಕೆ ಭೇಟಿ ನೀಡದೆಯೇ ಬಜೆಟ್ ಮಂಡನೆ

ಬೆಂಗಳೂರು: ಸಾಮಾನ್ಯವಾಗಿ ಬಜೆಟ್ ಮಂಡನೆಗೂ ಮುನ್ನ ದೇವಸ್ಥಾನಕ್ಕೆ ಭೇಟಿ ನೀಡುವ ಸಂಪ್ರದಾಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಲಾಂಜಲಿ ಇಟ್ಟಿದ್ದು, ದೇಗುಲಕ್ಕೆ ಭೇಟಿ ನೀಡದೆಯೇ ನೇರವಾಗಿ ವಿಧಾನಸಭೆಗೆ ತೆರಳಿ ಶುಕ್ರವಾರ 2023–24ನೇ ಸಾಲಿನ ಬಜೆಟ್ ಮಂಡಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ನೇರವಾಗಿ ವಿಧಾನ ಸೌಧಕ್ಕೆ ಆಗಮಿಸಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯ ಅಧ್ಯಕ್ಷತೆ ವಹಿಸಿದರು. ನಂತರ ಹಿಂಪಾಸಿಕ ಸಂಪುಟ ಸಭೆ ನಡೆಯಿತು. ಬಜೆಟ್ ಮಂಡನೆಗೂ ಮುನ್ನ ದೇವಸ್ಥಾನಗಳಿಗೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸುವ ಸಂಪ್ರದಾಯವನ್ನು ಮುರಿದರು.

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ತಮ್ಮ ಅಧಿಕಾರಾವಧಿಯಲ್ಲಿ ಬಜೆಟ್ ಅಧಿವೇಶನದಲ್ಲಿ ಪಾಲ್ಗೊಳ್ಳಲು ಬರುವ ಮುನ್ನ ಆರ್‌ಟಿ ನಗರದ ಶ್ರೀಕಂಠೇಶ್ವರ ದೇವಸ್ಥಾನ ಮತ್ತು ಆಂಜನೇಯನ ದೇಗುಲಕ್ಕೆ ಭೇಟಿ ನೀಡಿದ್ದರು.

ಸಿಎಂ ಸಿದ್ದರಾಮಯ್ಯನವರು ಮೌಢ್ಯಗಳಿಗೆ ಕಟ್ಟುಬಿದ್ದಿಲ್ಲ. ವಾಸ್ತು ಕಾರಣಕ್ಕೆ ಮುಚ್ಚಲಾಗಿದ್ದ ವಿಧಾನಸೌಧದ ಕಚೇರಿಯ ದಕ್ಷಿಣ ದ್ವಾರವನ್ನು ತೆರೆಸಿದ್ದರು. ಅವರು ಸಿಎಂ ಆಗಿದ್ದ ಅವಧಿಯಲ್ಲಿ ಹಲವು ಬಾರಿ ಚಾಮರಾಜನಗರ ನಗರಕ್ಕೆ ಭೇಟಿ ನೀಡಿದ್ದರು. ಚಾಮರಾಜನಗರಕ್ಕೆ ಭೇಟಿ ನೀಡಿದವರು ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ಶಾಪಕ್ಕೆ ತಿಲಾಂಜಲಿ ಇಟ್ಟರು.

ಬಜೆಟ್ ಮಂಡನೆ ವೇಳೆ ಹಾಜರಿರುವಂತೆ ಶಾಸಕರಿಗೆ ಸಿಎಂ ಸಿದ್ದರಾಮಯ್ಯ ಸೂಚಿಸಿದರು. ಒಗ್ಗಟ್ಟು ಪ್ರದರ್ಶಿಸಿ ಪ್ರತಿಪಕ್ಷಗಳ ದಾಳಿಗೆ ತಕ್ಕ ಉತ್ತರ ನೀಡುವಂತೆಯೂ ಕೇಳಿಕೊಂಡರು. ಖಾತರಿ ಯೋಜನೆಗಳನ್ನು ಅನುಷ್ಠಾನಗೊಳಿಸಿಯೇ ತೀರುವ ಒತ್ತಡದಲ್ಲಿರುವುದರಿಂದ ತಮ್ಮತಮ್ಮ ಕ್ಷೇತ್ರಗಳಿಗೆ ಹೆಚ್ಚಿನ ಅನುದಾನಕ್ಕಾಗಿ ಒತ್ತಾಯ ಮಾಡಬೇಡಿ ಎಂದು ಅವರು ಶಾಸಕರನ್ನು ಕೋರಿದ್ದಾರೆ.

ಜನರ ಕಿವಿ ಮೇಲೆ ಹೂ ಇಟ್ಟಿದ್ದಾರೆ: ಬಜೆಟ್‌ಗೆ ಕುಮಾರಸ್ವಾಮಿ ವ್ಯಂಗ್ಯ



ಬೆಂಗಳೂರು, ಜು.7– ಕಳೆದ ಬಾರಿ ಬಸವರಾಜ ಬೊಮ್ಮಾಯಿ ಅವರ ಬಜೆಟ್‌ಗೆ ಕಾಂಗ್ರೆಸ್‌ನವರು ಕಿವಿಯಲ್ಲಿ ಚೆಂಡು ಹೂ ಇಟ್ಕೊಂಡು ಬಂದಿದ್ದರು. ಈಗ ಆರು ಕೋಟಿ ಜನರ ಕಿವಿಗೆ ಇವರೇ ಹೂ ಇಟ್ಟಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ, ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಮಂಡಿಸಿದ ಬಜೆಟ್ ಅನ್ನು ಟೀಕಿಸಿದ್ದಾರೆ.

ಸಿದ್ದರಾಮಯ್ಯ ಬಜೆಟ್ ಮಂಡನೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಎಚ್‌ಡಿಕೆ, ಇವತ್ತಿನ ಬಜೆಟ್ ಟೀಕೆ ಮಾಡುವ ಬಜೆಟ್ ಆಗಿದೆ. ಇದು ಕಟ್ ಅಂಡ್ ಪೇಸ್ಟ್ ಬಜೆಟ್ ಎಂದರು.

ಕೇಂದ್ರದ ನರೇಂದ್ರ ಮೋದಿ ಅವರ ಸರ್ಕಾರ ಮತ್ತು ಹಿಂದಿನ ರಾಜ್ಯ ಬಿಜೆಪಿ ಸರಕಾರವನ್ನು ನಿಂದಿಸಲು ಮೀಸಲಾದ ಬಜೆಟ್ ಇದು. ರಾಜಕೀಯ ಹೇಳಿಕೆಗಳಿಗೆ ಸೀಮಿತವಾದ ಬಜೆಟ್ ಹಾಗೂ ಅನೇಕ ಎಟಿಎಮ್‌ಗಳನ್ನು ತುಂಬಿಸಿಕೊಳ್ಳಲು ಮಾಡಲಾದ ಬಜೆಟ್ ಎಂದು ಮಾಜಿ ಸಿಎಂ ವಾಗ್ದಾಳಿ ನಡೆಸಿದರು. ನಮ್ಮ ಹಣಕಾಸು ಸಚಿವರು ದಾಖಲೆ ಸ್ಥಾಪನೆ ಮಾಡಿಕೊಳ್ಳಲು ಮಂಡಿಸಿದ ದಾಖಲೆಯ ಬಜೆಟ್ ಅಷ್ಟೇ ಇದು ಎಂದು ಕುಮಾರಸ್ವಾಮಿ ಕಟುವಾಗಿ ಟೀಕಿಸಿದರು.

ಕೇಂದ್ರ ಸರ್ಕಾರ ದ್ವೇಷಿಸುವ, ಇದೊಂದು ರಿವರ್ಸ್ ಗೇರ್ ಬಜೆಟ್

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವ್ಯಂಗ್ಯ



ಬೆಂಗಳೂರು, ಜು.7(ಕೆಎಂಶಿ)– ಬಜೆಟ್‌ನಲ್ಲಿ ಭವಿಷ್ಯದ ಯೋಜನೆಗಳ ಕುರಿತು ಹೇಳುವ ಬದಲು, ಹಿಂದಿನ ಸರ್ಕಾರ ಹಾಗೂ ಕೇಂದ್ರ ಸರ್ಕಾರವನ್ನು ದ್ವೇಷಿಸುವ ರಾಜಕೀಯ ಪ್ರೇರಿತ, ರಿವರ್ಸ್ ಗೇರ್ ಬಜೆಟ್ ಇದಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇವತ್ತಿನ ಹಣಕಾಸಿನ ಸ್ಥಿತಿ, ಇವತ್ತಿನ ವಾಸ್ತವ ಸ್ಥಿತಿ ಬಗ್ಗೆ ಮಾತನಾಡುವ ಬದಲು ಹಳೆಯ ಕಾರ್ಯಕ್ರಮಗಳ ಬಗ್ಗೆ ಹೇಳುತ್ತಾರೆ ಎಂದರೆ, ಅವರು ಭೂತಕಾಲದಲ್ಲಿದ್ದಾರೆ. ಇದು ರಾಜಕೀಯ ಬಜೆಟ್. ಹಲವಾರು ಅಂಕಿ ಅಂಶಗಳನ್ನು ಆ ಸಂದರ್ಭಕ್ಕೆ ವಾಸ್ತವಾಂಶಕ್ಕೆ ತಕ್ಕಂತೆ ಎಲ್ಲ ಸರ್ಕಾರಗಳು ಮಾಡಿವೆ. ಪ್ರತಿಯೊಂದಕ್ಕೂ 2013 ಕ್ಕೆ ಹೋಲಿಕೆ ಮಾಡಿದ್ದಾರೆ. ಅದನ್ನು ನೋಡಿದರೆ ಅವರು ಹೆಚ್ಚು ಸಾಲ ಮಾಡಿದ್ದಾರೆ. ಇದೊಂದು ರಿವರ್ಸ್ ಗೇರ್ ಇರುವ ಸರ್ಕಾರ ಆಗಿದೆ ಎಂದು ವಾಗ್ದಾಳಿ ನಡೆಸಿದರು.

ನಮ್ಮ ರಾಜ್ಯದ ಕೋವಿಡ್ ನಿರ್ವಹಣೆಯ ಬಗ್ಗೆ ದೇಶವೇ ಕೊಂಡಾಡಿದೆ. ಕೇಂದ್ರ ಸರ್ಕಾರ ಕೋವಿಡ್ ಸಂದರ್ಭದಲ್ಲಿ ಸಾಕಷ್ಟು ಸಹಾಯ ಮಾಡಿದೆ. ನಮ್ಮ ಸರ್ಕಾರ ಕೂಡ ಸುಮಾರು 2000 ಕೋಟಿ ರೂ. ಕೋವಿಡ್‌ನಿಂದ ಸಂಕಷ್ಟಕ್ಕೆ ಒಳಗಾದವರ ನೆರವಿಗೆ ನೀಡಿದ್ದೇವೆ. ನಾವು ಎಷ್ಟು ಹೆಚ್ಚು ತೆರಿಗೆ ಸಂಗ್ರಹ ಮಾಡಿದ್ದೇವೆ. ಕೇಂದ್ರ ಎಷ್ಟು ಅನುದಾನ ನೀಡಿದೆ ಎನ್ನುವುದು ದಾಖಲೆ ಇದೆ. ಕೇಂದ್ರದ ಅನುದಾನ ಕಡಿಮೆ ಆಗಿದೆ ಅಂತ ಹೇಳಿದ್ದಾರೆ. ಕೇಂದ್ರ ಸರ್ಕಾರ ಎರಡು ರೀತಿಯಲ್ಲಿ ಅನುದಾನ ನೀಡಲಿದೆ. ಕೆಲವು ಯೋಜನೆಗಳಲ್ಲಿ ನೇರವಾಗಿ ಫಲಾನುಭವಿಗಳಿಗೆ ಅನುದಾನ ದೊರೆಯುತ್ತದೆ ಅದನ್ನು ಮರೆಮಾಚುವ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ಆಟೋಮೋಟಿವ್ ಆಕ್ಸೆಲ್ಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು

ವಾರ್ಷಿಕ ಮಹಾಸಭೆ

ಸಂಘದ 2022–23ನೇ ಸಾಲಿನ ಸರ್ವ ಸದಸ್ಯರ ಮಹಾಸಭೆಯು ದಿನಾಂಕ 09.07.2023, ಭಾನುವಾರದಂದು ಬೆಳಗ್ಗೆ 9.30 ಘಂಟೆಗೆ ಕಲ್ಯಾಣಿ ನಗರ ಬಡಾವಣೆ, ಮಾದಗಲ್ಲಿ ಗ್ರಾಮ, ಮೈಸೂರು, ಇಲ್ಲಿ ನಡೆಯಲಿದೆ. ನಿರ್ದೇಶಕ ಮಂಡಳಿಯು ಸದಸ್ಯರೆಲ್ಲರಿಗೂ ಹಾರ್ದಿಕ ಸ್ವಾಗತವನ್ನು ಬಯಸುತ್ತದೆ. ಆಹ್ವಾನ ಪತ್ರಿಕೆಯನ್ನು ಸದಸ್ಯರೆಲ್ಲರಿಗೂ ಪ್ರತ್ಯೇಕವಾಗಿ ಕಳುಹಿಸಲಾಗಿದೆ. ಒಂದು ವೇಳೆ ಆಹ್ವಾನ ಪತ್ರಿಕೆಯು ತಲುಪದಿದ್ದಲ್ಲಿ, ಇದನ್ನೇ ಆಹ್ವಾನ ಪತ್ರಿಕೆ ಎಂದು ಪರಿಗಣಿಸಿ, ಸದಸ್ಯರು ಸಭೆಗೆ ಹಾಜರಾಗಬೇಕೆಂದು ಪ್ರಾರ್ಥಿಸುತ್ತೇವೆ.

ಆಟೋಮೋಟಿವ್ ಆಕ್ಸೆಲ್ಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ ಪರವಾಗಿ
ಸಹಿ/– ಶಿವಕುಮಾರ್ ಆರ್, ಅಧ್ಯಕ್ಷರು

ಕರ್ನಾಟಕ ಸರ್ಕಾರ

ನಗರಸಭಾ ಕಾರ್ಯಾಲಯ, ಹೂಟಗಳ್ಳಿ, ಮೈಸೂರು

ಎಸ್.ಆರ್.ಎಸ್. ಸ್ಟೇಷನ್ ಎದುರು, ಹೈಟೆನ್ಷನ್ ಜೋಡಿ ರಸ್ತೆ, ಹೂಟಗಳ್ಳಿ, ಮೈಸೂರು ಜಿಲ್ಲೆ –570018
ಸಹಾಯವಾಣಿ ಸಂಖ್ಯೆ: 0821–2001737
ltstaff_ulb_hootagalli@yahoo.com
ಸಂ:ನಸಹೂ:ಸ್ವಚ್ಛತಾ ವಿಭಾಗ:ಉಪಹಾರ/ಸಿ.ಆರ್–01/2023–24
ದಿನಾಂಕ: 04.07.2023

ಟೆಂಡರ್ ಪ್ರಕಟಣೆ
(ಇ–ಪ್ರೊಕ್ಯುರ್‌ಮೆಂಟ್ ಪೋರ್ಟಲ್ ಮೂಲಕ)

ಹೂಟಗಳ್ಳಿ ನಗರಸಭೆಯ ಪೌರ ಕಾರ್ಮಿಕರಿಗೆ ಹಾಗೂ ಇತರೆ ಸ್ವಚ್ಛತಾ ಸಿಬ್ಬಂದಿಗಳಿಗೆ ಬೆಳಗಿನ ಉಪಹಾರ ಸರಬರಾಜು ಮಾಡಲು ನೊಂದಾಯಿತ ಸಂಸ್ಥೆ/ಏಜೆನ್ಸಿಗಳಿಂದ ಕೆಪಿಪಿಪಿ ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್‌ನಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ನೋಂದಾಯಿತ ಸಂಸ್ಥೆ/ಗುತ್ತಿಗೆದಾರರು http://eproc.karnataka.nic.in ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗೆ ಕಛೇರಿಯಲ್ಲಿ ಸಂಪರ್ಕಿಸಬಹುದು ಅಥವಾ ಕೆಪಿಪಿಪಿ ಪೋರ್ಟಲ್ ನಲ್ಲಿ ಪಡೆಯಬಹುದಾಗಿರುತ್ತದೆ. ಇಂಡೆಂಟ್ ನಂ (DMA/2023-24/SE0150). **ಅಂದಾಜು ಮೊತ್ತ: ರೂ 17.76 ಲಕ್ಷ. ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 21.07.2023 ಸಂಜೆ 4.30 ಗಂಟೆ. ಟೆಂಡರ್ ತೆರೆಯುವ ದಿನಾಂಕ: 24.07.2023 ಸಂಜೆ 4 ಗಂಟೆ**

ಸಹಿ/– ಪೌರಾಯುಕ್ತರು ನಗರಸಭೆ, ಹೂಟಗಳ್ಳಿ
DIPR/DDMYS/KSMCA/103/2023-24

ರಾಜ್ಯ ಬಜೆಟ್‌ಗೆ ಮಿಶ್ರ ಪ್ರತಿಕ್ರಿಯೆ




ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಕೈಗಾರಿಕೆಗಳ ಅಭಿವೃದ್ಧಿಗೆ ಸಾಕಷ್ಟು ನಿರೀಕ್ಷಿಸಲಾಗಿತ್ತು. ಆದರೆ ಪ್ರತ್ಯೇಕ ಕೈಗಾರಿಕಾ ಪಟ್ಟಣ ಪ್ರಾಧಿಕಾರದ ಬಗ್ಗೆ ಪ್ರಸ್ತಾಪಿಸಿಲ್ಲ. ವಿದ್ಯುತ್ ಶುಲ್ಕ ಹಾಗೂ ಬಡ್ಡಿ ದರ ಪೂರಕವಾಗಿಲ್ಲ. ಮೈಸೂರು ರಫ್ತು ಕೇಂದ್ರಕ್ಕೆ ಸರ್ಕಾರದ ಪಾಲಿನ ಅನುದಾನ ಘೋಷಣೆಯಾಗಿಲ್ಲ. ಆದರೆ ಕೈಗಾರಿಕೆ ಹೊರತುಪಡಿಸಿ ಒಟ್ಟಾರೆಯಾಗಿ ಬಜೆಟ್ ಚೆನ್ನಾಗಿದೆ. ವೈದ್ಯಕೀಯ ಶಿಕ್ಷಣಕ್ಕೆ ಹೆಚ್ಚಿನ ಅನುದಾನ ಮೀಸಲಿಡಲಾಗಿದೆ. ಪ್ರಾಥಮಿಕ ಶಿಕ್ಷಣ ಹಾಗೂ ಪ್ರಾಥಮಿಕ ಆರೋಗ್ಯಕ್ಕೆ ಇನ್ನೂ ಹೆಚ್ಚಿನ ಆದ್ಯತೆ ನೀಡಬೇಕಿತ್ತು. ಪ್ರತ್ಯೇಕವಾಗಿ ಜಯದೇವ ಆಸ್ಪತ್ರೆ ನಿರ್ಮಾಣವಾದ ನಂತರ ದಿನದಲ್ಲಿ 800ಕ್ಕಿಂತ ಹೆಚ್ಚು ಬಡವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಹೀಗೆಯೇ ಕಿದ್ವಾಯಿ, ನೆಫ್ರಾಲಜಿ ಹಾಗೂ ಯೂರಾಲಜಿ ಘಟಕಗಳನ್ನು ಪ್ರತ್ಯೇಕವಾಗಿ ಆರಂಭಿಸಿದ್ದರೆ ಜನಸಾಮಾನ್ಯರಿಗೆ ಪರಿಣಾಮಕಾರಿ ಸೇವೆ ಲಭ್ಯವಾಗುತ್ತಿತ್ತು. ಒಟ್ಟಾರೆಯಾಗಿ ಬಜೆಟ್‌ನಲ್ಲಿ ಹಿಂದಿಗಿಂತ ಹೆಚ್ಚು ಲಭ್ಯವಾಗಿದೆ.

-ವಾಸು, ಮಾಜಿ ಶಾಸಕ ಹಾಗೂ ಅಧ್ಯಕ್ಷ ಮೈಸೂರು ಕೈಗಾರಿಕೆಗಳ ಸಂಘ



ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ರಾಜ್ಯದ ಜನರ ನಿರೀಕ್ಷೆಯನ್ನು ಹುಸಿಗೊಳಿಸಿದೆ. ಬಜೆಟ್‌ನ 50 ಪುಟ ಕೇವಲ ರಾಜಕೀಯ ಟೀಕೆಗೆ ಸೀಮಿತವಾಗಿದ್ದು ವಿಷಾದನೀಯ. ಒಂದು ರೀತಿ ಟೀಕೆ ಮಾಡುವ ಭಾಷಣದಂತಿತ್ತು ಬಜೆಟ್‌ನಲ್ಲೂ ರಾಜಕೀಯ ಬೆರೆಸಿದ್ದೂ ಕೂಡ ರಾಜ್ಯದ ಇತಿಹಾಸದಲ್ಲಿ ಒಂದು ದಾಖಲೆ. ಇದೊಂದು ರಾಜಕೀಯ ಬಜೆಟ್ ಆಗಿದೆಯೇ ಹೊರತು ಜನೋಪಯೋಗಿಯಲ್ಲ. ಸಿದ್ದರಾಮಯ್ಯನವರು ರಾಜ್ಯದ ಆರ್ಥಿಕ ಶಿಸ್ತನ್ನು ಹಾಳು ಮಾಡಿದ್ದಾರೆ. ಯಾವುದಕ್ಕೂ ಬಜೆಟ್‌ನಲ್ಲಿ ಹಣ ಇಟ್ಟಿಲ್ಲ. ರಾಜ್ಯದ ಜನ ಕೋವಿಡ್, ಅತಿವೃಷ್ಟಿ, ಅನಾವೃಷ್ಟಿಯಿಂದ ಈಗಾಗಲೇ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸಂಕಷ್ಟದ ನಡುವೆಯೂ ಸಾಮಾನ್ಯ ಜನರ ಮೇಲೆ ತೆರಿಗೆ ಹೊರೆ ಹೆಚ್ಚಿಸಿದ್ದಾರೆ. ರಾಜ್ಯವನ್ನು ಸಾಲದ ಶೂಲಕ್ಕೆ ದೂಡುತ್ತಿದ್ದಾರೆ. ಕೊರತೆ ಬಜೆಟ್ ಮಂಡಿಸಿ ಗೊಂದಲ ಸೃಷ್ಟಿಸಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಮುಂದಿಟ್ಟುಕೊಂಡು ಜನತೆಗೆ ಮೋಸ ಮಾಡುತ್ತಿದ್ದಾರೆ. ರಾಮನಗರ ಹಾಗೂ ಶಿಡ್ಲಘಟ್ಟದಲ್ಲಿ ಹೈಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಾಣ, ರೇಷ್ಮೆಗೂಡು ಖರೀದಿಗೆ 5 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ಸೌಲಭ್ಯ ಬಿಟ್ಟರೆ ಕೃಷಿಗೆ ಪೂರಕವಾದ ಮತ್ತ್ಯಾವುದೇ ಉತ್ತಮ ಅಂಶಗಳು ಬಜೆಟ್‌ನಲ್ಲಿ ಕಾಣಿಸುತ್ತಿಲ್ಲ. ಶಿಕ್ಷಣ, ಆರೋಗ್ಯ, ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಿಗೆ ಅನುದಾನ ಕಡಿಮೆ ಮಾಡಲಾಗಿದೆ ಈ ಹಿಂದೆ 13 ಬಜೆಟ್ ಮಂಡಿಸಿದ್ದ ಅನುಭವಿ ರಾಜಕಾರಣಿ ಸಿದ್ದರಾಮಯ್ಯನವರಿಂದ ಇಂತಹ ಬಜೆಟ್ ನಿರೀಕ್ಷಿಸಿರಲಿಲ್ಲ.

-ಸಿ.ಎನ್.ಮಂಜೇಗೌಡ, ಎಂಎಲ್‌ಸಿ



ಕಾಂಗ್ರೆಸ್ ಪಕ್ಷ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದ್ದ ಐದು ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ. ಮೀಸಲಿಡುವುದರ ಜೊತೆಗೆ ಸಿದ್ದರಾಮಯ್ಯನವರು ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಪೂರಕವಾದ ಬಜೆಟ್ ಮಂಡಿಸಿದ್ದಾರೆ. ರೈತರ ಮರಣ ಶಾಸನವಾಗಿದ್ದ ಕೇಂದ್ರದ ಎಪಿಎಂಸಿ ಕಾಯ್ದೆಯನ್ನು ಕರ್ನಾಟಕ ರಾಜ್ಯದಲ್ಲಿ ವಾಪಸ್ ಪಡೆಯುವುದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿಶೇಷ ಕಲ್ಯಾಣಕ್ಕಾಗಿ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಗೆ ಒಟ್ಟು 34,294 ಕೋಟಿ ರೂ. ಅನುದಾನ ಮೀಸಲು, ಎನ್‌ಇಪಿ ರದ್ದು, ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿರುವ ಸಾಲದ ಮೊತ್ತವನ್ನು 3ರಿಂದ 5 ಲಕ್ಷಕ್ಕೆ ಏರಿಕೆ, ನೀರಾವರಿ, ಕೈಗಾರಿಕೆ ಸೇರಿದಂತೆ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ವೈಜ್ಞಾನಿಕ ತಳಹದಿಯ ಪರಿಪೂರ್ಣ ಬಜೆಟ್ ಇದಾಗಿದೆ.

-ಡಾ.ಬಿ.ಜೆ.ವಿಜಯ್‌ಕುಮಾರ್, ಅಧ್ಯಕ್ಷ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ



ಈ ಬಾರಿಯ ಬಜೆಟ್ ಬಡವರನ್ನು ಆರ್ಥಿಕವಾಗಿ ಸಶಕ್ತಗೊಳಿಸುವ ಆಶೋತ್ತರಗಳನ್ನು ಒಳಗೊಂಡಿದೆ. ತಲಾ ಆದಾಯವನ್ನು ಹೆಚ್ಚು ಮಾಡಿ ರಾಜ್ಯದ ಆರ್ಥಿಕತೆ ಸದೃಢವಾಗಲು ಸಹಕಾರಿಯಾಗಲಿದೆ. ರೈತರು, ಮಹಿಳೆಯರು, ಮಕ್ಕಳು, ಕಾರ್ಮಿಕರು ಹಾಗೂ ನೌಕರರ ಸರ್ವತೋಮುಖ ಅಭಿವೃದ್ಧಿಗೆ ಈ ಬಜೆಟ್ ಶಕ್ತಿ ತುಂಬಲಿದೆ. ಆರೋಗ್ಯ, ಶಿಕ್ಷಣಕ್ಕೆ ವರದಾನವಾಗಲಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಹಣ ಮೀಸಲಿಡುವುದರ ಜೊತೆಗೆ ಪ್ರತಿಯೊಂದು ಇಲಾಖೆಯನ್ನು ಗಮನದಲ್ಲಿಟ್ಟುಕೊಂಡು ಹಲವಾರು ಜನಪರ ಕಾರ್ಯಕ್ರಮಗಳನ್ನು ನೀಡಲಾಗಿದೆ. ಎಂದಿನಂತೆ ಆರ್ಥಿಕ ಶಿಸ್ತಿನೊಂದಿಗೆ ಸಿದ್ದರಾಮಯ್ಯನವರು ದಾಖಲೆಯ 14ನೇ ಬಜೆಟ್ ಮಂಡಿಸಿದ್ದಾರೆ.

-ಎಂ.ಕೆ.ಸೋಮಶೇಖರ್, ಮಾಜಿ ಶಾಸಕ, ಕೃಷ್ಣರಾಜ ವಿಧಾನಸಭಾ ಕ್ಷೇತ್ರ



ಮೈಸೂರಲ್ಲಿ ಚಿತ್ರನಗರಿ ನಿರ್ಮಾಣಕ್ಕೆ ನಿರ್ಧರಿಸಿರುವುದು, ಸಾಂಸ್ಕೃತಿಕ ನಗರಿ ಮೈಸೂರಿಗೆ ಮೆರಗು ತಂದು ಕೊಡಲಿದೆ. ಸಾವಿರಾರು ಜನರಿಗೆ ಉದ್ಯೋಗವೂ ಸಿಗಲಿದೆ. ಪ್ರವಾಸೋದ್ಯಮ ಅಭಿವೃದ್ಧಿಗೆ ಸಹಕಾರಿಯಾಗುವುದರಿಂದ ಪರೋಕ್ಷವಾಗಿ ಮತ್ತಷ್ಟು ಜನರ ಜೀವನಕ್ಕೆ ನೆರವಾಗಲಿದೆ. ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ರಚನೆ ನಿರ್ಧಾರವಂತೂ ಅಭಿನಂದನೀಯ ಕ್ರಮ. ಮೈಸೂರಿನ ಬಗ್ಗೆ ಸಿದ್ದರಾಮಯ್ಯರಿಗೆ ಅಭಿಮಾನವಿದೆ. ಅವರು ಬಜೆಟ್ ಅನುದಾನ ಹೊರತಾಗಿಯೂ ಸದಾ ಸಹಕರಿಸಲಿದ್ದಾರೆ.

-ಸಂದೇಶ್ ನಾಗರಾಜ್, ವಿಧಾನ ಪರಿಷತ್ ಮಾಜಿ ಸದಸ್ಯ



ಕೈಗಾರಿಕಾ ಪಟ್ಟಣ ಪ್ರಾಧಿಕಾರ ರಚನೆ, ಮೈಸೂರಿನ ರಫ್ತು ಕೇಂದ್ರಕ್ಕೆ ಹೆಚ್ಚುವರಿ 2 ಕೋಟಿ ರೂ. ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದೆವು. ಆದರೆ ಈ ಬಗ್ಗೆ ಸಿದ್ದರಾಮಯ್ಯ ಚಕಾರ ಎತ್ತಿಲ್ಲ. ಒಟ್ಟಾರೆ ಸಿದ್ದರಾಮಯ್ಯ ಅವರು ಸಮತೋಲನ ಬಜೆಟ್ ಮಂಡಿಸಿದ್ದಾರೆ. ಆದರೆ ಇದು ಕೈಗಾರಿಕಾ ಕ್ಷೇತ್ರ ಅಭಿವೃದ್ಧಿಗೆ ಪೂರಕವಾಗಿಲ್ಲ.

-ಸುರೇಶ್ ಕುಮಾರ್ ಜೈನ್, ಪ್ರಧಾನ ಕಾರ್ಯದರ್ಶಿ, ಎಂಎಸ್‌ಎಂಇ



ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ನಗರಗಳ ಪೈಕಿ ಮೈಸೂರು 2ನೇ ಸ್ಥಾನದಲ್ಲಿರುವುದರಿಂದ, ಸರ್ಕಾರ ಈ ಸಾಲಿನ ಬಜೆಟ್‌ನಲ್ಲಿ ಬೃಹತ್ ಮೈಸೂರಿಗೆ ಆದ್ಯತೆ ನೀಡಬೇಕಿತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೂಲತಃ ಮೈಸೂರಿನವರೇ ಆಗಿರುವುದರಿಂದ ಇದಕ್ಕೆ ಒತ್ತು ನೀಡಬೇಕಿತ್ತು. ಪ್ರವಾಸೋದ್ಯಮ, ಶಿಕ್ಷಣ, ಕಲೆ, ಸಂಸ್ಕೃತಿ, ಅರಣ್ಯವನ್ನು ತುಂಬಿಕೊಂಡಿರುವ ಮೈಸೂರು ನಗರವನ್ನು ಉನ್ನತೀಕರಿಸುವ ಅಗತ್ಯತೆ ಇದೆ. ಅಲ್ಲದೇ ಮೈಸೂರು ನಗರ ನೂರಾರು ಸಂಖ್ಯೆಯಲ್ಲಿ ಪಾರಂಪರಿಕ ಕಟ್ಟಡಗಳನ್ನು ಹೊಂದಿದ್ದು, ಅವುಗಳನ್ನು ಸಂರಕ್ಷಿಸಿ ಕಾಪಾಡುವ ನಿಟ್ಟಿನಲ್ಲಿ, ಪ್ರತ್ಯೇಕ ಯೋಜನೆ ರೂಪಿಸ ಬೇಕಿತ್ತು. ನಗರದಲ್ಲಿ ಕಸ ನಿರ್ವಹಣೆಯೇ ದೊಡ್ಡ ಸವಾಲಾಗಿದೆ. ಇದಕ್ಕಾಗಿ ಪ್ರತ್ಯೇಕ ಯೋಜನೆ ರೂಪಿಸಬೇಕಿತ್ತು. ಒಟ್ಟಾರೆ ಬಜೆಟ್ ಮೈಸೂರಿಗರಿಗೆ ಬೇಸರ ತಂದಿದೆ.

-ಕೆ.ವಿ ಮಲ್ಲೇಶ್, ಮಾಜಿ ಸದಸ್ಯರು, ಮೈಸೂರು ನಗರ ಪಾಲಿಕೆ

ಕೈಗಾರಿಕೆಗೆ ಆದ್ಯತೆ ಇಲ್ಲ... ರಾಜಕೀಯ ಪ್ರೇರಿತ... ಶಿಕ್ಷಣಕ್ಕೆ ಒತ್ತಾಸೆ... ಆರ್ಥಿಕ ಬೆಳವಣಿಗೆಗೆ ಪೂರಕ...



ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿರುವ ಸಾಲ ಸೌಲಭ್ಯವನ್ನು 3ರಿಂದ 5 ಲಕ್ಷಕ್ಕೆ ಏರಿಕೆ ಮಾಡಿರುವುದು ಒಳ್ಳೆ ನಿರ್ಧಾರ. ಹಾಗೆಯೇ ರೈತರ ಕೈ ಬಲಪಡಿಸುವಂತಹ ಯೋಜನೆಗಳ ಅವಶ್ಯಕತೆ ಇದೆ. ಕೃಷಿ ಇಲಾಖೆಯಲ್ಲಿ ಸುಧಾರಣೆ ತಂದು ವ್ಯವಸಾಯ ವಿಧಾನ, ಅನುಸರಿಸಬೇಕಾದ ಕ್ರಮ, ಸರ್ಕಾರಿ ಯೋಜನೆ, ಸೌಲಭ್ಯಗಳ ಬಗ್ಗೆ ರೈತರ ಮನೆ ಬಾಗಿಲಿಗೆ ಮಾಹಿತಿ ತಲುಪುವಂತಾಗಬೇಕು. ಹುಣಸೂರು ತಾಲೂಕಲ್ಲಿ ನೀರಾವರಿ, ರಸ್ತೆ ಇನ್ನಿತರ ಮೂಲ ಸೌಕರ್ಯಗಳಿಗೆ ಆದ್ಯತೆ ನೀಡಬೇಕಿದೆ. ದಾಖಲೆಯ 14ನೇ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಭಿನಂದನೆಗಳು.

-ಜಿ.ಡಿ.ಹರೀಶ್‌ಗೌಡ, ಶಾಸಕರು, ಹುಣಸೂರು ವಿಧಾನಸಭಾ ಕ್ಷೇತ್ರ



ಮೈಸೂರು ದಸರಾ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಬೇಕೆಂಬ ಹಲವು ವರ್ಷಗಳ ಬೇಡಿಕೆಯನ್ನು ಸಿದ್ದರಾಮಯ್ಯ ಅವರು ಈಡೇರಿಸುತ್ತಾರೆ ಎಂಬ ನಿರೀಕ್ಷೆ ಹುಸಿಯಾಗಿದೆ. ಕಳೆದ 11 ವರ್ಷಗಳಿಂದ ಪಾಳು ಬಿದ್ದಿರುವ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ನವೀಕರಣ ವಿಚಾರವನ್ನೂ ಪ್ರಸ್ತಾಪಿಸಿಲ್ಲ. ಮೈಸೂರು ಮೃಗಾಲಯದ ಹಿಂಭಾಗದ ಅಂತರರಾಷ್ಟ್ರೀಯ ಅಕ್ವೇರಿಯಂ ಪೂರ್ಣಗೊಳಿಸುವ ಬಗ್ಗೆ ಏನನ್ನೂ ಹೇಳಿಲ್ಲ. ಹೊರ ರಾಜ್ಯದ ಪ್ರವಾಸಿಗರನ್ನು ಆಕರ್ಷಿಸಲು ಅಂತರರಾಜ್ಯ ವಾಹನ ತೆರಿಗೆಗೆ ರಿಯಾಯ್ತಿ ನೀಡುತ್ತಾರೆಂಬ ಭರವಸೆ ಕೂಡ ಈಡೇರಲಿಲ್ಲ. ಆದರೂ ಹಲವು ಅಭಿವೃದ್ಧಿ ಯೋಜನೆಗಳನ್ನು ಪ್ರಕಟಿಸಿರುವುದು ಸ್ವಾಗತಾರ್ಹ.

-ಸಿ.ನಾರಾಯಣ ಗೌಡ, ಅಧ್ಯಕ್ಷ ಮೈಸೂರು ಹೋಟೆಲ್ ಮಾಲೀಕರ ಸಂಘ



ಕರ್ನಾಟಕ ಭೂ ಸುಧಾರಣಾ ಕಾಯ್ದೆ ತಿದ್ದುಪಡಿ ರದ್ದು, ಅನ್ನಭಾಗ್ಯ ಯೋಜನೆಗೆ ರಾಜ್ಯದ ರೈತರಿಂದ ಅಕ್ಕಿ, ರಾಗಿ, ಜೋಳ ಖರೀದಿ, ಮೇಕೆದಾಟು ಹಾಗೂ ಕಳಸ ಬಂಡೂರಿ ಯೋಜನೆ ಬಗ್ಗೆ ಸಿದ್ದರಾಮಯ್ಯ ಅವರು ಪ್ರಸ್ತಾಪ ಮಾಡದಿರುವುದು ಬೇಸರದ ಸಂಗತಿ. ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆ, ಮೈಸೂರು ದಸರಾ ವಸ್ತು ಪ್ರದರ್ಶನ ಮೇಲ್ದರ್ಜೆಗೆ, ಫಿಲಂ ಸಿಟಿ ನಿರ್ಮಾಣ ಸೇರಿದಂತೆ ಹಲವು ಯೋಜನೆ ಘೋಷಣೆ ಮಾಡಿರುವುದು ಸ್ವಾಗತಾರ್ಹ. ಆದರೆ ಆ ಯೋಜನೆಗಳಿಗೆ ಅನುದಾನ ಘೋಷಿಸಿಲ್ಲ. ವಿಳಂಬ ಮಾಡದೆ ಅನುಷ್ಠಾನಗೊಳಿಸಬೇಕು.

-ಕುರುಬೂರು ಶಾಂತಕುಮಾರ್, ಅಧ್ಯಕ್ಷರು ರಾಜ್ಯ ಕಬ್ಬು ಬೆಳೆಗಾರರ ಸಂಘ



ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಹೆಚ್ಚು ಒತ್ತು ನೀಡಿದ್ದಾರೆ. ಇದರಿಂದ ಬೇರೆ ಕ್ಷೇತ್ರಗಳಿಗೆ ಆದ್ಯತೆ ನೀಡಿಲ್ಲ. ಆದರೂ ರೈತರಿಗೆ ಶೂನ್ಯ ದರದಲ್ಲಿ 5 ಲಕ್ಷ ರೂ. ಸಾಲ ನೀಡುತ್ತಿರುವುದು ಸ್ವಾಗತಾರ್ಹ.

-ಬಡಗಲಪುರ ನಾಗೇಂದ್ರ, ಅಧ್ಯಕ್ಷ ಕರ್ನಾಟಕ ರಾಜ್ಯ ರೈತ ಸಂಘ



ಈ ಬಜೆಟ್ ಜನಗಳ ಮೂಗಿಗೆ ತುಪ್ಪ ಸವರುವ ಕೆಲಸದಂತಿದೆ ಮುಖ್ಯಮಂತ್ರಿಗಳು ಮೈಸೂರಿನವರೇ ಆಗಿದ್ದು, ತವರು ಜಿಲ್ಲೆಗೆ ಹೇಳಿಕೊಳ್ಳುವಂಥ ಯೋಜನೆಗಳನ್ನು ಘೋಷಣೆ ಮಾಡಿಲ್ಲ. 52 ಸಾವಿರ ಕೋಟಿ ರೂ. ಮೌಲ್ಯದ ಉಚಿತ ಯೋಜನೆಗಳಿಗೆ ಖರ್ಚು ಮಾಡುತ್ತಾರೆ. ಮೈಸೂರು ಭಾಗದಲ್ಲಿ ಅಭಿವೃದ್ಧಿ ಹೊಂದದ ಅನೇಕ ಕ್ಷೇತ್ರಗಳಿದ್ದು, ಅನುದಾನ ನೀಡದೇ ಇರುವುದು ಬೇಸರ ತಂದಿದೆ. ರೈತರು ದೇಶದ ಬೆನ್ನೆಲುಬು ಎನ್ನುವ ಅವರು, ಎಂಜಿ ರಸ್ತೆಯ ಮಾರುಕಟ್ಟೆಗಳಲ್ಲಿ ಮಳೆ, ಬಿಸಿಲು ಎನ್ನದೇ ಕುಳಿತು ವ್ಯಾಪಾರ ಮಾಡುವ ರೈತರಿಗೆ ಆಶ್ರಯ ತಾಣ ನಿರ್ಮಿಸಲಾಗಲಿಲ್ಲ. ಯೋಜನೆಗಳನ್ನು ಘೋಷಣೆ ಮಾಡುವುದು ಮುಖ್ಯವಲ್ಲ, ಅದನ್ನು ಅನುಷ್ಠಾನಕ್ಕೆ ತರುವುದು ಮುಖ್ಯ.

-ಡಾ.ಜಿ.ಶಿವಣ್ಣ, ಹಿರಿಯ ವಕೀಲರು



ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಜಿಲ್ಲೆಗಳ ಕೈಗಾರಿಕಾ ರಫ್ತು ಉತ್ಪನ್ನಗಳನ್ನು ಈಗಲೂ ಕೂಡ ಚೆನ್ನೈ ಬಂದರಿಗೆ ಕಳುಹಿಸಬೇಕು. ಈ ನಿಟ್ಟಿನಲ್ಲಿ ಮೈಸೂರು–ಮಂಗಳೂರು ಕೈಗಾರಿಕಾ ಕಾರಿಡಾರ್ ಸ್ಥಾಪನೆ ಮಾಡಬೇಕೆಂಬ ಬಹಳ ವರ್ಷಗಳ ಬೇಡಿಕೆ ಈಡೇರಿಸಿಲ್ಲ. ಮೈಸೂರು ನಗರಕ್ಕೆ ಬರುವ ಪ್ರವಾಸಿಗರಿಗೆ ಅನುಕೂಲ ಆಗುವಂತೆ ಬಹುಮಹಡಿ ವಾಹನ ನಿಲ್ದಾಣ ನಿರ್ಮಾಣ ಮಾಡುವ ಬೇಡಿಕೆ ಕೂಡ ಈಡೇರಿಲ್ಲ. ಆದರೆ ಒಟ್ಟಾರೆಯಾಗಿ ಬಜೆಟ್ ಆಶಾದಾಯಕವಾಗಿದೆ.

-ಕೆ.ಜಿ.ಲಿಂಗರಾಜು, ಅಧ್ಯಕ್ಷ ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ

ಸಾರ್ವಜನಿಕ ತಿಳುವಳಿಕೆ ಪತ್ರ ದಿನಾಂಕ: 07/07/2023

ನಮ್ಮ ಕಕ್ಷಿದಾರರಾದ ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ಚಿಕ್ಕಯ್ಯನಛತ್ರ ಹೋಬಳಿ, ಅಡಕನಹಳ್ಳಿಯಲ್ಲಿ ವಾಸವಾಗಿರುವ ಸುಮಾರು 86 ವರ್ಷ ವಯಸ್ಸುಳ್ಳ, ಶ್ರೀಯುತ ಸಿದ್ದಶೆಟ್ಟಿ ಉ॥ ನೀಲಸಿದ್ದಶೆಟ್ಟಿ ಬಿನ್ ಲೇ॥ ಪುಟ್ಟಶೆಟ್ಟಿ ಉ॥ ಪುಟ್ಟ ಮತ್ತು ಲೇ॥ ಶ್ರೀಮತಿ ಸಿದ್ದಮ್ಮ ರವರ ಇರಾದೆಯ ಮೇರೆಗೆ ನಾವು ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ.

1) ನಮ್ಮ ಕಕ್ಷಿದಾರರು, ಅವರ ಸಹೋದರ, ಸಹೋದರಿಯರ, ಮೃತ ಸಹೋದರಿ ಮತ್ತು ಮೃತ ಸಹೋದರನ ಕಾನೂನುಬದ್ಧ ವಾರಸುದಾರರ ಮೇಲೆ (ಶ್ರೀಮತಿ ಮರಮ್ಮ–ಪ್ರಸ್ತುತ ಮೃತರು, ಶಂಭುಶೆಟ್ಟಿ ಮತ್ತು ಇತರ ಆರು ಜನರು, ವಿಶೇಷ ಭೂ ಸ್ವಾಧೀನಾಧಿಕಾರಿ, ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಮಂಡಳ ರವರನ್ನೊಳಗೊಂಡಂತೆ) ಅವರ ಒಟ್ಟು ಕುಟುಂಬದ ಪಿತ್ರಾರ್ಜಿತ ಸ್ವತ್ತುಗಳಲ್ಲಿ ಭಾಗಾಂಶ, ಪ್ರತ್ಯೇಕ ಸ್ವಾಧೀನ ಮತ್ತು ಇನ್ನಿತರ ಪರಿಹಾರಗಳನ್ನು ಕೋರಿ ನಂಜನಗೂಡಿನ ಗೌರವಾನ್ವಿತ ಸಿವಿಲ್ ನ್ಯಾಯಾಧೀಶರ (ಹಿ.ವಿ) ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯದಲ್ಲಿ ದಾವೆಹೂಡಿದ್ದು, ಅಸಲು ದಾವಾ ಸಂಖ್ಯೆ 8/2015 ಆಗಿದ್ದು, ಹಾಲಿ ಚಾಲ್ತಿಯಲ್ಲಿರುತ್ತದೆ, ಸದರಿ ಅಸಲು ದಾವಾ ಸಂಖ್ಯೆ 8/2015 ರಲ್ಲಿ ಈ ತಿಳುವಳಿಕೆ ಪತ್ರದ ಷೆಡ್ಯೂಲ್ ಸ್ವತ್ತು 'ಬಿ' ಷೆಡ್ಯೂಲ್ ಸ್ವತ್ತಾಗಿರುತ್ತದೆ. ವಸ್ತುಸ್ಥಿತಿ ಹೀಗಿದ್ದರು ಸದರಿ ಅಸಲು ದಾವಾ ಸಂಖ್ಯೆ 8/2015 ರಲ್ಲಿನ ಮೆಲ್ಕಂಡ ಪ್ರತಿವಾದಿಗಳು ಪರಸ್ಪರ ಶಾಮೀಲಾಗಿ ನಮ್ಮ ಕಕ್ಷೀದಾರರಿಗೆ ಮೋಸಮಾಡುವ ಈ ಮೂಲಕ ಅನ್ಯಥಾ ಫಾಯಿದೆ ಹೊಂದುವ ಏಕೈಕ ದುರುದ್ದೇಶದಿಂದ ಷೆಡ್ಯೂಲ್ ಸ್ವತ್ತನ್ನು ಪರಭಾರೆ ಮಾಡುವ ತೀವ್ರ ಪ್ರಯತ್ನದಲ್ಲಿರುತ್ತಾರೆಂಬ ವಿಚಾರವು ದಿನಾಂಕ 06.07. 2023 ರಂದು ನಮ್ಮ ಕಕ್ಷಿದಾರರ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ, ನಾವು ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ಅಸಲು ದಾವಾ ಸಂಖ್ಯೆ 8/2015 ರ ಮತ್ತು ಮೇಲ್ಕಂಡ ವಸ್ತುವಿಷಯದ ಉಪಸ್ಥಿತಿಯಲ್ಲಿ ಸಾರ್ವಜನಿಕರ್ಯಾರೂ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಮೇಲ್ಕಂಡ ಅಸಲು ದಾವಾ ಸಂಖ್ಯೆ 8/2015 ರ ಪ್ರತಿವಾದಿಗಳಾದ ಶಂಭುಶೆಟ್ಟಿ, ರಾಚಶೆಟ್ಟ, ಶ್ರೀಮತಿ ದೇವಮ್ಮ, ಸಿದ್ದಶೆಟ್ಟ ಮತ್ತು ಶ್ರೀಮತಿ ಲಕ್ಷ್ಮಮ್ಮರವರೊಂದಿಗಾಗಲಿ ಅಥವಾ ಬೇರೆ ಯಾವುದೇ ವ್ಯಕ್ತಿಗಳೊಂದಿಗಾಗಲಿ ಯಾವುದೇ ರೀತಿಯಿಂದಲೂ ವ್ಯವಹರಿಸಬಾರದೆಂದು, ವ್ಯವಹರಿಸಿದಲ್ಲಿ ಸದರಿ ವ್ಯವಹಾರವು ಕಾನೂನಿನನ್ವಯ ಅಸಿಂಧುವಾಗುವುದಲ್ಲದೆ ಸದರಿ ವ್ಯವಹಾರವು ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ನಮ್ಮ ಕಕ್ಷಿದಾರರನ್ನು ಯಾವುದೇ ರೀತಿಯಿಂದಲೂ ಬದ್ಧಪಡಿಸುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತಿನ ಮೇಲೆ ನಮ್ಮ ಕಕ್ಷಿದಾರರ ಹಕ್ಕಿಗೆ ಯಾವುದೇ ರೀತಿಯಿಂದಲೂ ಚ್ಯುತಿಯುಂಟಾಗುವುದಿಲ್ಲವೆಂದು, ಮುಂದುವರೆದು ಸದರಿ ವ್ಯವಹಾರದಿಂದ ಮುಂದೆ ಉದ್ಭವಿಸುವ ಸಕಲ ರೀತಿಯ ಖರ್ಚುಗಳಿಗೆ ಮೇಲ್ಕಂಡರವರೊಂದಿಗೆ ವ್ಯವಹರಿಸಿದವರೇ ಸಂಪೂರ್ಣವಾಗಿ ಬಾಧ್ಯರಾಗಿರುತ್ತಾರೆಂದು ತಿಳಿಯತಕ್ಕದ್ದು.

ಷೆಡ್ಯೂಲ್: ನಂಜನಗೂಡು ತಾಲ್ಲೂಕು, ಚಿಕ್ಕಯ್ಯನಛತ್ರ ಹೋಬಳಿ, ಅಡಕನಹಳ್ಳಿಯ ಸರ್ವೆ ನಂ. 200/ಪಿ7 ರಲ್ಲಿನ 3 ಎಕರೆ ಜಮೀನಿಗೆ ಚೆಕ್ಕುಬಂದಿ: ಪೂರ್ವಕ್ಕೆ ಸರ್ಕಾರಿ ರಸ್ತೆ, ಪಶ್ಚಿಮಕ್ಕೆ: ಶ್ರೀಮತಿ ಪಾರ್ವತಮ್ಮ ಕೋಂ ಲೇ॥ ರಾಜಪ್ಪನವರ ಜಮೀನು, ಉತ್ತರಕ್ಕೆ: ಮೂಗೇಗೌಡರ ಜಮೀನು, ದಕ್ಷಿಣಕ್ಕೆ: ಮಹದೇವಪ್ಪ ಬಿನ್, ಸಿದ್ದಪ್ಪನವರ ಜಮೀನು.

ಸಹಿ/– ಎಂ.ಸಿ.ದಿಲೀಪ್ ಕುಮಾರ್, ಬಿ.ಕಾಂ., ಎಲ್‌ಎಲ್‌ಬಿ., ವಕೀಲರು, ವಿಜಯಶ್ರೀ ಲಾ ಅಸೋಸಿಯೇಟ್ಸ್
ನಂ, ಕೆ–8/1, ಮತ್ತು ಕೆ–8/1ಎ, 2ನೇ ಮಹಡಿ, ವಾಣಿ ವಿಲಾಸ ರಸ್ತೆ ಮುಖ್ಯ ರಸ್ತೆ, ಕೆ.ಆರ್.ಮೊಹಲ್ಲಾ ಮೈಸೂರು – 570024

ಸಹಿ/– ಕಕ್ಷಿದಾರರು

ಗಂಡ-ಹೆಂಡತಿ ಗಲಾಟೆ: ಪತ್ನಿ ಹತ್ಯೆಯಲ್ಲಿ ಅಂತ್ಯ

ಪಾಂಡವಪುರ, ಜು.7- ಕ್ಷುಲ್ಲಕ ಕಾರಣಕ್ಕೆ ಗಂಡ-ಹೆಂಡತಿ ನಡುವೆ ಆರಂಭವಾದ ಜಗಳ ಪತ್ನಿ ಹತ್ಯೆಯಲ್ಲಿ ಅಂತ್ಯಗೊಂಡ ಘಟನೆ ತಾಲೂಕಿನ ಡಿಂಕಾ ಗ್ರಾಮದ ಹೊರವಲಯದ ಬೋರೆಯ ಬಳಿ ಗುರುವಾರ ರಾತ್ರಿ ನಡೆದಿದೆ.

ತಾಲೂಕಿನ ರಾಗಿಮುದ್ದನಹಳ್ಳಿ ಗ್ರಾಮದ ನಿವಾಸಿ ಗೌತಮ್ ಪತ್ನಿ ವರ್ಷಿತಾ (20) ಹತ್ಯೆಯಿಂದ ಹತ್ಯೆಗೊಳಗಾದವಳು. ಮೂಲತಃ ರಾಗಿಮುದ್ದನಹಳ್ಳಿ ಗ್ರಾಮದ ನಿವಾಸಿಗಳಾದ ಗೌತಮ್ ಮತ್ತು ವರ್ಷಿತಾ ಡಿಂಕಾ ಗ್ರಾಮದ ಹೊರವಲಯದ ಬೋರೆ ಬಳಿ ವಾಸವಾಗಿದ್ದರು. ಗುರುವಾರ ರಾತ್ರಿ ಇವರಿಬ್ಬರ ನಡುವೆ ಹೊಸ ಮನೆ ನಿರ್ಮಾಣ ಮಾಡುವ ಸಂಬಂಧ ಮಾತಿಗೆ ಮಾತು ಬೆಳೆದು ಜಗಳ ಆರಂಭಗೊಂಡಿದೆ. ಈ ವೇಳೆ ಕೋಪಗೊಂಡ ಗೌತಮ್ ಪತ್ನಿ ವರ್ಷಿತಾಳನ್ನು ಜೋರಾಗಿ ತಳ್ಳಿದಾಗ ತಲೆ ಗೋಡೆಗೆ ಒಡೆದು ವರ್ಷಿತಾ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕೆಆರ್‌ಎಸ್ ಪೊಲೀಸರು ಪರಿಶೀಲಿಸಿ, ಮೃತದೇಹವನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದ್ದಾರೆ. ಆರೋಪಿ ಗೌತಮ್ ಪರಾರಿಯಾಗಿದ್ದು, ಆತನಿಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ. ಈ ಸಂಬಂಧ ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಳೆ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

ಮಂಡ್ಯ, ಜು.7- ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಜು.9 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಬೆಳಗ್ಗೆ 9 ಗಂಟೆಗೆ ಮದ್ದೂರು ತಾಲೂಕಿನ ಕೊಪ್ಪ ಹೋಬಳಿ ಅಬಲವಾಡಿ ದೇವಸ್ಥಾನಕ್ಕೆ ಭೇಟಿ ನೀಡುವರು. ಬೆಳಗ್ಗೆ 10 ಗಂಟೆಗೆ ನೂತನ ಹೊನ್ನಸಿರಿ ವಿಥಲ್ ಎಲೆಕ್ಟ್ರಿಕಲ್ ಸ್ಕೇಟರ್‌ಗಳ ಮಾರಾಟ ಮಳಿಗೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ನಂತರ ಬೆಳಗ್ಗೆ 10.30ಕ್ಕೆ ಮದ್ದೂರು, ಚನ್ನಪಟ್ಟಣ, ರಾಮನಗರ, ಬಿಡದಿ ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ತಲುಪುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಕ್ಕರೆ ನಾಡಿಗೆ ಬಜೆಟ್‌ನಲ್ಲಿ 'ಶುಗರ್' ಬಿಟ್ಟರೆ ಬೇರೇನಿಲ್ಲ!



ಮಂಡ್ಯ, ಜು.7- ನೂತನ ಸರ್ಕಾರದ ಮೊದಲ ಬಜೆಟ್ ಮಂಡಿಸಿದ ಹಣಕಾಸು ಸಚಿವರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡ್ಯ ಜಿಲ್ಲೆ ಜನರನ್ನು ನಿರಾಶೆಗೊಳಿಸಿದ್ದು, ಈ ಬಾರಿಯ ಬಜೆಟ್‌ನಲ್ಲಿ ಜಿಲ್ಲೆಗೆ ಯಾವುದೇ ಕೊಡುಗೆ ಸಿಕ್ಕಿಲ್ಲ.

ಕಳೆದ ಕೆಲ ದಿನಗಳ ಹಿಂದೆ ಮೈಷುಗರ್ ಸಕ್ಕರೆ ಕಾರ್ಖಾನೆಗೆ 50 ಕೋಟಿ ಬಿಡುಗಡೆ ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಆ ವಿಚಾರವನ್ನು ಬಜೆಟ್ ಮಂಡನೆ ವೇಳೆ ಪುನರ್ ಉಚ್ಚರಿಸಿದ್ದನ್ನು ಬಿಟ್ಟರೆ ಜಿಲ್ಲೆಯ ನಿರೀಕ್ಷೆಗೆ ತಕ್ಕಂತೆ ಯಾವ ಘೋಷಣೆಯನ್ನೂ ಮಾಡಲಿಲ್ಲ.

ನಿರೀಕ್ಷೆ ಏನಿತ್ತು: ಪ್ರಸ್ತುತ ರಾಜ್ಯ ಬಜೆಟ್‌ನಲ್ಲಿ ಮೈಷುಗರ್ ಸಕ್ಕರೆ ಕಾರ್ಖಾನೆಗೆ 50 ಕೋಟಿ ಅಲ್ಲದೇ ಹೆಚ್ಚಿನ ಹಣದ ನಿರೀಕ್ಷೆಯನ್ನು ಮೈಷುಗರ್ ಆಡಳಿತ ಮಂಡಳಿ, ಕಬ್ಬು ಬೆಳೆಗಾರರು ಹಾಗೂ ಹೋರಾಟಗಾರರು ಮಾಡಿದ್ದರು. ಆದರೆ ರಾಜ್ಯ ಸರ್ಕಾರ ಮೈಷುಗರ್‌ಗೆ ಯಾವುದೇ ಹೆಚ್ಚಿನ ಹಣ ಬಿಡುಗಡೆ ಮಾಡಿಲ್ಲ.

ಅಲ್ಲದೇ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಮಂಡ್ಯ ತಾಲೂಕಿನ ವಿ.ಸಿ.ಫಾರಂನಲ್ಲಿರುವ ಕೃಷಿ ಸಂಶೋಧನಾ ಶಿಕ್ಷಣ ಸಂಸ್ಥೆಯನ್ನು ಪ್ರತ್ಯೇಕ ವಿವಿಯಾಗಿ ಘೋಷಿಸುವ ಬಗ್ಗೆ ಬಹಳ ದಿನಗಳಿಂದ ಬೇಡಿಕೆ ಇತ್ತು. ಈ ಬಗ್ಗೆ ಕೃಷಿ ಸಚಿವ ಚಲುವರಾಯಸ್ವಾಮಿ ಸಹ ಪ್ರತ್ಯೇಕ ವಿವಿ ಘೋಷಣೆ ಬಗ್ಗೆ ಸಿಎಂ ಬಳಿ ಮಾತನಾಡುವುದಾಗಿ ಹೇಳಿದ್ದರು. ಆದರೆ ಈ ಭರವಸೆಯೂ ಸಹ ಹುಸಿಗೊಂಡಿದೆ.

ಮಂಡ್ಯ ವಿಶ್ವವಿದ್ಯಾನಿಲಯವನ್ನು ಮತ್ತಷ್ಟು ಮೇಲ್ದರ್ಜೆಗೇರಿಸುವ ನಿಟ್ಟಿನಲ್ಲಿ ಬಜೆಟ್‌ನಲ್ಲಿ ಹಣ ಮಂಜೂರು ಮಾಡುವ ಭರವಸೆಯನ್ನು ಹೊಂದಲಾಗಿತ್ತು. ಇದು ಸಹ ಹುಸಿಯಾಗಿದೆ.

ಮಂಡ್ಯ ನಗರದ ಅಭಿವೃದ್ಧಿಗಾಗಿ ಹೆಚ್.ಡಿ.ಕುಮಾರಸ್ವಾಮಿ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಬಿಡುಗಡೆಯಾಗಿದ್ದ 50 ಕೋಟಿ ಹಣ ವಾಪಸ್ ಹೋಗಿತ್ತು. ಆ ಹಣವು ಈ ಸರ್ಕಾರದಲ್ಲಿ ಬಿಡುಗಡೆಯಾಗಬಹುದೆಂಬ ನಿರೀಕ್ಷೆ ಇತ್ತಾದರೂ ಅದು ಈಡೇರಿಲ್ಲ. ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಈ ಹಿಂದಿನ ಕುಮಾರಸ್ವಾಮಿ ಸರ್ಕಾರದಲ್ಲಿ ಬಿಡುಗಡೆ ಮಾಡುತ್ತೇವೆ ಎಂದಿದ್ದ 8 ಸಾವಿರ ಕೋಟಿ ಹಣ ಕೇವಲ ಭರವಸೆಯಾಗಿಯೇ ಉಳಿದಿತ್ತು. ಆ ಹಣವು ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಬಿಡುಗಡೆ ನಿರೀಕ್ಷೆ ಇತ್ತಾದರೂ ಅದು ನಿರೀಕ್ಷೆಯಾಗಿಯೇ ಉಳಿದಿದೆ. ಅಲ್ಲದೇ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಮುಂದಾಗಬಹುದೆಂಬ ನಿರೀಕ್ಷೆಯೂ ಹುಸಿಯಾಗಿದೆ.

ಚಿನಕುರಳಿ ಡೈರಿಗೆ ರಮೇಶ್ ಉಪಾಧ್ಯಕ್ಷ



ಚಿನಕುರಳಿ, ಜು.7- ಚಿನಕುರಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಉಪಾಧ್ಯಕ್ಷರಾಗಿ ಸಿ.ಎಸ್.ರಮೇಶ್ ಶುಕ್ರವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಈ ಹಿಂದಿನ ಉಪಾಧ್ಯಕ್ಷ ರಾಮಕೃಷ್ಣೇಗೌಡರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಶುಕ್ರವಾರ ಚುನಾವಣೆ ನಿಗದಿಯಾಗಿತ್ತು. ಅದರಂತೆ ಉಪಾಧ್ಯಕ್ಷ ಸ್ಥಾನಕ್ಕೆ ಸಿ.ಎಸ್.ರಮೇಶ್ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮ ಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಪಾರ್ವತಮ್ಮ ಘೋಷಿಸಿದರು.

ನೂತನ ಉಪಾಧ್ಯಕ್ಷ ಸಿ.ಎಸ್.ರಮೇಶ್ ಅವರನ್ನು ಡೇರಿಯ ಎಲ್ಲಾ ನಿರ್ದೇಶಕರು, ಮುಖಂಡರು ಅಭಿನಂದಿಸಿದರು. ಈ ವೇಳೆ ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಲಾರಿ ಮಾಲೀಕರ ಸಂಘದ ಅಧ್ಯಕ್ಷ ಸಿ.ಶಿವಕುಮಾರ್, ತಾಪಂ ಮಾಜಿ ಸದಸ್ಯ ಸಿ.ಎಸ್.ಗೋಪಾಲಗೌಡ, ಡೇರಿ ಸಿ.ಎಂ.ರಮೇಶ್, ಗ್ರಾಪಂ ಅಧ್ಯಕ್ಷ ಪುಟ್ಟಸ್ವಾಮಿ(ಪಾಪಣ್ಣ), ಉಪಾಧ್ಯಕ್ಷೆ ಮಂಜುಳ ಮಹದೇವ್, ವಿಎಸ್‌ಎಸ್‌ಎನ್‌ಬಿ ಅಧ್ಯಕ್ಷ ಮೋಣ್ಣಗೌಡ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಸಿ.ಪ್ರಕಾಶ್, ಗ್ರಾಪಂ ಸದಸ್ಯರಾದ ಸಿ.ಎಲ್.ಲೋಕೇಶ್, ಕೃಷ್ಣೇಗೌಡ, ವಿಎಸ್‌ಎಸ್‌ಎನ್‌ಬಿ ನಿರ್ದೇಶಕ ಮಂಜುನಾಥ್, ಡೇರಿ ನಿರ್ದೇಶಕರಾದ ವರದರಾಜು, ಪುಟ್ಟೇಗೌಡ, ಹೊನ್ನರಾಜು, ಸಿ.ಎಸ್.ಲೋಕೇಶ, ವಿಷಕಂಠೇಗೌಡ, ನಾಗರಾಜು, ರಾಮಕೃಷ್ಣೇಗೌಡ, ಸವಿತ, ಗೀತಾ, ಗಾಯತ್ರಿ, ಪ್ರಭಾರ ಕಾರ್ಯದರ್ಶಿ ಸಿ.ಕೆ.ಲೋಕೇಶ್ ಸೇರಿದಂತೆ ಹಲವರಿದ್ದರು.

ಜು.10ಕ್ಕೆ, ಡಾ.ಜಿ.ಮಾದೇಗೌಡ ಪ್ರತಿಷ್ಠಾನದಿಂದ ಪ್ರಶಸ್ತಿ ಪ್ರದಾನ



ಭಾರತೀನಗರ, ಜು.7- ಡಾ.ಜಿ.ಮಾದೇಗೌಡರ 95ನೇ ಹುಟ್ಟುಹಬ್ಬದ ಅಂಗವಾಗಿ ಡಾ.ಜಿ.ಮಾದೇಗೌಡ ಪ್ರತಿಷ್ಠಾನದಿಂದ 23ನೇ ವರ್ಷದ ರಾಜ್ಯ ಮಟ್ಟದ ಡಾ.ಜಿ.ಮಾದೇಗೌಡ ಸಮಾಜ ಸೇವಾ ಮತ್ತು ಸಾವಯವ ಕೃಷಿಕ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಭಾರತಿ ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿ ಬಿ.ಎಂ.ನಂಜೇಗೌಡ ತಿಳಿಸಿದರು.

ಭಾರತೀನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಡ್ಯದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಜು.10 ರಂದು ಸಂಜೆ 5 ಗಂಟೆಗೆ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ಅಲ್ಲದೇ ಅಂದು ಬೆಳಗ್ಗೆ 9 ಗಂಟೆಗೆ ಭಾರತಿ ಕಾಲೇಜಿನಲ್ಲಿ ಬೃಹತ್ ರಕ್ತದಾನ ಶಿಬಿರ, ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಣ್ಣುಹಂಪಲು ವಿತರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆಯುವ ಸಮಾರಂಭದ ಅಧ್ಯಕ್ಷತೆಯನ್ನು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ವಹಿಸಲಿದ್ದಾರೆ. ಮಾಜಿ ಸಭಾಪತಿ ಹಾಗೂ ಕರ್ನಾಟಕ ಚಿತ್ರಕಲಾ ಪರಿಷತ್ ಅಧ್ಯಕ್ಷ ಡಾ.ಬಿ.ಎಲ್.ಶಂಕರ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಶಾಸಕ ಗಣಿಗ ರವಿಕುಮಾರ್ ಭಾಗವಹಿಸಲಿದ್ದಾರೆ. ಸಮಾಜ ಸೇವಾ ಪ್ರಶಸ್ತಿಗೆ ಪಶುವೈದ್ಯ ಡಾ.ಕೆ.ಎಸ್.ಜಯರಾಮು, ಸಾವಯವ ಕೃಷಿ ಪ್ರಶಸ್ತಿಗೆ ತಾಲೂಕಿನ ಕೆ.ಬಸವನಹಳ್ಳಿ ಕುಳ್ಳೇಗೌಡ ಭಾಜನರಾಗಿದ್ದಾರೆ. ಮಹಾತ್ಮ ಗಾಂಧಿ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯ ಮಧು ಜಿ.ಮಾದೇಗೌಡರ ನೇತೃತ್ವದಲ್ಲಿ ಈ ಕಾರ್ಯಕ್ರಮ ಜರುಗಲಿವೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ವಿವಿಧ ಅಂಗ ಸಂಸ್ಥೆಯ ಪ್ರಾಂಶುಪಾಲರಾದ ಡಾ.ಪಿ. ನಾಗೇಂದ್ರ, ನಾಗಮಾದಯ್ಯ, ಸಿ.ವಿ.ಮಲ್ಲಿಕಾರ್ಜುನ, ಎಚ್.ಪಿ.ಪ್ರತಿಮಾ, ಜಿ.ಕೃಷ್ಣ, ಸುರೇಶ್, ಜಗದೀಶ್, ಚಂದನ್ ಸೇರಿದಂತೆ ಇತರರಿದ್ದರು.

ನಿರಾಶ್ರಿತರಿಗೆ ಹಕ್ಕುಪತ್ರ ವಿತರಣೆಗೆ ಒತ್ತಾಯ

ಮಂಡ್ಯ, ಜು.7- ಜಿಲ್ಲೆಯ ಸ್ಲಂ ನಿವಾಸಿಗಳು, ನಿರಾಶ್ರಿತರಿಗೆ ಸರ್ಕಾರ ಹಾಗೂ ಸ್ಥಳೀಯ ಶಾಸಕರು ಶೀಘ್ರ ಹಕ್ಕುಪತ್ರ ವಿತರಿಸಬೇಕು ಎಂದು ಮುಡಾ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಅಸಾದುಲ್ಲಾ ಖಾನ್ ಮನವಿ ಮಾಡಿದ್ದಾರೆ.



ಈ ಸಂಬಂಧ ಹೇಳಿಕೆ ನೀಡಿರುವ ಅವರು, ಕಳೆದ ಹಲವು ವರ್ಷಗಳಿಂದ ಜನರಿಗೆ ಹಕ್ಕುಪತ್ರ ವಿತರಣೆ ಮಾಡುವಲ್ಲಿ ಹಿಂದಿನ ಸರ್ಕಾರಗಳು ವಿಫಲವಾಗಿದ್ದು, ಪ್ರಸ್ತುತ ಕಾಂಗ್ರೆಸ್ ಸರ್ಕಾರ ಹಕ್ಕುಪತ್ರ ವಿತರಿಸುತ್ತದೆ ಎಂಬ ಭರವಸೆ ನಮಗಿದ್ದು, ಈ ಕೆಲಸ ಶೀಘ್ರವಾಗಿ ಆಗಬೇಕೆಂದು ಒತ್ತಾಯಿಸಿದ್ದಾರೆ.

ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಹಾಗೂ ಅಂಬರೀಶ್ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಹಕ್ಕುಪತ್ರ ವಿತರಣೆಯಾಗಿದ್ದು ಬಿಟ್ಟರೆ, ಈ ಕೆಲಸ ಮಂಡ್ಯ ನಗರದಲ್ಲಿ ಆಗಿಲ್ಲ. ಈ ಹಿಂದೆ ಕುಮಾರಸ್ವಾಮಿ ಸರ್ಕಾರಕ್ಕೂ ಹಲವು ಬಾರಿ ಮನವಿ ಮಾಡಿದ್ದರೂ, ಕೆಲಸ ಆಗಿಲ್ಲ. ಈ ನಿಟ್ಟಿನಲ್ಲಿ ಬಡವರಿಗೆ ಮನೆ ಸಿಗುವಂತಾಗಬೇಕೆಂದು ಮನವಿ ಮಾಡಿದ್ದಾರೆ.

ಲಿಂಗಾಪುರದಲ್ಲಿ ಎನ್‌ಎಸ್‌ಎಸ್ ಶಿಬಿರದ ಸಮಾರೋಪ



ಚಿನಕುರಳಿ, ಜು.7- ಇಲ್ಲಿಗೆ ಸಮೀಪದ ಲಿಂಗಾಪುರದಲ್ಲಿ ಎಸ್‌ಟಿಜಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ಶಿಬಿರದ ಸಮಾರೋಪ ಸಮಾರಂಭ ನಡೆಯಿತು.

7 ದಿನ ನಡೆದ ಶಿಬಿರದಲ್ಲಿ ವಿದ್ಯಾರ್ಥಿಗಳು ಗ್ರಾಮಸ್ಥರಿಗೆ ಗ್ರಾಮದ ಸ್ವಚ್ಛತೆ, ನೈರ್ಮಲ್ಯ, ಪರಿಸರ ಬಗ್ಗೆ ಅರಿವು ಮೂಡಿಸಿದರಲ್ಲದೇ ವಿಶೇಷವಾಗಿ ಗ್ರಾಮದಲ್ಲಿ ಅವಿದ್ಯಾವಂತ ಮಹಿಳೆಯರು, ಪುರುಷರಿಗೆ ಅಕ್ಷರಾಭ್ಯಾಸ ಮಾಡಿಸಿ, ಅವರು ತಮ್ಮ ಹೆಸರು ಬರೆಯುವಂತೆ ಅಕ್ಷರ ಕಲಿಸಿಕೊಡುವ ಮೂಲಕ ಅರಿವು ಮೂಡಿಸಿದರು.

ಎಸ್‌ಟಿಜಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ನಿಶಾಂತ್ ಎ.ನಾಯ್ಡು ಮಾತನಾಡಿ, ಗ್ರಾಮದಲ್ಲಿ ನಡೆದ ಎನ್‌ಎಸ್‌ಎಸ್ ಶಿಬಿರ ನನಗೆ ತೃಪ್ತಿಕೊಟ್ಟಿದೆ. ಶಿಬಿರದಲ್ಲಿ ಭಾಗವಹಿಸಿದ ಎಲ್ಲಾ ಶಿಬಿರಾರ್ಥಿಗಳು ಉತ್ತಮವಾಗಿ ಸೇವೆ ಸಲ್ಲಿಸಿದ್ದೀರಾ. ಅದರಲ್ಲೂ ಶಿಬಿರದ ಮೂಲಕ ಲಿಂಗಾಪುರದ ಅವಿದ್ಯಾವಂತರಿಗೆ ಅಕ್ಷರಾಭ್ಯಾಸ ಮಾಡಿಸಿ ಅವರಿಗೆ ಹೆಸರು ಬರೆಯುವುದನ್ನು ಕಲಿಸಿಕೊಟ್ಟ ಎಲ್ಲಾ ವಿದ್ಯಾರ್ಥಿಗಳಿಗೂ ಧನ್ಯವಾದ ಅರ್ಪಿಸುತ್ತೇನೆ. ಜಗತ್ತಿನಲ್ಲಿ ಕದಿಯಲಾಗದ ಆಸ್ತಿ ಎಂದರೆ ಅದು ವಿದ್ಯೆ. ಹಾಗಾಗಿ ಪ್ರತಿಯೊಬ್ಬರು ವಿದ್ಯೆ ಕಲಿಯಬೇಕು, ವಿದ್ಯಾವಂತ ಯುವಕ ಯುವತಿಯರು ತಮ್ಮೂರಿನ ಅವಿದ್ಯಾವಂತರಿಗೆ ಅಕ್ಷರಾಭ್ಯಾಸ ಮಾಡಿಸುವ ಕೆಲಸ ಮಾಡಿಸಬೇಕು ಎಂದು ಸಲಹೆ ನೀಡಿದರು.

ಮಹಾತ್ಮ ಗಾಂಧೀಜಿ ಕಂಡ ಸ್ವಚ್ಛ ಭಾರತ ನಿರ್ಮಾಣದ ಕನಸನ್ನು ನನಸು ಮಾಡಲು ಎನ್‌ಎಸ್‌ಎಸ್ ಶಿಬಿರಗಳು ನಾಂದಿಯಾಗಿವೆ. ಸ್ವಾಮಿ ವಿವೇಕಾನಂದರು ನನಗೆ ಸಾವಿರ ಯುವಕರನ್ನು ಕೊಡಿ ನಾನು ದೇಶವನ್ನು ಅಭಿವೃದ್ಧಿ ಮಾಡಿ ತೋರಿಸುತ್ತೇನೆ ಎಂದು ಹೇಳಿದ್ದರು. ಅವರ ಮಾತಿನಂತೆ ದೇಶ ಅಭಿವೃದ್ಧಿ ಹೊಂದಲು ಯುವಕರಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಗ್ರಾಪಂ ಅಧ್ಯಕ್ಷ ಪುಟ್ಟಸ್ವಾಮಿ(ಪಾಪಣ್ಣ) ಮಾತನಾಡಿ, ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಎನ್‌ಎಸ್‌ಎಸ್ ಶಿಬಿರ ಸಹಕಾರಿ. ಶಿಬಿರದ ಮೂಲಕ ವಿದ್ಯಾರ್ಥಿಗಳು ಗ್ರಾಮೀಣ ಜನರ ಬದುಕನ್ನು ಬಹಳ ಹತ್ತಿರದಿಂದ ನೋಡಿದ್ದಾರೆ. ಶಿಬಿರದಲ್ಲಿ ಕಲಿತುಕೊಂಡ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದುವರಿಯಬೇಕು ಎಂದರು. ಈ ವೇಳೆ ಶಿಬಿರದಲ್ಲಿ ನಡೆದ ಹಲವು ಕ್ರೀಡಾಕೂಟಗಳಲ್ಲಿ ಪಾಲ್ಗೊಂಡು ವಿಜೇತರಾದ ಲಿಂಗಾಪುರದ ಪುರುಷರು ಹಾಗೂ ಮಹಿಳೆಯರು ಮತ್ತು ಶಿಬಿರಾರ್ಥಿಗಳನ್ನು ಅಭಿನಂದಿಸಲಾಯಿತು. ಶಿಬಿರದಲ್ಲಿ ಉತ್ತಮ ಶಿಬಿರಾರ್ಥಿಗಳಾಗಿ ಹೆಚ್.ಕೆ. ಮನೋಜ್ ಹಾಗೂ ಕೃಪ ಅವರನ್ನು ಆಯ್ಕೆ ಮಾಡಿ ಬಹುಮಾನ ನೀಡಲಾಯಿತು.

ಸಮಾರಂಭದಲ್ಲಿ ಗ್ರಾಪಂ ಉಪಾಧ್ಯಕ್ಷೆ ಮಂಜುಳ, ಸದಸ್ಯರಾದ ಸುಮಾರಾಣಿ, ಪರಮೇಶ್, ಕೃಷ್ಣೇಗೌಡ, ನಾಗೇಗೌಡ, ಗಾಯಿತ್ರಿ ಕುಮಾರ್, ಮಾಜಿ ಸದಸ್ಯ ಸಿ.ಡಿ. ಮಹದೇವು, ಅಂಗನವಾಡಿ ಕಾರ್ಯಕರ್ತೆ ವಿಜಯ, ಕನ್ನಡ ಪ್ರಾಧ್ಯಾಪಕ ಶ್ರೀಧರ್, ಶಿಬಿರಾಧಿಕಾರಿ ನಾಗೇಂದ್ರ, ನಿವೃತ್ತ ಮುಖ್ಯಶಿಕ್ಷಕ ಬೋರೇಗೌಡ, ಮುಖಂಡ ದಿನೇಶ್, ದೇವೇಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.

ಸಂಚಾರಿ ನಿಯಮ ಉಲ್ಲಂಘನೆ: ಶೇಕಡ 50 ದಂಡ ವಿನಾಯಿತಿ

ಮಂಡ್ಯ, ಜು.7- ಸಾರಿಗೆ ಮತ್ತು ರಸ್ತೆ ಸುರಕ್ಷತಾ ಇಲಾಖೆ ವಾಹನ ಸವಾರರಿಗೆ ದಂಡ ಪಾವತಿಯಲ್ಲಿ ಶೇ.50ರಷ್ಟು ವಿನಾಯಿತಿ ಘೋಷಿಸಿ ಆದೇಶ ಹೊರಡಿಸಿದೆ.

ಸೆ.9ರೊಳಗೆ ದಂಡ ಪಾವತಿಸುವವರಿಗೆ ಶೇ.50ರಷ್ಟು ರಿಯಾಯಿತಿ ಸಿಗಲಿದ್ದು, ಫೆ.11ರವರೆಗೆ ದಾಖಲಾದ ಪ್ರಕರಣಗಳಿಗೆ ಈ ರಿಯಾಯಿತಿ ಅನ್ವಯಿಸಲಿದೆ. ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಸರ್ಕಾರವು ಜು.5 ರಂದು ಆದೇಶ ಹೊರಡಿಸಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಾಣಿ ಎ.ಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

ಪ್ರಾಧಿಕಾರ ರಚನೆ

ಹಸಿರು ನಿಶಾನೆ ತೋರಿದ್ದಾರೆ. ಜಿಐ ಟ್ಯಾಗ್ ಪಡೆದಿರುವ ಮೈಸೂರು ಜಿಲ್ಲೆಯ ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ, ಮೈಸೂರು ವೀಳ್ಯದೆಲೆ ಉತ್ಪನ್ನಗಳ ಉತ್ಪಾದನೆ, ಸಂಶೋಧನೆ, ಮಾರುಕಟ್ಟೆ ಮತ್ತು ಬ್ರ್ಯಾಂಡಿಂಗ್ ಉತ್ತೇಜಿಸಲು ನೂತನ ಕಾರ್ಯಕ್ರಮವನ್ನು ಸರ್ಕಾರ ಘೋಷಿಸಿದೆ.ರೇಷ್ಮೆ ಬೆಳೆಗಾರರಿಗೆ ಮೈಸೂರು ಬಿತ್ತನೆ ಪ್ರದೇಶದಲ್ಲಿ ಮೂಲ ಸೌಕರ್ಯವನ್ನು ಬಲಪಡಿಸಲಾಗುವುದು. ಇದರಿಂದ ಉತ್ತಮ ಗುಣಮಟ್ಟದ ರೋಗರಹಿತವಾದ ಮೈಸೂರು ಬಿತ್ತನೆ ಗೂಡುಗಳನ್ನು ಉತ್ಪಾದಿಸಿ, ವಾಣಿಜ್ಯ ರೇಷ್ಮೆ ಬೆಳೆಗಾರರಿಗೆ ವಿತರಿಸಲು ಮತ್ತು ಉತ್ತಮ ಗುಣಮಟ್ಟದ ಮಿಶ್ರತಳಿ ಕಚ್ಚಾ ರೇಷ್ಮೆಯನ್ನು ಉತ್ಪಾದಿಸಲು ಸರ್ಕಾರ ಮುಂದಾಗಿದೆ.

ಮೈಸೂರಿಗೆ ಸಿದ್ದರಾಮಯ್ಯರ ಕೊಡುಗೆಗಳು!

- ಮೈಸೂರಿನ ಶ್ರೀ ಚಾಮುಂಡೇಶ್ವರಿ ದೇವಾಲಯಕ್ಕೆ ಬರುವ ಲಕ್ಷಾಂತರ ಭಕ್ತಾದಿಗಳಿಗೆ ಅಗತ್ಯ ಮೂಲ ಸೌಲಭ್ಯವನ್ನು ಕಲ್ಪಿಸುವುದು ಮತ್ತು ಚಾಮುಂಡಿಬೆಟ್ಟದ ಸಮಗ್ರ ಅಭಿವೃದ್ಧಿ ಕೈಗೊಳ್ಳುವ ದೃಷ್ಟಿಯಿಂದ ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆ.
- ಮೈಸೂರು ಜಿಲ್ಲೆಯಲ್ಲಿ ಜಾಗತಿಕ ಮಟ್ಟದ ಚಿತ್ರನಗರಿಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣ.
- ಮೈಸೂರು ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾರ್ಯಾರಂಭ ಹಾಗೂ ಸುಟ್ಟ ಗಾಯಗಳ ಘಟಕ ಸ್ಥಾಪನೆ.
- ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯಗಳು, ಸಂಶೋಧನಾ ಕೇಂದ್ರ ಮತ್ತು ಒಳಾಂಗಣ ಕ್ರೀಡಾ ಸೌಲಭ್ಯ ಒದಗಿಸಲು ಕ್ರಮ.
- ಮೈಸೂರು ಜಿಲ್ಲೆಯಲ್ಲಿ ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳ ಸ್ಥಾಪನೆ.
- ಮೈಸೂರಿನಲ್ಲಿ ಟ್ರಾಮಾ ಕೇರ್ ಸೆಂಟರ್ ಕಾರ್ಯಾರಂಭಕ್ಕೆ ಅನುದಾನ.
- ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ಮೈಸೂರಿನಲ್ಲಿರುವ ಪ್ರಾದೇಶಿಕ ಘಟಕದ ಸೌಲಭ್ಯಗಳ ಸುಧಾರಣೆಗೆ ಅನುದಾನ
- ಮೈಸೂರಿನಲ್ಲಿ ಗುರುದ್ವಾರಗಳ ಅಭಿವೃದ್ಧಿಗೆ ಅನುದಾನ.
- ಅಂತಾರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯವುಳ್ಳ ರಾಜ್ಯದ ಕ್ರೀಡಾಪಟುಗಳನ್ನು ತಯಾರಿಸಲು ಮೈಸೂರಿನಲ್ಲಿ ಸೈಕ್ಲಿಂಗ್ ವೆಲೋಡ್ರೋಮ್ 10 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ.
- ಮೈಸೂರಿನ ಹೃದಯ ಭಾಗದಲ್ಲಿರುವ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣವನ್ನು ದೆಹಲಿಯ ಪ್ರಗತಿ ಮೈದಾನದ ಮಾದರಿಯಲ್ಲಿ ಮೇಲ್ದರ್ಜೆಗೇರಿಸಲು ನಿರ್ಧಾರ.
- ಮೈಸೂರಿನಲ್ಲಿ ಹೆಚ್ಚು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಪ್ರವಾಸಿಗರು ಭೇಟಿ ನೀಡುವ ಕಾರಣದಿಂದ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದ ಬಳಿ ಪುರಾತತ್ವ ಇಲಾಖೆಯ ಸುಪರ್ದಿಯಲ್ಲಿನ ಎರಡೂವರೆ ಎಕರೆ ಜಮೀನಿನಲ್ಲಿ ಕರ್ನಾಟಕದ ಶ್ರೀಮಂತ ಕಲೆ, ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸಲು ವಿಶೇಷ ತಂತ್ರಜ್ಞಾನದೊಂದಿಗೆ (Augmented Reality -AR ಮತ್ತು Virtual Reality -VR) ಅಂತಾರಾಷ್ಟ್ರೀಯ ಗುಣಮಟ್ಟದ ಕರ್ನಾಟಕ ಪುರಾತತ್ವ ವಸ್ತುಸಂಗ್ರಹಾಲಯ ಮತ್ತು ಕಲಾಗ್ಯಾಲರಿ ನಿರ್ಮಾಣ.
- ಮಾನವ - ವನ್ಯಪ್ರಾಣಿ ಸಂಘರ್ಷದಲ್ಲಿ ಸಂರಕ್ಷಿಸಿದ, ಗಾಯಗೊಂಡ, ಅನಾರೋಗ್ಯ ಪೀಡಿತ ಪ್ರಾಣಿಗಳನ್ನು ಆರೈಕೆ ಮಾಡಲು ಮೈಸೂರಿನಲ್ಲಿರುವ ಪುನರ್ವಸತಿ ಕೇಂದ್ರಗಳ ಸಾಮರ್ಥ್ಯವರ್ಧನೆಗೆ ಅಗತ್ಯ ಕ್ರಮ.

ಸಾಲದ ಮಿತಿ 5 ಲಕ್ಷಕ್ಕೆ ಏರಿಕೆ

ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗಾಗಿ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಏಳು ಲಕ್ಷ ರೂ. ವರೆಗಿನ ಸಾಲವನ್ನು ಶೇ. 4ರ ಬಡ್ಡಿ ದರದಲ್ಲಿ ವಿತರಿಸಲಾಗುವುದು.

ಶೀಘ್ರ ಹಾಳಾಗುವ ಹಣ್ಣು, ಹೂವು, ತರಕಾರಿಗಳ ಬೆಲೆ ಕುಸಿತದಿಂದ ರೈತರು ಒತ್ತಡದ ಮಾರಾಟ ಮಾಡುವುದನ್ನು ತಪ್ಪಿಸಿ, ನ್ಯಾಯಯುತ ಬೆಲೆ ಒದಗಿಸುವುದಕ್ಕೆ ನೆರವಾಗಲು ರಾಜ್ಯದ ಆಯ್ದ 50 ತರಕಾರಿ ಮಾರುಕಟ್ಟೆಗಳಲ್ಲಿ ಕೆಪೆಕ್ ಸಹಯೋಗದೊಂದಿಗೆ ಮಿನಿ ಶೀತಲ ಗೃಹಗಳನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದ್ದಾರೆ.

ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳನ್ನು ಬಲಪಡಿಸಿ, ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆಯನ್ನು ದೇಶದಲ್ಲೇ ಮೊದಲ ಬಾರಿಗೆ ಜಾರಿಗೊಳಿಸಲಾಯಿತು. ಎ.ಪಿ.ಎಂ.ಸಿ ಕಾಯ್ದೆ ಅವ್ಯವಸ್ಥೆಯನ್ನು ಸರಿಪಡಿಸಿ ರೈತರ ಹಿತರಕ್ಷಣೆ ಮಾಡಲು ನಮ್ಮ ಸರ್ಕಾರವು ಸದರಿ ರೈತ ವಿರೋಧಿ ಕಾಯ್ದೆಯನ್ನು ಹಿಂಪಡೆಯಲು ನಿರ್ಧರಿಸಿದೆ.

ಕೃಷಿ ಭಾಗ್ಯ ಸಂಯೋಜನೆ

ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್‌ಗಳು ನೀಡುವ ತಲಾ 20 ಲಕ್ಷ ರೂ. ವರೆಗಿನ ಸಾಲಕ್ಕೆ ಶೇ.4 ರ ಬಡ್ಡಿ ಸಹಾಯಧನ ನೀಡಲಾಗುವುದು. ರೈತ ಉತ್ಪಾದಕ ಸಂಸ್ಥೆಗಳ ಉತ್ಪನ್ನಗಳನ್ನು ರಫ್ತು ಮಾಡಲು ಅನುಕೂಲವಾಗುವಂತೆ ಗೋದಾಮು, ಶೀತಲಗೃಹ ನಿರ್ಮಾಣ ಮತ್ತು ಇತರ ಮೂಲಸೌಕರ್ಯ ಸೃಜನೆಗೆ ಯೋಜನಾ ವೆಚ್ಚದ ಗರಿಷ್ಠ ಶೇ. 20ರಷ್ಟು, ಒಂದು ಕೋಟಿ ರೂ. ಮೀರದಂತೆ ಒದಗಿಸಲಾಗುವುದು.

ರಾಜ್ಯದಲ್ಲಿ ಬೆಳೆದ ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ರಫ್ತನ್ನು ಉತ್ತೇಜಿಸಲು ಕೆಪೆಕ್ ಸಂಸ್ಥೆಯ ಮೂಲಕ ರೈತ ಉತ್ಪಾದಕ ಸಂಸ್ಥೆಗಳು, ನವೋದ್ಯಮಿಗಳು ಮತ್ತು ಕಿರು ಆಹಾರ ಸಂಸ್ಕರಣಾ ಉದ್ದಿಮೆದಾರರಿಗೆ ಬೆಂಬಲ ನೀಡಲು ಐದು ಕೋಟಿ ರೂ. ಒದಗಿಸಲಾಗುವುದು. ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ಒದಗಿಸುವ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಇನ್ನಷ್ಟು ಬಲಪಡಿಸಿ, ಇವುಗಳಲ್ಲಿ 300 ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

ತೋಟಗಾರಿಕಾ ವಲಯದಲ್ಲಿನ ರಾಜ್ಯದ ಸಾಮರ್ಥ್ಯವನ್ನು ಹೆಚ್ಚಿಸಲು ತೆಂಗು, ಅಡಿಕೆ, ದ್ರಾಕ್ಷಿ, ದಾಳಿಂಬೆ, ಮಾವು ಮತ್ತಿತರ ಹಣ್ಣು, ತರಕಾರಿ, ಹೂವುಗಳು ಸೇರಿದಂತೆ ತೋಟಗಾರಿಕಾ ಬೆಳೆಗಳ ಉತ್ಪಾದನೆ, ಸಂಸ್ಕರಣೆ, ಬ್ರ್ಯಾಂಡಿಂಗ್ ಮತ್ತು ರಫ್ತಿಗೆ ಹೆಚ್ಚಿನ ಒತ್ತು ನೀಡಲಾಗುವುದು. ಅನನ್ಯವಾದ ರುಚಿ ಮತ್ತು ಕಂಪನ್ನು ಹೊಂದಿರುವ ಚಿಕ್ಕಮಗಳೂರು, ಕೊಡಗು ಮತ್ತು ಬಾಬಾಬುಡನಗಿರಿಯ ಅರೇಬಿಕಾ ಕಾಫಿಯನ್ನು ಇನ್ನಷ್ಟು ಪ್ರಚುರಪಡಿಸಿ ಜನಪ್ರಿಯಗೊಳಿಸಲು ಮತ್ತು ಕಾಫಿ ಎಕೋ ಟೂರಿಸಂ ಅನ್ನು ಉತ್ತೇಜಿಸಲು ಕರ್ನಾಟಕದ ಕಾಫಿಗೆ ಬ್ರ್ಯಾಂಡಿಂಗ್ ಮಾಡಲು ಕ್ರಮ ವಹಿಸಲಾಗುವುದು. ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ ಹಾಗೂ ಮೈಸೂರು ವೀಳ್ಯದೆಲೆಗಳ ಉತ್ಪಾದನೆ, ಸಂಶೋಧನೆ, ಮಾರುಕಟ್ಟೆ ಮತ್ತು ಬ್ರ್ಯಾಂಡಿಂಗ್ ಉತ್ತೇಜಿಸಲು ನೂತನ ಕಾರ್ಯಕ್ರಮವನ್ನು ರೂಪಿಸಲಾಗುವುದು. ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತೋಟಗಾರಿಕಾ ಕ್ಷೇತ್ರದ ಪ್ರಾಯೋಗಿಕ ಅರಿವು ಮೂಡಿಸಲು ವಿದ್ಯಾರ್ಥಿಗಳಿಗಾಗಿ ತೋಟಗಾರಿಕೆ ಯೋಜನೆಯನ್ನು ಜಾರಿಗೊಳಿಸಲಾಗುವುದು.

ರಾಮನಗರ ಮತ್ತು ಶಿಡ್ಲಘಟ್ಟದ ರೇಷ್ಮೆಗೂಡಿನ ಮಾರುಕಟ್ಟೆಗಳಲ್ಲಿ ಏಷಿಯಾದಲ್ಲಿಯೇ ಅತೀ ಹೆಚ್ಚಿನ ವಹಿವಾಟು ನಡೆಯುತ್ತದೆ. ರಾಮನಗರ ಜಿಲ್ಲೆಯಲ್ಲಿ 75 ಕೋಟಿ ರೂ. ವೆಚ್ಚದಲ್ಲಿ ಅತಿದೊಡ್ಡ ಹೈಟೆಕ್ ಮಾರುಕಟ್ಟೆಯನ್ನು ನಿರ್ಮಿಸಲಾಗುತ್ತಿದ್ದು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗುವಂತೆ ಶಿಡ್ಲಘಟ್ಟದಲ್ಲಿನ ಮಾರುಕಟ್ಟೆಯನ್ನು 75 ಕೋಟಿ ರೂ. ವೆಚ್ಚದಲ್ಲಿ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆಯಾಗಿ ಅಭಿವೃದ್ಧಿಪಡಿಸಲಾಗುವುದು.

ಮೈಸೂರು ಬಿತ್ತನೆ ಪ್ರದೇಶದಲ್ಲಿ ಮೂಲ ಸೌಕರ್ಯವನ್ನು ಬಲಪಡಿಸಲಾಗುವುದು. ಇದರಿಂದ ಉತ್ತಮ ಗುಣಮಟ್ಟದ ರೋಗರಹಿತವಾದ ಮೈಸೂರು ಬಿತ್ತನೆ ಗೂಡುಗಳನ್ನು ಉತ್ಪಾದಿಸಿ, ವಾಣಿಜ್ಯ ರೇಷ್ಮೆ ಬೆಳೆಗಾರರಿಗೆ ವಿತರಿಸಲು ಮತ್ತು ಉತ್ತಮ ಗುಣಮಟ್ಟದ ಮಿಶ್ರತಳಿ ಕಚ್ಚಾ ರೇಷ್ಮೆಯನ್ನು ಉತ್ಪಾದಿಸಲು ಅನುಕೂಲವಾಗಲಿದೆ. ಹಿಂದಿನ ಅವಧಿಯಲ್ಲಿ ಜಾನುವಾರುಗಳ ಆಕಸ್ಮಿಕ ಸಾವಿನ ಸಂದರ್ಭದಲ್ಲಿ ರೈತರು ಅನುಭವಿಸುವ ಸಂಕಷ್ಟ ನಿವಾರಣೆಗೆ ಅನುಗ್ರಹ ಯೋಜನೆಯನ್ನು ಪುನರ್ ಸ್ಥಾಪಿಸಿ ಕುರಿ ಮತ್ತು ಮೇಕೆಗಳಿಗೆ 5,000 ರೂ. ಹಾಗೂ ಹಸು, ಎಮ್ಮೆ ಮತ್ತು ಎತ್ತುಗಳಿಗೆ 10,000 ರೂ. ಪರಿಹಾರ ಒದಗಿಸಲಾಗುವುದು ಎಂದರು.

ಬಾಳೆಹಣ್ಣು ಇಲ್ಲವೇ ಚಿಕ್ಕಿ

ಪ್ರಕಟಿಸಿದ್ದಾರೆ. ವಿದ್ಯಾರ್ಥಿಗಳ ಶಿಕ್ಷಣ ಮತ್ತು ಆರೋಗ್ಯದ ದೃಷ್ಟಿಯಿಂದ, ಮಕ್ಕಳ ಸಂಖ್ಯೆಗೆ ಅನುಗುಣವಾಗಿ, ಕಡಿಮೆ ಶೌಚಾಲಯಗಳಿರುವ 5,775 ಶಾಲೆಗಳಲ್ಲಿ ಹಾಗೂ 150 ಕಾಲೇಜುಗಳಲ್ಲಿ ಶೌಚಾಲಯ ಘಟಕಗಳನ್ನು ನರೇಗಾ ಯೋಜನೆಯ ಸಂಯೋಜನೆಯೊಂದಿಗೆ 200 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು. ಹಳೆಯ ಶಾಲಾ ಕಾಲೇಜು ಕಟ್ಟಡಗಳು ಹಾಗೂ ಮಳೆಯಿಂದಾಗಿ ಶಿಥಿಲಗೊಂಡಿರುವ 3,833 ಶಾಲೆಗಳು ಹಾಗೂ 724 ಪದವಿ ಪೂರ್ವ ಕಾಲೇಜು ಕೊಠಡಿಗಳನ್ನು 100 ಕೋಟಿ ರೂ.ಗಳ ವೆಚ್ಚದಲ್ಲಿ ದುರಸ್ತಿಗೊಳಿಸುವ ಮೂಲಕ ಬಳಕೆಗೆ ಯೋಗ್ಯಗೊಳಿಸಲಾಗುವುದು.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿರ್ವಹಣೆಗಾಗಿ ನೀಡುತ್ತಿರುವ ಅನುದಾನವನ್ನು ಕನಿಷ್ಠ 20,000 ರೂ. ದಿಂದ 45,000 ರೂ. ಗಳವರೆಗೆ ಹೆಚ್ಚಿಸಿ 47,272 ಶಾಲೆಗಳು ಹಾಗೂ 1,231 ಪದವಿ ಪೂರ್ವ ಕಾಲೇಜುಗಳ ನಿರ್ವಹಣೆಗಾಗಿ ಒಟ್ಟಾರೆಯಾಗಿ 153 ಕೋಟಿ ರೂ. ಅನುದಾನ ಒದಗಿಸಲಾಗುವುದು. ಶಿಕ್ಷಣ ಇಲಾಖೆ ಮತ್ತು ಅರಣ್ಯ ಇಲಾಖೆಯ ಸಹಭಾಗಿತ್ವದಲ್ಲಿ ಸ್ಥಳಾವಕಾಶವುಳ್ಳ ಶಾಲೆಗಳ ಸುತ್ತಮುತ್ತ ಒಂದು ವರ್ಷದ ಕಾಲಾವಧಿಯಲ್ಲಿ 50 ಲಕ್ಷ ಸಸಿಗಳನ್ನು ನೆಡುವ ವಿನೂತನ ಸಸ್ಯ ಶ್ಯಾಮಲ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಿ ಯುವಜನರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸಬಲಗೊಳಿಸಲು ಒತ್ತು ನೀಡುವ ನಿಟ್ಟಿನಲ್ಲಿ ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಾಂಶಗಳನ್ನು ಒಳಗೊಂಡ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗುವುದು ಎಂದಿದ್ದಾರೆ. ನಕಲಿ ಅಂಕಪಟ್ಟಿ ಹಾವಳಿಯನ್ನು ತಪ್ಪಿಸುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಉನ್ನತ ಶಿಕ್ಷಣದ ವಿದ್ಯಾರ್ಥಿಗಳು Academic Bank of Credit ನಲ್ಲಿ ನೋಂದಾಯಿಸಿಕೊಂಡು ಹಾಗೂ ನೇಮಕಾತಿಯಲ್ಲಿ NAD/Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರವನ್ನು ಕಡ್ಡಾಯಗೊಳಿಸಲು ಕ್ರಮಕೈಗೊಳ್ಳಲಾಗುವುದು. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ Ph.D. ಸೀಟುಗಳನ್ನು ಭರ್ತಿ ಮಾಡುವ ವಿಧಾನದಲ್ಲಿ ಏಕರೂಪತೆಯನ್ನು ತರಲಾಗುವುದು. ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳ Ph.D. ಸೀಟುಗಳಿಗೆ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಶೇ.40 ಸೀಟುಗಳಿಗೆ ಕೌನ್ಸಿಲಿಂಗ್ ನಡೆಸಲಾಗುವುದು ಎಂದು.

ಸುವ್ಯವಸ್ಥೆ ಕಾಪಾಡಲು ಹೆಚ್ಚಿನ ಆದ್ಯತೆ

ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಮಾಜದಲ್ಲಿ ಹದಗೆಟ್ಟಿದ್ದ ಸಾಮರಸ್ಯದ ವಾತಾವರಣವನ್ನು ಮರುನಿರ್ಮಿಸಲು ನಮ್ಮ ಸರ್ಕಾರ ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಿದೆ. ಪೊಲೀಸ್ ಸಿಬ್ಬಂದಿಗೆ ಸುಸಜ್ಜಿತ ವಸತಿ ಗೃಹವನ್ನು ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಪೊಲೀಸ್ ಗೃಹ 2025 ಯೋಜನೆಯಡಿ ಪ್ರಸಕ್ತ ವರ್ಷ 2,125 ವಸತಿಗೃಹ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ವರ್ಷ 450 ಕೋಟಿ ರೂ.ಗಳನ್ನು ಒದಗಿಸಲಾಗುವುದು ಎಂದರು. 339. ಪೊಲೀಸ್ ಮೊಬಿಲಿಟಿ ಯೋಜನೆಯಡಿ ಇಲಾಖೆಯಲ್ಲಿನ ಹಳೆಯ ವಾಹನಗಳನ್ನು ಹಂತ ಹಂತವಾಗಿ 100 ಕೋಟಿ ರೂ.ಗಳನ್ನು ಒದಗಿಸಲಾಗುವುದು. ಸಾರ್ವಜನಿಕರ ಸುರಕ್ಷತೆ ಮತ್ತು ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ಪೊಲೀಸ್ ಇಲಾಖೆಯಲ್ಲಿನ ಮೂಲಭೂತ ಸೌಕರ್ಯಗಳನ್ನು ಉನ್ನತೀಕರಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿರುತ್ತದೆ. ಈ ನಿಟ್ಟಿನಲ್ಲಿ ಪೊಲೀಸ್ ಠಾಣೆ ಮತ್ತು ಕಚೇರಿ ಕಟ್ಟಡಗಳು, ಎಂ.ಟಿ. ಶೆಡ್, ಶಸ್ತ್ರಾಗಾರ ಮುಂತಾದ ಕಟ್ಟಡಗಳ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 10 ಕೋಟಿ ರೂ. ಗಳನ್ನು ಒದಗಿಸಲಾಗುವುದು. ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಸಂಚಾರ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮತ್ತು ಮಹಿಳೆಯರ ಸುರಕ್ಷತೆ ಮತ್ತು ಭದ್ರತೆಯ ದೃಷ್ಟಿಯಿಂದ ಹೊಸದಾಗಿ ಐದು ಸಂಚಾರ ಪೊಲೀಸ್ ಠಾಣೆಗಳನ್ನು ಮತ್ತು ಆರು ಮಹಿಳಾ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಕ್ರಮ ವಹಿಸಲಾಗುವುದು. ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳನ್ನು ಮತ್ತು ಕಚೇರಿಗಳನ್ನು ಬಲಪಡಿಸಲು ಎರಡು ಹಂತಗಳಲ್ಲಿ ಒಟ್ಟು 2,454 ಹುದ್ದೆಗಳನ್ನು ಸೃಜಿಸಲಾಗುವುದು. ಕಾನೂನು ಮತ್ತು ಸುವ್ಯವಸ್ಥೆಯನ್ನು ಬಲವರ್ಧನೆ ಮಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಗೆ ಡ್ರೋನ್ ಕ್ಯಾಮರಾ, ಕಣ್ಗಾವಲು ಕ್ಯಾಮರಾ ಹಾಗೂ ಬಾಡಿವೋರ್ನ್ ಕ್ಯಾಮರಾಗಳನ್ನು ಒದಗಿಸಲು ಕ್ರಮ ವಹಿಸಲಾಗುವುದು ಎಂದರು.

ಸ್ವಾವಲಂಬಿ ಸಾರಥಿ ಯೋಜನೆಯಡಿ ಪರಿಶಿಷ್ಟ ನಿರುದ್ಯೋಗಿ ಯುವಜನರು 4 ಚಕ್ರ ವಾಹನ ಖರೀದಿಗೆ ಶೇ.75 ಸಹಾಯಧನ

- ಎರಡು ಕೋಟಿ ವರೆಗಿನ ಸಾಲಕ್ಕೆ ಸರ್ಕಾರದ ಖಾತ್ರಿ
- ಲಕ್ಷ ಯುವ ಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ

ಬೆಂಗಳೂರು, ಜು. 7 (ಕೆಎಂಶಿ)- ಸ್ವಾವಲಂಬಿ ಸಾರಥಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇ.75 ರಷ್ಟು, ಗರಿಷ್ಠ ನಾಲ್ಕು ಲಕ್ಷ ರೂ. ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಸಾಲ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಎರಡು ಕೋಟಿ ರೂ.ವರೆಗೆ ಸರ್ಕಾರದಿಂದ ಸಮಾನಾಂತರ ಖಾತ್ರಿ ನೀಡುವ ಯೋಜನೆ ಜಾರಿಯಲ್ಲಿದ್ದು, ಸಮಾನಾಂತರ ಖಾತ್ರಿಯನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೂ ವಿಸ್ತರಿಸಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಒಂದು ಲಕ್ಷ ಯುವ ಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಮತ್ತು ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಗರಿಷ್ಠ ಶೇ.20ರಷ್ಟು ಅಥವಾ ಒಂದು ಲಕ್ಷ ರೂ.ಗಳು ಮೀರದಂತೆ ಸಾಲ ಸಹಾಯಧನ ನೀಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಿರಿಯ ನಾಗರಿಕರ ಆರೈಕೆ ಮತ್ತು ನೆರವಿಗಾಗಿ ವೃದ್ಧಾಶ್ರಮಗಳನ್ನು, ಸಮಾಜ ಕಲ್ಯಾಣ ಇಲಾಖೆಯ ಕೇಂದ್ರ ಪರಿಹಾರ ಸಮಿತಿ ಸ್ಥಾಪಿಸಲಾಗುವುದು. ಪರಿಶಿಷ್ಟ ಪಂಗಡಗಳ ಜನಾಂಗದಲ್ಲಿ ಸೋಲಿಗ ಸಮುದಾಯ ಒಳಗೊಂಡಂತೆ ಜೇನುಕುರುಬ, ಕಾಡುಕುರುಬ, ಕೊರಗ, ಇರುಳಿಗ, ಬೆಟ್ಟಕುರುಬ ಇತ್ಯಾದಿ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರ ಸಮಗ್ರ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ 50 ಕೋಟಿ ರೂ.ಗಳನ್ನು ಒದಗಿಸಲಾಗುವುದು.

ರಾಜ್ಯದ 8 ಜಿಲ್ಲೆಗಳಲ್ಲಿ ವಾಸಿಸುತ್ತಿರುವ 11 ಬುಡಕಟ್ಟು ಪಂಗಡಗಳಾದ ಕೊರಗ, ಜೇನುಕುರುಬ, ಸೋಲಿಗ, ಎರವ, ಕಾಡು ಕುರುಬ, ಮಲೆಕುಡಿಯ, ಸಿದ್ಧಿ, ಹಸಲರು, ಗೌಡಲು, ಗೊಂಡ ಮತ್ತು ಬೆಟ್ಟಕುರುಬ ಜನಾಂಗದ ಕುಟುಂಬಗಳಿಗೆ ಪೌಷ್ಟಿಕ ಆಹಾರ ಯೋಜನೆಯನ್ನು ವಾರ್ಷಿಕ ಆರು ತಿಂಗಳುಗಳಿಗೆ ನೀಡಲಾಗುತ್ತಿದ್ದು, ಇದನ್ನು 12 ತಿಂಗಳಿಗೆ ವಿಸ್ತರಿಸಲಾಗುವುದು. ಇದಕ್ಕೆ ವಾರ್ಷಿಕವಾಗಿ 50 ಕೋಟಿ ರೂ.ಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ವೃತ್ತಿಪರ ಕೋರ್ಸ್ ವ್ಯಾಸಂಗ ಮಾಡುವ ಹಿಂದುಳಿದ ವಿದ್ಯಾರ್ಥಿಗಳಿಗೆ ಶೇ.2 ಬಡ್ಡಿ ದರದಲ್ಲಿ ಲಕ್ಷ ರೂ. ಸಾಲ



ಬೆಂಗಳೂರು, ಜು. 7 (ಕೆಎಂಶಿ)- ವೈದ್ಯಕೀಯ, ಇಂಜಿನಿಯರಿಂಗ್ ಮತ್ತು ಇತರೆ ವೃತ್ತಿಪರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅರಿವು ಎಂಬ ಯೋಜನೆಯ ಮುಖಾಂತರ ವಾರ್ಷಿಕ ಒಂದು ಲಕ್ಷ ರೂ. ಸಾಲವನ್ನು ಶೇ.2ರ ಬಡ್ಡಿ ದರದ ಯೋಜನೆಗೆ ಪುನರ್ ಚಾಲನೆ ನೀಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸ್ವಾವಲಂಬಿ ಸಾರಥಿ ಯೋಜನೆಯಡಿ, ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲಕ್ಕೆ ಶೇ.50 ರಷ್ಟು, ಗರಿಷ್ಠ 3 ಲಕ್ಷ ರೂ. ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸಲಾಗುವುದು. ಸ್ವಯಂ ಉದ್ಯೋಗ ಸಾಲ ಯೋಜನೆಯಡಿ ಸ್ವಯಂ ಉದ್ಯೋಗಾವಕಾಶಗಳನ್ನು ಕಲ್ಪಿಸಿಕೊಡಲು ವಾಣಿಜ್ಯ ಬ್ಯಾಂಕುಗಳ ಮೂಲಕ ಸಾಲ ಪಡೆದಲ್ಲಿ ಶೇ.20 ರಷ್ಟು ಅಥವಾ ಗರಿಷ್ಠ ಒಂದು ಲಕ್ಷ ರೂ.ಗಳ ಸಾಲ ಸಹಾಯಧನವನ್ನು ವಾಣಿಜ್ಯ ಬ್ಯಾಂಕುಗಳ ಮುಖಾಂತರ ನೀಡಲಾಗುವುದು.

ರಾಜ್ಯದ ಸೇವಾ ವಲಯದಲ್ಲಿ ಇರುವ ವಿಫುಲ ಅವಕಾಶಗಳನ್ನು ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಜಾತಿಗಳಿಗೆ ಸೇರಿದ ಉದ್ಯಮಿಗಳು ಸದ್ಬಳಕೆ ಮಾಡಿಕೊಳ್ಳುವ ಉದ್ದೇಶದಿಂದ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಪಡೆಯುವ 10 ಕೋಟಿ ರೂ. ಗಳವರೆಗಿನ ಸಾಲಕ್ಕೆ ಶೇ.6 ರಷ್ಟು ಬಡ್ಡಿ ಸಹಾಯಧನವನ್ನು ನೀಡಲಾಗುವುದು ಎಂದರು.





ಸುರಕ್ಷತೆಗೆ ಆದ್ಯತೆ

● ಪೊಲೀಸ್ ಮೊಬಿಲಿಟಿ ಯೋಜನೆಯಡಿ ಇಲಾಖೆಯಲ್ಲಿನ ಹಳೆಯ ವಾಹನಗಳನ್ನು ಬದಲಾಯಿಸಲು 2023–24ನೇ ಸಾಲಿನಲ್ಲಿ 100 ಕೋಟಿ ರೂ. ಅನುದಾನ
● ಅಪರಾಧ ತನಿಖಾ ವಿಭಾಗ (ಸಿಐಡಿ), ಸೈಬರ್ ಅಪರಾಧ ಘಟಕ (ಸಿಸಿಡಿ) ಮತ್ತು ಸೈಬರ್ ಎಕನಾಮಿಕ್ಸ್ ಮತ್ತು ನಾರ್ಕೋಟಿಕ್ಸ್ (ಸೆನ್) ಪೊಲೀಸ್ ಠಾಣೆಗಳ ಘಟಕಗಳ ಉನ್ನತೀಕರಣಕ್ಕೆ 10 ಕೋಟಿ ರೂ.
● ಕೆ-ಸೇವ್ ಯೋಜನೆಯಡಿ ಹತ್ತು 3–ಬೇ ಅಗ್ನಿಶಾಮಕ ಕಟ್ಟಡಗಳ ನಿರ್ಮಾಣವನ್ನು ಹಾಗೂ ಅಗತ್ಯವಿರುವ ಅಗ್ನಿಶಾಮಕ ವಾಹನಗಳನ್ನು ಒದಗಿಸಲು 100 ಕೋಟಿ ರೂ.




ಕನ್ನಡ ಚಿತ್ರೋದ್ಯಮಕ್ಕೆ ಉತ್ತೇಜನ

● ಮೈಸೂರು ಜಿಲ್ಲೆಯಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಚಿತ್ರನಗರಿ ನಿರ್ಮಾಣ.
● ಕನ್ನಡ ಗುಣಾತ್ಮಕ ಚಿತ್ರಗಳಿಗೆ ಸಹಾಯ ಧನ ನೀಡುವ ಯೋಜನೆಗೆ ಮರು ಚಾಲನೆ. ಬೆಂಗಳೂರಿನಲ್ಲಿರುವ ಡಾ. ರಾಜ್‌ಕುಮಾರ್ ಸ್ಮಾರಕದ ಬಳಿ ಕನ್ನಡ ಚಿತ್ರರಂಗ ಬೆಳೆದು ಬಂದ ಇತಿಹಾಸವನ್ನು ದಾಖಲಿಸುವ ವಸ್ತು ಸಂಗ್ರಹಾಲಯ ನಿರ್ಮಾಣ.



ದುರ್ಬಲ ವರ್ಗಗಳ ಕಲ್ಯಾಣ

● ಪರಿಶಿಷ್ಟ ಪಂಗಡದ ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ 50 ಕೋಟಿ ರೂ. ಅನುದಾನ ಹಾಗೂ ರಾಜ್ಯದ 8 ಜಿಲ್ಲೆಗಳಲ್ಲಿ ಸ್ಥಾಪಿಸುತ್ತಿರುವ 11 ಬುಡಕಟ್ಟು ಸಮುದಾಯಗಳ ಜನರಿಗೆ ನೀಡುವ ಪೌಷ್ಟಿಕ ಆಹಾರ ಯೋಜನೆಯನ್ನು 12 ತಿಂಗಳಿಗೆ ಹೆಚ್ಚಿಸಲು 48 ಕೋಟಿ ರೂ. ಅನುದಾನ.
● ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 1 ಲಕ್ಷಯುವ ಜನರಿಗೆ ಕೌಶಲಾಭಿವೃದ್ಧಿ ತರಬೇತಿ ಮತ್ತು ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಕ್ರಮ. ಹಿಂದುಳಿದ ವರ್ಗದ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಗಳ ಕುಲ ಶಾಸ್ತ್ರೀಯ ಅಧ್ಯಯನ ಕೈಗೊಳ್ಳಲು 2 ಕೋಟಿ ರೂ. ಹಿಂದುಳಿದ ವರ್ಗಗಳ ಪ್ರವರ್ಗ–1 ಮತ್ತು ಪ್ರವರ್ಗ–2ಎನಲ್ಲಿ ಬರುವ ಸಮುದಾಯದ ಗುತ್ತಿಗೆದಾರರಿಗೆ 1 ಕೋಟಿವರೆಗಿನ ಸಿವಿಲ್ ಕಾಮಗಾರಿಗಳಲ್ಲಿ ಮೀಸಲಾತಿ ಸೌಲಭ್ಯ.



ನಗರಾಭಿವೃದ್ಧಿಗೆ ಒತ್ತು

● ಬೆಂಗಳೂರು ಮತ್ತು ಇತರ ನಗರಗಳಲ್ಲಿ ಇಂದಿರಾ ಕ್ಯಾಂಟೀನ್ ಪುನರಾರಂಭಕ್ಕೆ 100 ಕೋಟಿ ರೂ. ಅನುದಾನ.
● ನಮ್ಮ ಮೆಟ್ರೋ ಯೋಜನೆಯಡಿ ಮುಂದಿನ 3 ವರ್ಷಗಳಲ್ಲಿ ಈಗಿರುವ 70 ಕಿ.ಮೀ. ಸಂಪರ್ಕ ಜಾಲವನ್ನು 176 ಕಿ.ಮೀ.ಗೆ ವಿಸ್ತರಿಸಲು ಕ್ರಮ. ವಿಮಾನ ನಿಲ್ದಾಣ ಮಾರ್ಗ 2026ರಲ್ಲಿ ಪೂರ್ಣ. ಅಮೃತ್ 2.0 ಯೋಜನೆಯಡಿ 287 ಪಟ್ಟಣಗಳಲ್ಲಿ ನೀರು ಸರಬರಾಜು ಯೋಜನೆ ಮತ್ತು ಜಲ ಮೂಲಗಳ ಸಂರಕ್ಷಣೆಗಾಗಿ ಪ್ರಸಕ್ತ ಸಾಲಿನಲ್ಲಿ 800 ಕೋಟಿ ರೂ. ಅನುದಾನ.



ಆರೋಗ್ಯವೇ ಭಾಗ್ಯ

● ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆ ಕಲಬುರಗಿಯ ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 70 ಕೋಟಿ ರೂ. ವೆಚ್ಚದಲ್ಲಿ 200 ಹಾಸಿಗೆಯ ಹೊಸ ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣ.
● ಮೈಸೂರು, ಕಲಬುರಗಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಕಾರ್ಯಾರಂಭಿಸಲು ಮತ್ತು ಸುಟ್ಟ ಗಾಯಗಳ ಘಟಕ ಸ್ಥಾಪನೆಗೆ 155 ಕೋಟಿ ರೂ. ನೆರವು. ಮಧುಮೇಹ ಮತ್ತು ರಕ್ತದೊತ್ತಡ ತಪಾಸಣೆ, ಮನೆ ಬಾಗಿಲಿಗೆ ಔಷಧ ವಿತರಣೆ–ಪ್ರಾಯೋಗಿಕವಾಗಿ 8 ಜಿಲ್ಲೆಗಳಲ್ಲಿ ಜಾರಿ. ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸಿಟಿ ಸ್ಕ್ಯಾನಿಂಗ್ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೌಲಭ್ಯ ವಿಸ್ತರಣೆಗೆ ಕ್ರಮ.
● ಕರ್ನಾಟಕ ರತ್ನ ಪುನೀತ್ ರಾಜ್‌ಕುಮಾರ್ ಅವರ ಸ್ಮರಣಾರ್ಥ ಹಠಾತ್ ಹೃದಯ ಸಂಬಂಧಿ ಸಾವುಗಳನ್ನು ತಡೆಗಟ್ಟಲು Automoted External Defibrillators ಗಳನ್ನು ಜಿಲ್ಲಾ ಆಸ್ಪತ್ರೆ ಮತ್ತು ತಾಲೂಕು ಆಸ್ಪತ್ರೆಗಳಲ್ಲಿ ಅಳವಡಿಸಲು ಕ್ರಮ.



ಶಕ್ತಿ ಯೋಜನೆ

● ಸರ್ಕಾರಿ ಬಸ್‌ಗಳಲ್ಲಿ ರಾಜ್ಯದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತ ಪ್ರಯಾಣ. ವಾರ್ಷಿಕ ಅಂದಾಜು 4 ಸಾವಿರ ಕೋಟಿ ರೂ. ವೆಚ್ಚದ ನಿರೀಕ್ಷೆ ಪ್ರತಿ ದಿನ 50–60 ಲಕ್ಷ ಮಹಿಳೆಯರು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ




ಧಾರ್ಮಿಕ ಕ್ಷೇತ್ರಗಳ ಸಂರಕ್ಷಣೆ

● ಮೈಸೂರಿನ ಶ್ರೀ ಚಾಮುಂಡೇಶ್ವರಿ ದೇವಾಲಯ ಹಾಗೂ ಚಾಮುಂಡಿಬೆಟ್ಟದ ಸಮಗ್ರ ಅಭಿವೃದ್ಧಿಗಾಗಿ ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಕ್ರಮ.
● ನಮ್ಮ ರಾಜ್ಯದಲ್ಲಿಯೂ ದೇವಾಲಯಗಳ ನಿರ್ಮಾಣಕ್ಕಾಗಿ ನುರಿತ ಶಿಲ್ಪಿಗಳನ್ನು ತಯಾರಿಸಲು ಕೋಲಾರ ಜಿಲ್ಲೆಯಲ್ಲಿ ಶಿಲ್ಪಕಲಾ ತರಬೇತಿ ಕೇಂದ್ರ ಪ್ರಾರಂಭ.
● ಸಿ–ವರ್ಗದ ಒಟ್ಟು 121 ಮುಜರಾಯಿ ದೇವಸ್ಥಾನಗಳಿಗೆ ಸಮಾನವಾಗಿ 15 ಸಾವಿರ ರೂ.ಗಳ ಸಹಾಯಾನುದಾನ ನೀಡಲು ಕ್ರಮ.



ಸಣ್ಣ ಕೈಗಾರಿಕೆಗಳಿಗೆ ಬೆಂಬಲ

● ರಾಜ್ಯದ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ವತಿಯಿಂದ ಹೊಸದಾಗಿ 7 ಕೈಗಾರಿಕಾ ವಸಾಹತುಗಳ ಸ್ಥಾಪನೆ. 10 ಹೆಚ್‌ಪಿವರೆಗಿನ ವಿದ್ಯುತ್ ಸಂಪರ್ಕ ಹೊಂದಿರುವ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳಿಗೆ 250 ಯೂನಿಟ್‌ವರೆಗೆ ಉಚಿತ ವಿದ್ಯುತ್ ಸೌಲಭ್ಯ. ಮಂಡ್ಯದ ಮೈಸೂರು ಶುಗರ್ ಕಂಪನಿಯ ಪುನಶ್ಚೇತನಗೊಳಿಸಲು 50 ಕೋಟಿ ರೂ. ಬಂಡವಾಳ.



ಸುಗಮ ಸಂಚಾರಕ್ಕೆ ಒತ್ತು

● ರಾಯಚೂರು ಬಳಿಯ ಕಲ್ಮಲಾ ಜಂಕ್ಷನ್‌ನಿಂದ ಸಿಂಧನೂರು ಬಳಿಯ ಬಳ್ಳಾರಿ–ಲಿಂಗಸಗೂರು ವೃತ್ತದವರೆಗೆ 1696 ಕೋಟಿ ರೂ. ವೆಚ್ಚದಲ್ಲಿ ಒಟ್ಟು 78 ಕಿ.ಮೀ. ರಸ್ತೆ ಅಭಿವೃದ್ಧಿ.
● ದೇವನಹಳ್ಳಿ–ವಿಜಯಪುರ–ಹೆಚ್. ಕ್ರಾಸ್–ವೇಮಗಲ್–ಮಾಲೂರು–ತಮಿಳುನಾಡು ಗಡಿಯವರೆಗೆ 1826 ಕೋಟಿ ರೂ. ಅಂದಾಜು ವೆಚ್ಚದಲ್ಲಿ 4 ಪಥ ಮತ್ತು 6 ಪಥದ 123 ಕಿ.ಮೀ. ಉದ್ದದ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಕ್ರಮ.



ಗ್ರಾಮೀಣಾಭಿವೃದ್ಧಿ

● ಜಲ್ ಜೀವನ್ ಮಿಷನ್ ಯೋಜನೆಯಡಿ ಸುಸ್ಥಿರ ಜಲ ಮೂಲ ಆಧರಿಸಿ 118 ಬಹು ಗ್ರಾಮ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನದ ಮೂಲಕ 25 ಲಕ್ಷ ಮನೆಗಳಿಗೆ ನಲ್ಲಿ ಸಂಪರ್ಕ ಒದಗಿಸುವ ಗುರಿ.
● 4 ಸಾವಿರ ಗ್ರಾಮ ಪಂಚಾಯ್ತಿಗಳಲ್ಲಿ ಕೂಸಿನ ಮನೆ ಎಂಬ ಹೆಸರಿನಲ್ಲಿ ಶಿಶುಪಾಲನಾ ಕೇಂದ್ರಗಳ ಸ್ಥಾಪನೆ. ಕರ್ನಾಟಕ ಕಲ್ಯಾಣ ಪ್ರದೇಶಗಳಲ್ಲಿ 400 ಸಮುದಾಯ ಶೌಚಾಲಯ ಸಂಕೀರ್ಣಗಳ ನಿರ್ಮಾಣಕ್ಕೆ 100 ಕೋಟಿ ರೂ. ಅನುದಾನ
● ಕರ್ನಾಟಕ ಕಲ್ಯಾಣ ಪ್ರದೇಶದ ಸಮಗ್ರ ಅಭಿವೃದ್ಧಿಗೆ 5 ಸಾವಿರ ಕೋಟಿ ರೂ. ವೆಚ್ಚದ ಕಾಮಗಾರಿ ಕೈಗೆತ್ತಿಕೊಳ್ಳಲು ಕ್ರಮ.
● ಅಭಿವೃದ್ಧಿ ಆಕಾಂಕ್ಷಿ ತಾಲೂಕುಗಳಲ್ಲಿ ಅಭಿವೃದ್ಧಿಯ ಬಹು ಆಯಾಮ ಸೂಚ್ಯಾಂಕಗಳ ಸುಧಾರಣೆಗೆ 3 ಸಾವಿರ ಕೋಟಿ ರೂ. ವೆಚ್ಚ.




ಅನ್ನಭಾಗ್ಯ

● ಹಸಿವು ಮುಕ್ತ ಕರ್ನಾಟಕಕ್ಕೆ ಸರ್ಕಾರ ಪಣ. ಎಲ್ಲಾ ಅರ್ಹ ಫಲಾನುಭವಿಗಳಿಗೆ 5 ಕೆ.ಜಿ. ಹೆಚ್ಚುವರಿಯಾಗಿ ಅಕ್ಕಿ ವಿತರಣೆ.
● ಆಹಾರ ಧಾನ್ಯ ಲಭ್ಯವಾಗುವವರೆಗೆ ಪ್ರತೀ ಫಲಾನುಭವಿಗೆ 170 ರೂ.ನಂತೆ ಡಿಬಿಟಿ ಮೂಲಕ ನಗದು ವರ್ಗಾವಣೆ.
● ಅಂದಾಜು 4.42 ಕೋಟಿ ಫಲಾನುಭವಿಗಳಿಗೆ ಅನುಕೂಲ. ಈ ಯೋಜನೆಗೆ 10,275 ಕೋಟಿ ರೂ. ಅನುದಾನ.



ಶಿಕ್ಷಣಕ್ಕೆ ಆದ್ಯತೆ

● ಸಮಾಜದ ಸ್ವಾಸ್ಥ್ಯ ಕಾಪಾಡುವ ಆಶಯದಿಂದ ಪಠ್ಯ ಪುಸ್ತಕ ಮರು ಪರಿಷ್ಕರಣೆಗೆ ಕ್ರಮ. ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಿಕತೆಯನ್ನು ಆಧರಿಸಿ ಹೊಸ ಶಿಕ್ಷಣ ನೀತಿ ರೂಪಿಸಲು ಕ್ರಮ. 1 ರಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ವಾರದಲ್ಲಿ 2 ದಿನ ನೀಡುವ ಪೂರಕ ಪೌಷ್ಟಿಕ ಆಹಾರ, 60 ಲಕ್ಷ ಮಕ್ಕಳಿಗೆ ಅನುಕೂಲ. 280 ಕೋಟಿ ರೂ. ಅನುದಾನ.
● ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿರ್ವಹಣಾ ವೆಚ್ಚ ಗರಿಷ್ಠ 45 ಸಾವಿರ ರೂ.ಗಳವರೆಗೆ ಹೆಚ್ಚಳ, 153 ಕೋಟಿ ರೂ. ಅನುದಾನ. ಶಾಲಾ–ಕಾಲೇಜುಗಳ ಕೊಠಡಿಗಳ ನಿರ್ಮಾಣ, ದುರಸ್ತಿಗೆ 650 ಕೋಟಿ ರೂ. ಹಾಗೂ ಶೌಚಾಲಯ ನಿರ್ಮಾಣಕ್ಕೆ 200 ಕೋಟಿ ರೂ. ಅನುದಾನ.




ಪರಿಸರ ಸಂರಕ್ಷಣೆ

● ಮಾನವ–ಕಾಡಾನೆ ಸಂಘರ್ಷ ನಿಯಂತ್ರಿಸಲು ರಾಮನಗರ ಮತ್ತು ಬನ್ನೇರುಘಟ್ಟ ಪ್ರದೇಶಗಳಲ್ಲಿ 2 ಹೊಸ ಆನೆ ಕಾರ್ಯಪಡೆ ರಚನೆ.
● ಬೀದರ್‌ನಲ್ಲಿ ಹೆಚ್ಚಾಗಿ ಕಂಡುಬರುವ ಕೃಷ್ಣಮೃಗಗಳ ಸಂರಕ್ಷಣೆಗೆ ಕೃಷ್ಣಮೃಗ ಸಂರಕ್ಷಣಾ ಮೀಸಲು ಪ್ರದೇಶವನ್ನಾಗಿ ಘೋಷಣೆ. ಈ ಪ್ರದೇಶ ರಕ್ಷಣೆ ಮತ್ತು ನಿರ್ವಹಣೆಗೆ 2 ಕೋಟಿ ರೂ.
● ಬಯಲು ಸೀಮೆಯ 17 ಜಿಲ್ಲೆಗಳಲ್ಲಿ ಮುಂದಿನ 5 ವರ್ಷಗಳಲ್ಲಿ 500 ಕೋಟಿ ರೂ. ವೆಚ್ಚದಲ್ಲಿ ಹಸಿರೀಕರಣ ಕಾರ್ಯಕ್ರಮ.



ಪ್ರವಾಸೋದ್ಯಮಕ್ಕೆ ಉತ್ತೇಜನ

● ಕಿತ್ತೂರು ಕರ್ನಾಟಕ ಭಾಗದಲ್ಲಿನ ಸವದತ್ತಿ ಯಲ್ಲಮ್ಮನ ಗುಡ್ಡ, ದೇವರ ಗುಡ್ಡ, ಕಪ್ಪತ್ತ ಗುಡ್ಡ, ಬಾದಾಮಿ ಬನಶಂಕರಿ, ಲಕ್ಕುಂಡಿ, ಮಾಗಡಿ ಪಕ್ಷಿಧಾಮ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಹಂಪಿ, ಮೈಲಾರ, ಗಾಣಗಾಪುರ, ಸನ್ನತಿ ಮತ್ತು ಮಳಖೇಡ, ಬೀದರ್, ರಾಯಚೂರು ಹಾಗೂ ಕಲಬುರ್ಗಿ ಕೋಟೆಗಳ ಸಮಗ್ರ ಅಭಿವೃದ್ಧಿಗೆ ಕ್ರಮ.
● ಕಡಲ ತೀರದ ಪ್ರವಾಸೋದ್ಯಮ ಅಭಿವೃದ್ಧಿಗೆ ಕರಾವಳಿ ಬೀಚ್ ಪ್ರವಾಸೋದ್ಯಮ ಕಾರ್ಯಪಡೆ ರಚನೆ. ಮೈಸೂರಿನ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣವನ್ನು ಮೇಲ್ದರ್ಜೆಗೇರಿಸಲು ಕ್ರಮ.



ಬೆಂಗಳೂರು ನಗರಾಭಿವೃದ್ಧಿ

● ಬಿಬಿಎಂಪಿ ವ್ಯಾಪ್ತಿಯಲ್ಲಿನ 20 ತ್ಯಾಜ್ಯ ನೀರು ಸಂಸ್ಕರಣ ಘಟಕಗಳನ್ನು ಮೇಲ್ದರ್ಜೆಗೇರಿಸಲು 1411 ಕೋಟಿ ರೂ. ವೆಚ್ಚದ ಯೋಜನೆಗಳಿಗೆ ಅನುಮೋದನೆ. 2023ರೊಳಗೆ ಯೋಜನೆ ಪೂರ್ಣಗೊಳಿಸಲು ಕ್ರಮ.
● ಬೈಯ್ಯಪ್ಪನಹಳ್ಳಿಯ ಸರ್ ಎಂ.ವಿಶ್ವೇಶ್ವರಯ್ಯ ಟರ್ಮಿನಲ್‌ಗೆ ಸಂಪರ್ಕ ಕಲ್ಪಿಸಲು 263 ಕೋಟಿ ರೂ. ವೆಚ್ಚದಲ್ಲಿ ಹೊಸ ಮೇಲ್ಸೇತುವೆ ನಿರ್ಮಾಣ.
● ಬೆಂಗಳೂರು ನಗರದಲ್ಲಿ 800 ಕೋಟಿ ವೆಚ್ಚದಲ್ಲಿ 100 ಕಿ.ಮೀ. ಉದ್ದದ ಮುಖ್ಯ ರಸ್ತೆಗಳನ್ನು ವೈಟ್ ಟ್ಯಾಪ್ ರಸ್ತೆಗಳಾಗಿ ಅಭಿವೃದ್ಧಿಪಡಿಸಲು ಕ್ರಮ.
● 2023–24ನೇ ಸಾಲಿನಲ್ಲಿ 273 ಕೋಟಿ ರೂ. ವೆಚ್ಚದಲ್ಲಿ 83 ಕಿ.ಮೀ. ಉದ್ದದ ಹೈ ಡೆನ್ಸಿಟಿ ಕಾರಿಡಾರ್ ರಸ್ತೆಗಳ ಅಭಿವೃದ್ಧಿ.



ಅಲ್ಪಸಂಖ್ಯಾತರ ಕಲ್ಯಾಣ

● ನನೆಗುದಿಗೆ ಬಿದ್ದಿರುವ 126 ಶಾದಿಮಹಲ್ ಮತ್ತು ಸಮುದಾಯ ಭವನಗಳ ನಿರ್ಮಾಣ ಕಾರ್ಯಗಳನ್ನು 54 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಲು ಕ್ರಮ.
● ಮುಖ್ಯಮಂತ್ರಿಗಳ ವಿಶೇಷಾಭಿವೃದ್ಧಿ ಯೋಜನೆ ಹಾಗೂ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಕಾರ್ಯಕ್ರಮಗಳಡಿ ಅಲ್ಪಸಂಖ್ಯಾತ ಸಮುದಾಯಗಳಿಗೆ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ 360 ಕೋಟಿ ರೂ. ಅನುದಾನ. ಜೈನರ ಪ್ರಮುಖ ಪುಣ್ಯಕ್ಷೇತ್ರಗಳ ಅಭಿವೃದ್ಧಿಗಾಗಿ 25 ಕೋಟಿ ರೂ. ಅನುದಾನ. ಕರ್ನಾಟಕ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಸ್ಥಾಪನೆಗೆ ಕ್ರಮ. 100 ಕೋಟಿ ರೂ. ಅನುದಾನ. ರಾಜ್ಯದಲ್ಲಿರುವ ವಕ್ಫ್ ಆಸ್ತಿಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ 50 ಕೋಟಿ ರೂ. ನೆರವು.



ಮಹಿಳಾ ಸಬಲೀಕರಣ

● ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ಯಮಿಗಳಿಗೆ ಶೇ.4ರ ಬಡ್ಡಿ ದರದಲ್ಲಿ ನೀಡಲಾಗುವ ಸಾಲದ ಮಿತಿ 5 ಕೋಟಿ ರೂ.ಗಳಿಗೆ ಹೆಚ್ಚಳ. 7 ಜಿಲ್ಲೆಗಳಲ್ಲಿ 2 ಕೋಟಿ ರೂ. ವೆಚ್ಚದಲ್ಲಿ 10 ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಗಳ ಪ್ರಾರಂಭ. 4 ಸಾವಿರ ವಿಶೇಷಚೇತನರಿಗೆ 30 ಕೋಟಿ ರೂ. ವೆಚ್ಚದಲ್ಲಿ ಯಂತ್ರ ಚಾಲಿತ ದ್ವಿಚಕ್ರ ವಾಹನ ಒದಗಿಸಲು ಕ್ರಮ.
● ಆಸಿಡ್ ದಾಳಿ ಸಂತ್ರಸ್ತ ಮಹಿಳೆಯರಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ 5 ಲಕ್ಷ ರೂ.ಗಳವರೆಗೆ ಬಡ್ಡಿ ರಹಿತ ಸಾಲ ಸೌಲಭ್ಯ ಮತ್ತು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯ.



ಗೃಹಲಕ್ಷ್ಮಿ

● ಪ್ರತೀ ಕುಟುಂಬದ ಯಜಮಾನಿಗೆ ಮಾಸಿಕ 2 ಸಾವಿರ ರೂ. ನೆರವು. ಈ ಯೋಜನೆಗೆ ವಾರ್ಷಿಕ ಅಂದಾಜು 30 ಸಾವಿರ ಕೋಟಿ ರೂ. ವೆಚ್ಚವಾಗುವ ನಿರೀಕ್ಷೆಯಿದೆ



ಕನ್ನಡ ಮತ್ತು ಸಂಸ್ಕೃತಿ

● ಖ್ಯಾತ ಸಾಹಿತಿ ಪೂರ್ಣಚಂದ್ರ ತೇಜಸ್ವಿ ಅವರ ಹೆಸರಿನಲ್ಲಿ ಸ್ಥಾಪಿಸಿರುವ ಪ್ರತಿಷ್ಠಾನದ ಚಟುವಟಿಕೆಗೆ ನೆರವು ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಡಾ. ಎಂ.ಎಂ.ಕಲಬುರಗಿ ಅವರ ಹೆಸರಿನಲ್ಲಿ ಟ್ರಸ್ಟ್ ಸ್ಥಾಪನೆಗೆ ಕ್ರಮ.
● ರಾಮನಗರದ ಜಾನಪದ ಲೋಕಕ್ಕೆ 2 ಕೋಟಿ ರೂ. ಅನುದಾನ. ಕೊಪ್ಪಳ ಜಿಲ್ಲೆಯಲ್ಲಿ ಜಾನಪದ ಲೋಕ ಸ್ಥಾಪನೆಗೆ ಕ್ರಮ.
● ಬಂಜಾರ ಸಮುದಾಯ ಹಾಗೂ ಬುಡಕಟ್ಟು ಸಮುದಾಯಗಳ ಸಾಂಸ್ಕೃತಿಕ ಮತ್ತು ಜಾನಪದ ನೃತ್ಯ ಕಲೆಗಳ ಪ್ರೋತ್ಸಾಹಕ್ಕೆ ವಿಶೇಷ ಕಾರ್ಯಕ್ರಮ.



ಸ್ಟಾರ್ಟಪ್‌ಗಳಿಗೆ ಉತ್ತೇಜನ

● ವಿಶ್ವ ದರ್ಜೆಯ ಪರಿಪೋಷಣಾ ಕೇಂದ್ರ ಸ್ಥಾಪನೆಗೆ 10 ಕೋಟಿ ಅನುದಾನ.
● ಸ್ಟಾರ್ಟಪ್ ನೀತಿಯಡಿ ಅನುದಾನ ನೀಡಿರುವ ಸ್ಟಾರ್ಟಪ್‌ಗಳ ಪರಿಹಾರಗಳ ಅಳವಡಿಕೆಯನ್ನು ವೇಗಗೊಳಿಸಲು Propel ಯೋಜನೆ ಅನುಷ್ಠಾನ.
● Global Innovation Alliance-Market Access Programme (GIA-MAP) ಕಾರ್ಯಕ್ರಮ ಆಯೋಜನೆ.
● New Age Inclubation Network (NAIN) ಕೇಂದ್ರಗಳನ್ನು ಬೆಂಬಲಿಸಲು ತಂತ್ರಜ್ಞಾನ ವರ್ಗಾವಣೆ ಸ್ಥಾಪನೆಗೆ 2 ಕೋಟಿ ರೂ. ಅನುದಾನ.
● ಹೊಸ Centre Of Exelence ಗಳ ಸ್ಥಾಪನೆ.




ಬ್ರಾಂಡ್ ಬೆಂಗಳೂರು

● ಬೆಂಗಳೂರು ನಗರವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಲು ಬ್ರಾಂಡ್ ಬೆಂಗಳೂರು ಪರಿಕಲ್ಪನೆ ಜಾರಿ. ನಗರದ ಸಂಚಾರ ವ್ಯವಸ್ಥೆ, ಪರಿಸರ, ಘನ ತ್ಯಾಜ್ಯ ನಿರ್ವಹಣೆ, ಸಾರ್ವಜನಿಕ ಸ್ಥಳಗಳ ಸದ್ಬಳಕೆ, ಪ್ರಾಣಿಗಳ ಆರೋಗ್ಯ, ಸಾರ್ವಜನಿಕರ ಆರೋಗ್ಯ, ಜನಸ್ನೇಹಿ ಇ–ಆಡಳಿತ, ನೀರಿನ ಭದ್ರತೆ ಹಾಗೂ ಪ್ರವಾಹ ನಿರ್ವಹಣೆಯ ಸವಾಲುಗಳನ್ನು ಎದುರಿಸಲು ಕ್ರಮ.
● ಬೆಂಗಳೂರು ಹಾಗೂ ಇತರ ಪಟ್ಟಣಗಳಲ್ಲಿ 3400 ಕೋಟಿ ರೂ. ವೆಚ್ಚದಲ್ಲಿ ಪಾರಂಪರಿಕ ಮತ್ತು ದ್ರವ ತ್ಯಾಜ್ಯದ ಸಮರ್ಪಕ ನಿರ್ವಹಣೆ ಹಾಗೂ ಒಳಚರಂಡಿ ನೀರು ಸಂಸ್ಕರಿಸುವ ಆಧುನಿಕ ಪದ್ಧತಿಗಳ ಅಳವಡಿಕೆ. ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಸಂಸ್ಥೆಯ ಪರಿಣಾಮಕಾರಿ ಕಾರ್ಯಾಚರಣೆಗೆ 100 ಕೋಟಿ ರೂ. ಅನುದಾನ



ಶೋಷಿತ ಸಮುದಾಯಗಳ ಶಿಕ್ಷಣಕ್ಕೆ ಒತ್ತು

● ರಾಜ್ಯದ 62 ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು 30 ಕೋಟಿ ರೂ. ವೆಚ್ಚದಲ್ಲಿ 6 ರಿಂದ 12ನೇ ತರಗತಿವರೆಗೆ ಇಂಟರ್‌ಗ್ರೇಟೆಡ್ ಶಾಲೆಗಳನ್ನಾಗಿ ಉನ್ನತೀಕರಣ. 13 ಸಾವಿರ ವಿದ್ಯಾರ್ಥಿಗಳಿಗೆ ಅನುಕೂಲ.
● 50 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ವಿದ್ಯಾರ್ಥಿಗಳ ದಾಖಲಾತಿಯನ್ನು 23 ಕೋಟಿ ರೂ. ವೆಚ್ಚದಲ್ಲಿ ದ್ವಿಗುಣಗೊಳಿಸಲು ಕ್ರಮ. ಹೆಚ್ಚುವರಿಯಾಗಿ 12,500 ವಿದ್ಯಾರ್ಥಿಗಳಿಗೆ ಅವಕಾಶ. ಹೊಸದಾಗಿ 10 ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾರಂಭ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆಗೆ 75 ಕೋಟಿ ರೂ. ಅನುದಾನ.



ಯುವ ನಿಧಿ

● 2023ರಲ್ಲಿ ಪದವಿ ಪಡೆದು 6 ತಿಂಗಳವರೆಗೆ ಉದ್ಯೋಗ ಲಭಿಸದ ಯುವ ಜನರಿಗೆ 2 ವರ್ಷ ಕಾಲ ಅಥವಾ ಉದ್ಯೋಗ ಸಿಗುವವರೆಗೆ ನಿರುದ್ಯೋಗ ಭತ್ಯೆ.
● ಪದವೀಧರರಿಗೆ ಪ್ರತೀ ತಿಂಗಳು 3 ಸಾವಿರ ರೂ., ಡಿಪ್ಲೊಮಾ ಪದವೀಧರರಿಗೆ ಪ್ರತೀ ತಿಂಗಳಿಗೆ 1500 ರೂ. ಹಾಗೂ ನಾಡಿನ ಯುವ ಜನತೆಗೆ ಆರ್ಥಿಕ ನೆರವು ನೀಡಿ ಆತ್ಮವಿಶ್ವಾಸ ತುಂಬಿ ಬದುಕಿನಲ್ಲಿ ನೆಲೆ ಕಂಡುಕೊಳ್ಳಲು ಸಹಾಯ. ಸುಮಾರು 3.7 ಲಕ್ಷ ಯುವ ಜನರಿಗೆ ಈ ಯೋಜನೆಯ ಲಾಭ.



ಗೃಹ ಜ್ಯೋತಿ

● ಪ್ರತೀ ಮನೆಗೆ ತಿಂಗಳಿಗೆ ಅವರ ಸರಾಸರಿ ಬಳಕೆಯ ಶೇ.10ರಷ್ಟು ಹೆಚ್ಚುವರಿ ವಿದ್ಯುತ್ ಉಚಿತ. ಗರಿಷ್ಠ 200 ಯೂನಿಟ್‌ವರೆಗೆ.
● ವಾರ್ಷಿಕ ಅಂದಾಜು 13,910 ಕೋಟಿ ವೆಚ್ಚದಲ್ಲಿ ಜಾರಿ. 2 ಕೋಟಿಗಿಂತ ಅಧಿಕ ಗೃಹ ಬಳಕೆದಾರರಿಗೆ ಈ ಯೋಜನೆಯಿಂದ ಅನುಕೂಲ.



ರಾಜ್ಯ ಬಜೆಟ್

ಕೊಡಗಿಗೆ ಹೈಟೆಕ್ ಆಸ್ಪತ್ರೆ, ಕಾಫಿಗೆ ಬ್ರಾಂಡ್ ಇಮೇಜ್

ಮಡಿಕೇರಿ, ಜು.7– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ದಾಖಲೆಯ 14ನೇ ಬಜೆಟ್ ಮಂಡಿಸಿದ್ದು, ಕೊಡಗಿಗೂ ಕೆಲವು ಲಾಭ ದೊರೆಯಲಿದೆ. ಕೃಷಿಗೆ ಶೂನ್ಯ ಬಡ್ಡಿ ಸಾಲದ ಮಿತಿಯನ್ನು 3 ರಿಂದ 5 ಲಕ್ಷಕ್ಕೆ ಏರಿಸಿದ್ದು, ಇದರ ಲಾಭ ಕೃಷಿಕ ವರ್ಗ ಪಡೆಯಲಿದೆ. ಕೊಡಗಿನ ಜನತೆಯ ಬಹು ವರ್ಷಗಳ ಬೇಡಿಕೆಯಾಗಿದ್ದ ಹೈಟೆಕ್ ಆಸ್ಪತ್ರೆಗೆ ಕಾಂಗ್ರೆಸ್ ಸರ್ಕಾರ ಬಜೆಟ್‌ನಲ್ಲಿ ಆದ್ಯತೆ ನೀಡಿದೆ. ಈ ಮೂಲಕ ಜಿಲ್ಲೆಯ ಆರೋಗ್ಯ ಕ್ಷೇತ್ರದ ಬಹುದಿನಗಳ ಬೇಡಿಕೆಗೆ ಸ್ಪಂದಿಸಿದೆ. ಇನ್ನು ಕಾಫಿಯನ್ನು ಬ್ರಾಂಡ್ ಮಾಡುವ ಮೂಲಕ ಆಂತರಿಕವಾಗಿ ಕಾಫಿ ಬಳಕೆ ಹೆಚ್ಚಳಕ್ಕೆ ಸರ್ಕಾರ ಒತ್ತು ನೀಡಲಿದೆ. ಇದು ಕಾಫಿ ಜಿಲ್ಲೆಯಾದ ಕೊಡಗಿನ ಕಾಫಿ ಬೆಳೆಗಾರರಿಗೂ ವರದಾನವಾಗಲಿದ್ದು, ಕಾಫಿಗೆ ಹೆಚ್ಚಿನ ಬೇಡಿಕೆ ದೊರಕುವಲ್ಲಿ ಬ್ರಾಂಡ್ ಇಮೇಜ್‌ಗೆ ಇದು ಸಹಕಾರಿಯಾಗಲಿದೆ.

ಕೊಡಗಿಗೂ ಅನ್ವಯ: ಹಠಾತ್ ಹೃದಯಾಘಾತದಿಂದಾಗುವ ಸಾವನ್ನು ತಡೆಗಟ್ಟುವ ನಿಟ್ಟಿನಲ್ಲಿ ಪುನೀತ್ ರಾಜ್‌ಕುಮಾರ್ ಸ್ಮರಣಾರ್ಥ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ 6 ಕೋಟಿ ರೂ.ಗಳ ವೆಚ್ಚದ ಎಇಡಿ ಯಂತ್ರಗಳ ಸ್ಥಾಪನೆ, ಜಿಲ್ಲಾ ಮತ್ತು ತಾಲೂಕು ಆರೋಗ್ಯ ಕೇಂದ್ರಗಳಲ್ಲಿ ಡಯಾಲಿಸಿಸ್ ಕೇಂದ್ರ ಸ್ಥಾಪನೆ, ಕೊಡಗಿನ ಪ್ರವಾಸೋದ್ಯಮ ಅಭಿವೃದ್ಧಿಗೆ ಏರ್‌ಸ್ಟ್ರಿಪ್ ಕೊಡುಗೆ, ಇಂದಿರಾ ಕ್ಯಾಂಟೀನ್‌ಗೆ ಕಾಯಕಲ್ಪ ನೀಡಿ ಕಡಿಮೆ ದರದಲ್ಲಿ ಆಹಾರ ನೀಡಲು 100 ಕೋಟಿ ಮೀಸಲು ಸೇರಿದಂತೆ ಪ್ರಮುಖ ಅಂಶಗಳು ಬಜೆಟ್‌ನಲ್ಲಿ ಒಳಗೊಂಡಿದ್ದು, ಒಟ್ಟಾರೆಯಾಗಿ ಕೊಡಗಿಗೂ ಇದು ಅನ್ವಯವಾಗಲಿದೆ.

ಮೂಗಿಗೆ ತುಪ್ಪ ಸವರಿದ್ದಾರೆ: ರಾಜ್ಯದ ಬಜೆಟ್ ಕುರಿತಂತೆ ಪ್ರತಿಕ್ರಿಯಿಸಿದ ಮಾಜಿ ಶಾಸಕ ಎಂ.ಪಿ. ಅಪ್ಪಚ್ಚುರಂಜನ್, ಇದೊಂದು ನಿರಾಶಾದಾಯಕ ಬಜೆಟ್ ಆಗಿದ್ದು, ಇದನ್ನು ಖಂಡಿಸುವುದಾಗಿ ಹೇಳಿದರು. ಬಜೆಟ್‌ನಲ್ಲಿ ಕೊಡಗಿಗೆ ಕೊಡುಗೆ ಶೂನ್ಯವೆಂದಿದ್ದಾರೆ. ಚುನಾವಣೆ ಸಮಯದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಭರವಸೆ ನೀಡಿದ್ದರು. ಆದರೆ ಬಜೆಟ್‌ನಲ್ಲಿ ಉನ್ನತೀಕರಣ ಎಂದು ಹೇಳುತ್ತಿದ್ದಾರೆ. ಈಗಾಗಲೇ ಬಿಜೆಪಿ ಸರ್ಕಾರ ಆಸ್ಪತ್ರೆಯನ್ನು ಉನ್ನತೀಕರಣಗೊಳಿಸಿದೆ. ಈ ಸರಕಾರ ಕೊಡಗನ್ನು ಕಡೆಗಣಿಸುವಂತ ಕೆಲಸವನ್ನು ಮಾಡಿದೆ ಎಂದು ಟೀಕಿಸಿದ್ದಾರೆ.



ಆಶಾದಾಯಕ ಬಜೆಟ್: ರೈತರಿಗೆ ಶೇ.3ರ ಬಡ್ಡಿಯ ಸಾಲದ ವ್ಯಾಪ್ತಿಯನ್ನು 5 ಲಕ್ಷ ರೂ. ಹೆಚ್ಚಿಸಿದ್ದು ಕ್ರಾಂತಿಕಾರಿ ಬೆಳವಣಿಗೆಯಾಗಿದೆ. ಇದು ಕೂಡ ಕೊಡಗಿನ ಬಹುಪಾಲು ರೈತಾಪಿಗಳಿಗೆ ಆರ್ಥಿಕ ಶಕ್ತಿ ನೀಡಲಿದೆ ಎಂದು ಕಾಂಗ್ರೆಸ್ ಜಿಲ್ಲಾ ಧ್ಯಕ್ಷ ಧರ್ಮಜ ಉತ್ತಪ್ಪ ಪ್ರತಿಕ್ರಿಯಿಸಿದ್ದಾರೆ. ಅಲ್ಪಾವಧಿ ಸಾಲದ ಬಡ್ಡಿಯನ್ನು ಶೂನ್ಯ ದರದಲ್ಲಿ 5 ಲಕ್ಷ ರೂ.ವರೆಗೆ ನೀಡಲಾಗುತ್ತದೆ. ಕೊಡಗಿನ ತಾಲೂಕು ಕೇಂದ್ರಗಳಲ್ಲಿನ ಕ್ರೀಡಾಂಗಣಗಳು ಹೆಚ್ಚಿನ ಅನುದಾನ ಇಲ್ಲದೇ ಶಿಥಿಲಾವಸ್ಥೆಗೆ ತಲುಪುವ ಹಂತದಲ್ಲಿದ್ದವು. ಇದೀಗ ಸಿದ್ದರಾಮಯ್ಯ ತಮ್ಮ ಬಜೆಟ್‌ನಲ್ಲಿ ತಾಲೂಕು ಕ್ರೀಡಾಂಗಣಗಳಿಗೆ 100 ಕೋಟಿ ರೂಪಾಯಿ ಮೀಸಲಿರಿಸಿದ್ದು ಆಶಾದಾಯಕವಾಗಿದೆ ಎಂದು ಧರ್ಮಜ ಉತ್ತಪ್ಪ ಹೇಳಿದ್ದಾರೆ. ಪಶ್ಚಿಮ ಘಟ್ಟಗಳಲ್ಲಿನ ಜಿಲ್ಲೆಗಳ ಪ್ರಗತಿಗೆ 100 ಕೋಟಿ ಅನುದಾನ, ರಸ್ತೆಗಳ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನ ಕೂಡ ಕೊಡಗಿಗೆ ನೆರವಾಗಲಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ. ತಾಲೂಕು ಕ್ರೀಡಾಂಗಣದ ಅಭಿವೃದ್ಧಿ ಯೋಜನೆ ಎ.ಎಸ್. ಪೊನ್ನಣ್ಣ ಅವರು ನೀಡಿದ್ದ ಚುನಾವಣಾ ಪ್ರಣಾಳಿಕೆಯಲ್ಲಿತ್ತು. ಇದೀಗ ಭರವಸೆಯನ್ನು ಈಡೇರಿಸಲಾಗಿದೆ. ಮುಂದಿನ ದಿನಗಳಲ್ಲಿ ಹಂತಹಂತವಾಗಿ ಕೊಡಗು ಜಿಲ್ಲೆಗೆ ಇಬ್ಬರೂ ಶಾಸಕರು ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಲಿದ್ದಾರೆ ಎಂದೂ ಧರ್ಮಜ ಉತ್ತಪ್ಪ ತಿಳಿಸಿದ್ದಾರೆ.



ಕೊಡಗಲ್ಲಿ ಮುಂದುವರೆದ ವರುಣನ ಆರ್ಭಟ

● ಮನೆಗಳಿಗೆ ಹಾನಿ, ಉರುಳಿದ ಮರ, ವಿದ್ಯುತ್ ಕಂಬ ● ತ್ರಿವೇಣಿ ಸಂಗಮದಲ್ಲಿ ಪ್ರವಾಹ ತುಸು ಇಳಿಕೆ





ಕಳೆದ 24 ಗಂಟೆಯಲ್ಲಿ 8 ಮನೆ, 54 ವಿದ್ಯುತ್ ಕಂಬಕ್ಕೆ ಹಾನಿ

ಸೆಸ್ಕಾಂಗೆ 5.80 ಲಕ್ಷ ನಷ್ಟ

ಮಡಿಕೇರಿ, ಜು.7– ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ಸಹಿತ ಗಾಳಿಗೆ ಕಳೆದ 24 ಗಂಟೆಗಳ ಅವಧಿಯಲ್ಲಿ ಒಟ್ಟು 8 ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ 2 ಮನೆಗಳು ಸಂಪೂರ್ಣ ನಾಶವಾಗಿದ್ದರೆ, 2 ಮನೆಗಳಿಗೆ ಬಹುತೇಕ ಮತ್ತು 4 ಮನೆಗಳಿಗೆ ಅಲ್ಪ ಪ್ರಮಾಣದ ಹಾನಿಯಾಗಿದ್ದು, ಮನೆ ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಳಿ ಮತ್ತು ಮರ ಮುರಿದು ಬಿದ್ದ ಪರಿಣಾಮ 58 ವಿದ್ಯುತ್ ಕಂಬಗಳಿಗೆ ಹಾನಿಯಾಗಿದ್ದು, ಸೆಸ್ಕಾಂ ಇಲಾಖೆಗೆ 24 ಗಂಟೆಯಲ್ಲಿ 5.80 ಲಕ್ಷ ರೂ. ನಷ್ಟ ಉಂಟಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಘಟಕ ಮಾಹಿತಿ ನೀಡಿದೆ.

ಮಡಿಕೇರಿ, ಜು.7– ಕೊಡಗು ಜಿಲ್ಲೆಯಾದ್ಯಂತ ಶುಕ್ರವಾರವೂ ಧಾರಾಕಾರ ಮಳೆಯಾಗಿದ್ದು, ವಿವಿಧ ಕಡೆಗಳಲ್ಲಿ ಮನೆ ಹಾನಿ ಪ್ರಕರಣಗಳು ವರದಿಯಾಗಿವೆ. ಮಡಿಕೇರಿ ನಗರದಲ್ಲೂ ಧಾರಾಕಾರ ಮಳೆ ಸುರಿಯುತ್ತಿದ್ದು, ನಗರದ ರಾಣಿಪೇಟೆಯಲ್ಲಿ ತಡೆಗೋಡೆ ಕುಸಿದು ಮನೆಗೆ ಹಾನಿ ಸಂಭವಿಸಿದೆ. ರಾಣಿಪೇಟೆಯ ನಿವಾಸಿ ಸಲಾಲುದ್ದೀನ್ ಎಂಬುವರ ಮನೆ ಹಿಂಭಾಗದ ತಡೆಗೋಡೆ ಕುಸಿತಗೊಂಡು ಅಡುಗೆ ಮನೆ, ಬಾತ್ ರೂಂ ಹಾನಿಗೀಡಾಗಿದೆ. ಅದೃಷ್ಟವಶಾತ್ ಮನೆಯಲ್ಲಿದ್ದ ಐದು ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಷಯ ತಿಳಿದ ತಕ್ಷಣ ಮಡಿಕೇರಿ ನಗರಸಭೆ ಉಪಾಧ್ಯಕ್ಷೆ ಸವಿತಾ ರಾಕೇಶ್ ಮತ್ತು ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಸ್ಥಳಕ್ಕೆ ಆಗಮಿಸಿದ ಎನ್‌ಡಿಆರ್‌ಎಫ್ ತಂಡ ಮಣ್ಣಿ ನಡಿ ಸಿಲುಕಿದ್ದ ಮೂರು ಅಡುಗೆ ಸಿಲಿಂಡರ್‌ಗಳನ್ನು ಹೊರ ತೆಗೆಯುವಲ್ಲಿ ಯಶಸ್ವಿಯಾದರು.

ಭಾರೀ ಗಾಳಿ ಮಳೆಗೆ ಸಿದ್ದಾಪುರ ಬಳಿಯ ಮಾಲ್ದಾರೆ ಗೇಟ್ ಹಾಡಿಯ ರಾಜಪ್ಪ ಎಂಬುವರ ಗುಡಿಸಲಿನ ಮೇಲೆ ಭಾರಿ ಗಾತ್ರದ ಮರ ಬಿದ್ದಿದ್ದು, ಗುಡಿಸಲಿನಲ್ಲಿದ್ದ ರಾಜಪ್ಪ ಅವರ ಪತ್ನಿ ತಲೆಗೆ ಗಾಯವಾಗಿದೆ. ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆಯ ಸಿಬ್ಬಂದಿಗಳು ಮರವನ್ನು ತೆರವುಗೊಳಿಸಿದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರವೀಣ್, ಸಹಾಯಕಿ ಸಾವಿತ್ರಿ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಚೆಯ್ಯಂಡಾಣೆಯ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಯ ವಸತಿ ಗೃಹದ ಹಿಂಭಾಗದಲ್ಲಿ ನಿರ್ಮಿಸಿದ್ದ ತಡೆಗೋಡೆ ಗುರುವಾರ ರಾತ್ರಿ ಸುರಿದ ಭಾರಿ ಮಳೆಗೆ ಕುಸಿದು ಬಿದ್ದಿದೆ. ಇದರಿಂದ ವಸತಿ ಗೃಹದ ಶೀಟ್‌ಗೆ ಹಾನಿಯಾಗಿದೆ. ತಡೆಗೋಡೆ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದೇ ಇದಕ್ಕೆ ಕಾರಣವೆನ್ನುವ ಆರೋಪ ಕೇಳಿಬಂದಿದೆ.

ಪ್ರವಾಹ ಇಳಿಕೆ: ಇನ್ನು ಭಾಗಮಂಡಲ ವ್ಯಾಪ್ತಿಯ ತ್ರಿವೇಣಿ ಸಂಗಮದಲ್ಲಿ ಪ್ರವಾಹ ಸ್ಥಿತಿ ಇಳಿಕೆ ಕಂಡಿದೆ. ಪರಿಣಾಮ ಭಾಗಮಂಡಲ–ನಾಪೋಕ್ಲು ರಸ್ತೆಯಲ್ಲಿ ಎಂದಿನಂತೆ ವಾಹನ ಮತ್ತು ಜನ ಸಂಚಾರ ಆರಂಭವಾಗಿದೆ. ಆದರೆ ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ಮಳೆ ಸುರಿಯುತ್ತಿರುವ ಕಾರಣ ನದಿಯಲ್ಲಿ ನೀರಿನ ಮಟ್ಟ ಏರಿಕೆ ಕಂಡಿದೆ. ಹಟ್ಟಿಹೊಳೆ, ಮಾದಾಪುರ ಹೊಳೆ ಸೇರಿದಂತೆ ಹಾರಂಗಿ ಜಲಾಶಯದ ನದಿ ಮೂಲಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದ್ದು, ಹಾರಂಗಿ ಜಲಾಶಯಕ್ಕೆ ಉತ್ತಮ ಒಳಹರಿವು ಕಂಡು ಬಂದಿದೆ.

ಅಳಿಯನ ಮೇಲೆ ಮಾವ, ಭಾಮೈದರ ಹಲ್ಲೆ

ಮಡಿಕೇರಿ, ಜು.7– ಐಫೋನ್ ಖರೀದಿ ವಿಚಾರವಾಗಿ ನಡೆದ ಗಲಾಟೆಯಲ್ಲಿ ಮಾವ, ಭಾಮೈದರು ಸೇರಿ ಅಳಿಯನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಪಾಲಿಬೆಟ್ಟದಲ್ಲಿ ನಡೆದಿದೆ.



ಪಾಲಿಬೆಟ್ಟದ ಮೇಕೂರು ಹೊಸ್ಕೇರಿ ಗ್ರಾಮದ ನಿವಾಸಿ ಮುನೀರ್ ಎಂಬುವವರೇ ಮಾರಣಾಂತಿಕ ಹಲ್ಲೆಗೊಳಗಾಗಿ ಇದೀಗ ಮಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮುನೀರ್ ಮಾವ, ನಿವೃತ್ತ ಎಎಸ್‌ಐ ಗೋಣಿಕೊಪ್ಪಲಿನ ಮಜೀದ್ ಮತ್ತು ಅವರ ಮಕ್ಕಳಾದ ಜಬಿ ಮತ್ತು ರಫೀಕ್ ವಿರುದ್ಧ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿವರ: ಜುಲೈ ತಿಂಗಳ ಮೊದಲ ವಾರದಲ್ಲಿ ಮುನೀರ್ ಪತ್ನಿಯ ಬ್ಯಾಂಕ್ ಖಾತೆಯಿಂದ 2,000 ರೂ. ಕಂತಿನ ಹಣ ಕಡಿತಗೊಂಡ ಬಗ್ಗೆ ಮುನೀರ್ ಅವರಿಗೆ ಮೊಬೈಲ್ ಮೆಸೇಜ್ ಬಂದಿತ್ತು. ಪರಿಶೀಲಿಸಿದಾಗ ಮಡಿಕೇರಿಯ ಮೊಬೈಲ್ ಅಂಗಡಿಯೊಂದರಿಂದ ಐಫೋನ್ ಖರೀದಿಸಿದ ಪರಿಣಾಮ ಮಾಸಿಕ ಕಂತು ಬ್ಯಾಂಕ್ ಖಾತೆಯಿಂದ ಕಡಿತಗೊಂಡಿದ್ದು ತಿಳಿದುಬಂತು.

ಈ ವಿಷಯದ ಬಗ್ಗೆ ಪತ್ನಿ ಬಳಿ ವಿಚಾರಿಸಿದಾಗ ತಂದೆಗೆ ಗಿಫ್ಟ್ ನೀಡಲು ಮೊಬೈಲ್ ಖರೀದಿಸಿರುವುದಾಗಿ ಆಕೆ ತಿಳಿಸಿದ್ದಳು. ತನಗೆ ತಿಳಿಯದೆ ಮೊಬೈಲ್ ಖರೀದಿಸಿರುವ ಬಗ್ಗೆ ಮುನೀರ್ ಪತ್ನಿಗೆ ಬುದ್ಧಿಮಾತು ಹೇಳಿದ್ದರು ಎನ್ನಲಾಗಿದೆ. ಈ ವಿಚಾರವನ್ನು ಪತ್ನಿ, ತನ್ನ ತಂದೆಗೆ ಮತ್ತು ಸಹೋದರರಿಗೆ ತಿಳಿಸಿ, ಗಂಡನ ವಿರುದ್ಧ ಅಸಮಾಧಾನ ತೋಡಿಕೊಂಡರು. ಇದರಿಂದ ಕುಪಿತರಾಗಿ ಮುನೀರ್ ಮನೆಗೆ ಏಕಾಏಕಿ ಧಾವಿಸಿದ ಮಾವ ಮಜೀದ್, ಭಾಮೈದರಾದ ಜಬಿ ಮತ್ತು ರಫೀಕ್, ಮೂವರೂ ಸೇರಿ ದೊಣ್ಣೆಯಿಂದ ಮುನೀರ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದರು ಎಂದು ಮುನೀರ್ ತಾಯಿ ನೀಡಿದ ದೂರಿನ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಸಿದ್ದಾಪುರ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಜು.10ಕ್ಕೆ ರೈತ ಸಂಘದಿಂದ ಸೆಸ್ಕ್ ಕಚೇರಿಗೆ ಮುತ್ತಿಗೆ

ಗೋಣಿಕೊಪ್ಪ, ಜು.7– ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಜುಲೈ 10 ರಂದು ಮಡಿಕೇರಿ ಸೆಸ್ಕ್ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲು ರೈತ ಸಂಘದ ವತಿಯಿಂದ ನಿರ್ಧಾರ ತೆಗೆದುಕೊಳ್ಳಲಾಯಿತು.

ಗೋಣಿಕೊಪ್ಪ ಕಚೇರಿಯಲ್ಲಿ ನಡೆದ ರೈತರ ಹೋರಾಟದ ಪೂರ್ವಭಾವಿ ಸಭೆಯಲ್ಲಿ ಕಾಫಿ ತೋಟದಲ್ಲಿ ಹಾದುಹೋಗಿರುವ ವಿದ್ಯುತ್ ಮಾರ್ಗದಲ್ಲಿರುವ ಕಾಡು ತೆರವುಗೊಳಿಸದಿರುವುದು, ಕೆಟ್ಟುಹೋಗಿರುವ ಟಿಸಿ ದುರಸ್ತಿಪಡಿಸದೆ ನಿರ್ಲಕ್ಷ್ಯತೋರುತ್ತಿರುವ ಬಗ್ಗೆ ಅಸಮಾಧಾನ ವ್ಯಕ್ತವಾಯಿತು.

ರೈತಸಂಘದ ಜಿಲ್ಲಾಧ್ಯಕ್ಷ ಕಾಡ್ಯಮಾಡ ಮನು ಸೋಮಯ್ಯ ಮಾತನಾಡಿ, ನಿರಂತರವಾಗಿ ವಿದ್ಯುತ್ ಸಮಸ್ಯೆ ತಲೆದೋರಿದೆ. ತೋಟಗಳಲ್ಲಿ ಜಂಗಲ್ ಕ್ಲಿಯರಿಂಗ್ ಮಾಡದೇ ಇರುವುದರಿಂದ ದಕ್ಷಿಣ ಕೊಡಗು ಹಾಗೂ ಸೋಮವಾರಪೇಟೆ ತಾಲೂಕಿನಲ್ಲಿ ವಿದ್ಯುತ್ ಆಗಾಗ್ಗೆ ಕಡಿತಗೊಳ್ಳುತ್ತಿದೆ. ಸೆಸ್ಕ್ ಅಧಿಕಾರಿಗಳ ಗಮನಕ್ಕೆ ತಂದರೂ ಸ್ಪಂದಿಸುತ್ತಿಲ್ಲ. ಕೆಟ್ಟಿರುವ ಟ್ರಾನ್ಸ್‌ಫಾರ್ಮರ್ ದುರಸ್ತಿಪಡಿಸದೆ ನಿರ್ಲಕ್ಷ್ಯ ವಹಿಸಲಾಗಿದೆ. ಇದರ ವಿರುದ್ಧ ಹೋರಾಟ ನಡೆಸುವುದು ಅನಿವಾರ್ಯ. 10 ಹೆಚ್.ಪಿ. ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ, ರೈತರಿಗೆ ಸಬ್ಸಿಡಿ ವಿಚಾರ, ಸೆಸ್ಕ್ ಅಧಿಕಾರಿಗಳು ಪರಿಶೀಲನೆ ನೆಪದಲ್ಲಿ 10 ಹೆಚ್.ಪಿ. ನೀರಾವರಿ ಮೋಟಾರ್ ಬಳಸುತ್ತಿರುವ ರೈತರಿಗೆ ಅಧಿಕ ಬಿಲ್ ನೀಡುತ್ತಿರುವ ಬಗ್ಗೆ ಸೇರಿದಂತೆ 10 ಅಂಶಗಳನ್ನು ಮುಂದಿಟ್ಟುಕೊಂಡು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು. ಕಾಫಿ ಬೆಳೆಗಾರರಾದ ನೀತು ಮಾತನಾಡಿ, ಮನೆಯಲ್ಲಿ ವಾಸವಿಲ್ಲದಿದ್ದರೂ ಕೂಡ ತಿಂಗಳಿಗೆ 12–13 ಸಾವಿರ ವಿದ್ಯುತ್ ಬಿಲ್ ಬರುತ್ತಿದ್ದು, ಇಷ್ಟು ದೊಡ್ಡಮೊತ್ತವನ್ನು ಪಾವತಿಸಲು ಕಷ್ಟಕರವಾಗಿದೆ. ಸಮಸ್ಯೆ ಕುರಿತು ರೈತ ಸಂಘದ ಗಮನ ಸೆಳೆದಿದ್ದೇನೆ ಎಂದರು.



ಸಂಚಾಲಕರಾದ ಪುಚ್ಚಿಮಾಡ ಸುಭಾಶ್ ಸುಬ್ಬಯ್ಯ, ಪ್ರಧಾನ ಕಾರ್ಯದರ್ಶಿ ಸುಜಯ್ ಬೋಪಯ್ಯ, ಖಜಾಂಚಿ ಇಟ್ಟೀರ ಸಬಿತ, ಕಾನೂನು ಸಲಹೆಗಾರ ಹೇಮಚಂದ್ರ ವಿರಾಜಪೇಟೆ ತಾಲೂಕು ಅಧ್ಯಕ್ಷ ಭವಿಕುಮಾರ್, ಪೊನ್ನಂಪೇಟೆ ತಾಲೂಕು ಅಧ್ಯಕ್ಷ ಅಲೆಮಾಡ ಮಂಜುನಾಥ್, ಅಮ್ಮತ್ತಿ ಹೋಬಳಿ ಅಧ್ಯಕ್ಷ ಮಂಡೇಪಂಡ ಪ್ರವೀಣ್, ಶ್ರೀಮಂಗಲ ಹೋಬಳಿ ಅಧ್ಯಕ್ಷ ಕಂಬ ಕಾರ್ಯಪ್ಪ ಇದ್ದರು.

ಇಂದು ಲೋಕ್ ಅದಾಲತ್

ಮಡಿಕೇರಿ, ಜು.7– ಗ್ರಾಹಕರ ವ್ಯಾಜ್ಯಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಜುಲೈ 8 ರಂದು ಲೋಕ್ ಅದಾಲತ್ ನಡೆಯಲಿದೆ.

ಆ ದಿನದಂದು ಸಂಬಂಧಪಟ್ಟವರು ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳನ್ನು ಗುರುತಿಸಿಕೊಂಡು ಇತ್ಯರ್ಥಪಡಿಸಿಕೊಳ್ಳುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ಆಡಳಿತಾಧಿಕಾರಿ ಹಾಗೂ ಸಹಾಯಕ ರಿಜಿಸ್ಟ್ರಾರ್ ಶಾರದ ಅವರು ತಿಳಿಸಿದ್ದಾರೆ.

ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ

ಕಾಮುಕನಿಗೆ 20 ವರ್ಷ ಕಠಿಣ ಸಜೆ

ಚಾಮರಾಜನಗರ, ಜು.7– ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಕಾಮುಕನಿಗೆ ನಗರದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ ನ್ಯಾಯಾಲಯ 20 ವರ್ಷ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.



ತಾಲೂಕಿನ ಗ್ರಾಮವೊಂದರ ಯುವಕ ರಂಗಸ್ವಾಮಿ (21) ಶಿಕ್ಷೆಗೊಳಗಾದವನಾಗಿದ್ದು, ಈತ 15 ವರ್ಷದ ಬಾಲಕಿಯನ್ನು ಬೈಕ್‌ನಲ್ಲಿ ಕರೆದುಕೊಂಡು ಹೋಗುವ ಸಮಯದಲ್ಲಿ ಮೈ ಕೈ ಮುಟ್ಟಿ, ಅಸಭ್ಯವಾಗಿ ನಡೆದುಕೊಂಡಿದ್ದ. ಈ ವೇಳೆ ಆಕೆ ವಿರೋಧ ವ್ಯಕ್ತಪಡಿಸಿದರೂ ಕೂಡ ಲೆಕ್ಕಿಸದೆ ಲೈಂಗಿಕ ದೌರ್ಜನ್ಯ ಎಸಗಿದ್ದ.

ಈ ಸಂಬಂಧ ಚಾಮರಾಜನಗರ ಗ್ರಾಮಾಂತರ ಠಾಣೆಯಲ್ಲಿ ಪೋಕ್ಸೊ ಕಾಯ್ದೆ ಅಡಿ ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದ್ದ ಅಂದಿನ ಸರ್ಕಲ್ ಇನ್‌ಸ್ಪೆಕ್ಟರ್ ಕೆ.ಎಂ. ಮಂಜು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರಾದ ನಿಶಾರಾಣಿ ಅವರು ರಂಗಸ್ವಾಮಿಗೆ 20 ವರ್ಷ ಕಠಿಣ ಶಿಕ್ಷೆ, 40 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ನೊಂದ ಬಾಲಕಿಗೆ 30 ದಿನಗಳ ಒಳಗಾಗಿ 4 ಲಕ್ಷ ರೂ. ಹಣವನ್ನು ಪರಿಹಾರ ರೂಪದಲ್ಲಿ ನೀಡಬೇಕು ಎಂದು ನ್ಯಾಯಾಧೀಶರು ಆದೇಶದಲ್ಲಿ ತಿಳಿಸಿದ್ದಾರೆ. ಪ್ರಾಸಿಕ್ಯೂಷನ್ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಕೆ. ಯೋಗೇಶ್ ವಾದ ಮಂಡಿಸಿದ್ದರು.

ಜು.11, ಶಿಕ್ಷಕರ ವರ್ಗಾವಣೆ ಕೌನ್ಸಿಲಿಂಗ್

ಚಾಮರಾಜನಗರ, ಜು.7– 2022–23ನೇ ಸಾಲಿನ ಸರ್ಕಾರಿ ಪ್ರಾಥಮಿಕ ಪ್ರೌಢಶಾಲಾ ಶಿಕ್ಷಕರ ಕೋರಿಕೆ ಮತ್ತು ಪರಸ್ಪರ ವರ್ಗಾವಣೆ ಕೌನ್ಸಿಲಿಂಗ್ ಅನ್ನು ಜಿಪಂ ಸಿಇಓ ಸಮ್ಮುಖದಲ್ಲಿ ಜು.11 ರಿಂದ 17ರವರೆಗೆ ಬೆಳಗ್ಗೆ 10 ಗಂಟೆಗೆ ನಗರದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಯಲ್ಲಿ ನಡೆಯಲಿದೆ.

ರಾಜ್ಯ ಬಜೆಟ್: ಗಡಿ ಜಿಲ್ಲೆ ಕಡೆಗಣನೆ



ಜನರ ನಿರೀಕ್ಷೆ ಹುಸಿಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ



ಚಾಮರಾಜನಗರ, ಜು.7– ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶುಕ್ರವಾರ ಮಂಡಿಸಿದ ರಾಜ್ಯ ಬಜೆಟ್ ಜಿಲ್ಲೆಯ ಜನರಿಗೆ ನಿರಾಸೆ ಮೂಡಿಸಿದೆ. ಈ ಬಾರಿಯ ಬಜೆಟ್‌ನಲ್ಲಿ ಚಾಮರಾಜನಗರವನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ ಎಂಬ ಅಸಮಾಧಾನ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಧ್ಯಾಹ್ನ ಮಂಡಿಸಿದ 136 ಪುಟಗಳ ರಾಜ್ಯ ಬಜೆಟ್‌ನಲ್ಲಿ ಚಾಮರಾಜನಗರ ಜಿಲ್ಲೆಯ ಹೆಸರು ಪುಟ ಸಂಖ್ಯೆ 95 ಹಾಗೂ 114ರಲ್ಲಿ ಬಿಟ್ಟರೇ ಎಲ್ಲಿಯೂ ಉಲ್ಲೇಖವಾಗಿಲ್ಲ. ಜಿಲ್ಲೆಯಾಗಿ 25 ವರ್ಷ ಪೂರ್ಣಗೊಂಡು ಬೆಳ್ಳಿ ಹಬ್ಬದ ಸಂಭ್ರಮದಲ್ಲಿದ್ದ ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ಬಾರಿಯಂತೆಯೇ ಈ ಬಾರಿಯೂ ವಿಶೇಷ ಅನುದಾನ ನೀಡುತ್ತಾರೆ. ಬಜೆಟ್‌ನಲ್ಲಿ ಜಿಲ್ಲೆಗೆ ಸಾಕಷ್ಟು ಕೊಡುಗೆ ನೀಡುತ್ತಾರೆ ಎಂಬ ಜನರ ಅಪಾರ ನಿರೀಕ್ಷೆ ಹುಸಿಯಾಗಿದೆ.

ಏನಿತ್ತು ನಿರೀಕ್ಷೆ?: ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ರೇಷ್ಮೆ ಹಾಗೂ ಪಶು ಸಂಗೋಪನಾ ಸಚಿವರಾಗಿರುವುದರಿಂದ ಜಿಲ್ಲೆಯಲ್ಲಿ ರೇಷ್ಮೆ ಪುನಶ್ಚೇತನಕ್ಕೆ ಅವರು ಸರ್ಕಾರದ ಮೇಲೆ ಹೆಚ್ಚಿನ ಒತ್ತಡ ತಂದು ಜಿಲ್ಲೆಯಲ್ಲಿ ರೇಷ್ಮೆ ಮಾರುಕಟ್ಟೆ ಅಭಿವೃದ್ಧಿ, ರೇಷ್ಮೆ ಬೆಳೆ ಕ್ಷೇತ್ರ ವಿಸ್ತರಣೆಗೆ ವಿಶೇಷ ಅನುದಾನ ಕೊಡಿಸುತ್ತಾರೆ ಎಂಬ ಆಸೆ ಈ ಭಾಗದ ರೈತರಲ್ಲಿ ಚಿಗುರೊಡೆದಿತ್ತು ಆದರೆ, ಆ ಬಗ್ಗೆ ಯಾವುದೇ ಪ್ರಸ್ತಾಪವಿಲ್ಲ.

ಚಾಮರಾಜನಗರ ಜಿಲ್ಲೆ ಪ್ರವಾಸೋದ್ಯಮದ ಅಭಿವೃದ್ಧಿ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪಿಸಿಲ್ಲ. ಜಿಲ್ಲೆಯ ಆರೋಗ್ಯ ವ್ಯವಸ್ಥೆಯಲ್ಲಿ ಸುಧಾರಣೆ ಕಾಣಬೇಕಿದ್ದು, ಜಿಲ್ಲಾ ಕೇಂದ್ರದಲ್ಲಿರುವ ಆಸ್ಪತ್ರೆ ಕೆಲವೊಂದು ಕೊರತೆಗಳ ನಿವಾರಣೆಯೊಂದಿಗೆ ಕೊಳ್ಳೇಗಾಲ, ಯಳಂದೂರು, ಹನೂರು, ಗುಂಡ್ಲುಪೇಟೆ ಆಸ್ಪತ್ರೆಗಳ ಮೇಲ್ದರ್ಜೆಗೇರಿಸುವುದು, ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ 2ನೇ ಹಂತದ ಕುಡಿಯುವ ನೀರಿನ ಯೋಜನೆ, ಹೊಸ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ನಿರ್ಮಾಣ ಸೇರಿದಂತೆ ಇತರೆ ಅಭಿವೃದ್ಧಿ ಕಾರ್ಯಗಳಿಗೆ ಬಜೆಟ್‌ನಲ್ಲಿ ಆದ್ಯತೆ ನೀಡಿಲ್ಲ. ಜಿಲ್ಲೆಯ ಬಗ್ಗೆ ವಿಶೇಷ ಕಾಳಜಿ, ಪ್ರೀತಿ ಹೊಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಜಿಲ್ಲೆ ಜನರ ನಿರೀಕ್ಷೆ ಹುಸಿಗೊಳಿಸಿರುವುದು ಜನರಿಗೆ ಬೇಸರ ಮೂಡಿಸಿದೆ.

ಬದನಗುಪ್ಪೆಯಲ್ಲಿ ಕೈಗಾರಿಕಾ ವಸಾಹತು ಸ್ಥಾಪನೆ: ಚಾಮರಾಜನಗರ ತಾಲೂಕಿನ ಬದನಗುಪ್ಪೆ ಕೈಗಾರಿಕಾ ಪ್ರದೇಶದಲ್ಲಿ ಕೈಗಾರಿಕಾ ವಸಾಹತು ಸ್ಥಾಪನೆಗೆ ರಾಜ್ಯ ಬಜೆಟ್‌ನಲ್ಲಿ ಆದ್ಯತೆ ನೀಡಲಾಗಿದೆ. ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ರಾಜ್ಯದ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಚಾಮರಾಜನಗರದ ಬದನಗುಪ್ಪೆ ಸೇರಿದಂತೆ ರಾಜ್ಯದ 7 ಕಡೆಗಳಲ್ಲಿ ಕೈಗಾರಿಕಾ ವಸಾಹತುಗಳನ್ನು ಹಂತ–ಹಂತವಾಗಿ ಸ್ಥಾಪಿಸಲು ಸರ್ಕಾರ ಮುಂದಾಗಿದೆ.

ಅಲ್ಲದೇ ಇ–ಆಡಳಿತ ಇಲಾಖೆ, ಮಾಹಿತಿ ತಂತ್ರಜ್ಞಾನ ವ್ಯವಸ್ಥೆಗಳಾದ ಫ್ರೂಟ್ಸ್, ಕುಟುಂಬ, ಜಿಐಎಸ್‌ಗಳನ್ನು ಬಳಸಿಕೊಂಡು ತಾಲೂಕು ಹಂತದ ಕಚೇರಿಗಳಲ್ಲಿನ ಶಾಸನಬದ್ಧ ಕಾಲಮಿತಿ ಇರುವಂತಹ ಸೇವೆಗಳನ್ನು ಹೊರತುಪಡಿಸಿ ಉಳಿದ ಸೇವೆಗಳನ್ನು ತಕ್ಷಣವೇ ಅಥವಾ ಅದೇ ದಿನದಂದು ಅಥವಾ ಅತ್ಯಂತ ಸಂಕೀರ್ಣ ಪ್ರಕರಣಗಳಲ್ಲಿ ಒಂದು ವಾರದೊಳಗೆ ಸಾರ್ವಜನಿಕರಿಗೆ ಒದಗಿಸಲು ಯತ್ನಿಸಲಾಗುವುದು. ಪ್ರಾಯೋಗಿಕವಾಗಿ 9 ಕೋಟಿ ರೂ. ವೆಚ್ಚದಡಿ ಈ ವಿಧಾನವನ್ನು ಜಾರಿಗೆ ತರಲು ಚಾಮರಾಜನಗರ ಸೇರಿದಂತೆ 6 ತಾಲೂಕುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ.

ರಾಜ್ಯ ಬಜೆಟ್ ಪ್ರತಿಕ್ರಿಯೆಗಳು

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಚಾಮರಾಜನಗರ ಜಿಲ್ಲೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ಜಿಲ್ಲೆಯಲ್ಲಿ ಮೂವರು ಕಾಂಗ್ರೆಸ್ ಶಾಸಕರು ಇರುವುದರಿಂದ ಜಿಲ್ಲೆಗೆ ಆದ್ಯತೆ ದೊರೆಯಲಿದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ, ಆ ನಿರೀಕ್ಷೆ ಸುಳ್ಳಾಗಿದೆ.

– ಜಿ. ನಾರಾಯಣ ಪ್ರಸಾದ್, *ಬಿಜೆಪಿ ಜಿಲ್ಲಾಧ್ಯಕ್ಷರು.*

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್‌ನಲ್ಲಿ ಜಿಲ್ಲೆಯನ್ನು ಕಡೆಗಣಿಸಿಲ್ಲ. ಬದನಗುಪ್ಪೆಯಲ್ಲಿ ಹೊಸದಾಗಿ ಕೈಗಾರಿಕಾ ವಸಾಹತುಗಳನ್ನು ಹಂತ–ಹಂತವಾಗಿ ಸ್ಥಾಪಿಸುವುದಾಗಿ ತಿಳಿಸಲಾಗಿದೆ. ಅಲ್ಲದೇ ವಿವಿಧ ಇಲಾಖೆಗಳ ಅನುದಾನದಲ್ಲಿ ಜಿಲ್ಲೆಗೂ ಅನುದಾನ ದೊರೆಯಲಿದೆ.

-ಪಿ. ಮರಿಸ್ವಾಮಿ, *ಕಾಂಗ್ರೆಸ್ ಜಿಲ್ಲಾಧ್ಯಕ್ಷ.*

ಎಸ್‌ಇಪಿ– ಟಿಎಸ್‌ಪಿಯಲ್ಲಿ ನೀಡಲಾದ 34 ಸಾವಿರ ಕೋಟಿ ರೂ. ಸದ್ಬಳಕೆಗೆ ಯೋಜನೆ ರೂಪಿಸಬೇಕು. 7ಡಿ ಕಾಯ್ದೆಯನ್ನು ರದ್ದು ಮಾಡಿರುವುದು ಸ್ವಾಗತ. ಚಾಮರಾಜನಗರ ಜಿಲ್ಲೆ ಜನತೆಗೆ ಬಜೆಟ್‌ನಲ್ಲಿ ಏನನ್ನೂ ನೀಡಿಲ್ಲ.

–ಎನ್.ನಾಗಯ್ಯ, *ಬಿಎಸ್‌ಪಿ ಜಿಲ್ಲಾಧ್ಯಕ್ಷರು.*

ಸಿಎಂ ಸಿದ್ದರಾಮಯ್ಯ ಅವರು ಮಂಡಿಸಿರುವ ಬಜೆಟ್ ತೀರಾ ನಿರಾಶದಾಯಕವಾಗಿದೆ. ಬರೀ ಗ್ಯಾರಂಟಿಗಳನ್ನು ಪೂರೈಸುವುದಾಗಿ ಮಾತ್ರ ಮಂಡಿಸಿದ ಬಜೆಟ್ ಆಗಿದೆ. ಯುವಕರಿಗೆ ಮತ್ತು ರೈತರಿಗೆ ಆದ್ಯತೆ ನೀಡಿಲ್ಲ. ರೈತರಿಗೆ ಶೂನ್ಯ ದರದಲ್ಲಿ 3 ಲಕ್ಷದವರೆಗೂ ಸಾಲ ನೀಡಲಾಗುವುದು ಎಂದು ತಿಳಿಸಲಾಗಿದೆ. ಆದರೆ, ಸಾಲ ಕೊಡುವ ಸಂಸ್ಥೆಗಳು ಯಾವುದಿದೆ?

-ಅಮ್ಮನಪುರ ಮಲ್ಲೇಶ್, *ಬಿಜೆಪಿ ರೈತ ಮುಖಂಡ.*

ಮುಖ್ಯಮಂತ್ರಿಗಳು ಕೈಗಾರಿಕೆಗಳ ಸ್ಥಾಪನೆಗೆ ಒತ್ತು ನೀಡಬೇಕಿತ್ತು. ಈ ಬಗ್ಗೆ ಅವರು ಮನಸ್ಸು ಮಾಡಿಲ್ಲ. ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಮುಂದೆ ಬರುವವರಿಗೆ 5 ವರ್ಷಗಳ ತೆರಿಗೆ ವಿನಾಯಿತಿ ನೀಡಬೇಕಿತ್ತು. ವಿದ್ಯುತ್ ದರ ಕಡಿಮೆ ಮಾಡಬೇಕಿತ್ತು. ಕಂದಾಯ ಕಡಿಮೆ ಮಾಡಬೇಕಿತ್ತು.

-ಎ.ಜಯಸಿಂಹ, *ಅಧ್ಯಕ್ಷರು, ಚಾ.ನಗರ ಸಣ್ಣ ಕೈಗಾರಿಕೆಗಳ ಸಂಘ.*

ಸಾರ್ವಜನಿಕ ಶಿಕ್ಷಣ ಸಂಸ್ಥೆಗಳನ್ನು ಬಲಪಡಿಸಲು ಕಟ್ಟಡ ದುರಸ್ತಿ ಸೇರಿದಂತೆ ಇತರ ಸೌಲಭ್ಯಗಳ ಅಭಿವೃದ್ಧಿಗಾಗಿ ಅನುದಾನ ಘೋಷಿಸಲಾಗಿದೆ. ತಜ್ಞರ ಸಮಿತಿ ನೇಮಕ ಮಾಡಿ ಪಠ್ಯಪುಸ್ತಕ ಪರಿಷ್ಕರಣೆ ಮಾಡುವುದಾಗಿ ಹಾಗೂ ಹೊಸ ಶಿಕ್ಷಣ ನೀತಿ 2020 ಅನ್ನು ಕೈಬಿಟ್ಟು ರಾಜ್ಯಕ್ಕೆ ಪ್ರತ್ಯೇಕ ನೀತಿಯೊಂದನ್ನು ಜಾರಿಗೊಳಿಸುವುದಾಗಿ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಮಧ್ಯಾಹ್ನದ ಬಿಸಿಯೂಟ ಯೋಜನೆಗೆ ಅನುದಾನ ಹೆಚ್ಚಿಸಲಾಗಿದೆ. ಸರ್ಕಾರದ ಈ ನಿರ್ಧಾರ ಸ್ವಾಗತಾರ್ಹ.

-ಆಸಿಯ ಬೇಗಂ, *ಜಿಲ್ಲಾ ಸಂಚಾಲಕರು, ಎಐಡಿಎಸ್‌ಓ.*

ಜಿಲ್ಲೆ ರೈತರಿಗೆ ಸಾಧಾರಣ, ಆಶಾದಾಯಕ ಹಾಗೂ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್. ಇದು ಜಾತಿ– ಜನಾಂಗಗಳ ಮನವೊಲಿಸುವ ಬಜೆಟ್ ಆಗಿದೆ. ರಾಜ್ಯದಲ್ಲಿ ತೀವ್ರ ಸಂಕಷ್ಟದಲ್ಲಿರುವ ರೈತರ ಸಾಲ ಮನ್ನಾ ಆಗಬೇಕಾಗಿತ್ತು. ಜೊತೆಗೆ ರೈತರಿಗೆ ತೆಲಂಗಾಣ ಮಾದರಿ ವೈಯಕ್ತಿಕ ಜೀವ ವಿಮೆ 5 ಲಕ್ಷದವರೆಗೆ ನಿಗದಿಪಡಿಸಬೇಕಾಗಿತ್ತು. ರಸಗೊಬ್ಬರದ ಬೆಲೆ ಇಳಿಕೆ ಮಾಡಬೇಕಾಗಿತ್ತು. ಇದು ರೈತರ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್ ಆಗಿದೆ.

-ಹಳ್ಳಿಕೆರೆಹುಂಡಿ ಭಾಗ್ಯರಾಜ್, *ಕಾರ್ಯಾಧ್ಯಕ್ಷರು, ರಾಜ್ಯ ಕಬ್ಬು ಬೆಳೆಗಾರರ ಸಂಘ.*

ಗುಂಡ್ಲುಪೇಟೆ ಜಿಟಿಟಿಸಿ: ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಚಾಮರಾಜನಗರ, ಜು.7– ಗುಂಡ್ಲುಪೇಟೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ 2023–24ನೇ ಸಾಲಿಗೆ ಒಂದು ವರ್ಷದ ಟೂಲ್ ರೂಮ್ ಮೆಶಿನಿಷ್ಟ (ಟಿಆರ್‌ಎಂ) ಹಾಗೂ ಎರಡು ತಿಂಗಳ ಅವಧಿಯ ಸಿಎನ್‌ಸಿ ಆಪರೇಟರ್, ಟರ್ನರ್, ಮಿಲ್ಲರ್, ಗ್ರೈಂಡರ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಎಸ್‌ಎಸ್‌ಎಲ್‌ಸಿ, ಡಿಪ್ಲೊಮಾ, ಐಟಿಐ, ಪದವಿ, ಬಿಇ ವ್ಯಾಸಂಗ ಮಾಡಿರುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ, ಪಂಗಡ ನಿರುದ್ಯೋಗ ಅಭ್ಯರ್ಥಿಗಳಿಗೆ ಉಚಿತ ಕೌಶಲ್ಯ ತರಬೇತಿ ನೀಡಲಾಗುವುದು.

ಟೂಲ್ ರೂಮ್ ಮೆಶಿನಿಷ್ಟ್ ತರಬೇತಿ ಪಡೆಯುವ ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ 30 ಸಾವಿರ ಶಿಷ್ಯವೇತನ ನೀಡಲಾಗುವುದು. ಉಳಿದ ಜನಾಂಗದ ಅಭ್ಯರ್ಥಿಗಳಿಗೂ ವಿಶೇಷ ಸೌಲಭ್ಯ ಕಲ್ಪಿಸಲಾಗುವುದು. ಅಭ್ಯರ್ಥಿಗಳು ಆ.15 ರೊಳಗೆ ಅರ್ಜಿ ಸಲ್ಲಿಸಬೇಕು. ಮಾಹಿತಿಗೆ ಮೊ: 9164261642, 9916188127 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ರಾಹುಲ್ ಗಾಂಧಿ ಸದಸ್ಯತ್ವ ಅನರ್ಹ ಖಂಡಿಸಿ

ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

ಚಾಮರಾಜನಗರ, ಜು.7– ಪ್ರಧಾನಿ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಎಐಸಿಸಿ ಮುಖಂಡ ರಾಹುಲ್ ಗಾಂಧಿ ಅವರ ಲೋಕಸಭಾ ಸದಸ್ಯತ್ವವನ್ನು ಅನರ್ಹಗೊಳಿಸುವ ಹುನ್ನಾರ ನಡೆಸುತ್ತಿದ್ದು, ಪ್ರಜಾಪ್ರಭುತ್ವ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿ ನಗರದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಸತ್ತಿ ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿ ಎದುರು ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು ರಸ್ತೆ ತಡೆದು ಕೆಲಕಾಲ ಪ್ರತಿಭಟನೆ ನಡೆಸಿ ಪ್ರಧಾನಿ ಮೋದಿ, ಬಿಜೆಪಿ ಸರ್ಕಾರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಪ್ರಧಾನಿ ಮೋದಿ ಹಾಗೂ ಬಿಜೆಪಿ ದೇಶದ ಪ್ರಜಾತಂತ್ರ ವ್ಯವಸ್ಥೆಗೆ ಬೆಲೆ ನೀಡುತ್ತಿಲ್ಲ. ವಿಪಕ್ಷಗಳನ್ನು ಮಣಿಸುವ ನಿಟ್ಟಿನಲ್ಲಿ ವಾಮಮಾರ್ಗಗಳನ್ನು ಅನುಸರಿಸಿ, ವಿಪಕ್ಷಗಳ ಶಕ್ತಿ ಕುಂದಿಸಿ, ಪ್ರಜಾಪ್ರಭುತ್ವ ಕಗ್ಗೊಲೆ ಮಾಡಲು ಮುಂದಾಗಿದೆ ಎಂದು ಟೀಕಿಸಿದರು.



ಸಂಸದರಾಗಿರುವ ರಾಹುಲ್ ಗಾಂಧಿ ಅವರ ಸದಸ್ಯತ್ವ ಅನರ್ಹಗೊಳಿಸುವ ಮೂಲಕ ಅವರು ಸಂಸತ್ ಪ್ರವೇಶಿಸದಂತೆ ತಡೆಯೊಡ್ಡುತ್ತಿದ್ದಾರೆ. ಪ್ರಜಾಪ್ರಭುತ್ವ ಹಾಗೂ ಸಂವಿಧಾನಬದ್ಧವಾಗಿ ಆಡಳಿತ ಪಕ್ಷಕ್ಕೆ ಇರುವಷ್ಟೇ ಮಾನ್ಯತೆ ವಿರೋಧ ಪಕ್ಷಗಳಿಗೂ ಇರುತ್ತದೆ. ಇದನ್ನು ಅರಿಯದೇ ಪ್ರಧಾನಿ ಮೋದಿ ಹಾಗೂ ಕೇಂದ್ರ ಸಚಿವ ಅಮಿತ್ ಶಾ ಕುತಂತ್ರ ಮಾಡಿ, ರಾಹುಲ್ ಗಾಂಧಿ ಸದಸ್ಯತ್ವ ಅನರ್ಹಗೊಳಿಸುವ ಕೆಲಸ ಮಾಡುತ್ತಿದ್ದಾರೆ. ಇತ್ತೀಚೆಗೆ ಮಹಾರಾಷ್ಟ್ರದಲ್ಲಿ ಎನ್‌ಸಿಪಿ ಪಕ್ಷ ಒಡೆದು ಒಂದು ಬಣವನ್ನು ಬಿಜೆಪಿಗೆ ಸೇರ್ಪಡೆಗೊಳಿಸುವ ಮೂಲಕ ಅರಾಜಕತೆ ಸೃಷ್ಟಿಸಿದ್ದಾರೆ. ಈ ಎಲ್ಲಾ ಬೆಳವಣಿಗೆ ಖಂಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರ ಸೂಚನೆ ಮೇರೆಗೆ ಪ್ರತಿಭಟನೆ ಮಾಡಲಾಗುತ್ತಿದೆ. ರಾಜ್ಯ ಹಾಗೂ ದೇಶದ ಜನರು ಪ್ರಜ್ಞಾವಂತರಾಗಿದ್ದು, ಮುಂದಿನ ದಿನಗಳಲ್ಲಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲಿಸಿದ ಮಾದರಿಯಲ್ಲಿಯೇ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ದೇಶದ ಜನರೇ ಅನರ್ಹಗೊಳಿಸಲಿದ್ದಾರೆ ಎಂದು ಭವಿಷ್ಯ ನುಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಆರ್.ಮಹದೇವ್, ಬ್ಲಾಕ್ ಅಧ್ಯಕ್ಷ ಮಹಮದ್ ಅಸ್ಗರ್, ಮುಖಂಡರಾದ ನಾಗಯ್ಯ, ನಾಗರಾಜು, ಚಂದ್ರು, ಶಿವಸ್ವಾಮಿ, ಮಹದೇವಶೆಟ್ಟಿ, ಮಹೇಶ್, ಎಪಿಎಂಸಿ ಮಾಜಿ ಅಧ್ಯಕ್ಷರಾದ ಶಿವಸ್ವಾಮಿ, ಡಿ.ಎಸ್.ಶಂಕರಮೂರ್ತಿ, ಜಿಪಂ ಮಾಜಿ ಸದಸ್ಯರಾದ ರಮೇಶ್, ಸೋಮಣ್ಣ, ಚೆಂಗುಮಣಿ, ಪುಟ್ಟಸ್ವಾಮಿ, ಕೆಲ್ಲಂಬಳ್ಳಿ ಸೋಮಶೇಖರ್, ಮಹದೇವ್, ಶೇಖರ್, ಮಲ್ಲಿಕಾರ್ಜುನಸ್ವಾಮಿ, ಮಾದಾಪುರ ರವಿಕುಮಾರ್, ರೇವಣ್ಣ, ನಾಗಾರ್ಜುನ ಪೃಥ್ವಿ, ಬಿಸಲವಾಡಿ ಮಹದೇವಯ್ಯ, ರವಿ, ಪುರುಷೋತ್ತಮ್, ಹೊಂಗನೂರು ಜಯರಾಜ್, ಕರಿನಂಜನಪುರ ಸ್ವಾಮಿ, ವಿನೋದ್ ಇತರರಿದ್ದರು.

ಮೂರನೇ ಪುಟದಿಂದ

ಸಿದ್ದರಾಮಯ್ಯರ ಗ್ಯಾರಂಟಿ ಬಜೆಟ್

ಇದರ ಪರಿಣಾಮವಾಗಿ ಮದ್ಯ ಪ್ರಿಯರ ಮೇಲೆ, ಭೂಮಿ ಖರೀದಿ ಮಾಡುವವರ ಮೇಲೆ ಮತ್ತು ಹೊಸ ವಾಹನಗಳನ್ನು ಕೊಳ್ಳುವವರ ಜೊತೆಗೆ ಜನಸಾಮಾನ್ಯರು ಬಳಸುವ ಸರಕುಗಳ ಮೇಲಿನ ವಾಣಿಜ್ಯ ತೆರಿಗೆ ಹೆಚ್ಚಿಸಿದ್ದಾರೆ.

ಮುಖ್ಯಮಂತ್ರಿ ಅವರು ತಮ್ಮ ಚಾಣಾಕ್ಯ ನಡೆಯಿಂದ ಬೃಹತ್ ಪ್ರಮಾಣದಲ್ಲಿ ಸಂಪನ್ಮೂಲ ಸಂಗ್ರಹಕ್ಕೆ ಮುಂದಾಗಿದ್ದರೂ ಮುಂಗಡಪತ್ರದಲ್ಲಿ ಯಾವ ವಸ್ತುಗಳ ಮೇಲೆ ಹೆಚ್ಚಿನ ತೆರಿಗೆ ಹೊರೆ ಬೀಳಲಿದೆ ಎಂಬುದನ್ನು ಬಿಡಿಸಿ ಹೇಳಿಲ್ಲ.

ಆದರೆ, ಅಬಕಾರಿ ಇಲಾಖೆಯ ವಾರ್ಷಿಕ ಸಂಗ್ರಹ ಗುರಿಯನ್ನು 36 ಸಾವಿರ ಕೋಟಿ ರೂ.ಗಳಿಗೂ, ವಾಣಿಜ್ಯ ತೆರಿಗೆ ಇಲಾಖೆ ಗುರಿಯನ್ನು 101000 ಕೋಟಿ ರೂ.ಗಳಿಗೆ ನಿಗದಿಪಡಿಸಿದ್ದಾರೆ. ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 25,000 ಕೋಟಿ ರೂ., ಸಾರಿಗೆ ಇಲಾಖೆಗೆ 11,500 ಕೋಟಿ ರೂ. ನಿಗದಿಪಡಿಸಿದ್ದಾರೆ.

ಕೋವಿಡ್‌ನಿಂದ ಸಂಕಷ್ಟಕ್ಕೆ ಸಿಲುಕಿದ ಬಡವರು ಮತ್ತು ಕೆಳವರ್ಗದ ಜನರನ್ನು ಆರ್ಥಿಕವಾಗಿ ಪುನಃಶ್ಚೇತನಗೊಳಿಸಲು ಗ್ಯಾರಂಟಿ ಯೋಜನೆಗಳ ಅವಶ್ಯಕತೆ ಇದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಈ ಯೋಜನೆಗಳಿಗೆ ಅಗತ್ಯವಿರುವ ಸಂಪನ್ಮೂಲಗಳನ್ನು ಜನರಿಗೆ ಹೆಚ್ಚಿನ ಹೊರೆಯಾಗದಂತೆ ಹೊಂದಿಸಲಾಗಿದೆ. ತೆರಿಗೆ ಸಂಗ್ರಹ ವ್ಯವಸ್ಥೆಯಲ್ಲಿ ಸುಧಾರಣೆ ಹಾಗೂ ಸೋರಿಕೆ ತಡೆಗಟ್ಟುವುದರ ಜೊತೆಗೆ ಸರ್ಕಾರದ ಅನಗತ್ಯ ದುಂದು ವೆಚ್ಚಗಳಿಗೆ ಕಡಿವಾಣ ಹಾಕಲು ಕ್ರಮಕೈಗೊಳ್ಳಲಾಗುವುದು ಎಂದಿದ್ದಾರೆ.

ಹಣ ಹೊಂದಿಸಿಕೊಳ್ತೇವೆ: ಸಿಎಂ

ಶಿಸ್ತನ್ನು ಕಾಪಾಡಿಕೊಳ್ಳಲಾಗಿದೆ. ವಿತ್ತೀಯ ಹೊಣೆಗಾರಿಕೆ ಕಾಯ್ದೆಯಡಿ ವಿತ್ತೀಯ ಕೊರತೆ ಶೇ.3 ರಷ್ಟಿರಬೇಕು, ಸಾಲದ ಪ್ರಮಾಣ ಜಿಡಿಪಿಯ ಶೇ.25 %ರ ಒಳಗೆ ಇರಬೇಕು. ಉಳಿತಾಯ ಬಜೆಟ್ (revenue surplus) ಇರಬೇಕು ಎನ್ನುವ ಮಾನದಂಡಗಳಿವೆ. ವಿತ್ತೀಯ ಕೊರತೆ ಶೇ. 2.6 ರಷ್ಟಿದ್ದು, ಸಾಲ ಜಿಡಿಪಿಯ ಶೇ. 22.3 % ರಷ್ಟಿದೆ. ಹೀಗೆ 2 ಮಾನದಂಡಗಳನ್ನು ಪಾಲಿಸಿ ವಿತ್ತೀಯ ಶಿಸ್ತನ್ನು ಕಾಯ್ದುಕೊಳ್ಳಲಾಗಿದೆ ಎಂದು ವಿವರಿಸಿದರು. ಈ ಆಯವ್ಯಯದಲ್ಲಿ 2,50,933 ಕೋಟಿ ರೂ. ರಾಜಸ್ವ ವೆಚ್ಚ , ಬಂಡವಾಳ ವೆಚ್ಚ 54374 ಕೋಟಿ ರೂ.ಗಳಾಗಿದ್ದು, , 2022–23 ಹೋಲಿಸಿದರೆ ಶೇ,23 ರಷ್ಟು ರಾಜಸ್ವ ವೆಚ್ಚ ಹಾಗೂ ಶೇ.16 ರಷ್ಟು ಬಂಡವಾಳ ವೆಚ್ಚ ಹೆಚ್ಚಾಗುತ್ತದೆ ಎಂದರು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ 2021–22 ರಲ್ಲಿ ವಿತ್ತೀಯ ಕೊರತೆ 14,699.14 ಕೋಟಿ ರೂ.ಗಳಷ್ಟಿತ್ತು. ನಮ್ಮ ಸರ್ಕಾರದ ರಾಜಸ್ವ ಕೊರತೆ 12,523 ಕೋಟಿ ರಷ್ಟಿದೆ, ವಿತ್ತೀಯ ಕೊರತೆ 66,646 ಕೋಟಿ ರೂ. ಇದು ಜಿಎಸ್ ಡಿಪಿಯ ಶೇ. 2.6 ರಷ್ಟಿದೆ. ರಾಜ್ಯದ ಹೊಣೆಗಾರಿಕೆ 5,71,665 ಕೋಟಿ ರೂ.ಗಳಷ್ಟಿದ್ದು, ಇದು ಜಿಎಸ್ ಡಿಪಿ ಶೇ. 22.3 ರಷ್ಟಿದೆ. 2023–24ಕ್ಕೆ ರಾಜ್ಯವು ಪಡೆಯುವ ಸಾಲ 85818 ಕೋಟಿ ರೂ.ಗಳೆಂದು ಅಂದಾಜಿಸಲಾಗಿದೆ.

ವಾಣಿಜ್ಯ ತೆರಿಗೆ ಫೆಬ್ರವರಿ ಆಯವ್ಯಯಕ್ಕಿಂತ 4000 ಕೋಟಿ ರೂ. ಹೆಚ್ಚುವರಿ ಗುರಿ ನಿಗದಿಪಡಿಸಲಾಗಿದೆ. ಅಬಕಾರಿ ಸುಂಕ ಗುರಿ 1000 ಕೋಟಿ ರೂ. ಹೆಚ್ಚಳ ಮಾಡಿದೆ. ಇದನ್ನು ಸೇರಿದಂತೆ ತೆರಿಗೆ ಸಂಗ್ರಹದ ಒಟ್ಟಾರೆ ಗುರಿಯನ್ನು 13,500 ಕೋಟಿ ರೂ.ಗಳಷ್ಟು ಹೆಚ್ಚಳ ಮಾಡಿದೆ ಎಂದರು.

ಗಂಡಸ್ರು ಮಾತ್ರ ಕುಡಿಯೋದಾ!

ವ್ಹಿಸ್ಕಿ ಮತ್ತು ಬಿಯರ್ ಮೇಲೆ ತೆರಿಗೆ ಹೆಚ್ಚಿಸಿದ್ದಕ್ಕೆ ಪತ್ರಕರ್ತರು, "ನೀವು ಮಹಿಳಾ ಪರ ಬಜೆಟ್ ಮಂಡಿಸಿ ಪುರುಷ ವಿರೋಧಿ ಆಗ್ತಿದ್ದೀರಿ" ಎಂದು ಹಾಸ್ಯ ಮಾಡಿದರು. ಅದೇ ಹಾಸ್ಯದ ಧಾಟಿಯಲ್ಲೇ ಉತ್ತರಿಸಿದ ಮುಖ್ಯಮಂತ್ರಿಗಳು ಗಂಡುಸ್ರು ಮಾತ್ರ ಕುಡಿಯೋದಾ ಎನ್ನುತ್ತಾ, ರಾಜ್ಯದ ಕಲ್ಯಾಣಕ್ಕಾಗಿ ಕುಡಿಯುವವರು ತಮ್ಮ ಪಾಲನ್ನೂ ಕೊಡಲಿ ಬಿಡಿ ಎಂದರು.

ಭೂಸ್ವಾಧೀನ ಪ್ರಕ್ರಿಯೆಗೆ ಆದ್ಯತೆ ಮೇರೆಗೆ ಕ್ರಮ

ಶೀಘ್ರವೇ ಕ್ರಮಕೈಗೊಳ್ಳಲಾಗುವುದು ಎಂದರು. ಜಲಸಂಪನ್ಮೂಲ ಇಲಾಖೆಯಡಿ ಕಳೆದ ಮಾರ್ಚ್ 31ರ ಅಂತ್ಯಕ್ಕೆ ಅನುಮೋದಿಸಲಾಗಿರುವ ಯೋಜನೆಗಳಿಗೆ ಒಂದು ಲಕ್ಷ ಕೋಟಿ ರೂ. ಒದಗಿಸುವ ಅವಶ್ಯಕತೆಯಿದೆ. ಈ ಯೋಜನೆಗಳ ಕಾಮಗಾರಿ ಹಾಗೂ ಭೂಸ್ವಾಧೀನ ವೆಚ್ಚ ಹೆಚ್ಚಳದ ಕಾರಣ 25,000ದಿಂದ 40,000 ಕೋಟಿ ರೂ.ಗಳಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ. ಇದಲ್ಲದೇ ಕಳೆದ 6 ತಿಂಗಳ ಅವಧಿಯಲ್ಲಿ 25,548 ಕೋಟಿ ರೂ. ಅಂದಾಜು ವೆಚ್ಚದ 1,274 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಚಾಲನೆ ನೀಡಲಾಗಿದೆ. ಜಲಸಂಪನ್ಮೂಲ ಇಲಾಖೆಯ ಆಯವ್ಯಯ ಹಂಚಿಕೆ ವಾರ್ಷಿಕ ಸರಾಸರಿ 20,000 ಕೋಟಿ ರೂ. ಗಳಷ್ಟಿದ್ದು, ಅನುಮೋದಿಸಿರುವ ಯೋಜನೆಗಳ ಅಂದಾಜು ಮೊತ್ತ ಇದರ ಐದು ಪಟ್ಟು ಹೆಚ್ಚಾಗಿರುವುದು ವಿತ್ತೀಯ ಶಿಸ್ತಿನ ಉಲ್ಲಂಘನೆಗೆ ಸ್ಪಷ್ಟ ನಿದರ್ಶನವಾಗಿದೆ. ಅಲ್ಲದೆ ಕಳೆದ ಆರು ತಿಂಗಳ ಅವಧಿಯಲ್ಲಿಯೇ ಇಲಾಖೆಯ ವಾರ್ಷಿಕ ಆಯವ್ಯಯ ಹಂಚಿಕೆಗಿಂತ ಹೆಚ್ಚಿನ ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಚಾಲನೆ ನೀಡಿರುವುದು ವಿತ್ತೀಯ ಅಶಿಸ್ತಿನ ಪರಮಾವಧಿಯಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಇಲಾಖೆಯಡಿ ಮಂದಗತಿಯಲ್ಲಿ ಸಾಗುತ್ತಿರುವ ಯೋಜನೆಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸುವುದರೊಂದಿಗೆ ಪ್ರಸಕ್ತ ಸಾಲಿನಲ್ಲಿ 940 ಕೋಟಿ ರೂ. ಬಾಕಿ ಮೊತ್ತದ 10 ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಿ, ಸುಮಾರು 25,948 ಹೆಕ್ಟೇರ್ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗುವುದು. ರಾಜ್ಯದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು 172 ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಇವುಗಳಲ್ಲಿ 19 ಕೆರೆ ತುಂಬಿಸುವ ಯೋಜನೆಗಳನ್ನು 770 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಿ, ಬೆಳಗಾವಿ, ದಾವಣಗೆರೆ, ಬಳ್ಳಾರಿ, ಹಾವೇರಿ, ಗದಗ, ಬೀದರ್, ಉತ್ತರ ಕನ್ನಡ, ವಿಜಯನಗರ, ಕೊಪ್ಪಳ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ 899 ಕೆರೆಗಳಿಗೆ ನೀರು ತುಂಬಿಸಲಾಗುವುದು.

ಮಧ್ಯ ಕರ್ನಾಟಕದ ಪ್ರಮುಖ ಯೋಜನೆಯಾದ ಭದ್ರಾ ಮೇಲ್ದಂಡೆ ಯೋಜನೆಯನ್ನು ಡಬಲ್ ಇಂಜಿನ್ ಎಂದು ಹೇಳಿಕೊಳ್ಳುವ ಸರ್ಕಾರವಿದ್ದಾಗ್ಯೂ, ರಾಷ್ಟ್ರೀಯ ಯೋಜನೆಯನ್ನಾಗಿ ಇಲ್ಲಿಯವರೆಗೂ ಅಧಿಕೃತವಾಗಿ ಅನುಮೋದಿಸಿರುವುದಿಲ್ಲ. ಕೇಂದ್ರ ಸರ್ಕಾರವು 2023–24ನೇ ಸಾಲಿನ ತನ್ನ ಆಯವ್ಯಯದಲ್ಲಿ 5,300 ಕೋಟಿ ರೂ.ಗಳ ಅನುದಾನವನ್ನು ಭದ್ರಾ ಯೋಜನೆಗೆ ಘೋಷಿಸಿದ್ದು ಸದರಿ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ ಯೋಜನೆಯ ಅನುಷ್ಠಾನಕ್ಕೆ ಆದ್ಯತೆಯ ಮೇಲೆ ಕ್ರಮವಹಿಸಲಾಗುವುದು. ತುಂಗಭದ್ರಾ ಜಲಾಶಯದಲ್ಲಿ ಹೂಳಿನ ಸಂಗ್ರಹಣೆಯಿಂದ ಉಂಟಾಗಿರುವ ನೀರು ಸಂಗ್ರಹಣೆ ಸಾಮರ್ಥ್ಯದ ಕೊರತೆ ನಿವಾರಿಸಲು ಕೊಪ್ಪಳ ಜಿಲ್ಲೆಯ ನವಲೆ ಬಳಿ ಸಮತೋಲನಾ ಜಲಾಶಯ ನಿರ್ಮಾಣ ಯೋಜನೆಯನ್ನು ನೆರೆಯ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಸಮಾಲೋಚಿಸಿ, ಸಹಮತಿಯೊಂದಿಗೆ ಯೋಜನೆ ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗುವುದು. ಕೆರೆಗಳ ಸುತ್ತ ಜೀವ ಪರಿಸರವನ್ನು ಉಳಿಸಿಕೊಂಡು, ಅವುಗಳ ಪುನರುಜ್ಜೀವನಗೊಳಿಸುವುದಕ್ಕಾಗಿ ಕೆರೆಗಳ ಬಳಕೆದಾರರ ಸಂಘಗಳನ್ನು ಬಲಿಷ್ಠಗೊಳಿಸಿ ಕೆರೆ ಅಭಿವೃದ್ಧಿಗೆ ಪಾಲುದಾರರನ್ನಾಗಿ ಮಾಡಿ ಜಲಬಳಕೆ ಮಾಡಲು ಅರ್ಥಪೂರ್ಣ ಕ್ರಿಯಾಯೋಜನೆ ಸಿದ್ಧಪಡಿಸಲಾಗುವುದು ಎಂದರು.

ಕರ್ನಾಟಕವಾಗಿ 50 ವರ್ಷ

ಸಲ್ಲಿಸಿದ ಅನುಪಮ ಸೇವೆಯನ್ನು ಸ್ಮರಿಸಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಡಾ. ಎಂ. ಎಂ. ಕಲಬುರಗಿ ಅವರ ಹೆಸರಿನಲ್ಲಿ ಒಂದು ಟ್ರಸ್ಟ್ ಅನ್ನು ಸ್ಥಾಪಿಸಲಾಗುವುದು. ಖ್ಯಾತ ಸಾಹಿತಿ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಹೆಸರಿನಲ್ಲಿ ಸ್ಥಾಪಿಸಿರುವ ಪ್ರತಿಷ್ಠಾನದ ಮೂಲಕ ಅವರ ಸಾಹಿತ್ಯ ಹಾಗೂ ಪರಿಸರ ಸಂರಕ್ಷಣೆಯ ಚಿಂತನೆಗಳನ್ನು ಯುವಜನಾಂಗಕ್ಕೆ ಪರಿಚಯಿಸುವ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಎರಡು ಕೋಟಿ ರೂ. ಗಳನ್ನು ಒದಗಿಸಲಾಗುವುದು. ಜಾನಪದ ಕಲೆಗಳನ್ನು ಉಳಿಸಿ ಬೆಳೆಸಲು ಮತ್ತು ಯುವ ಪೀಳಿಗೆಗೆ ಪರಿಚಯಿಸಲು ಪ್ರಮುಖ ಪಾತ್ರ ವಹಿಸುತ್ತಿರುವ ರಾಮನಗರ ಜಿಲ್ಲೆಯ ಜಾನಪದ ಲೋಕಕ್ಕೆ ಎರಡು ಕೋಟಿ ರೂ. ಅನುದಾನ ನೀಡಲಾಗುವುದು. ಇದೇ ಮಾದರಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕೊಪ್ಪಳ ಜಿಲ್ಲೆಯಲ್ಲಿ ಜಾನಪದ ಲೋಕ ಸ್ಥಾಪನೆ ಮಾಡಲಾಗುವುದು.

ಬಂಜಾರ ಸಮುದಾಯದ ಸಾಂಸ್ಕೃತಿಕ ಮತ್ತು ಜಾನಪದ ನೃತ್ಯ ಕಲೆಗಳು ನಶಿಸಿ ಹೋಗುತ್ತಿರುವ ಕಾರಣ ಅವರ ಸಂಸ್ಕೃತಿಯನ್ನು ಬೆಳೆಸುವ ಹಾಗೂ ಉಳಿಸುವ ನಿಟ್ಟಿನಲ್ಲಿ ವಿನೂತನ ಕಾರ್ಯಕ್ರಮವನ್ನು ಆಯೋಜಿಸಲಾಗುವುದು.

ಕರ್ನಾಟಕದ ಬುಡಕಟ್ಟು ಸಮುದಾಯದ ಜನರ ಕಲಾಪ್ರತಿಭೆಯನ್ನು ಪರಿಚಯಿಸುವ ಹಿತದೃಷ್ಟಿಯಿಂದ ಮತ್ತು ಅವರ ಸಂಸ್ಕೃತಿ, ಜಾನಪದ ವೈದ್ಯ ಪದ್ಧತಿ, ಜಾನಪದ ಕಲೆಗಳ ಪ್ರದರ್ಶನ, ಕರಕುಶಲ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವುದಕ್ಕೆ ಉತ್ತೇಜನ ನೀಡಲು ಬುಡಕಟ್ಟು ಜನಾಂಗದ ಕಲಾವಿದರ ಸಮಾವೇಶವನ್ನು ಆಯೋಜಿಸಲಾಗುವುದು ಎಂದಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯವುಳ್ಳ ರಾಜ್ಯದ ಕ್ರೀಡಾಪಟುಗಳನ್ನು ತಯಾರಿಸಲು ಬೆಂಗಳೂರಿನಲ್ಲಿ ಬಾಸ್ಕೆಟ್‌ಬಾಲ್ ಪ್ರಾದೇಶಿಕ ತರಬೇತಿ ಕೇಂದ್ರ ಮತ್ತು ಮೈಸೂರಿನಲ್ಲಿ ಸೈಕ್ಲಿಂಗ್ ವೇಲೋಡ್ರೋಮ್ ಅನ್ನು ತಲಾ 10 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಕ್ರೀಡಾ ಚಟುವಟಿಕೆಗಳಲ್ಲಿ ವಿಶೇಷ ಚೇತನರ ಮತ್ತು ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಅಗತ್ಯವಾದ ಮೂಲಭೂತ ಸೌಕರ್ಯಗಳು ಮತ್ತು ನುರಿತ ತರಬೇತುದಾರರ ಸೇವೆಯನ್ನು ಒದಗಿಸಲು 10 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಕ್ರೀಡಾ ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲು ಐದು ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು ಮತ್ತು ಕ್ರೀಡಾಪಟುಗಳಿಗೆ ತಂಗಲು ಅನುಕೂಲವಾಗುವಂತೆ ಸುಸಜ್ಜಿತವಾದ ಕ್ರೀಡಾ ವಸತಿ ನಿಲಯವನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಿಸಲಾಗುವುದು. ಇದಕ್ಕಾಗಿ 10 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

ಕ್ರೀಡಾಪಟುಗಳಿಗೆ ಪೊಲೀಸ್ ಮತ್ತು ಅರಣ್ಯ ಇಲಾಖೆಯ ನೇಮಕಾತಿಯಲ್ಲಿ ಶೇ. 3 ರಷ್ಟು ಹುದ್ದೆಗಳನ್ನು ಮೀಸಲಿಡಲಾಗುವುದು ಎಂದಿದ್ದಾರೆ.

ಜಿಟಿ ಜಿಟಿ ಮಳೆ, ಚಳಿ, ಗಾಳಿ ಲೆಕ್ಕಿಸದೇ ಚಾಮುಂಡಿ ತಾಯಿ ದರ್ಶನ ಪಡೆದ ಭಕ್ತರು



ಮೊದಲೆರಡು ವಾರಕ್ಕಿಂತಲೂ ಮೂರನೇ ಆಷಾಢ ಶುಕ್ರವಾರದಂದು ಬೆಟ್ಟದ ಮೇಲೆ ಭಕ್ತ ಸಾಗರ

ಮೈಸೂರು,ಜು.7(ಎಂಟಿವೈ)– ಮೂರನೇ ಆಷಾಢ ಶುಕ್ರವಾರದಂದು ಚಾಮುಂಡಿಬೆಟ್ಟದಲ್ಲಿ ಜರುಗಿದ ವಿಶೇಷ ಪೂಜಾ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ನಾಡದೇವಿಯ ದರ್ಶನ ಪಡೆದು ಸಂಭ್ರಮಿಸಿದರು. ಕಳೆದ ಎರಡು ವಾರಕ್ಕೆ ಹೋಲಿಸಿದರೆ, ಬೆಟ್ಟಕ್ಕೆ ಆಗಮಿಸಿದ ಭಕ್ತರ ಸಂಖ್ಯೆ ಹೆಚ್ಚಾಗಿತ್ತು.



ಆಷಾಢ ಮಾಸದ ವಿಶೇಷ ಪೂಜಾ ಕೈಂಕರ್ಯದಲ್ಲಿ ಪಾಲ್ಗೊಳ್ಳಲು ಮಧ್ಯರಾತ್ರಿಯಿಂದಲೇ ರಾಜ್ಯದ ವಿವಿಧೆಡೆಯಿಂದ ಭಕ್ತರು ಆಗಮಿಸಿ, ದೇವಿಯ ದರ್ಶನ ಪಡೆಯುವ ಮೂಲಕ ಪುನೀತರಾದರು. ಕಳೆದ ವಾರದಂತೆ ಈ ಬಾರಿಯೂ ಬೆಟ್ಟದಲ್ಲಿ ಬಿಗಿ ಪೊಲೀಸ್ ಭದ್ರತೆಯಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವದಲ್ಲಿ ಭಕ್ತರು ದಂಡೇ ಪಾಲ್ಗೊಂಡು ತಾಯಿ ಚಾಮುಂಡೇಶ್ವರಿಗೆ ಜೈಕಾರದ ಘೋಷಣೆ ಕೂಗಿ, ಭಕ್ತಿ ಪ್ರದರ್ಶಿಸಿದರು.

ಮುಂಜಾನೆಯಿಂದಲೇ ಪೂಜೆ: ಆಷಾಢ ಶುಕ್ರವಾರದ ಹಿನ್ನೆಲೆಯಲ್ಲಿ ಚಾಮುಂಡೇಶ್ವರಿ ದೇವಿಗೆ ಪ್ರಧಾನ ಆಗಮಿಕ ಡಾ.ಎನ್.ಶಶಿಶೇಖರ್ ದೀಕ್ಷಿತ್ ನೇತೃತ್ವದಲ್ಲಿ ವಿವಿಧ ಅಭಿಷೇಕ ಮಾಡಿ ಪೂಜೆ ನೆರವೇರಿಸಲಾಯಿತು. ಮುಂಜಾನೆ 3.30ರಿಂದಲೇ ದೇವಿಗೆ ಮಹಾನ್ಯಾಸಕ ಪೂರ್ವಕ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಅಭಿಷೇಕ ನೆರವೇರಿಸಲಾಯಿತು. ಗರ್ಭಗುಡಿಯಲ್ಲಿರುವ ಚಾಮುಂಡೇಶ್ವರಿ ವಿಗ್ರಹಕ್ಕೆ ಮಹಾಲಕ್ಷ್ಮೀ ಅಲಂಕಾರ ಮಾಡಿ ವಿವಿಧ ಹೂವುಗಳಿಂದ ಅಲಂಕರಿಸಲಾಯಿತು.

ಮುಂಜಾನೆ 5.30 ರಿಂದ ರಾತ್ರಿ 9.30 ರವರೆಗೂ ದರ್ಶನ: ಧಾರ್ಮಿಕ ಕಾರ್ಯ ಮುಗಿದ ನಂತರ ಮುಂಜಾನೆ 5.30ರಿಂದ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಯಿತು. ಬೆಳಗ್ಗೆ 9.30ಕ್ಕೆ ಉತ್ಸವ ಮೂರ್ತಿ ಮೆರವಣಿಗೆ ಮಾಡಿ ಸಂಪ್ರದಾಯದಂತೆ ಪೊಲೀಸ್ ಗನ್ ಸೆಲ್ಯೂಟ್ ನೀಡಿ ಗೌರವ ಸಮರ್ಪಿಸಲಾಯಿತು. ರಾತ್ರಿ 9.30 ರವರೆಗೂ ಭಕ್ತರಿಗೆ ದೇವಿ ದರ್ಶನಕ್ಕೆ ಅವಕಾಶ ನೀಡಲಾಯಿತು. ಮುಂಜಾನೆಯಿಂದ ರಾತ್ರಿವರೆಗೆ ಸಾವಿರಾರು ಭಕ್ತರು ಬೆಟ್ಟಕ್ಕೆ ಬಂದು ದೇವಿಯ ದರ್ಶನ ಪಡೆದರು.

ತುಂತುರು ಮಳೆ, ಕೊರೆವ ಚಳಿ: ಆಷಾಢ ಶುಕ್ರವಾರ ದೇವಿಯ ದರ್ಶನಕ್ಕೆ ಬಂದ ಭಕ್ತರು ರಾತ್ರಿಯಿಡೀ ದೇವಾಲಯದ ಮುಂದೆ ಜಾಗರಣೆ ಮಾಡಿದ್ದಾರೆ. ವಿಶೇಷ ಪೂಜಾ ಮಹೋತ್ಸವವನ್ನು ಕಣ್ತುಂಬಿಕೊಳ್ಳಲು ವಿವಿಧೆಡೆಯಿಂದ ರಾತ್ರಿಯೇ ಮೈಸೂರಿಗೆ ಬಂದಿದ್ದ ಭಕ್ತರು ಮೆಟ್ಟಿಲುಗಳ ಮೂಲಕ ಬೆಟ್ಟಕ್ಕೆ ಬಂದು ಗುರುವಾರ ರಾತ್ರಿಯಿಂದಲೇ ದೇವಾಲಯದ ಮುಂಭಾಗ ಸರದಿ ಸಾಲಿನಲ್ಲಿ ನಿಂತಿದ್ದರು. ಮುಂಜಾನೆ 5.30ಕ್ಕೆ ದೇವಾಲಯದ ಬಾಗಿಲು ತೆರೆಯುತ್ತಿದ್ದಂತೆಯೇ ದೇವಾಲಯ ಪ್ರವೇಶಿಸಿ, ದರ್ಶನ ಪಡೆದು ಪುಳಕಿತರಾದರು. ಮುಂಜಾನೆ ಸುರಿದ ತುಂತುರು, ಮಳೆ, ಕೊರೆವ ಚಳಿ, ರಭಸ ಗಾಳಿ ನಡುವೆಯು ಭಕ್ತರು ದೇವಿ ದರ್ಶನ ಪಡೆಯಲು ಗಂಟೆಗಟ್ಟಲೆ ಸಾಲುಗಟ್ಟಿ ನಿಂತಿದ್ದು ವಿಶೇಷವಾಗಿತ್ತು.

ಭಕ್ತರಿಗೆ ಪ್ರಸಾದದ ವ್ಯವಸ್ಥೆ: ಬೆಟ್ಟಕ್ಕೆ ಬಂದ ಭಕ್ತರಿಗೆ ಮಲ್ಟಿಲೆವೆಲ್ ಪಾರ್ಕಿಂಗ್ ಕಟ್ಟಡದಲ್ಲಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ದರ್ಶನ ಪಡೆದ ಭಕ್ತರು ಪ್ರಸಾದ ಸ್ವೀಕರಿಸಿದರೆ, ಮತ್ತಷ್ಟು ಮಂದಿ ದೇವಾಲಯಕ್ಕೆ ಹೊರಗಿನಿಂದಲೇ ಕೈ ಮುಗಿದು ಪ್ರಸಾದ ಸ್ವೀಕರಿಸಲು ತೆರಳುತ್ತಿದ್ದರು.

ನೂಕುನುಗ್ಗಲು: ವಿವಿಧ ಪ್ರಭಾವ ಬಳಸಿ ದೇವಾಲಯಕ್ಕೆ ವಿಐಪಿ ಗೇಟ್‌ನಿಂದ ನುಗ್ಗಲು ಕೆಲವರು ಪ್ರಯತ್ನಿಸಿದರು. ಈ ವೇಳೆ ಪೊಲೀಸರು ತಡೆದರು. ಇದರಿಂದ ಪೊಲೀಸರು ಹಾಗೂ ಭಕ್ತರ ನಡುವೆ ಮಾತಿನ ಚಕಮಕಿ ನಡೆಯಿತು. ಅಲ್ಲದೆ, ಉತ್ಸವ ಮೂರ್ತಿಯನ್ನು ದೇವಾಲಯಕ್ಕೆ ಕೊಂಡೊಯ್ಯುವ ವೇಳೆಯೂ ಕೆಲವರು ದೇವಾಲಯಕ್ಕೆ ನುಗ್ಗಲು ಪ್ರಯತ್ನಿಸಿದರು. ಆದರೆ ಪೊಲೀಸರು ತಡೆ ಹಿಡಿದರು. ಮತ್ತೆ ಮತ್ತೆ ನುಗ್ಗಲು ಪ್ರಯತ್ನಿಸುತ್ತಿದ್ದವರನ್ನು ಹಿಂದೆ ಸರಿಸಲು ಅಶ್ವಾರೋಹಿ ಪಡೆಯ ಸಿಬ್ಬಂದಿಗಳನ್ನು ಕರೆಸಲಾಯಿತು. ಕುದುರೆ ಬರುತ್ತಿದ್ದಂತೆ ಕೆಲವರು ಜಾಗ ಖಾಲಿ ಮಾಡಿದರು.

ಕಂಗೊಳಿಸಿದ ದೇವಾಲಯ

ಆಷಾಢ ಮಾಸದ ವಿಶೇಷ ಪೂಜಾ ಮಹೋತ್ಸವದ ಅಂಗವಾಗಿ ಚಾಮುಂಡೇಶ್ವರಿ ದೇವಾಲಯವನ್ನು ವಿವಿಧ ಬಣ್ಣ ಬಣ್ಣದ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು. ದೇವಾಲಯ ಗರ್ಭಗುಡಿಯ ಮುಂಭಾಗದ ಪ್ರಾಂಗಣ, ಗರುಡ ಕಂಬದ ಮುಂಭಾಗ ಸೇರಿದಂತೆ ವಿವಿಧೆಡೆ ಬಣ್ಣ ಬಣ್ಣದ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು. ಹೂವಿನ ಅಲಂಕಾರದಿಂದ ಕಂಗೊಳಿಸುತ್ತಿದ್ದ ದೇವಾಲಯ ಪ್ರವೇಶಿಸುತ್ತಿದ್ದಂತೆ ಭಕ್ತರಲ್ಲಿ ಭಕ್ತಿಭಾವ ಹೆಚ್ಚಿಸಿತು.

ಉಚಿತ ಬಸ್: ಎಂದಿನಂತೆ ಈ ಬಾರಿಯೂ ಲಲಿತಮಹಲ್ ಪ್ಯಾಲೇಸ್ ಮೈದಾನದಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿತ್ತು. ಮೈಸೂರು ಜಿಲ್ಲೆ ಮಾತ್ರವಲ್ಲದೆ, ಹೊರಗಿನಿಂದ ಸಾವಿರಾರು ವಾಹನಗಳಲ್ಲಿ ಬಂದ ಭಕ್ತರು, ಪ್ರವಾಸಿಗರು ತಮ್ಮ ಖಾಸಗಿ ವಾಹನಗಳನ್ನು ನಿಲ್ಲಿಸಿ, ದೇವಾಲಯದ ವತಿಯಿಂದ ಮಾಡಿದ್ದ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಬೆಟ್ಟಕ್ಕೆ ಪ್ರಯಾಣಿಸಿದರು.

ಪ್ಲಾಸ್ಟಿಕ್ ಸಂಗ್ರಹ ಅಭಿಯಾನ



ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಪರಿಸರ ಬಳಗದ ಕಾರ್ಯಕರ್ತರು ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತಲು ಬಂದ ಭಕ್ತರು ಕೊಂಡೊಯ್ಯುತ್ತಿದ್ದ ಪ್ಲಾಸ್ಟಿಕ್ ಕವರ್‌ಗಳನ್ನು ಸಂಗ್ರಹಿಸಿ, ಪ್ಲಾಸ್ಟಿಕ್ ಮುಕ್ತ ಬೆಟ್ಟ ಮಾಡಲು ಸಹಕರಿಸುವಂತೆ ಜಾಗೃತಿ ಮೂಡಿಸಿದರು. ಕಳೆದ ಎರಡು ವಾರದಿಂದಲೂ ಪರಿಸರ ಬಳಗದ ಸದಸ್ಯರು ಪ್ಲಾಸ್ಟಿಕ್ ಸಂಗ್ರಹ ಅಭಿಯಾನದಲ್ಲಿ ತೊಡಗಿದ್ದು, ಭಕ್ತರು ಪೂಜಾ ಸಾಮಗ್ರಿಗಳನ್ನು ಪರಿಸರಕ್ಕೆ ಮಾರಕವಾದ ಪ್ಲಾಸ್ಟಿಕ್ ಕವರ್‌ನಲ್ಲಿ ತಂದರೆ, ಅವರಿಗೆ ಪ್ಲಾಸ್ಟಿಕ್ ಕವರ್ ಪಡೆದು, ಪೇಪರ್ ಕವರ್ ನೀಡುತ್ತಿದ್ದರು. ಈ ಅಭಿಯಾನದಲ್ಲಿ 30ಕ್ಕೂ ಹೆಚ್ಚು ಸದಸ್ಯರು ಪ್ರತ್ಯೇಕ ಸ್ಥಳದಲ್ಲಿ ಪ್ಲಾಸ್ಟಿಕ್ ಸಂಗ್ರಹ ಮಾಡಿ ಪರಿಸರ ಕಾಳಜಿ ಪ್ರದರ್ಶಿಸಿದರು.

ಮೆಟ್ಟಿಲು ಮೂಲಕ ಬೆಟ್ಟ ಹತ್ತಿದ ಭಕ್ತರು: ವಿವಿಧ ಹರಕೆ ಹೊತ್ತಿದ್ದ ಮಹಿಳಾ ಭಕ್ತರು ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತಿದರು. ಪ್ರತಿಯೊಂದು ಮೆಟ್ಟಿಲುಗಳಿಗೂ ಅರಿಶಿನ–ಕುಂಕುಮ ಹಚ್ಚಿ ಪೂಜೆ ಸಲ್ಲಿಸುತ್ತಲೇ ಬೆಟ್ಟ ಹತ್ತುತ್ತಿದ್ದ ದೃಶ್ಯ ಕಂಡು ಬಂದಿತು.

ಗಣ್ಯರ ಗೈರು: ಆಷಾಢ ಮಾಸದ ಶುಕ್ರವಾರದಂತೆ ಚಾಮುಂಡಿಬೆಟ್ಟಕ್ಕೆ ಗಣ್ಯರು, ರಾಜಕಾರಣಿಗಳು ಕುಟುಂಬದ ಸದಸ್ಯರೊಂದಿಗೆ ಆಗಮಿಸುವುದು ವಾಡಿಕೆ. ಆದರೆ, ಶುಕ್ರವಾರ ರಾಜ್ಯ ಬಜೆಟ್ ಇದ್ದ ಕಾರಣ, ಜನಪ್ರತಿನಿಧಿಗಳು, ಸಚಿವರು ಬೆಟ್ಟದತ್ತ ಧಾವಿಸಲಿಲ್ಲ. ಇದರಿಂದ ಗಣ್ಯರ ಗೈರು ಎದ್ದು ಕಾಣುತ್ತಿತ್ತು. ಭಕ್ತರು ನಿಟ್ಟುಸಿರು ಬಿಟ್ಟರು.

ಮೈಸೂರು ನಗರದ ವಿವಿಧೆಡೆ ಆಷಾಢ ಶುಕ್ರವಾರದ ಪೂಜಾ ಕಾರ್ಯ

ಮೈಸೂರು,ಜು.7(ಎಂಟಿವೈ)– ಆಷಾಢ ಮಾಸದ ಶುಕ್ರವಾರ ಅಂಗವಾಗಿ ಮೈಸೂರಿನ ವಿವಿಧೆಡೆ ಪೂಜಾ ಮಹೋತ್ಸವ ಏರ್ಪಡಿಸಿ, ಸಾರ್ವಜನಿಕರಿಗೆ ಪ್ರಸಾದ ವಿತರಿಸಲಾಯಿತು.

ಮೈಸೂರಿನ ವಿವಿಧ ಬಡಾವಣೆಗಳಲ್ಲಿರುವ ಆಟೋ ಚಾಲಕರ ಸಂಘ, ಟ್ಯಾಕ್ಸಿ ಚಾಲಕರ ಸಂಘ, ವ್ಯಾಪಾರಿಗಳ ಸಂಘ, ಕ್ರೀಡಾಪಟುಗಳ ಸಂಘ, ವಿವಿಧ ಸಂಘ–ಸಂಸ್ಥೆಗಳ ಕಾರ್ಯಕರ್ತರು ಚಾಮುಂಡೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಭಕ್ತಿ ಪ್ರದರ್ಶಿಸಿದರು. ರಸ್ತೆ ಬದಿ ಪೆಂಡಾಲ್ ಹಾಕಿ ಪೂಜಾ ಮಹೋತ್ಸವ ಆಚರಿಸಿದರಲ್ಲದೇ, ಪ್ರಸಾದ ವಿತರಣೆ, ಅನ್ನ ಸಂತರ್ಪಣೆ, ಸಿಹಿ ವಿತರಣೆ ಸೇರಿದಂತೆ ವಿವಿಧ ತಿನಿಸನ್ನು ಸಾರ್ವಜನಿಕರಿಗೆ ವಿತರಿಸುವ ಮೂಲಕ ಆಷಾಢ ಮಾಸದ ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಚಾಮುಂಡೇಶ್ವರಿ ಭಾವಚಿತ್ರಕ್ಕೆ ಪೂಜೆ, ಪ್ರಸಾದ ವಿತರಣೆ



ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನ ಬಳಿ ಆಷಾಢ ಮಾಸದ ಶುಕ್ರವಾರದ ಅಂಗವಾಗಿ ವಿದ್ಯಾರ್ಥಿಗಳಿಗೆ ಪ್ರಸಾದ ವಿತರಿಸಲಾಯಿತು.

ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನ ಬಳಿ ಇನ್ಸ್‌ಟಿಟ್ಯೂಟ್ ಆಫ್ ಎಂಜಿನಿಯರ್ಸ್ ಬಳಿ ಟೀ–ಕಟ್ಟೆ ಬಳಗದ ಸಮಾನಮನಸ್ಕರಾದ ವಾಸುದೇವ್, ಎಸ್.ಸತೀಶ್‌ಕುಮಾರ್, ದಿನೇಶ್, ನಂಜುಂಡಸ್ವಾಮಿ, ಮನೋಹರ್, ಆನಂದ್, ಮಹೇಶ್, ಪ್ರಭಾಕರ್ ಹಾಗೂ ಇನ್ನಿತರರ ತಂಡ ಚಾಮುಂಡೇಶ್ವರಿ ಪೂಜೆ ಆಯೋಜಿಸಿದ್ದರು. ಬಳಿಕ ಪ್ರಸಾದ ವಿತರಣೆ ಮಾಡಲಾಯಿತು. ಮಹಾರಾಜ ಪದವಿ ಕಾಲೇಜು ಹಾಗೂ ಮಹಾರಾಣಿ ಕಾಲೇಜಿನ ವಿದ್ಯಾರ್ಥಿಗಳು ಪ್ರಸಾದ ಸ್ವೀಕರಿಸಿದರು. ತರಗತಿ ಮುಗಿಸಿ ಮನೆಯತ್ತ ಹೊರಡುತ್ತಿದ್ದ ಬಹುತೇಕ ಗ್ರಾಮೀಣ ಪ್ರದೇಶದ ಸಾವಿರಾರು ವಿದ್ಯಾರ್ಥಿಗಳು ಪ್ರಸಾದ ತಿಂದು ಹಸಿವು ನೀಗಿಸಿಕೊಂಡರು. ದಾರಿ ಹೋಕರು ಪ್ರಸಾದ ಸ್ವೀಕರಿಸಿದರು.

ಯರಗನಹಳ್ಳಿ, ಟೆರೆಷಿಯನ್ ಕಾಲೇಜು ಬಳಿ, ಕುರುಬಾರಹಳ್ಳಿ, ನಜರಬಾದ್, ಇಟ್ಟಿಗೆಗೂಡು, ಅಗ್ರಹಾರ, ನಂಜುಮಳಿಗೆ, ವಿದ್ಯಾರಣ್ಯಪುರಂ, ಚಾಮುಂಡಿಪುರಂ, ತಿಲಕ್‌ನಗರ, ಬನ್ನಿಮಂಟಪ, ಒಂಟಿಕೊಪ್ಪಲು, ಕೆ.ಜಿ.ಕೊಪ್ಪಲು, ಕುವೆಂಪುನಗರ, ಸರಸ್ವತಿಪುರಂ, ಟಿ.ಕೆ.ಲೇಔಟ್, ಬೋಗಾದಿ, ರಾಮಕೃಷ್ಣನಗರ ಸೇರಿದಂತೆ ನಗರದ ಹಲವು ಬಡಾವಣೆಗಳಲ್ಲಿ ಚಾಮುಂಡೇಶ್ವರಿ ಪೂಜೆ ಕಾರ್ಯಕ್ರಮ ಏರ್ಪಡಿಸಿ ಪ್ರಸಾದ ವಿನಿಯೋಗಿಸಲಾಯಿತು.

25 ಸಾವಿರ ಹೋಳಿಗೆ ಹಂಚಿಕೆ: ಚಾಮುಂಡಿಬೆಟ್ಟಕ್ಕೆ ಮೆಟ್ಟಿಲುಗಳ ಮೂಲಕ ಹತ್ತುವ ಭಕ್ತರಿಗೆ ಬೆಂಗಳೂರಿನ ಚಾಮುಂಡೇಶ್ವರಿ ಭಕ್ತರ ಬಳಗದ ಕಾರ್ಯಕರ್ತರು ಕಾಯಿ ಹೋಳಿಗೆ ವಿತರಿಸಿದರು. ಆಷಾಢ ಮಾಸದ ಮೂರನೇ ಶುಕ್ರವಾರದ ದಿನ ಮುಂಜಾನೆಯಿಂದ ಸಂಜೆವರೆಗೂ ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತುವ ಭಕ್ತರ ಸಂಖ್ಯೆ ಹೆಚ್ಚಾಗಿತ್ತು. ಬೆಂಗಳೂರಿನಿಂದ ಕಾಯಿ ಹೋಳಿಗೆ ತಂದಿದ್ದ ಬಳಗದ ಸದಸ್ಯರು ಹೋಳಿಗೆ ಹಂಚಿದರು. ಈ ವೇಳೆ ಬಳಗದ ಸದಸ್ಯ ಶಿವಕುಮಾರ್ ಮಾತನಾಡಿ, ಸಮಾನಮನಸ್ಕರು ಸೇರಿ ಚಾಮುಂಡೇಶ್ವರಿ ಭಕ್ತರ ಬಳಗ ಸ್ಥಾಪನೆ ಮಾಡಿ, ಕಳೆದ 5 ವರ್ಷದಿಂದ ಆಷಾಢ ಮಾಸದ ಮೂರನೇ ಶುಕ್ರವಾರ ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತುವ ಭಕ್ತರಿಗೆ ಹೋಳಿಗೆ ವಿತರಿಸಲಾಗುತ್ತಿದೆ. ಈ ಬಾರಿ 25 ಸಾವಿರ ಕಾಯಿ ಹೋಳಿಗೆ ವಿತರಿಸಿದ್ದೇವೆ. ನಾಡಿನ ಜನರಿಗೆ ಒಳ್ಳೆಯದಾಗಲಿ, ಮಳೆ–ಬೆಳೆ ಉತ್ತಮವಾಗಿರಲಿ ಎಂದು ಪ್ರಾರ್ಥಿಸಿ ಈ ಸೇವೆ ಸಲ್ಲಿಸುತ್ತಿರುವುದಾಗಿ ತಿಳಿಸಿದರು.

ಮೈಸೂರು ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣ ಗಣನೀಯ ಇಳಿಕೆ



> ಕಳೆದ ಬಾರಿಗೆ ಹೋಲಿಕೆ ಮಾಡಿದರೆ, ಈ ಬಾರಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಕಡಿಮೆ ಇದೆ. ಹಾಗೇ ಯಾವುದೇ ಸಾವು ಸಂಭವಿಸಿಲ್ಲ. ಆದರೆ, ಪ್ರಕರಣಗಳ ಸಂಖ್ಯೆ ಕಡಿಮೆ ಇದೆ ಎಂದು ಎಚ್ಚರಿಕೆ ವಹಿಸದಿರಬಾರದು. ಆಶಾ ಕಾರ್ಯಕರ್ತರು ತಿಂಗಳಿಗೊಮ್ಮೆ ಮನೆ–ಮನೆಗಳಿಗೆ ಭೇಟಿ ನೀಡಿ ಅರಿವು ಮೂಡಿಸುತ್ತಿದ್ದಾರೆ.
>
> – ಡಾ.ಎಸ್.ಚಿದಂಬರ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ

ಮೈಸೂರು, ಜು.7(ಜಿಎ)–ಕಳೆದ ಕೆಲವು ತಿಂಗಳುಗಳಿಂದ ತೀವ್ರ ಆತಂಕ ಮೂಡಿಸಿದ್ದ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಮುಖವಾಗಿದೆ. ಕಳೆದ ಜೂನ್‌ಗೆ ಹೋಲಿಸಿದರೆ, ಈ ಬಾರಿ ಇಳಿಮುಖವಾಗಿದೆ. ಈಗ ಮಳೆಗಾಲ ಸಂದರ್ಭದಲ್ಲಿ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಪ್ರಕರಣಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ.

ಕಳೆದ ವರ್ಷ ಜೂನ್‌ನಲ್ಲಿ 115 ಡೆಂಗ್ಯೂ ಪ್ರಕರಣಗಳ ದಾಖಲಾಗಿತ್ತು. ಈ ಬಾರಿ ಜಿಲ್ಲೆಯಲ್ಲಿ 2,556 ರಕ್ತದ ಸ್ಯಾಂಪಲ್‌ಗಳನ್ನು ಪರೀಕ್ಷೆ ಮಾಡಲಾಗಿದೆ. ಅದರಲ್ಲಿ 242 ಡೆಂಗ್ಯೂ ಕೇಸ್‌ಗಳು ದಾಖಲಾಗಿವೆ. ಮಳೆ ಆರಂಭವಾದ ಜೂನ್ ತಿಂಗಳಿನಲ್ಲಿ 68 ಪ್ರಕರಣಗಳು ದಾಖಲಾಗಿದ್ದು, ಯಾವುದೇ ಸಾವು ಸಂಭವಿಸದೇ ಇರುವುದು ನೆಮ್ಮದಿಯ ವಿಚಾರವಾಗಿದೆ.


2017ರಲ್ಲಿ ಮೈಸೂರಿನಲ್ಲಿ 843 ಡೆಂಗ್ಯೂ ಪ್ರಕರಣಗಳು ವರದಿಯಾಗಿತ್ತು. ಡೆಂಗ್ಯೂಗೆ ಕಾರಣವಾಗುವ ಈಡಿಸ್ ಈಜಿಪ್ಟಿ ಸೊಳ್ಳೆಗಳ ಸಂತಾನೋತ್ಪತ್ತಿಯನ್ನು ನಿರ್ಮೂಲನೆ ಮಾಡುವುದು ನಮ್ಮ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಮುಂಜಾಗ್ರತಾ ಕ್ರಮ ವಹಿಸಿರುವ ಆರೋಗ್ಯ ಇಲಾಖೆ ಆಶಾ ಕಾರ್ಯಕರ್ತರು ನಗರ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಸಂಚರಿಸಿ ಡೆಂಗ್ಯೂ ಹರಡದಂತೆ ನೈರ್ಮಲ್ಯ ಕಾಪಾಡುವ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ

ಸೂಕ್ತ ಚಿಕಿತ್ಸೆ ಪಡೆಯದಿದ್ದರೆ ಅಪಾಯ: ಡೆಂಗ್ಯೂ ಕಾಣಿಸಿಕೊಂಡವರಲ್ಲಿ ಮೊದಲು ಜ್ವರ ಕಾಣಿಸುತ್ತದೆ. ನಂತರ ಸುಸ್ತು, ನಿರ್ಜಲೀಕರಣ(ದೇಹದಲ್ಲಿ ನೀರಿನ ಕೊರತೆ) ಉಂಟಾಗುತ್ತದೆ. ಹಾಗೇ ದೇಹದಲ್ಲಿ ಪ್ಲೇಟ್‌ಲೇಟ್ ಕಡಿಮೆಯಾಗಿ ಮೂಗಿನಿಂದ ಮತ್ತು ಮೂತ್ರ ವಿಸರ್ಜನೆ ಮಾಡುವಾಗ ರಕ್ತಸ್ರಾವ ಕಾಣಿಸಿಕೊಳ್ಳುತ್ತದೆ. ಈ ಎಲ್ಲಾ ಲಕ್ಷಣ ಹತ್ತು ದಿನಗಳ ಒಳಗೆ ಕಾಣಿಸಿಕೊಳ್ಳುತ್ತದೆ. ಅಷ್ಟರಲ್ಲಿ ವೈದ್ಯರನ್ನು ಭೇಟಿ ಮಾಡಿ ಸೂಕ್ತ ಚಿಕಿತ್ಸೆ ಪಡೆಯದಿದ್ದರೆ, ಭಾರಿ ಅಪಾಯವಾಗಲಿದೆ.

ಕ್ರಮ ವಹಿಸಬೇಕು: ಈಡಿಸ್ ಈಜಿಪ್ಟಿ ಸೊಳ್ಳೆಗಳು ಸ್ವಲ್ಪ ಪ್ರಮಾಣದಲ್ಲಿ ನೀರು ಎಲ್ಲಿ ಶೇಖರಣೆಯಾಗಿರುತ್ತದೋ ಅಲ್ಲಿರುತ್ತದೆ. ಅದಕ್ಕಾಗಿ ಮನೆಯಲ್ಲಿರುವ ಪಾಟ್‌ಗಳ ಕೆಳಭಾಗದಲ್ಲಿ ಇರಿಸುವ ಪ್ಲಾಸ್ಟಿಕ್ ಪ್ಲೇಟ್‌ಗಳಲ್ಲಿ ಶೇಖರಣೆಯಾಗುವ ನೀರನ್ನು ತೆರವು ಮಾಡಬೇಕು. ಪಾತ್ರೆಗಳಲ್ಲಿ ಉಳಿಯುವ ನೀರಿನಿಂದಲೂ ಉತ್ಪತ್ತಿಯಾಗುತ್ತದೆ. ಮಳೆಗಾಲದ ಅವಧಿಯಲ್ಲಿ (ಜೂನ್‌ನಿಂದ ಆಗಸ್ಟ್) ಚಟುವಟಿಕೆಯು ಹೆಚ್ಚಾಗುತ್ತದೆ ಮತ್ತು ಜುಲೈನಲ್ಲಿ ಹೆಚ್ಚಿನ ಸಂಖ್ಯೆಯ ಪ್ರಕರಣಗಳು ದಾಖಲಾಗಿವೆ. ಅದರಿಂದ ಮನೆಯ ಒಳಗೆ ಮತ್ತೆ ಹೊರಗೆ ಎರಡು ಭಾಗದಲ್ಲಿ ಕ್ರಮ ವಹಿಸುವುದು ಸೂಕ್ತ.



ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ವ್ಹೀಲಿಂಗ್: ಇಬ್ಬರ ಬಂಧನ



ಮೈಸೂರು, ಜು.7– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ವ್ಹೀಲಿಂಗ್ ಮಾಡುತ್ತಿದ್ದ ಇಬ್ಬರು ಪುಂಡರನ್ನು ರಾಮನಗರದ ಪೊಲೀಸರು ಬಂಧಿಸಿದ್ದಾರೆ.

ಪ್ರಮುಖ ರಸ್ತೆಗಳಲ್ಲಿ ವ್ಹೀಲಿಂಗ್ ಮಾಡುವ ಮೂಲಕ ಆತಂಕ ಸೃಷ್ಟಿಸಿದ್ದ ಪುಂಡರ ಗುಂಪಿನ ಸದಸ್ಯರು ಈಗ, ಬೆಂಗಳೂರು– ಮೈಸೂರು ದಶಪಥ ರಸ್ತೆಗೂ ಲಗ್ಗೆಯಿಟ್ಟಿದ್ದು, ವಾಹನಗಳು ಬರುವ ವಿರುದ್ಧ ದಿಕ್ಕಿನಲ್ಲಿ ಬೈಕ್ ವ್ಹೀಲಿಂಗ್ ಮಾಡುತ್ತಿದ್ದಾರೆ. ಪುಂಡಾಟ ಮೆರೆದ ಬೆಂಗಳೂರು ಮೂಲದ ಶೋಯೆಬ್ ಮತ್ತು ಆತನ ಸ್ನೇಹಿತನನ್ನು ರಾಮನಗರ ಪೊಲೀಸರು ಬಂಧಿಸಿದ್ದಾರೆ.

ವ್ಹೀಲಿಂಗ್ ಮಾಡುವ ಪುಂಡರ ಹಾವಳಿ ಹೆಚ್ಚಾಗಿದ್ದು, ಅವರನ್ನು ವಶಕ್ಕೆ ಪಡೆದು ಬುದ್ಧಿ ಕಲಿಸುವ ನಿಟ್ಟಿನಲ್ಲಿ ಪೊಲೀಸರು ಭಾರಿ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದರು. ನಗರ ಪ್ರದೇಶದಲ್ಲಿ ಸಿಸಿ ಕ್ಯಾಮರಾಗಳಿದ್ದು, ಸಿಕ್ಕಿಕೊಳ್ಳುತ್ತೇವೆ ಎಂಬ ಭಯದಿಂದ ಈಗ ವ್ಹೀಲಿಂಗ್ ಮಾಡಿ ಇತರೆ ವಾಹನ ಸವಾರರಿಗೆ ಕಿರುಕುಳ ನೀಡುವ ಪುಂಡರ ಗುಂಪು ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇಗೆ ಲಗ್ಗೆ ಇಟ್ಟಿತ್ತು

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಮೈಸೂರು ಕಡೆಯಿಂದ ಬೆಂಗಳೂರಿನ ಕಡೆಗೆ ವೇಗವಾಗಿ ಬರುತ್ತಿದ್ದ ವಾಹನಗಳ ಎದುರು ವೀಲ್ಹಿಂಗ್ ಮಾಡಿ ಪುಂಡಾಟ ಮೆರೆದಿದ್ದಾರೆ. ಜೊತೆಗೆ, ವೀಲ್ಹಿಂಗ್ ಮಾಡುವುದು ಮಾತ್ರವಲ್ಲದೇ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ಅಪ್ಲೋಡ್ ಮಾಡಿದ್ದಾರೆ. ತಮ್ಮೊಂದಿಗೆ ಬೈಕ್‌ನಲ್ಲಿ ಯುವತಿಯನ್ನ ಕೂರಿಸಿಕೊಂಡು ವೀಲ್ಹಿಂಗ್ ಮಾಡಿದ್ದು, ಆ ಯುವತಿ ಪ್ರಾಣಭಯದಿಂದ ಕೂಗುವ ದೃಶ್ಯವೂ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಈ ಸಂಬಂಧ ದೂರು ಕೂಡ ದಾಖಲಾಗಿತ್ತು.

ಸಾರ್ವಜನಿಕರು ದೂರು ಗಮನಿಸಿ ವ್ಹೀಲಿಂಗ್ ಪುಂಡರಿಗೆ ಪೊಲೀಸರು ಬಲೆ ಬೀಸಿದ್ದಾರೆ. ಬೈಕ್‌ನ ನಂಬರ್ ಪ್ಲೇಟ್‌ನಲ್ಲಿ ವಾಹನ ಸಂಖ್ಯೆ ಅಳಿಸಿ ಹಾಕಿದ್ದರು. ಆದರೂ ಪೊಲೀಸರು ಸೂಕ್ತ ತನಿಖೆ ನಡೆಸಿ ಇಬ್ಬರು ಪುಂಡರನ್ನೂ ಬಂಧಿಸಿದ್ದಾರೆ.

ಎಕ್ಸ್‌ಪ್ರೆಸ್ ವೇನಲ್ಲಿ ವ್ಹೀಲಿಂಗ್ ಮಾಡುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳದಿದ್ದರೆ ಮತ್ತಷ್ಟು ಅಪಘಾತಗಳು ಸಂಭವಿಸಲಿವೆ ಎಂದು ಸಾರ್ವಜನಿಕರು ಸಾಮಾಜಿಕ ಜಾಲತಾಣದಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಸೈಟುಗಳು ಮಾರಾಟಕ್ಕಿದೆ
30x50 ಪ್ರಗತಿನಗರ/ ಪೂರ್ವದಿಕ್ಕು 30x40 ನಿತ್ಯಾನಂದ ಸಾಗರ/ ಪಶ್ಚಿಮ ದಿಕ್ಕು (ವಿಜಯನಗರ 4ನೇ ಹಂತದ ಹತ್ತಿರ) ಮಧ್ಯವರ್ತಿಗಳಿಗೆ ಅವಕಾಶವಿಲ್ಲ)
9945373122
6363608489

HOUSE RENT MORTGAGE/PURCHASE
We Wanted a House For Rent/ Mortgage/Purchase 3-4 BHK House near to Centre of City (Not Layouts) Building Owners
9482018500

MUDA APPROVED SITES FOR SALE
Sites sale in Ananda Sagara, Pragathi Nagara, Paramananda Sagara, Kuberananda Sagara.
30x40, 60x40 & 50x80
Call: JK, 8951144240

ಬೇಕಾಗಿದ್ದಾರೆ
ವಯಸ್ಸಾದವರನ್ನು ಮತ್ತು ಹಾಸಿಗೆ ಹಿಡಿದ ರೋಗಿಗಳನ್ನು ಆರೈಕೆ ಮಾಡಲು ಯುವಕರು–ಯುವತಿಯರು ಹಾಗೂ ಪುರುಷರು–ಮಹಿಳೆಯರು ಬೇಕಾಗಿದ್ದಾರೆ. ವಿದ್ಯಾರ್ಹತೆ : 7ನೇ ತರಗತಿಯಿಂದ ಯಾವುದೇ ಡಿಗ್ರಿ ಪಾಸ್ / ಫೇಲ್ ಆದವರು ಸಂಬಳ: 16,000 ದಿಂದ ಮೇಲ್ಪಟ್ಟು
8951190340

30x40 ಸೈಟು @ Rs.18 ಲಕ್ಷ MUDA APPROVED
ತಕ್ಷಣ ನೋಂದಣಿ
ಚಾಮುಂಡಿ ಬೆಟ್ಟದ ಹಿಂಭಾಗ ಲಾಲ್‌ಬಹದ್ದೂರ್ ಶಾಸ್ತ್ರಿನಗರ ನಂತರ
9538583377

ಸಂಪು ಕ್ಲೀನಿಂಗ್
ಸಂಪರ್ಕಿಸಿ:
8431541631

ಶ್ರೀ ಗೌರಿಶಂಕರ ಟ್ರಾವೆಲ್ಸ್
30–7–2023 (1 ದಿನ): ಘಾಟಿ ಸುಬ್ರಮಣ್ಯ, ಇಶಾ ಫೌಂಡೇಶನ್, ಕೋಟಿಲಿಂಗ.
20–8–2023 (7 ದಿನ): ಅಯೋಧ್ಯೆ, ಪ್ರಯಾಗ್ ರಾಜ್, ಕಾಶಿ, ಗಯಾ, ಬಾಬಾಬೈದ್ಯನಾಥ್ ಇತ್ಯಾದಿ.
21–9–2023 (13 ದಿನ): ಹರಿದ್ವಾರ, ಗಂಗೋತ್ರಿ, ಯಮುನೋತ್ರಿ, ಕೇದಾರ್‌ನಾಥ್, ಬದರಿನಾಥ್, ದೆಹಲಿ ಇತ್ಯಾದಿ.
ವಿಮಾನ / ಬಸ್ / ಊಟ / ರೂಂ.
Mob: 9620002114

HOUSE FOR RENT (VEG ONLY)
299, 10th Cross, Srirampura IInd Stage Mysore -570023
9480471050
8197389556

ಜಮೀನು ಮಾರಾಟಕ್ಕಿದೆ
ಮೈಸೂರು ತಾ॥ ಜಯಪುರ ಹೋ॥ ಮತ್ತು ಹಂಪಾಪುರ ಹೋ॥ ಗದ್ದಿಗೆ ಮುಖ್ಯ ರಸ್ತೆಯಲ್ಲಿ 1 ಎಕರೆ 30 ಗುಂಟೆ, 1 ಎಕರೆ 20 ಗುಂಟೆ & 1 ಎಕರೆ 28 ಗುಂಟೆ ಹಾಗೂ 32 ಗುಂಟೆ ಅತಿ ಕಡಿಮೆ ಬೆಲೆಯಲ್ಲಿ ಮಾರಾಟಕ್ಕಿವೆ
8618848886
9945661696

ಸಂಪು ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ.
97318 91409

***** ಆರ್.ಎಸ್ ಕನ್‌ಸ್ಟ್ರಕ್ಷನ್ಸ್ & ಡೆವಲಪರ್ಸ್ *****
"ನಿಮ್ಮ ಕನಸಿನ ಮನೆ ನಮ್ಮ ಹೊಣೆ"
100 ಸಿಮೆಂಟ್ ಬ್ಯಾಗ್ ಉಚಿತ
10 ಚದರಕ್ಕಿಂತ ಹೆಚ್ಚಿನ ಮನೆಯ ನಿರ್ಮಾಣಕ್ಕಾಗಿ ಎಲ್ಲ ಸಾಮಗ್ರಿಗಳನ್ನು ಒಳಗೊಂಡು ಅತ್ಯುತ್ತಮ ಗುಣಮಟ್ಟದೊಂದಿಗೆ ಮನೆಯನ್ನು ವಾಸ್ತು ಪ್ರಕಾರ ನಿರ್ಮಾಣ ಮಾಡಿಕೊಡಲಾಗುವುದು
ಕೂಡಲೇ ಸಂಪರ್ಕಿಸಿ 7022211622

ಟಿವಿ ರಿಪೇರಿ
ಎಲ್‌ಸಿಡಿ, ಎಲ್‌ಇಡಿ ಟಿವಿ
Service at your doorstep.
Mob: 9880066886

Beautician Course
99% discount for BPL / SC / ST
KVIC (Govt. of India) ಮತ್ತು Shree Ganga Charitable Trust ಇವರ ಸಂಯುಕ್ತ ಆಶ್ರಯದಲ್ಲಿ 30 ದಿವಸಗಳ training ಕೊಡಲಾಗುವುದು.
- Fee Rs. 2999/- (99% discount)
- Training by professional trainer.
- Training certificate by (Govt. of India).
- 100% Loan Assist / Documents, Support.
- 30% to 45% subsidy loan for startup.

Mob: 7809978088

SHOP FOR RENT
ಅಂಗಡಿ ಮಳಿಗೆ ಬಾಡಿಗೆಗೆ ಇದೆ
Ground Floor 600 sqft. Dewans Road, 100ft Road
9844498365

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು/ ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 12,000/–
8892258814

SITE FOR SALE
40X60 (MUDA Approved) at Devegowda Circle, Yarganahalli
Call : 63640 03399

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194, 9606783264

FOR RENT-COMMERCIAL
DC CONVERTED
1 ACRE LAND FOR RENT
Location: Bengaluru to Doddaballapur Highway
adjacent to Provident Welworth City, Proximity to Bengaluru International Airport, Suitable for Commercial Purposes, Warehouses/ Godowns, Banks, Shopping Malls, IT/ Software Companies, Office Establishments, Supermarkets, etc.
More Details Contact: 9845368222.

ತಕ್ಷಣ ಬೇಕಾಗಿದ್ದಾರೆ
ನೇರ ಆಯ್ಕೆ ಕಂಪನಿಗಳಿಗೆ, ಆಫೀಸ್ ಕೆಲಸಗಳಿಗೆ 7ನೇ, 10ನೇ, ಪಿಯುಸಿ, ಐಟಿಐ ಡಿಗ್ರಿ ಪಾಸ್/ ಫೇಲ್ ಆದಂತಹ ನಗರ–ಗ್ರಾಮೀಣ ಹಳ್ಳಿಯ ಯುವಕ ಯುವತಿಯರಿಗೆ ಊಟ ವಸತಿ ಯೊಂದಿಗೆ ಸಂಬಳ +ಓಟಿ 18,000/- 45000/-. ಸಂಪರ್ಕಿಸಿ:
9964260505
9964140505

ICST ACADEMY MYSORE
ತಕ್ಷಣ ಬೇಕಾಗಿದ್ದಾರೆ
ಆಫೀಸ್ ಅಟೆಂಡರ್ – ಮಹಿಳೆ
SSLC/PUC
9108982242

ಮನೆ ಭೋಗ್ಯ/ಬಾಡಿಗೆಗೆ ಇವೆ
ಶ್ರೀರಂಗಪಟ್ಟಣ ಹೊಸ ಮನೆಗಳು ರಂಗನಾಥ ದೇವಸ್ಥಾನ ಹತ್ತಿರ, ರೈಲ್ವೆ ಸ್ಟೇಷನ್ ಹತ್ತಿರ, ವಿಶಾಲವಾದ ಪಾರ್ಕಿಂಗ್ ವ್ಯವಸ್ಥೆ ಇದೆ.
Ground Floor, 1st Floor 2nd Floor, ಭೋಗ್ಯಕ್ಕೆ, 40x60 15 Lakhs, 30x40-10 Lakhs
ಬಾಡಿಗೆಗೆ: 40x60-15,000 30x40 - 12000
9008331340

JOB VACANCY
Assistant Support Staff and Therapist are required for Ayurvedic Clinic. Contact
9916496099
9591321995

WANTED
CCTV Technicians
1-2 years experience CCTV Installation, Service. Two-wheeler must. Salary: 12K + PF + ESI.
9972798765, 9880547385

WANTED
Service Engineer's
Dip-in-CS / IS, knowledge of H/N, Trouble Shooting, Printer Services - 2-3 years experience. Salary: 15K + PF + ESI. 2-wheeler must.
9972798765, 9880547385

SITE FOR SALE
40X60 'W' Face KHB Colony, Hootgally Hunsur Road, Mysore
8884577811

ಸುವರ್ಣ ಯಾತ್ರ
ಗುಜರಾತ್ ಪ್ರವಾಸ 2 ಜ್ಯೋತಿರ್ಲಿಂಗ ಸೇರಿ 8 ದಿನಗಳು 11/08/23. ಮಧ್ಯಪ್ರದೇಶ ಪ್ರವಾಸ 2 ಜ್ಯೋತಿರ್ಲಿಂಗ ಸೇರಿ 4 ದಿನಗಳು 12/08/23 ಶಿರಡಿ ಪ್ರವಾಸ 3 ಜ್ಯೋತಿರ್ಲಿಂಗ ಸೇರಿ 3 ದಿನಗಳು 18/08/23, ಪುರಿ ಭುವನೇಶ್ವರ ಶಕ್ತಿಪೀಠ 4 ದಿನಗಳು 18/08/23.
9008381022, 9019462508

ಹೋಲ್‌ಸೇಲ್ ದರದಲ್ಲಿ
ಜೀವಂತ ನಾಟಿ ಕೋಳಿ ಕೆ.ಜಿ. ರೂ. 260, ರೂ. 350, ರೂ. 580

ಗೌಡ್ರು ನಾಟಿಕೋಳಿ ಅಂಗಡಿ
ನಂ. 198/1, ಪಿ.ಕೆ.ಟಿ ಕ್ವಾಟ್ರಸ್ ಮೇನ್ ರೋಡ್, ದೊಡ್ಡಮ್ಮ ತಾಯಿ ಕಲ್ಯಾಣ ಮಂಟಪ ಪಕ್ಕ, ಎನ್.ಆರ್. ಮೊಹಲ್ಲಾ, ಮೈಸೂರು–570 007
9448048576, 9632378020

ಹೊಸ ಮನೆ ಮಾರಾಟಕ್ಕಿದೆ
20x30 S/E, Single Floor, 2 ROOM ಲಾಲ್ ಬಹದ್ದೂರ್ ಶಾಸ್ತ್ರಿ ನಗರ, ಮೂಡ ಲೇಔಟ್, ನಿವೇಶನ ಮಾರಾಟಕ್ಕಿದೆ. ಕೆಂಚಲಗೂಡು 20x30 W
9886481265

1) ಅರ್ಚಕರು ಬೇಕಾಗಿದ್ದಾರೆ
2) 10x12 ಅಡಿ ಮಳಿಗೆ ನಂ.4&10x25 ಅಡಿ ಮಳಿಗೆ ನಂ.26, ಬಾಡಿಗೆಗೆ ದೊರೆಯುತ್ತದೆ
ಸಂಪರ್ಕಿಸಬೇಕಾದ ವಿಳಾಸ: ಶ್ರೀಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನ, ಎಸ್.ಜಿ.ಡಿ.ಎಂ. ಟ್ರಸ್ಟ್, ಚಾಮುಂಡಿವನಂ, ವಿದ್ಯಾರಣ್ಯಪುರಂ, ಮೈಸೂರು–570008.
9448053321

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ. ಸಂಬಳ+ಓಟಿ 15,200/- to 86,000/-
9740733021, 9535028750

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟಾಂಡ್, ಮೈಸೂರು–1

ಮೈಸೂರು ಮ್ಯಾರೇಜ್ ಬ್ಯೂರೋ
ಎಲ್ಲಾ ಜಾತಿಯ ವಧು ವರರು, ವಿಧುರರು, ವಿಧವೆಯರು, ವಿಚ್ಛೇದಿತರು ನೇರ ಸಂಪರ್ಕಿಸಿ. ಮದುವೆ ವಿಳಂಬವಾದಲ್ಲಿ ಪರಿಹಾರ ಶತಸಿದ್ಧ.
ಡಾ. ಗುರೂಜಿ
9448229184
7899625268

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

MYSORE LAND MART
OLD KESARE
30X40 & 40X60
Ready to Registration
0.5 km in Ring Road
Contact
9448447035

SITE FOR SALE
40x60 East Face Sun City Home Mysore. 42 Lakhs
9902090052

ಬೇಕಾಗಿದ್ದಾರೆ
ಹಾಸ್ಟೆಲ್‌ಗೆ ಅಡುಗೆ ಹೆಲ್ಪರ್ ಕೆಲಸಕ್ಕೆ ಪುರುಷರು ಬೇಕಾಗಿದ್ದಾರೆ. ಸ್ಥಳ: ಸುಳ್ಯ
9902176566

AFFIDAVIT
I, T.K. Alex, S/o T.P. Kurian, residing at 1564, 6th Main, 8th Cross, Behind Canara Bank, Vijayanagar 2nd Stage, Mysuru-570 017. I swear that my name in Aadhaar Card No. 4233 4146 6754 mentioned correctly as T.K. Alex and in my passport document mentioned as Alex Thottiyil. I declare this in front of Notary R. Ramachandra on 7-7-2023, that my correct name is T.K. Alex only.
Sd/- T.K. Alex

P.G. FOR RENT
Near Law College, near Akshaya Bhandar, Kuvemunagar. Fully furnished building with materials. Contact:
9845703836, 9980029223

WANTED
RECEPTIONIST (LADIES ONLY)
naturals India's No.1 hair and beauty salon
ROYAL LOOK SALON PROFESSIONAL UNISEX
SARASWATHIPURAM | JP NAGAR | DATTAGALLI
88844 82155

ಹೊಸ ಮನೆ ಮಾರಾಟಕ್ಕಿದೆ
20x30, ಸೌತ್ ಫೇಸ್, ಈಸ್ಟ್ ಡೋರ್, ಇಟಾಲಿಯನ್ ಕಿಚನ್, ವಾರ್ಡ್ರೋಬ್, ಟಿವಿ ಸ್ಟಾಂಡ್, ಬಾತ್‌ಟಬ್, ಜಾಗ್ವಾರ್ ನಲ್ಲಿಗಳು, ಎಲ್ಲಾ ರೂಮಿಗೆ ಫ್ಯಾನ್, ಸಿ.ಸಿ. ಕ್ಯಾಮೆರಾ, ಚಿಮಿಣೀ, ಉಯ್ಯಾಲೆ, ಡ್ರೆಸ್ಸಿಂಗ್ ರೂಂ. ಶಕ್ತಿ ಗಣಪತಿ ದೇವಸ್ಥಾನ ಹತ್ತಿರ. ಸಂಪರ್ಕಿಸಿ:
Mob: 9164212253

WANTED
Accountant: 1.5 to 2 years experience. Should have hold on Tally. Female candidates only. *Contact:* Swasthik Construction, 10048, 1st Floor, 80 Feet Road, 2nd Phase, 4th Stage, Vijayanagar, Mysuru-570 032.
Mob: 9008000202

3 ಬೆಡರೂಂ ಹೊಸ ಮನೆ ಮಾರಾಟಕ್ಕೆ ಇದೆ
20x30 ದಟ್ಟಗಳ್ಳಿ, ಮೈಸೂರು, ತ್ರಿವೇಣಿ ಸೂಪರ್ ಮಾರ್ಕೆಟ್ ಹತ್ತಿರ. Price - 79 Lakhs ಮಾಲೀಕರು ಸಂಪರ್ಕಿಸಿ:
6361295132

ಬೇಕಾಗಿದ್ದಾರೆ
ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿರುವ ಅನಿಮಲ್ ಫೀಡ್ ಕಂಪನಿಗೆ 18 ರಿಂದ 45 ವರ್ಷದ ಒಳಗಿನ ಪುರುಷರು ಲೋಡಿಂಗ್, ಅನ್‌ಲೋಡಿಂಗ್, ಪ್ಯಾಕಿಂಗ್ ಮತ್ತು ಪೌಡರಿಂಗ್, ಕೆಲಸ ಮಾಡಲು ಬೇಕಾಗಿದ್ದಾರೆ. (ವಿದ್ಯಾರ್ಹತೆ ಅವಶ್ಯಕತೆ ಇಲ್ಲ) ಸಂಬಳ: 8 ಗಂಟೆ ಕೆಲಸಕ್ಕೆ 17845/– ಸಂ: ಚಾಮುಂಡೇಶ್ವರಿ ಎಂಟರ್‌ಪ್ರೈಸಸ್
ಲೋಕೇಶ್ 8722844236

S.K. Construction
ಹೊಸ ಮನೆ ಕಟ್ಟಬೇಕೆ, ಚಿಂತೆ ಬೇಡ. ಲೋನ್ ಮಾಡಿಸಿ ಪ್ರಾರಂಭ 25% ನಾವೇ ಹಾಕಿ Plan, 3D Elevation ಸಹಿತ ಉತ್ತಮ ಗುಣಮಟ್ಟದಲ್ಲಿ ಮನೆ ಮಾಡಿಕೊಡುತ್ತೇವೆ.
Mob: 9620528490

DOCUMENT LOST
Rekha M.M., No. 160, 20th Main Road, 9th Cross, 'E' Block, 2nd Stage, J.P. Nagar, Mysore-570 008, I have lost house original papers D RG No. (3703) house No. 874, Basaveshwara Main Road, K.R. Mohalla, Mysore in CBS. Finders please contact:
Mob: 9880426139

DOCUMENT LOST
I, S. Shivanna, lost my house khata letter (No. 327, Page 31 Book 02 Dt: 16-06-2006) at Hebbal Sankranthi Circle, Mysore on 3-7-2023.
Finders please contact:
Mob: 9740133838

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಬಾಡಿಗೆಗೆ ಮನೆ ಬೇಕಾಗಿದೆ
40x60, (Ground Floor & First Floor) Duplex ಮನೆ (ಆಫೀಸ್‌ಗೆ) ಮನೆ ಬಾಡಿಗೆಗೆ ಬೇಕಾಗಿದೆ.
3 ರೂ. Ground Floor
3 ರೂ. First Floor
(ಮಾಲೀಕರು ಮಾತ್ರ ಸಂಪರ್ಕಿಸಿ) ಕುವೆಂಪುನಗರ, ಜಯನಗರ, ಸರಸ್ವತಿಪುರಂ, ರಾಮಕೃಷ್ಣನಗರ ಸುತ್ತಮುತ್ತ
9972837203

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಕಂಪನಿಯೊಂದರಲ್ಲಿ Technical Helper ಕೆಲಸಕ್ಕೆ ITI ಪಾಸಾದ ಯುವಕರು ಬೇಕಾಗಿದ್ದಾರೆ. ಹೆಬ್ಬಾಳು ಇಂಡಸ್ಟ್ರಿಯಲ್ ಏರಿಯಾ ESI, PF ಸೌಲಭ್ಯವಿದೆ.
9945537353
7204642920

RESIDENTIAL HOUSE TO-LET
G/F- 2BHK Dining Hall, Geyser, Solar, Facilities ARAVINDA NAGAR, MYSURU
9902650520

ಮನೆ ಬಾಡಿಗೆಗೆ ಇದೆ
ಮೊದಲನೆಯ ಮಹಡಿ 2BHK ಹೊಸ ಡಿ.ಸಿ. ಆಫೀಸ್ ಹತ್ತಿರ GB ಪಾಳ್ಯ ಗೇಟ್, ಮೈಸೂರು
9901142942

ಬೇಕಾಗಿದ್ದಾರೆ
ಫ್ಯಾನ್ಸಿ ಗಿಫ್ಟ್ ಅಂಗಡಿಗೆ 25 ವರ್ಷಕ್ಕಿಂತ ಕೆಳಗಿನ ಹುಡುಗ / ಹುಡುಗಿ ತಕ್ಷಣ ಬೇಕಾಗಿದ್ದಾರೆ. ಫ್ಲೋರಾ ಫ್ಯಾನ್ಸಿ ಗಿಫ್ಟ್, ದೇವೇಗೌಡ ಸರ್ಕಲ್, ಬನ್ನೂರು ರಿಂಗ್ ರಸ್ತೆ, ಮೈಸೂರು
7619270650
6362711403

ಕೇರಳ ಕೊಳ್ಳೇಗಾಲದ ಜ್ಯೋತಿಷ್ಯರು
INDIAN FAMOUS ASTROLOGER
Mob: 9036984793
ಪಂಡಿತ್: ಕೆ.ಎಸ್. ಪಟೇಕರ್ (ಕೇರಳ)
ಜ್ಯೋತಿಷ್ಯ ವಿದ್ವಾನ್ ಶ್ರೀ ಶ್ರೀ ಎಸ್ ಕುಮಾರ್, (ಕೊಳ್ಳೇಗಾಲ)
ಇವರು ಕೇರಳದ ಕುಟ್ಟಿಚಾತನ್ ಕೊಳ್ಳೇಗಾಲದ ಕುಳ್ಳಚೌಡಿ ಅಘೋರ ಶಕ್ತಿಯಿಂದ, ಸ್ತ್ರೀ ಪುರುಷ, ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರುದೋಷ, ಇನ್ನೂ ಯಾವುದೇ ನಿಮ್ಮ ಗುಪ್ತ ಸಮಸ್ಯೆಗಳಿಗೆ ಸ್ಥಳದಲ್ಲಿಯೇ. ಪರಿಹಾರ ತಿಳಿಸುತ್ತಾರೆ.
ಖಾಯಂ ವಿಳಾಸ: ಪಡುವಾರಹಳ್ಳಿ ಸಿಗ್ನಲ್, ಭೂದೇವಿ ಫಾರ್ಮ್ ಎದುರು, ವಿನೋಬ ರಸ್ತೆ, ಮೈಸೂರು–570006

MYSURU RETINA CARE
STAFF REQUIRED
1. O.T. Technician / Optometrist
2. Receptionist

7338369364

ಸೈಟ್+ಮನೆ ಮಾರಾಟಕ್ಕಿದೆ
41 ಲಕ್ಷ – 20x40
32 ಲಕ್ಷ – 20x30
ಸಾತಗಳ್ಳಿ ಪ್ರೆಸೆಂಟೇಷನ್ ಸ್ಕೂಲ್ ಹತ್ತಿರ
SBR Constructions
9900840025

ಬೇಕಾಗಿದ್ದಾರೆ
ಕಂಪ್ಯೂಟರ್ ಆಫೀಸ್‌ನಲ್ಲಿ "ಸರ್ವೀಸ್ ಎಂಜಿನಿಯರ್" ಕೆಲಸಕ್ಕೆ ITI/Diploma ಮಾಡಿರುವ, ಕಂಪ್ಯೂಟರ್‌ನಲ್ಲಿ ಪರಿಣಿತಿ ಹೊಂದಿರುವ 25 ವರ್ಷದೊಳಗಿನ ದ್ವಿಚಕ್ರ ವಾಹನ ಮತ್ತು ಲೈಸೆನ್ಸ್ ಹೊಂದಿರುವ ಪುರುಷ ಅಭ್ಯರ್ಥಿಗಳು ಬೇಕಾಗಿದ್ದಾರೆ.
8073393505

FREE TRAINING
For Passed / Failed Degree Holders
- Accounts
- Auditing
- GST & IT

Prefer : for Eveng College Students.
9482018500

ಬೇಕಾಗಿದ್ದಾರೆ
ಕಂಪ್ಯೂಟರ್ ಟೈಪಿಂಗ್ ಮಾಡಲು ಬರುವಂತಹ ಅಭ್ಯರ್ಥಿಗಳು ಆಫೀಸ್ ಕೆಲಸಕ್ಕೆ ಬೇಕಾಗಿದ್ದಾರೆ. ಸಂಪರ್ಕಿಸಿ:
9945911118
9945144034 / 7026996123
ARTHOR SERVICES PVT. LTD
L-89, 2nd Floor, 'M' Block, Opp. Karuna Hospital, Kuvempunagar, Mysore-570023

ಕೆಲಸಕ್ಕೆ ಬೇಕಾಗಿದ್ದಾರೆ
1. ಸೆಕ್ಯೂರಿಟಿ ಗಾರ್ಡ್/ಹೌಸ್ ಕೀಪಿಂಗ್/ ಗಾರ್ಡನಿಂಗ್: ವಸತಿ ಮತ್ತು ಊಟದ ವ್ಯವಸ್ಥೆ ಇರುತ್ತದೆ. ನಂಜನಗೂಡು, ಸಿಂಧುವಳ್ಳಿ, ಕೊಳ್ಳೇಗಾಲ, ಬೇಗೂರು ಹತ್ತಿರ.
2. ನಂಜನಗೂಡಿನ ಹೋಟೆಲ್ ಅಲ್ಲಿ ಕೆಲಸ ಮಾಡಲು ಮ್ಯಾನೇಜರ್ ಬೇಕಾಗಿದ್ದಾರೆ.

8310098788
6361439167

ಮನೆ ಬಾಡಿಗೆಗೆ ಇದೆ
1st ಫ್ಲೋರ್, 2BHK (Attached) ನಂ. 65/ಎ, 5ನೇ ಕ್ರಾಸ್, ಚಾಮುಂಡಿ ವಿಹಾರ ಲೇಔಟ್, ನಜರ್‌ಬಾದ್, ಮೈಸೂರು
9900160604
9845391016

A TO Z WE-BUY
WE-BUY-OLD-FURNITURES OLD VESSELS, UPS, BATTERIES, OLD GENERATOR AND ELECTRIC ITEMS, SCRAP ITEMS. Anand
9900945675

SHOP FOR RENT
ನೂರ್ ಆಲಿಷಾ ಮಕಾನ್ ರಸ್ತೆ ಕೆ.ಟಿ. ಸ್ಟ್ರೀಟ್, 1ನೇ ಕ್ರಾಸ್, 10x20 Sqft
9900284843

SITE FOR SALE 30X50
East Facing Rs.1,500/- Per Sq.ft opp. St. Thomas Convent Ready for construction Location : Jayapura Town H.D.Kote Road, Mysore
9008794218
9945546438
Broker Excuse

30x40 ಸೈಟು @ Rs.18 ಲಕ್ಷ
ತಕ್ಷಣ ನೋಂದಣಿ
ಬ್ಯಾಂಕ್ ಲೋನ್ ಲಭ್ಯ
ಇಲವಾಲ ಬಸ್ ನಿಲ್ದಾಣ ಹಿಂಭಾಗ, ಹುಣಸೂರು ರಸ್ತೆ, ಮೈಸೂರು
9538583377

ಕಳೆದಿದೆ
ಎಂ.ವೈಭವ್ ಸುಬೇದಾರ್, ಮನೆ ನಂ.24, 23ನೇ ಬ್ಲಾಕ್, ಶ್ರೀರಾಂಪುರ, 2ನೇ ಹಂತ, ಮೈಸೂರು ಇಲ್ಲಿ ನಾವು ವಾಸವಾಗಿದ್ದು, ನಮಗೆ ಸೇರಿದ ಮೈಸೂರಿನ ಜೆ.ಎಸ್.ಎಸ್. ನೌಕರರ ಬಡಾವಣೆ, ಬ್ಲಾಕ್ ನಂ.2, ನಿವೇಶನ ಸಂಖ್ಯೆ : 2 ನಜರ್‌ಬಾದ್ ಮೈಸೂರು ರಿ.ನಂ. 03524–2023–24 ಇಲ್ಲಿ 30x40 ಖಾಲಿ ನಿವೇಶನವನ್ನು ಹೊಂದಿರುವುದು ಸರಿಯಷ್ಟೆ, ಖಾಲಿ ನಿವೇಶನದ ಮೂಲ ಸ್ವಾಧೀನ ಪತ್ರ ಮತ್ತು ಕ್ರಯ ಪತ್ರವು ಕಳೆದು ಹೋಗಿರುತ್ತದೆ.
9611475888

ಬೇಕಾಗಿದ್ದಾರೆ
ನುರಿತ (ಫೀಲ್ಡ್) Field Officer ಬೇಕಾಗಿದ್ದಾರೆ ಮತ್ತು ಸೆಕ್ಯೂರಿಟಿ ಸೂಪರ್ ವೈಸರ್ ಹಾಗೂ ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾಭ್ಯಾಸ SSLC ಮತ್ತು PUC ಸ್ಥಳ: ಹೆಬ್ಬಾಳ್ ಕೈಗಾರಿಕಾ ನಗರ ಮತ್ತು ಮೈಸೂರು ಸಿಟಿ
7829393555

ಸೈಟು ಮಾರಾಟಕ್ಕಿದೆ
ಮುಡಾ ಅಪ್ರೂವ್ಡ್
30x40 - E/F, 40x60-W/F
30x60 - Corner
58x60 - Corner
ಯೂನಿವರ್ಸಿಟಿ ಲೇಔಟ್ ಎದುರು ರಿಂಗ್ ರಸ್ತೆ ಹತ್ತಿರ, 30x40 ವರಕೂಡು ಹತ್ತಿರ
9900372792

ವಯಸ್ಸಾದವರನ್ನು ಮನೆಯವರಂತೆ ನೋಡಿಕೊಳ್ಳುವ ಗಾಳಿ ಬೆಳಕು ಇರುವ Independent ಮನೆಯಲ್ಲಿ ಅತ್ಯುತ್ತಮವಾದ ಊಟ ಉಪಚಾರಗಳೊಂದಿಗೆ (ಶಾಖಾಹಾರಿ) Limited Members ಮಾತ್ರ ಆಗಸ್ಟ್ ತಿಂಗಳಿನಿಂದ ಪ್ರಾರಂಭವಾಗಲಿದೆ. ಬನ್ನೂರು ರಸ್ತೆ, ದೇವೇಗೌಡ ಸರ್ಕಲ್, ರಿಂಗ್ ರಸ್ತೆ, ಹತ್ತಿರ. ವಿಚಾರಣೆಗಾಗಿ ಸಂಪರ್ಕಿಸಿ
9742900599

SITE FOR SALE
SRI SAI
Chamundeshwari Layout Near Chikkahalli, Mysore- T Narasipura Main Road.
30x40 S/F
6364501692

ಉದ್ಯೋಗವಕಾಶ
ಮೈಸೂರಿನ ಹೆಸರಾಂತ ವೈದ್ಯಕೀಯ ಸೇವಾ ಸಂಸ್ಥೆಯಲ್ಲಿ ವಯೋವೃದ್ಧರು, ರೋಗಿಗಳು ಮತ್ತು ವಿಶೇಷ ಚೇತನರನ್ನು ನೋಡಿಕೊಳ್ಳಲು ಹಾಗೂ ಹೌಸ್ ಕೀಪಿಂಗ್ ಕೆಲಸಕ್ಕೆ ಶ್ರದ್ಧೆ, ನಿಷ್ಠೆ ಹಾಗೂ ಸೇವಾ ಮನೋಭಾವದಿಂದ ಕೆಲಸ ನಿರ್ವಹಿಸಲು ಯುವಕ, ಯುವತಿಯರು ಮತ್ತು ಮಹಿಳೆಯರು ತಕ್ಷಣ ಬೇಕಾಗಿದ್ದಾರೆ. ವಿದ್ಯಾರ್ಹತೆ 7/10/PUC, ANM, GNM Pass/ Fail ತಿಂಗಳ ಸಂಬಳ: 9000 ರಿಂದ 18000
9606514441, 08214242351
7349278501

ಉದ್ಯೋಗ ಅವಕಾಶದ ಸೆಮಿನಾರ್
ನಿವೃತ್ತಿ ಹೊಂದಿರುವ ಕೇಂದ್ರ/ರಾಜ್ಯ ನೌಕರರಿಗೆ & ಸ್ವಯಂ ನಿವೃತ್ತರಿಗೆ /ಉದ್ಯಮದಾರರಿಗೆ ಪ್ರಖ್ಯಾತ ಬ್ಯಾಂಕ್ ಸಮೂಹದಿಂದ ಫ್ರೀ ಸೆಮಿನಾರ್ ಏರ್ಪಡಿಸ ಲಾಗಿದೆ. ವಿದ್ಯಾರ್ಹತೆ SSLC & Above, Any Degree, Age : 35 Year to 65 Year
ಸೆಮಿನಾರ್ ನಡೆಯುವ ಸ್ಥಳ: ಮೌರ್ಯ ರೆಸಿಡೆನ್ಸಿ, ಉಡ್‌ಲ್ಯಾಂಡ್ ಟಾಕೀಸ್ ಹತ್ತಿರ, ಮೈಸೂರು. ಸಮಯ 11 ಗಂಟೆಗೆ, ದಿನಾಂಕ 10-07-2023 Fllowed by LUNCH, ಬೇಕಾಗುವ ದಾಖಲಾತಿಗಳು: 1) ಫೋಟೊ 2) ಪಾನ್‌ಕಾರ್ಡ್ 3) ಆಧಾರ್ ಕಾರ್ಡ್ 4) ವಿದ್ಯಾರ್ಹತೆ ಪ್ರೂಫ್ 5) ಬ್ಯಾಂಕ್ ಪಾಸ್‌ಬುಕ್ (1st page).
9449068132, 8073004518

ಬೇಕಾಗಿದ್ದಾರೆ
ಕೆಲಸಕ್ಕೆ ಹುಡುಗರು & ಮಹಿಳೆಯರು ಬೇಕಾಗಿದ್ದಾರೆ ಹಾಗೂ ಅಡುಗೆ ಮಾಡಲು ನುರಿತ ಮಹಿಳೆಯರು ಬೇಕಾಗಿದ್ದಾರೆ
9379102838

SITE FOR SALE
30x40 & 40x60 Site for Sale Somanatha Nagar (ದಟ್ಟಗಳ್ಳಿ ಹತ್ತಿರ)
9880273834

WANTED
Computer Teacher - Diploma/ B.Sc in Computer
Apply within 3 Days
Sri Gnaneshwari Vidyasamsthe
Hebbal Mysore. Email: srignaneshwari.vidyasamsthe@gmail.com

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ
ರೂ. 630 ಮಾತ್ರ

ಗ್ರಾಮ ಪಂಚಾಯಿತಿ ಬೇಜವಾಬ್ದಾರಿ, ಅವೈಜ್ಞಾನಿಕ ಕಾಮಗಾರಿ ಹಿನ್ನೆಲೆ

ಸುಜ್ಜಲೂರಲ್ಲಿ ಮನೆಗಳಿಗೆ ನುಗ್ಗುತ್ತಿರುವ ಚರಂಡಿ ನೀರು

ಸಮಸ್ಯೆ ಬಗೆಹರಿಸದಿದ್ದರೆ ಪ್ರತಿಭಟನೆ ಎಚ್ಚರಿಕೆ ನೀಡಿದ ದಸಂಸ ಮುಖಂಡರು





ತಿ.ನರಸೀಪುರ ಜು.7– ಗ್ರಾಪಂ ಬೇಜವಾಬ್ದಾರಿ ಹಾಗೂ ಜಿಪಂ ತಾಂತ್ರಿಕ ಉಪ ವಿಭಾಗದ ಅಧಿಕಾರಿಗಳು ನಡೆಸಿರುವ ಅವೈಜ್ಞಾನಿಕ ಸಿಮೆಂಟ್ ರಸ್ತೆ ಮತ್ತು ಚರಂಡಿ ಕಾಮಗಾರಿಯಿಂದಾಗಿ ತಾಲೂಕಿನ ಸುಜ್ಜಲೂರು ಗ್ರಾಮದ ದಲಿತರ ಕಾಲೋನಿಯಲ್ಲಿ ಚರಂಡಿ ನೀರು ರಸ್ತೆಯಲ್ಲಿ ಹರಿದಿದ್ದು, ಮನೆಗಳಿಗೆ ನುಗ್ಗುತ್ತಿದೆ.

ತಾಲೂಕಿನ ವಾಟಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಿಲ್ಲೆಯ ಗಡಿ ಗ್ರಾಮವಾಗಿರುವ ಸುಜ್ಜಲೂರು ಗ್ರಾಮದ ದಲಿತರ ಕೇರಿ ಚರಂಡಿ ನೀರಿನಲ್ಲಿ ಮುಳುಗಿದ್ದು, ರಸ್ತೆ ಆವರಿಸಿರುವ ಚರಂಡಿ ತ್ಯಾಜ್ಯ ನೀರು ಮನೆಗಳಿಗೂ ನುಗ್ಗುತ್ತಿದೆ.

ಗ್ರಾಮದಲ್ಲಿ ಜಿಪಂ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ನಡೆಸಿರುವ ಅವೈಜ್ಞಾನಿಕ ಸಿಮೆಂಟ್ ರಸ್ತೆ ಮತ್ತು ಚರಂಡಿ ಕಾಮಗಾರಿಯಿಂದಾಗಿ ಗ್ರಾಮದ ಕೊನೆ ಭಾಗದಲ್ಲಿರುವ ದಲಿತರ ಕಾಲೋನಿಯಲ್ಲಿ ಚರಂಡಿಯಲ್ಲಿ ನೀರು ಹರಿದು ಹೋಗಲು ಜಾಗವಿಲ್ಲದೇ ತ್ಯಾಜ್ಯ ನೀರು ರಸ್ತೆಯಲ್ಲೇ ನಿಂತಿದೆ. ಗ್ರಾಮದ ಎಲ್ಲಾ ರಸ್ತೆಗಳ ತ್ಯಾಜ್ಯ ನೀರು ದಲಿತರ ಕಾಲೋನಿ ಮೂಲಕ ಹರಿದು ಹೋಗುವಂತೆ ಮಾಡಲಾಗಿದೆ. ಆದರೆ ತ್ಯಾಜ್ಯ ನೀರು ರಸ್ತೆಯಲ್ಲಿ ನಿಲ್ಲುತ್ತಿದ್ದು, ಮನೆಗಳಿಗೆ ನುಗ್ಗುತ್ತಿದೆ. ಈ ಸಂಬಂಧ ಚುನಾಯಿತ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಗ್ರಾಮದ ದಲಿತರ ಕಾಲೋನಿ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುಜ್ಜಲೂರು ಗ್ರಾಮಕ್ಕೆ ಭೇಟಿ ನೀಡಿದ ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಹಾಗೂ ತಾಲೂಕು ಸಂಚಾಲಕ ಯಾಚೇನಹಳ್ಳಿ ಸೋಮಶೇಖರ್ ಭೇಟಿ ನೀಡಿ, ಕಾಲೋನಿಯ ನಿವಾಸಿಗಳ ಅಹವಾಲು ಆಲಿಸಿದರು. ಈ ವೇಳೆ ಸಮಸ್ಯೆ ಬಗೆಹರಿಸುವಂತೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಇಲ್ಲಿನ ನಿವಾಸಿಗಳು ದೂರು ನೀಡಿದರೂ ಸಮಸ್ಯೆ ಬಗೆಹರಿಸದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಅಲ್ಲದೇ ಕೂಡಲೇ ಸಂಬಂಧಪಟ್ಟವರು ಈ ಬಗ್ಗೆ ಕ್ರಮ ಕೈಗೊಂಡು ಈ ಸಮಸ್ಯೆ ಬಗೆಹರಿಸದಿದ್ದರೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ದಸಂಸ ಸಂಘಟನಾ ಸಂಚಾಲಕ ಮಹಾದೇವ್, ಸುಜ್ಜಲೂರು ಶಿವಯ್ಯ, ಗ್ರಾಮದ ಮುಖಂಡರಾದ ಮಂಜು, ಬಸವಯ್ಯ, ನಂಜುಂಡ, ಮಹದೇವಯ್ಯ, ದೊರೆಸ್ವಾಮಿ, ಸುಬ್ಬಯ್ಯ, ಕೃಷ್ಣ ನವೀನ್, ಕುಮಾರ, ನಂಜಯ್ಯ, ಪ್ರಸನ್ನ ಮತ್ತಿತರರಿದ್ದರು.

ಚರಂಡಿ ನೀರು ತೆರವುಗೊಳಿಸಲು ವಾರದ ಗಡುವು

ಸುಜ್ಜಲೂರು ಗ್ರಾಮದ ದಲಿತ ಕಾಲೋನಿಯಲ್ಲಿ ರಸ್ತೆಯಲ್ಲಿ ನಿಂತು ಮನೆಗಳಿಗೆ ನುಗ್ಗುತ್ತಿರುವ ಚರಂಡಿ ನೀರನ್ನು ವಾರದೊಳಗೆ ತೆರವುಗೊಳಿಸಬೇಕು. ತಪ್ಪಿದ್ದಲ್ಲಿ ತಾಪಂಗೆ ಗ್ರಾಮಸ್ಥರ ಜೊತೆಗೂಡಿ ಮುತ್ತಿಗೆ ಹಾಕಿ, ಬೀಗ ಜಡಿಯಬೇಕಾಗುತ್ತದೆ. ಈ ಬಗ್ಗೆ ಸಚಿವರು ಗಮನಹರಿಸಿ, ಅಧಿಕಾರಿಗಳ ಕಿವಿ ಹಿಂಡುವ ಕೆಲಸ ಮಾಡಬೇಕು.

– ಆಲಗೂಡು ಶಿವಕುಮಾರ್, ದಸಂಸ ಜಿಲ್ಲಾ ಸಂಚಾಲಕ.

ಹುಲಿ ದಾಳಿಗೆ ಹಸು ಬಲಿ



ಮಲ್ಕುಂಡಿ, ಜು.7– ಹುಲಿ ದಾಳಿಗೆ ಹಸು ಬಲಿಯಾಗಿರುವ ಘಟನೆ ನಂಜನಗೂಡು ತಾಲೂಕಿನ ಹೊಸವೀಡು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಶಿವಣ್ಣ ಎಂಬುವರಿಗೆ ಸೇರಿದ ಹಸು ಬಲಿಯಾಗಿರುವುದು. ಶಿವಣ್ಣ ಶುಕ್ರವಾರ ಮಧ್ಯಾಹ್ನ ತಮ್ಮ ಜಮೀನಿನಲ್ಲಿ ಹಸುವನ್ನು ಕಟ್ಟಿಹಾಕಿ ಕೆಲಸ ಮಾಡುತ್ತಿದ್ದರು. ಈ ವೇಳೆ ಹಸು ಮೇಲೆ ಏಕಾಏಕಿ ದಾಳಿ ನಡೆಸಿರುವ ಹುಲಿ ಅರೆಬರೆ ತಿಂದು, ಎಳೆದೊಯ್ಯಲು ಪ್ರಯತ್ನಿಸಿದೆ. ಈ ವೇಳೆ ಶಿವಣ್ಣ ನೋಡಿ ಕಿರುಚಲಾಗಿ ಹುಲಿ ಸ್ಥಳದಿಂದ ಪರಾರಿಯಾಗಿದೆ.

ಗ್ರಾಪಂ ಸದಸ್ಯ ಸುರೇಶ್ ಮಾತನಾಡಿ, ಹಸು ಮೇಲೆ ಹುಲಿ ದಾಳಿ ನಡೆಸಿ ಬಲಿ ಪಡೆದಿದೆ. ಇದರಿಂದ ಗ್ರಾಮದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ರೈತರು ಕಷ್ಟಪಟ್ಟು ಬೆಳೆದ ಫಸಲು ಹಾಗೂ ಸಾಕು ಪ್ರಾಣಿಗಳು ಕಾಡುಪ್ರಾಣಿಗಳ ಪಾಲಾಗುತ್ತಿದೆ. ಮಳೆ ಇಲ್ಲದೇ ಕಂಗಾಲಾಗಿದ್ದ ರೈತನಿಗೆ ವರುಣ ಕೃಪೆ ತೋರಿದ್ದು, ಕೃಷಿ ಚಟುವಟಿಕೆಯಲ್ಲಿ ನಿರತರಾಗಿದ್ದಾರೆ. ಆದರೆ ಹುಲಿ ಹಸು ಮೇಲೆ ದಾಳಿ ನಡೆಸಿ ಬಲಿ ಪಡೆದಿರುವುದರಿಂದ ಈ ಭಾಗದ ರೈತರು ಭಯಗೊಂಡಿದ್ದಾರೆ. ಈ ಸಂಬಂಧ ಅರಣ್ಯ ಇಲಾಖೆಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಿಲ್ಲ. ಹೀಗಾಗಿ ಕ್ಷೇತ್ರದ ಶಾಸಕರು ಸೂಕ್ತ ಕ್ರಮ ಕೈಗೊಂಡು ಕಾಡುಪ್ರಾಣಿಗಳ ಹಾವಳಿ ತಪ್ಪಿಸಬೇಕು. ಹಾಗೂ ಹಸು ಕಳೆದುಕೊಂಡ ರೈತನಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿ ನಾರಾಯಣ್ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿದರು. ಅಲ್ಲದೇ ಹುಲಿ ಸೆರೆಗೆ ಬೋನಿಟ್ಟು ಕ್ರಮ ಕೈಗೊಂಡಿದ್ದಾರೆ. ನಂತರ ಮಾತನಾಡಿದ ನಾರಾಯಣ್, ಹಸು ಕಳೆದುಕೊಂಡ ರೈತನಿಗೆ ಸೂಕ್ತ ಪರಿಹಾರ ನೀಡುವ ಜೊತೆಗೆ ಆದಷ್ಟು ಬೇಗ ಹುಲಿ ಸೆರೆ ಹಿಡಿಯಲಾಗುವುದು ಎಂದು ಭರವಸೆ ನೀಡಿದರು.

ಹುಣಸೂರು ತಾಲೂಕು ಪಂಚಾಯಿತಿ, ಕೊತ್ತೇಗಾಲ ಗ್ರಾಮ ಪಂಚಾಯಿತಿಗೆ

ಜಿಪಂ ಸಿಇಓ ಗಾಯತ್ರಿ ಭೇಟಿ, ಪರಿಶೀಲನೆ



ಹುಣಸೂರು, ಜು.7– ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ ನಗರದ ತಾಲೂಕು ಪಂಚಾಯಿತಿಗೆ ಭೇಟಿ ನೀಡಿ, ವಿವಿಧ ಯೋಜನೆಗಳ ಕುರಿತು ತಾಪಂ ಕಾರ್ಯ ನಿರ್ವಾಹಕ ಅಧಿಕಾರಿಯೊಂದಿಗೆ ಚರ್ಚಿಸಿದರು.

ಬಳಿಕ ಕೊತ್ತೇಗಾಲ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಗ್ರಾಪಂ ಸದಸ್ಯರೊಂದಿಗೆ ಪ್ರಗತಿ ಹಾಗೂ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಿದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅವರೊಂದಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಸತಿ ಯೋಜನೆ, ನರೇಗಾ ಯೋಜನೆ, ಸ್ವಚ್ಛ ಭಾರತ್ ಮಿಷನ್ ಯೋಜನೆ ಮತ್ತು ತೆರಿಗೆ ಪಾವತಿ ಸೇರಿದಂತೆ ಇತರೆ ಯೋಜನೆಗಳ ಪ್ರಗತಿ ಪರಿಶೀಲಿಸಿದರು.

ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಖಲೀಂ ಅವರೊಂದಿಗೆ ಜಲ ಜೀವನ್ ಮಿಷನ್ ಹಾಗೂ ಕುಡಿಯುವ ನೀರಿನ ಕಾಮಗಾರಿಗಳ ಪ್ರಗತಿ ಕುರಿತು ಪರಿಶೀಲಿಸಿದರು. ಇದೇ ವೇಳೆ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿದರು. ಸಭೆ ಬಳಿಕ ಗ್ರಾಪಂ ವ್ಯಾಪ್ತಿಯ ಗ್ರಂಥಾಲಯಕ್ಕೆ ಭೇಟಿ ನೀಡಿ ಗ್ರಂಥಾಲಯದಲ್ಲಿರುವ ಮೂಲ ಸೌಕರ್ಯಗಳನ್ನು ಪರಿಶೀಲಿಸಿದರು. ಗ್ರಂಥಾಲಯಕ್ಕೆ ಮಕ್ಕಳ, ಮಹಿಳೆಯರ, ನಾಗರಿಕರ ನೋಂದಣಿ ಮಾಡಿಸಿ ಶೈಕ್ಷಣಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಗ್ರಂಥಪಾಲಕರಿಗೆ ಸೂಚಿಸಲಾಯಿತು.

ಈ ವೇಳೆ ತಾಪಂ ಇಓ ಬಿ.ಕೆ.ಮನು, ತಾಲೂಕು ಯೋಜನಾಧಿಕಾರಿ ರಾಜೇಶ್, ಕೊತ್ತೇಗಾಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರದೀಪ್, ಕಾರ್ಯದರ್ಶಿ ಆನಂದ್, ಸದಸ್ಯರಾದ ಸುಭಾಷಿಣಿ, ಜಯರಾಮೇಗೌಡ, ಮಹದೇವಪ್ಪ, ಶಶಿಕುಮಾರ್ ಸೇರಿ ಪಂಚಾಯಿತಿ ಎಲ್ಲಾ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಸುತ್ತೂರು ಶಾಲೆಯಲ್ಲಿ ಮಳೆ ಕೊಯ್ಲು ಕಾರ್ಯಕ್ರಮ



ನಂಜನಗೂಡು, ಜು.7– ತಾಲೂಕಿನ ಸುತ್ತೂರು ಸರ್ಕಾರಿ ಪ್ರಾಥಮಿಕ ಶಾಲಾವರಣದಲ್ಲಿ ಶುಕ್ರವಾರ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆ ವತಿಯಿಂದ ಶುದ್ಧ ಕುಡಿಯುವ ನೀರು ಹಾಗೂ ಮಳೆ ಕೊಯ್ಲು ಕಾರ್ಯಕ್ರಮಕ್ಕೆ ಗ್ರಾಪಂ ಅಧ್ಯಕ್ಷೆ ಅಂಬಿಕಾ ಚಾಲನೆ ನೀಡಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದ ಹಿರಿಯ ವ್ಯವಸ್ಥಾಪಕ ಅಫ್ರುಲ್ ಪಾಷ ಮಾತನಾಡಿ, ಶಾಲೆಯಲ್ಲಿ ಮಕ್ಕಳು ಆರೋಗ್ಯದಿಂದ ಕಲಿಕೆಯಲ್ಲಿ ತೊಡಗಲು ನಮ್ಮ ಸಂಸ್ಥೆ ಮೈಸೂರು ಜಿಲ್ಲೆಯ 10 ಗ್ರಾಪಂ ವ್ಯಾಪ್ತಿಗೆ ಸೇರಿದ 90 ಅಂಗನವಾಡಿ ಕೇಂದ್ರ ಹಾಗೂ 65 ಶಾಲೆಗಳಲ್ಲಿ ಗ್ರಾಪಂಗಳ ಸಹಕಾರದಿಂದ ಶುದ್ಧ ಕುಡಿಯುವ ನೀರು ಸಂಗ್ರಹಣಾ ಇಂಗುಗುಂಡಿ ಹಾಗೂ ಶೌಚಾಲಯಗಳ ನಿರ್ಮಿಸಲಾಗುತ್ತಿದೆ. ಶಾಲೆಯ ಆವರಣದಲ್ಲಿ ಮಳೆ ನೀರು ಇಂಗುಗುಂಡಿಗಳ ನಿರ್ಮಾಣ, ನೀರು ಸಂಗ್ರಹಣಾ ತೊಟ್ಟಿ ನಿರ್ಮಾಣ ಮಾಡಿ ಮಳೆ ನೀರು ಅಂತರ್ಜಲಕ್ಕೆ ಸೇರುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು. ಇದೇ ವೇಳೆ ಗುಣಮಟ್ಟದ ಕಾಮಗಾರಿ ನಡೆಸಿದ ನಗರ್ಲೆ ವಾಸಿಂ ಅವರನ್ನು ಸನ್ಮಾನಿಸಲಾಯಿತು. ಮುಖಂಡರಾದ ಪಿ.ಸೋಮಣ್ಣ, ಪಿಡಿಓ ಮಹದೇವಸ್ವಾಮಿ, ಡಾ. ರಮ್ಯಾ, ಸಿಆರ್‌ಪಿ ಉಮ್ಮೆಅಸ್ಮಾ, ಎಸ್‌ಡಿಎಂಸಿ ಅಧ್ಯಕ್ಷೆ ಪಾರ್ವತಮ್ಮ, ಉಪಾಧ್ಯಕ್ಷ ರವಿ, ಹರೀಶ್‌ಕುಮಾರ್, ಶಾಲೆ ಮುಖ್ಯ ಶಿಕ್ಷಕ ನಾಗರಾಜು ಉಪಸ್ಥಿತರಿದ್ದರು.

3ನೇ ಆಷಾಢ ಶುಕ್ರವಾರ: ವಿಶೇಷ ಪೂಜೆ



ನಂಜನಗೂಡು, ಜು.7– 3ನೇ ಆಷಾಢ ಶುಕ್ರವಾರದ ಅಂಗವಾಗಿ ನಗರದ ಕಪಿಲಾ ನದಿ ತಟದಲ್ಲಿರುವ ಚಾಮುಂಡೇಶ್ವರಿ ದೇವಾಲಯದಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿತ್ತು.

ಮುಂಜಾನೆಯಿಂದಲೇ ದೇವಿಗೆ ರುದ್ರಾಭಿಷೇಕ, ಫಲಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ ಸೇರಿದಂತೆ ವಿಶೇಷ ಪೂಜೆ ನೆರವೇರಿಸಿದ ಬಳಿಕ ಮಹಾಮಂಗಳಾರತಿ ಮಾಡಿ ಭಕ್ತರ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ಈ ವೇಳೆ ಸಾವಿರಾರು ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು.

ಆಷಾಢ ಶುಕ್ರವಾರ ಅಂಗವಾಗಿ ಅಮ್ಮನವರನ್ನು ಬಗೆ ಬಗೆಯ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ಮಹಿಳೆಯರು ದೇವಾಲಯದ ಆವರಣದಲ್ಲಿ ದೀಪ ಹಚ್ಚಿ ಇಷ್ಟಾರ್ಥ ನೆರವೇರಿಸುವಂತೆ ಪ್ರಾರ್ಥಿಸಿದರು. ಅಲ್ಲದೇ ಅರಿಶಿನ, ಕುಂಕುಮ, ಬಳೆ ನೀಡಿ ಮುತ್ತೈದೆ ಭಾಗ್ಯ ಗಟ್ಟಿಯಾಗಿಸುವಂತೆ ಬೇಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

ಭಕ್ತರು ರಾತ್ರಿ 8 ಗಂಟೆವರೆಗೂ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಆಷಾಢ ಶುಕ್ರವಾರದ ಹಿನ್ನೆಲೆ ದೇವಾಲಯದ ಮುಂಭಾಗ ಸಂಚಾರ ದಟ್ಟಣೆ ಅಧಿಕವಾಗಿತ್ತು. ಸಂಚಾರ ನಿಯಂತ್ರಿಸಲು ಪೊಲೀಸರು ಹರಸಾಹಸ ಪಟ್ಟರು.

ಬೆಟ್ಟದತುಂಗ ಗ್ರಾಪಂನಿಂದ ಅಂಗನವಾಡಿಗಳಿಗೆ ಬೀರು ವಿತರಣೆ



ಬೆಟ್ಟದಪುರ, ಜು.7– ಪಿರಿಯಾಪಟ್ಟಣ ತಾಲೂಕಿನ ಬೆಟ್ಟದತುಂಗ ಗ್ರಾಪಂನಿಂದ ಗ್ರಾಪಂ ವ್ಯಾಪ್ತಿಯ ಅಂಗನವಾಡಿಗಳಿಗೆ ಬೀರುಗಳನ್ನು ವಿತರಿಸಲಾಯಿತು.

ನಂತರ ಮಾತನಾಡಿದ ಗ್ರಾಪಂ ಅಧ್ಯಕ್ಷ ದೇವರಾಜು, ಅಂಗನವಾಡಿ ಕೇಂದ್ರಗಳಲ್ಲಿ ದಾಖಲೆಗಳ ಸುರಕ್ಷತೆ ಅತೀ ಮುಖ್ಯ. ಆದರೆ ಸೂಕ್ತ ವ್ಯವಸ್ಥೆ ಇಲ್ಲದೆ ದಾಖಲೆಗಳ ಸುರಕ್ಷತೆ ಅಸಾಧ್ಯವಾಗಿತ್ತು. ಹೀಗಾಗಿ ಪಂಚಾಯಿತಿಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಎಲ್ಲಾ ಸದಸ್ಯರ ಅನುಮೋದನೆ ಪಡೆದು 15ನೇ ಹಣಕಾಸು ಯೋಜನೆಯಡಿ ಗ್ರಾಪಂ ವತಿಯಿಂದ ಪಂಚಾಯಿತಿ ವ್ಯಾಪ್ತಿಯ ಕುಡುಕೂರು, ಬಿ.ಟಿ.ಕೊಪ್ಪಲು, ಬಿಟಿಎಂ ಕೊಪ್ಪಲು, ಬಿಡಿಜಿ ಕೊಪ್ಪಲು, ಬೆಟ್ಟದತುಂಗ, ಕುಡುಕೂರು ಕೊಪ್ಪಲು, ಬಾರ್ಸೆ, ಕದ್ರೇಗೌಡನ ಕೊಪ್ಪಲು, ನಾಗನಹಳ್ಳಿ, ನಾಗನಹಳ್ಳಿ ಪಾಳ್ಯ, ಗಂಗೇಗೌಡನ ಕೊಪ್ಪಲು ಗ್ರಾಮಗಳ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಮಕ್ಕಳ ಮತ್ತು ಇತರೆ ಆಡಳಿತ ದಾಖಲೆಗಳನ್ನು ಸುರಕ್ಷಿತವಾಗಿಡಲು ಬೀರುಗಳನ್ನು ವಿತರಣೆ ಮಾಡಿದ್ದೇವೆ. ಗ್ರಾಪಂನಿಂದ ಇದೇ ರೀತಿ ಸಾರ್ವಜನಿಕರಿಗೆ ಉಪಯುಕ್ತವಾದ ಅನೇಕ ಯೋಜನೆಗಳನ್ನು ರೂಪಿಸಿ ಯಶಸ್ವಿಯಾಗಿದ್ದೇವೆ. ಈ ಸವಲತ್ತುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸುದರ್ಭ ಗ್ರಾಪಂ ಉಪಾಧ್ಯಕ್ಷೆ ಸುನೀತಾ, ಸದಸ್ಯರಾದ ಪ್ರೀತಿ ಅರಸ್, ರೇಣುಕಮ್ಮ, ರತ್ನಮ್ಮ ರವಿ, ಸತೀಶ್, ಶಿವಣ್ಣ, ಸಣ್ಣಪ್ಪಾಜಿಗೌಡ, ಲಕ್ಷ್ಮಿ, ಯಶೋಧರ್, ಬಿಂದು ಯೋಗೇಶ್, ಕರಿಯಯ್ಯ, ಲೋಕೇಶ್, ಪಿಡಿಓ ಚೇತನ್, ಕಾರ್ಯದರ್ಶಿ ನಟೇಶ್ ಸೇರಿದಂತೆ ಅಂಗನವಾಡಿ ಶಿಕ್ಷಕಿಯರು ಮತ್ತು ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.



ಬೆಟ್ಟದತುಂಗ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು 30 ತಿಂಗಳು ಅವಧಿ ಪೂರೈಸಿದ ಹಿನ್ನೆಲೆಯಲ್ಲಿ ಶುಕ್ರವಾರ ಮಾಜಿ ಮುಖ್ಯಮಂತ್ರಿ ದಿ.ಡಿ.ದೇವರಾಜ ಅರಸು ಪ್ರತಿಮೆಗೆ ನಮನ ಸಲ್ಲಿಸಿದರು. ಈ ವೇಳೆ ಅಧ್ಯಕ್ಷ ದೇವರಾಜು, ಉಪಾಧ್ಯಕ್ಷೆ ಸುನೀತಾ, ಸದಸ್ಯರಾದ ಪ್ರೀತಿ ಅರಸ್, ರವಿ, ಲೋಕೇಶ್ ಸೇರಿದಂತೆ ಇನ್ನಿತರರಿದ್ದರು.

ದುರುದ್ದೇಶಪೂರ್ವಕ ಅಸ್ತಿತ್ವಕ್ಕೆ ಬಂದಿರುವ ಸಂಘ ಮಾನ್ಯವಲ್ಲ

ನಯನಜ ಕ್ಷತ್ರಿಯ ಸಂಘ ಕ್ರಿಯಾಶೀಲವಾಗಿದೆ: ಸಂಘದ ಕಾರ್ಯದರ್ಶಿ ಈ.ರಾಜು



ತಿ.ನರಸೀಪುರ, ಜು.7– ನಯನಜ ಕ್ಷತ್ರಿಯ ಸಂಘ ತಾಲೂಕಿನಲ್ಲಿ ಕ್ರಿಯಾಶೀಲವಾಗಿದ್ದು, ದುರುದ್ದೇಶಪೂರ್ವಕವಾಗಿ ಅದೇ ಹೆಸರಿನಲ್ಲಿ ಅಸ್ತಿತ್ವಕ್ಕೆ ಬಂದಿರುವ ಮತ್ತೊಂದು ಸಂಘಕ್ಕೆ ಯಾವುದೇ ಮಾನ್ಯತೆ ಇಲ್ಲ ಎಂದು ಸಂಘದ ಕಾರ್ಯದರ್ಶಿ ಈ.ರಾಜು ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕು ನಯನಜ ಕ್ಷತ್ರಿಯ ಸಂಘ ಕಳೆದ ಹಲವು ವರ್ಷಗಳಿಂದ ಸಮಾಜದ ಏಳಿಗೆಗಾಗಿ ಕಾರ್ಯ ನಿರ್ವಹಿಸುತ್ತಾ ಬಂದಿದೆ. ಸಮಾಜದ ಏಳು ಬೀಳುಗಳಿಗೆ ಸ್ಪಂದಿಸಿ ಜಿಲ್ಲೆಯಲ್ಲೇ ಅತ್ಯುತ್ತಮ ಸಂಘವೆಂದು ಹೆಸರು ಪಡೆದಿದೆ. ಸರ್ಕಾರ ಮಟ್ಟದಲ್ಲಿ ಮಾತುಕತೆ ನಡೆಸಿ, ಸಂಘಕ್ಕೆ ನಿವೇಶನ ಪಡೆದು ಸರ್ಕಾರದ ಅನುದಾನದಲ್ಲಿ ಉತ್ತಮ ಸಮುದಾಯ ಭವನ ನಿರ್ಮಿಸಿದೆ. ಸಮುದಾಯ ಭವನ ಅಂತಿಮ ಹಂತದಲ್ಲಿರುವ ವೇಳೆ ಕೆಲ ನಮ್ಮ ಸಮಾಜದ ಯುವಕರು ದುರುದ್ದೇಶಪೂರ್ವಕವಾಗಿ ಮತ್ತೊಂದು ಸಂಘ ನಿರ್ಮಾಣ ಮಾಡಿ ಸಮುದಾಯದಲ್ಲಿ ಗೊಂದಲ ಉಂಟು ಮಾಡಲು ಹೊರಟಿದ್ದಾರೆ. ಆದರೆ ಆ ಸಂಘಕ್ಕೆ ಯಾವುದೇ ಮಾನ್ಯತೆ ಇಲ್ಲ. ತಾಲೂಕಿನಲ್ಲಿ ತಾಲೂಕು ನಯನಜ ಕ್ಷತ್ರಿಯ ಸಂಘ ಎಂಬ ಹೆಸರಿನ ಸಂಘವಿರುವುದು ಒಂದೇ. ಅದು ನಮ್ಮದೇ ಸಂಘವಾಗಿದ್ದು, ದುರುದ್ದೇಶದೊಂದಿಗೆ ಅಸ್ತಿತ್ವಕ್ಕೆ ಬಂದಿರುವ ಸಂಘಕ್ಕೆ ಯಾವುದೇ ಮಾನ್ಯತೆ ನೀಡಬೇಕಿಲ್ಲ ಎಂದರು.

ಅಧ್ಯಕ್ಷ ನಾಗೇಂದ್ರ ಮಾತನಾಡಿ, ನಮ್ಮ ಸಮಾಜ ಹಿಂದುಳಿದ ಅಲ್ಪ ಸಂಖ್ಯಾತ ಸಮಾಜವಾಗಿದೆ. ಎಲ್ಲರೂ ಒಗ್ಗಟ್ಟಿನಿಂದ ಸಮಾಜ ಕಟ್ಟುವ ಕೆಲಸ ಮಾಡಬೇಕೆ ವಿನಃ ವೈಯಕ್ತಿಕ ದ್ವೇಷದಿಂದ ಸಮುದಾಯದವರ ದಿಕ್ಕು ತಪ್ಪಿಸುವ ಕೆಲಸ ಮಾಡಬಾರದು. ಹೊಂದಾಣಿಕೆಯೊಂದಿಗೆ ಮುನ್ನಡೆದರೆ ಯಶಸ್ಸು ಕಾಣಲು ಸಾಧ್ಯವೇ ಹೊರತು ದ್ವೇಷದಿಂದಲ್ಲ. ಸಂಘದಲ್ಲಿ ಅವ್ಯವಹಾರ ನಡೆಸಲಾಗಿದೆ ಎಂದು ಆರೋಪಿಸಲಾಗುತ್ತಿದೆ. ಆದರೆ ಸಂಘದಲ್ಲಿ ಯಾವುದೇ ಅವ್ಯವಹಾರ ನಡೆದಿಲ್ಲ. ಕೊರೊನಾ ಸಂದರ್ಭ ಸಂಘದ ಮರು ನೋಂದಣಿ ಮಾಡಿಸುವಲ್ಲಿ ಸ್ವಲ್ಪ ಸಮಸ್ಯೆ ಉಂಟಾಗಿತ್ತು. ಅದನ್ನೆಲ್ಲಾ ಸರಿಪಡಿಸಿ, ಮತ್ತೆ ಆಡಿಟ್ ಮಾಡಿಸಿ ಸಂಘ ರಿನೀವಲ್ ಮಾಡಿಸಲು ಹೊರಟಿದ್ದ ಸಂದರ್ಭ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಸಂಘ ನಮ್ಮ ಸಂಘದ ವಿರುದ್ಧ ದೂರು ನೀಡಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ. ಏನೇ ಸಮಸ್ಯೆಗಳಿದ್ದರೂ, ಸಂಘದ ಕಚೇರಿಯಲ್ಲಿ ಕುಳಿತು ಬಗೆಹರಿಸಿಕೊಳ್ಳಬೇಕೆ ವಿನಃ ದೂರು ನೀಡುವುದಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಮೂರ್ತಿ, ಖಜಾಂಚಿ ನಾಗರಾಜು, ನಿರ್ದೇಶಕರಾದ ಕೃಷ್ಣಶೆಟ್ಟಿ, ಶಿವು, ಮಹೇಶ್, ಎಡತೊರೆ ರಾಜು, ಮಣಿಕಂಠ, ಶಂಕರ, ಪ್ರಿಯಾಂಕ ಎನ್. ಮಧುಸೂದನ್, ಶ್ರೀನಿವಾಸ್, ಮುರುಳೀಧರ್, ಸೌಮ್ಯ ರಾಣಿ, ಸೋಮಣ್ಣ, ರಾಜೇಶ್, ರಾಮಲಿಂಗು, ಅಣ್ಣಪ್ಪ, ಡಿ.ಸಿಂಧು, ಅಪ್ಪಣ್ಣ, ಸುಬ್ರಹ್ಮಣಿ, ನಾಗಮ್ಮ, ಜ್ಯೋತಿ, ಲಲಿತಮ್ಮ, ಗೀತಾ ದೇವರಾಜು ಹಾಜರಿದ್ದರು.

ವಿಜೃಂಭಣೆಯ ಕಂಡಾಯ ಉತ್ಸವ



ತಿ.ನರಸೀಪುರದ ಹಳೇ ಕುರುಬಗೇರಿಯಲ್ಲಿ ಕನಕ ಯುವ ಸೇನಾ ಸಮಿತಿ ಹಾಗೂ ವೀರ ಸಂಗೊಳ್ಳಿರಾಯಣ್ಣ ಯುವಕರ ಬಳಗ ಮತ್ತು ಟೌನ್ ಕುರುಬ ಸಮುದಾಯದಿಂದ ನಡೆದ 3ನೇ ವರ್ಷದ ಕಂಡಾಯ ಉತ್ಸವ ವಿಜೃಂಭಣೆಯಿಂದ ನೆರವೇರಿತು. ಈ ವೇಳೆ ಪುರಸಭಾ ಸದಸ್ಯ ಬಾದಾಮಿ ಮಂಜು, ಗುರುಮಲ್ಲಪ್ಪ, ಚಿಕ್ಕ ಯಜಮಾನ ರಾಜು, ನಾಗ, ಉಮೇಶ್, ಸುರೇಶ, ಮಹೇಶ್ ಸೇರಿದಂತೆ ಇನ್ನಿತರರಿದ್ದರು.

ನವೋದಯ ವಸತಿ ಶಾಲೆ ಪರೀಕ್ಷೆಯಲ್ಲಿ ತೇರ್ಗಡೆ



ಮಲ್ಕುಂಡಿ: ನಂಜನಗೂಡಿನಲ್ಲಿ ನಡೆದ ನವೋದಯ ವಸತಿ ಶಾಲೆಯ 6ನೇ ತರಗತಿಗೆ ನಡೆದ ಪ್ರವೇಶ ಪರೀಕ್ಷೆಯಲ್ಲಿ ವಿನುತಾ ಎಂಬ ವಿದ್ಯಾರ್ಥಿಯು ಉತ್ತಮ ಅಂಕ ಪಡೆದು ತೇರ್ಗಡೆಯಾಗಿದ್ದಾಳೆ. ಈಕೆ ಮಲ್ಕುಂಡಿ ಗ್ರಾಮದ ಶ್ರೀಮತಿ ಪುನೀತ, ಎಂ.ಎನ್. ಸತೀಶ್ ಅವರ ಪುತ್ರಿ.

ಲೋಕೇಶ್ ನಿಧನ



ಹುಣಸೂರು, ಜು.7– ಮೂಲತಃ ಕೊಡಗಿನ ದುಬಾರೆ ಬಳಿಯ ರಂಗಸಮುದ್ರ ನಿವಾಸಿ, ಡಬ್ಲ್ಯೂಸಿಎಸ್(ವೈಲ್ಡ್‌ಲೈಫ್ ಕನ್ಸರ್‌ವೈಸ್ ಸೊಸೈಟಿ)ಇಂಡಿಯಾದ ಹುಣಸೂರು ಕಚೇರಿ ಸೀನಿಯರ್ ಆಫೀಸರ್ ಕೆ.ಎಸ್.ಲೋಕೇಶ್(54) ಶುಕ್ರವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಸ್ವಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೆಂಕಟೇಶ್



ಹುಣಸೂರು, ಜು.7– ನಗರದ ಕಲ್ಕುಣಿಕೆ ಹೌಸಿಂಗ್ ಬೋರ್ಡ್ ನಿವಾಸಿ ವೆಂಕಟೇಶ್(75) ಶುಕ್ರವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ನಗರದ ತಾಲೂಕು ಕಚೇರಿ ಪಕ್ಕದ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ದೇವಮ್ಮ



ಸರಗೂರು, ಜು.7– ಪಟ್ಟಣದ 9ನೇ ವಾರ್ಡ್ ನಿವಾಸಿ ದೇವಮ್ಮ(64) ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ಪತಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ನಾಯಕ ಸಮಾಜದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

WANTED OPTOMETRIST

For Reputed Eye Hospital in Mysore.
Salary Not Constraint for good Candidate

Email: netrajyothieyein1027@gmail.com

Commercial Space for Rent

Approximately
1600 Sq.ft.
in 1st Floor at Ramana maharshi Road & Pancha manthra Road Junction, Kuvempunagar. Opp, Kumar Medicals. Suitable for Govt Offices, Tuition centre & polyclinic Etc

9845296447
Between 7AM & 8PM

AFFIDAVIT

I, Sharanya, residing at 4240, 2nd Phase, 4th Stage, Vijayanagar, Mysuru-570 017. In my birth certificate my name is mentioned as Sharanya Yogisha. I have changed my name and mentioned as Sharanya in all my other records. That the name Sharanya Yogisha and Sharanya both refers to me only. That hereafter at all times designate and address me as Sharanya.

Sd/- Sharanya

SITES FOR SALE

30/30, 30/40 and 30/50 Sites are available in "Tumakhane Nagar" on Bannur Road, Mysuru
*Bank Loan Available
*Ready for Registration
Call:- 9880620355,8762843840

ಮೈಸೂರು ಮಿತ್ರ ಬೇಕಾಗಿದ್ದಾರೆ

1. **ಉಪ ಸಂಪಾದಕರು**
   ಅನುಭವಿಗಳಿಗೆ ಆದ್ಯತೆ
2. **ಡಿಟಿಪಿ ಆಪರೇಟರ್**
   ಪೇಜ್‌ಮೇಕರ್-7, ಫೋಟೋಶಾಪ್, ಕೋರಲ್‌ಡ್ರಾ, ನುಡಿ ಮತ್ತು ಬರಹ ಲಿಪಿ ತಿಳಿದಿರಬೇಕು.

ಅನುಭವ ಆಧರಿಸಿ ಉತ್ತಮ ಸಂಭಾವನೆ, ಇತರೆ ಭತ್ಯೆ ನೀಡಲಾಗುವುದು ರಾತ್ರಿ ಪಾಳಿಯಲ್ಲಿ ಕಾರ್ಯನಿರ್ವಹಿಸಲು ಇಚ್ಛೆಯುಳ್ಳವರು, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವುಳ್ಳ ಸ್ವ-ವಿವರದೊಂದಿಗೆ ಕೂಡಲೇ ಸಂಪರ್ಕಿಸಿ.

ಸಮಯ: ಮಧ್ಯಾಹ್ನ 3 ರಿಂದ 5

ವ್ಯವಸ್ಥಾಪಕ ಸಂಪಾದಕರು,
ಮೈಸೂರು ಮಿತ್ರ ಪ್ರಾದೇಶಿಕ ಬೆಳಗಿನ ದಿನಪತ್ರಿಕೆ, ಬನ್ನಿಮಂಟಪ, ಮೈಸೂರು 570015.

SITES FOR SALE

MUDA APPROVED
KBL Green Wood attached.
30x40 N/F & S/F,
30x50 N/F & E/F
Near JSS 2nd Stage Layout, Mysuru
Mob: 9686573798, 9900466811, 9343248739



ALSTYLE

FOR MENS & WOMENS
T-Shrits | Shorts | Trackpant
Jeans | Capri | Legging
Boxer | Bag

UPTO 70% OFF

Exclusive Counter of Undergarments for Men's, Women's & Kids
Also available Bedsheets, Pillows, Towels, Napkins etc.

Venue :
THE INSTITUTION OF ENGINEERS (Auditorium Hall)
Jhansi Laxmi Bai Road (J.L.B. Road), Mysore

we accept credit cards | (All days open) www.alstyle.in

*T&C apply.

5ನೇ ವರ್ಷದ ಸವಿನೆನಪು



ಶ್ರೀಮತಿ ಜಯಲಕ್ಷ್ಮಿ.ಎಂ
(ಲೇಟ್ ಜವರಯ್ಯನವರ ಧರ್ಮಪತ್ನಿ)
ನೀವು ನಮ್ಮನ್ನಗಲಿ ಇಂದಿಗೆ 5 ವರ್ಷ ಕಳೆದರೂ ಸಹ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು: ಸದಾ ನಿಮ್ಮ ನೆನಪಿನಲ್ಲಿರುವ
ತುಳಸಿ, ಯೋಗೀಶ್, ಸುಧೀಕ್ಷಾ, ಪ್ರಣಮ್, ಪ್ರಮತ್, ಪ್ರಿಷಾ, ನಿಶ್ಚಿತ್, ಅಭಿನವ್

ನಿವೇಶನ ಆಕಾಂಕ್ಷಿಗಳ ವಿಶೇಷ ಸಭೆ

ಪದವಿ ಪೂರ್ವ ಕಾಲೇಜು ಬೋಧಕ ಹಾಗೂ ಭೋಧಕೇತರ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ, ಮೈಸೂರು–01

ನಮ್ಮ ಸಂಘವು ನಾಗವಾಲ ಗ್ರಾಮದ ಬಳಿ ನಿರ್ಮಿಸುತ್ತಿರುವ 2ನೇ ಬಡಾವಣೆಯ ನಿವೇಶನ ಮುಂಗಡದಾರರು ಹಾಗೂ ಇಚ್ಛೆಯಿದ್ದು, ನಿವೇಶನಕ್ಕೆ ಅರ್ಜಿ ಸಲ್ಲಿಸುವ ಸದಸ್ಯರ ವಿಶೇಷ ಸಭೆಯನ್ನು ಏರ್ಪಡಿಸಲಾಗಿದೆ.

ಸ್ಥಳ: ಮುಕುಂದ ಸದನ, ಶ್ರೀ ಗುರು ರೆಸಿಡೆನ್ಸಿ ಹೋಟೆಲ್ ಪಕ್ಕ, ಮೈಸೂರು
ದಿನಾಂಕ: 09–07–2023ನೇ ಭಾನುವಾರ ವೇಳೆ : ಬೆಳಿಗ್ಗೆ 10.30ಗಂಟೆಗೆ

ಎಲ್ಲರಿಗೂ ಆದರದ ಸ್ವಾಗತ
ಕಾರ್ಯಕಾರಿ ಮಂಡಳಿ ಸದಸ್ಯರ ಪರವಾಗಿ

ಸಹಿ/– **ಹೆಚ್.ಸಿ. ಸುರೇಶ್‌ಬಾಬು**
ಪ.ಪೂ.ಕಾ. ಭೋದಕ ಹಾಗೂ ಭೋದಕೇತರ ನೌಕರರ ಸಂಘದ ಅಧ್ಯಕ್ಷರು
ಮೊ: 9845173557

ಸಹಿ/– **ಡಿ.ಯೋಗೇಂದ್ರ,**
ಪ.ಪೂ.ಕಾ. ಭೋದಕ ಹಾಗೂ ಭೋದಕೇತರ ನೌಕರರ ಸಂಘದ ಉಪಾಧ್ಯಕ್ಷರು
ಮೊ: 9449082111

BOOKINGS OPEN FOR

Construction of Brand New Architecture Designed Houses
MUDA APPROVED
20'x40 - 33.10 Lakhs
30'x40' - 50.49 Lakhs
Near St. Joseph's Central School, Hunsur Road, Mysore.
9740767576, 8884001233

ಸಾರ್ವಜನಿಕರ ತಿಳುವಳಿಕೆಗಾಗಿ

ನನ್ನ ಕಕ್ಷಿದಾರರು ಈ ಕೆಳಗೆ ಅನುಸೂಚಿಯಲ್ಲಿ ವಿವರಿಸಿರುವ ಅನ್ಯಕ್ರಾಂತ ಜಮೀನನ್ನು ಅದರ ಮಾಲೀಕರಾದ ಶ್ರೀ ಹೆಚ್. ಮಂಜುನಾಥ್ ಬಿನ್ ಶ್ರೀ ಹುಚ್ಚ ಹೆಗಡೆ, ಮನೆ ನಂ.4006/ಎ, 7ನೆ ಕ್ರಾಸ್, ಗಾಯತ್ರಿ ನಗರ, ರಾಜಾಜಿನಗರ 2ನೇ ಹಂತ, ಬೆಂಗಳೂರು–560 021, ರವರಿಂದ ಕ್ರಯಕ್ಕೆ ಪಡೆಯಲು ಇಚ್ಚಿಸಿದ್ದು, ಅನುಸೂಚಿ ಸ್ವತ್ತಿನ ಸಂಬಂಧವಾಗಿ ಬೇರೆ ಯಾರಿಗಾದರೂ ಯಾವುದೇ ಹಕ್ಕು, ಆಸಕ್ತಿ, ಸ್ವಾಮ್ಯಗಳು ಹಾಗೂ ಹಕ್ಕೊತ್ತಾಯಗಳು ಇದ್ದಲ್ಲಿ, ಈ ತಿಳುವಳಿಕೆ ಪತ್ರವು ಪ್ರಕಟವಾದ ದಿನಾಂಕದಿಂದ ಹತ್ತು ದಿನಗಳ ಒಳಗಾಗಿ ತಮಗಿರುವ ಹಕ್ಕು, ಆಸಕ್ತಿ ಮತ್ತು ಸ್ವಾಮ್ಯ ಹಾಗೂ ಹಕ್ಕೊತ್ತಾಯಗಳ ಸಂಬಂಧವಾಗಿ ದಾಖಲೇ ಸಹಿತ ಈ ಕೆಳಕಂಡ ವಿಳಾಸಕ್ಕೆ ಲಿಖಿತವಾಗಿ ತಿಳಿಸತಕ್ಕದ್ದು. ಒಂದು ವೇಳೆ ಯಾವುದೇ ತಕರಾರು ಬಾರದೇ ಇದ್ದಲ್ಲಿ, ಯಾರಿಂದಲೂ ಯಾವುದೇ ತಕರಾರು ಇಲ್ಲವೆಂದು ಪರಿಗಣಿಸಿ ನನ್ನ ಕಕ್ಷಿದಾರರು ಅನುಸೂಚಿ ಸ್ವತ್ತನ್ನು ನೋಂದಾಯಿತ ಕ್ರಯಪತ್ರದ ಮೂಲಕ ಕ್ರಯಕ್ಕೆ ಪಡೆಯುವವರಿದ್ದು, ಆ ನಂತರ ಉಂಟಾಗತಕ್ಕ ಯಾವುದೇ ತಂಟೆ ತಕರಾರುಗಳು ನನ್ನ ಕಕ್ಷಿದಾರರನ್ನು ಬದ್ಧಪಡಿಸುವುದಿಲ್ಲವೆಂದು ತಿಳಿಯತಕ್ಕದ್ದು.

ಅನುಸೂಚಿ ಸ್ವತ್ತಿನ ವಿವರ

ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕು, ಬಿಳಿಕೆರೆ ಹೋಬಳಿ, ದೊಡ್ಡ ಕಾಡನಹಳ್ಳಿ ಗ್ರಾಮದ ಸರ್ವೆ ನಂ. 20/2ಎ ರ 36 ಗುಂಟೆ ಜಮೀನು ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ರವರಿಂದ ವಸತಿ ಉದ್ದೇಶಕ್ಕಾಗಿ ಎ.ಎಲ್.ಎನ್ (2) ಸಿ.ಆರ್ 343/2014–15, ದಿನಾಂಕ: 18.11.2015 ರಂತೆ ಅನ್ಯಕ್ರಾಂತವಾಗಿ ಅಭಿವೃದ್ಧಿ ಪಡಿಸದೆ ಇರುವ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ಸರ್ವೆ ನಂ. 20/2 ರ ಜಮೀನು, ಪಶ್ಚಿಮಕ್ಕೆ: ರಸ್ತೆ, ಉತ್ತರಕ್ಕೆ: ಸರ್ವೆ ನಂ. 20/1 ರ ಜಮೀನು, ದಕ್ಷಿಣಕ್ಕೆ: ಸರ್ವೆ ನಂ. 22 ರ ಜಮೀನು,

(ಹೆಚ್.ಎಂ. ಸುಧಾಕರ)
ವಕೀಲರು, ಕೆಎಆರ್ 51/97
ನಂ. 23, ಪೆಟ್ರೋಲ್ ಬಂಕ್ ಹಿಂಭಾಗ,
ನಿವೇದಿತನಗರ, ಮೈಸೂರು Ph: 94485 58136

BEFORE THE PRESIDING OFFICER: INDUSTRIAL TRIBUNAL AT BANGALORE

SERIAL Appl. No.22/2021
IN
I.D. NO.13/2013

BETWEEN
The Divisional Controller, K.S.R.T.C., Mysore Division, Mysore
APPLICANT

AND
Sri. Praveena D.
RESPONDENT

SUMMONS/NOTICE TO THE RESPONDENT
Sri. Praveena D., S/o Sri. Devarajegowda Ankanahalli Village, Ikanahalli Post, K.R. Pete Taluk, Mandya District.

WHEREAS, the Applicant Corporation has filed the above Serial Application under section 33(2) (b) of I.D. Act, against you for approval of dismissal order dated 21/01/2021, you are hereby summoned to appear this Tribunal in person or by a pleader on the 18th day of July 2023 at 11 a.m to answer the same, failing which suit/ application will be disposed of exparte.

Given under my hand and the seal of the Court on this 1st day of June 2023.

BY ORDER OF THE TRIBUNAL

Sheristedar
Industrial Tribunal, Bangalore

ADVOCATE FOR APPLICANT
B L Sanjeev
Advocate
M/S BLS LEGAL, TF-1, Alpine Arch, Langford Road, Bangalore

DIPR/CP/481/AKAR/2023-24

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

CLEARANCE SALE

TILL STOCK LASTS!

UPTO 70% OFF
+10% MONEYBACK*
on our entire range
Moneyback offer valid till 14th July 2023



Paddington Fabric 3+2 Seater Sofa
MRP: ₹1,18,800
NOW AT **₹49,900**



Elle Velvet 3+2 Seater Sofa
MRP: ₹1,83,800
NOW AT **₹59,900**



Enfield Fabric 3+2 Seater Recliner
MRP: ₹3,41,800
NOW AT **₹1,39,900**



Marvis 6 Seater Dining Table
MRP: ₹2,40,900
NOW AT **₹1,19,900**



Edwina High Gloss Queen Bed With Hydraulic Storage
MRP: ₹99,900
NOW AT **₹49,900**



Antwerp Queen Bed
MRP: ₹72,500
NOW AT **₹27,900**



Homeware, Decor & Furnishing
UPTO 50% OFF
SPACES SWAYAM NAUTICA



GET FREE RECLINER WORTH ₹49,995 ON PURCHASE OF HOMEWARE*

COMING SOON! HT interiors BY HOMETOWN
Our all-new collection crafted by the legendary designer, Pinakin Patel.

*T&C Apply

FURNITURE | DECOR | FURNISHINGS | HOMEWARE | MODULAR KITCHENS | HOME INTERIORS

FEDERAL BANK — YOUR PERFECT BANKING PARTNER
Get 5% Cash Back*
On Federal Bank Credit Card EMI. EMI Minimum Transaction ₹30,000
EMI Options Available Powered By Pinelabs

Mysore - Hunsur Road, Near Aishwarya Petrol Bunk, Vijayanagar, 1st Stage Hinkal, Ph. No.: 08976808306 / 08050400045.

Customer Service Helpline: 08069252525

HomeTown — The Art Of Better Living
www.hometown.in

Free Delivery | Free Installation | Assured Quality | Upto 3 Years Warranty On Furniture | EMI and Easy Finance